ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಆಗಸ್ಟ್ 9 ಶುಕ್ರವಾರ 2024

₹4


ಸಂಪುಟ: 45 | ಸಂಚಿಕೆ: 115 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಮೈಸೂರು ಮಿತ್ರ

ಆ.11ರಂದು ವಿಶೇಷ ಸ್ವಾತಿ ಪೂಜೆ



ಮೈಸೂರು, ಆ.8– ಮೈಸೂರಿನ ಕಾಳಿದಾಸ ರಸ್ತೆಯಲ್ಲಿರುವ ಶ್ರೀ ಯದುಗಿರಿ ಯತಿರಾಜ ಮಠ, ಮೈಸೂರು ಶಾಖೆಯ ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ಆ.11ರಂದು ಭಾನುವಾರ 'ಸ್ವಾತಿ' ನಕ್ಷತ್ರದ ಪ್ರಯುಕ್ತ ವಿಶೇಷ ಪೂಜೆ ಆಯೋಜಿಸಲಾಗಿದೆ. ಅಂದು ಬೆಳಗ್ಗೆ 8ಕ್ಕೆ ಸಂಕಲ್ಪ, 9ಕ್ಕೆ ಅಭಿಷೇಕ, 10.30ಕ್ಕೆ ಅಲಂಕಾರ, 11.30ಕ್ಕೆ ಮಹಾಮಂಗಳಾರತಿ, ಮಧ್ಯಾಹ್ನ 12.30ಕ್ಕೆ ಶಾತ್ತುಮೊರೈ, 1 ಗಂಟೆಗೆ ತೀರ್ಥ ಪ್ರಸಾದ ವಿನಿಯೋಗವನ್ನು ಏರ್ಪಡಿಸಲಾಗಿದೆ. ಸಂಜೆ 7.30ಕ್ಕೆ ಪ್ರಾಕಾರೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ದೇವಸ್ಥಾನದ ಮುಖ್ಯಸ್ಥ ವಿದ್ವಾನ್ ಕೆ.ಆರ್.ಯೋಗಾನರಸಿಂಹನ್ (ಮುರುಳಿ ಅಯ್ಯಂಗಾರ್) ತಿಳಿಸಿದ್ದಾರೆ. ಮಾಹಿತಿಗೆ ಮೊಬೈಲ್ 9342188323, 7598832271 ಸಂಪರ್ಕಿಸಬಹುದು.

ಭಾರ ಎತ್ತುವ ಸ್ಪರ್ಧೆ: ಸತೀಶ್‌ಗೆ ನಾಲ್ಕು ಪದಕ



ರಾಷ್ಟ್ರ ಮಟ್ಟದ ಭಾರ ಎತ್ತುವ ಸ್ಪರ್ಧೆಯಲ್ಲಿ ಮೈಸೂರಿನ ಸಿ.ಜೆ. ಸತೀಶ್ ಅವರಿಗೆ ಪ್ರದಾನ ಮಾಡಲಾಯಿತು. ಚಿತ್ರದಲ್ಲಿ ಸತೀಶ್ ಎಡದಿಂದ ಮೂರನೆಯವರು.

ಮೈಸೂರು, ಆ. 8–ಇತ್ತೀಚೆಗೆ ಮಧ್ಯಪ್ರದೇಶದ ಇಂದೋರ್‌ನಲ್ಲಿ ನಡೆದ ರಾಷ್ಟ್ರ ಮಟ್ಟದ ಪವರ್ ಲಿಫ್ಟಿಂಗ್ ಸ್ಪರ್ಧೆಯಲ್ಲಿ ಸಿ.ಜೆ.ಸತೀಶ್ ಮೂರು ಕಂಚು, ಒಂದು ಬೆಳ್ಳಿ ಪದಕ ಪಡೆದಿದ್ದಾರೆ.

ಮಧ್ಯಪ್ರದೇಶದಲ್ಲಿ ಜು.21ರಿಂದ ಆರು ದಿನಗಳವರೆಗೆ ನಡೆದ ನ್ಯಾಷನಲ್ ಮಾಸ್ಟರ್ಸ್ ಮೆನ್ ಅಂಡ್ ವುಮೆನ್ ಎಕ್ಯೂಪ್ಡ್ ಅಂಡ್ ಕ್ಲಾಸಿಕ್ ಪವರ್ ಲಿಫ್ಟಿಂಗ್ ಸ್ಪರ್ಧೆಯಲ್ಲಿ ಮೈಸೂರಿನ ಸಿದ್ದಾರ್ಥ ಬಡಾವಣೆ ನಿವಾಸಿ ಸತೀಶ್ ಈ ಸಾಧನೆ ಮಾಡಿದ್ದಾರೆ.

ಮಾಸ್ಟರ್ ಕ್ಲಾಸಿಕ್ ವಿಭಾಗದಲ್ಲಿ ಕಂಚು, ಡೆಡ್ ಲಿಫ್ಟ್‌ನಲ್ಲಿ ಕಂಚು, ಮಾಸ್ಟರ್ ಎಕ್ಯೂಪ್ಡ್ ವಿಭಾಗದಲ್ಲಿ ಕಂಚು, ಡೆಡ್ ಲಿಫ್ಟ್‌ನಲ್ಲಿ ಬೆಳ್ಳಿ ಪದಕ ಪಡೆದುಕೊಂಡು ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ದೇಹದಾರ್ಢ್ಯ ಸ್ಪರ್ಧೆ, ಏರೋಬಿಕ್ಸ್, ಭಾರ ಎತ್ತುವ ಕ್ರೀಡೆಗಳಲ್ಲಿ ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಭಾಗವಹಿಸಿ ಹಲವು ಪ್ರಶಸ್ತಿಗಳನ್ನು ಪಡೆದುಕೊಂಡಿದ್ದಾರೆ.

ರಾಜ್ಯ ಮಟ್ಟದ ನಾನ್ ಮೆಡಲಿಸ್ಟ್ ಈಜು ಸ್ಪರ್ಧೆ

ಮೈಸೂರು, ಆ. 8– ಮೈಸೂರು ಜಿಲ್ಲಾ ಈಜು ಸಂಸ್ಥೆ ವತಿಯಿಂದ ಆ.18 ರಂದು ಬೆಳಗ್ಗೆ 8ಕ್ಕೆ ಸರಸ್ವತಿಪುರಂನಲ್ಲಿರುವ ಮೈಸೂರು ವಿಶ್ವವಿದ್ಯಾನಿಲಯ ಈಜುಕೊಳದಲ್ಲಿ ರಾಜ್ಯ ಮಟ್ಟದ ನಾನ್ ಮೆಡಲಿಸ್ಟ್ ಈಜು ಸ್ಪರ್ಧೆ ಆಯೋಜಿಸಲಾಗಿದೆ. ರಾಜ್ಯದ ನಾನಾ ಕ್ಲಬ್, ಶಾಲೆಗಳಿಂದ 300ಕ್ಕೂ ಹೆಚ್ಚು ಸ್ಪರ್ಧಿಗಳು ಆಗಮಿಸಲಿದ್ದು, ವಯೋಮಾನದ ಆಧಾರದಲ್ಲಿ ಸ್ಪರ್ಧೆಗಳು ನಡೆಯಲಿವೆ.

ಹೆಚ್ಚಿನ ಮಾಹಿತಿಗೆ ಮೊ. 9591187357 ಅನ್ನು ಸಂಪರ್ಕಿಸಬಹುದು.

ನಿಧನ

ಅಡುಗೆ ಗುತ್ತಿಗೆದಾರ ವೆಂಕಟರಾಮನ್



ಮೈಸೂರು, ಆ.8–ಅಡುಗೆ ಗುತ್ತಿಗೆದಾರ ಹಾಗೂ ಜೆ.ಪಿ.ನಗರದ ನಿವಾಸಿ ವೆಂಕಟರಾಮನ್ (87) ವಯೋಸಹಜ ಅನಾರೋಗ್ಯದಿಂದ ಗುರುವಾರ ಬೆಳಿಗ್ಗೆ ಸ್ವಗೃಹದಲ್ಲಿ ನಿಧನರಾದರು. ಮೃತರು ಪತ್ನಿ, ಇಬ್ಬರು ಗಂಡು ಮಕ್ಕಳು, ಓರ್ವ ಹೆಣ್ಣು ಮಗಳು, ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಗುರುವಾರ ಮಧ್ಯಾಹ್ನ ಚಾಮುಂಡಿಬೆಟ್ಟದ ತಪ್ಪಲಲ್ಲಿರುವ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಇಂದು ಮೈಸೂರಲ್ಲಿ ಕಾಂಗ್ರೆಸ್ ಜನಾಂದೋಲನ ಸಮಾವೇಶ ಹಿನ್ನೆಲೆ

ಸುಗಮ ಸಂಚಾರಕ್ಕೆ ಮಾರ್ಗ ಬದಲಾವಣೆ; ವಾಹನ ಪಾರ್ಕಿಂಗ್ ಸ್ಥಳ ನಿಗದಿ

ಮೈಸೂರು, ಆ.8(ಎಂಕೆ)– ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಆ.9ರಂದು ನಡೆಯುವ ಕಾಂಗ್ರೆಸ್ ಪಕ್ಷದ ಸಮಾವೇಶದ ಹಿನ್ನೆಲೆಯಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಹಾಗೂ ಸುಗಮ ಸಂಚಾರದ ವ್ಯವಸ್ಥೆ ಕಲ್ಪಿಸುವ ಸಲುವಾಗಿ ಭಾರತೀಯ ಮೋಟಾರು ವಾಹನ ಕಾಯ್ದೆ 1988 ಕಲಂ 115 ಹಾಗೂ ಸೆಕ್ಷನ್(3) ಆಫ್ ಕರ್ನಾಟಕ ಟ್ರಾಫಿಕ್ ಕಂಟ್ರೋಲ್ ಕಾಯ್ದೆ 1960ರಡಿ ಮಾರ್ಗ ಬದಲಾವಣೆ ಹಾಗೂ ಪಾರ್ಕಿಂಗ್ ಸ್ಥಳಗಳನ್ನು ನಿಗದಿಗೊಳಿಸಿ ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಆದೇಶಿಸಿದ್ದಾರೆ.

ಕೆಎಸ್‌ಆರ್‌ಟಿಸಿ ಬಸ್‌ಗಳು ಸಂಚರಿಸುವ ಮಾರ್ಗ: ಬೆಳಗ್ಗೆ 8ರಿಂದ ಸಂಜೆ 6ರವರೆಗೆ ಮಡಿಕೇರಿ, ಹುಣಸೂರು, ಹಾಸನ ಕಡೆಯಿಂದ ಹುಣಸೂರು ರಸ್ತೆ ಮಾರ್ಗವಾಗಿ ಮೈಸೂರು ನಗರಕ್ಕೆ ಬರುವ ಕೆಎಸ್‌ಆರ್‌ಟಿಸಿ ಬಸ್ಸುಗಳು ಹಿನಕಲ್ ಫ್ಲೈ ಓವರ್ ಜಂಕ್ಷನ್‌ನಿಂದ ಎಡಕ್ಕೆ ತಿರುಗಿ ರಿಂಗ್ ರಸ್ತೆ ಮೂಲಕ ರಾಯಲ್ ಇನ್ ಜಂಕ್ಷನ್ ಬಲ ತಿರುವು ಪಡೆದು ಕೆಆರ್‌ಎಸ್ ರಸ್ತೆ, ವಿ.ವಿ.ಪುರಂ ವೃತ್ತ, ಆಕಾಶವಾಣಿ ವೃತ್ತ ಮಾರ್ಗವಾಗಿ ದಾಸಪ್ಪ ವೃತ್ತದಲ್ಲಿ ಬಲ ತಿರುವು ಪಡೆದು ಮೆಟ್ರೋಪೋಲ್ ವೃತ್ತ, ಮುಡಾ ವೃತ್ತದಲ್ಲಿ ಎಡ ತಿರುವು ಪಡೆದು ರಮಾವಿಲಾಸ ರಸ್ತೆ, ಬನುಮಯ್ಯ ಜಂಕ್ಷನ್‌ನಲ್ಲಿ ಬಲ ತಿರುವು ಪಡೆದು, ಬಿ.ರಾಚಯ್ಯ ವೃತ್ತದಲ್ಲಿ ಎಡಕ್ಕೆ ತಿರುಗಿ ಪುರಂದರ ರಸ್ತೆ, ಹಾರ್ಡಿಂಜ್ ವೃತ್ತದ ಮೂಲಕ ಗ್ರಾಮಾಂತರ ಬಸ್ ನಿಲ್ದಾಣ ತಲುಪುವುದು. ಹಾಗೆಯೇ ಹುಣಸೂರು ಕಡೆಗೆ ಹೋಗುವ ಬಸ್‌ಗಳು ಇರ್ವಿನ್ ರಸ್ತೆ, ರೈಲ್ವೇ ನಿಲ್ದಾಣ ವೃತ್ತದಿಂದ ದಾಸಪ್ಪ ವೃತ್ತದಲ್ಲಿ ಬಲ ತಿರುವು ಪಡೆದು ಕೆಆರ್‌ಎಸ್ ರಸ್ತೆ ಮೂಲಕ ರಿಂಗ್ ರಸ್ತೆ ಮಾರ್ಗವಾಗಿ ಹಿನಕಲ್‌ನಿಂದ ಸಾಗುವುದಾಗಿದೆ.

ನಿರ್ಬಂಧ: ಸಮಾವೇಶಕ್ಕೆ ಆಗಮಿಸುವ ಸಾರಿಗೆ ಬಸ್ ಮತ್ತು ಖಾಸಗಿ ಬಸ್‌ಗಳು ಆಗಮಿಸುವ ವಾಹನಗಳನ್ನು ಹೊರತುಪಡಿಸಿ ಡಿ.ಸಿ ಕಚೇರಿ ಆರ್ಚ್ ಗೇಟ್ ಜಂಕ್ಷನ್‌ನಿಂದ ಕೋರ್ಟ್ ಜಂಕ್ಷನ್‌ವರೆಗಿನ ಕೆಆರ್‌ಬಿ ರಸ್ತೆಯ ಎರಡು ಕಡೆಗಳಲ್ಲಿ ಸಂಚರಿಸುವ ಎಲ್ಲಾ ಮಾದರಿಯ ವಾಹನಗಳ ಸಂಚಾರವನ್ನು ನಿರ್ಬಂಧಿಸಿದೆ ಹಾಗೂ ರಸ್ತೆಯ ಎರಡೂ ಬದಿಗಳಲ್ಲಿ ವಾಹನಗಳ ನಿಲುಗಡೆಯನ್ನು ನಿರ್ಬಂಧಿಸಿದೆ.

ಸೆಂಟ್ ಜೋಸೆಫ್ ಜಂಕ್ಷನ್‌ನಿಂದ ಮೆಟ್ರೋಪೋಲ್ ವೃತ್ತದವರೆಗಿನ ಹುಣಸೂರು ರಸ್ತೆಯ ಎರಡು ಕಡೆಗಳಲ್ಲಿ, ರಾಮಸ್ವಾಮಿ ವೃತ್ತದಿಂದ ಅಗ್ನಿಶಾಮಕ ಠಾಣೆ ಜಂಕ್ಷನ್‌ವರೆಗಿನ ರಸ್ತೆಯ ಎರಡು ಕಡೆಗಳಲ್ಲಿ, ಮುಡಾ ಜಂಕ್ಷನ್‌ನಿಂದ ವಿಎಂಡಿ ಜಂಕ್ಷನ್‌ವರೆಗೆ, ರೋಟರಿ ಜಂಕ್ಷನ್‌ನಿಂದ ಕೆಆರ್‌ಬಿ ರಸ್ತೆ ಜಂಕ್ಷನ್‌ವರೆಗಿನ ರಸ್ತೆಯ ಎರಡು ಕಡೆಗಳಲ್ಲಿ, ಜೆಎಲ್‌ಬಿ ಜಂಕ್ಷನ್‌ನಿಂದ ಕೆಆರ್‌ಬಿ ರಸ್ತೆ ಜಂಕ್ಷನ್‌ವರೆಗೆ, ಕಲಾಮಂದಿರ ಜಂಕ್ಷನ್‌ನಿಂದ ರೈಲ್ವೆ ಗೇಟ್ ಜಂಕ್ಷನ್‌ವರೆಗಿನ ರಸ್ತೆಯ ಎರಡು ಕಡೆಗಳಲ್ಲಿ, ಡಾ.ಪದ್ಮ ವೃತ್ತದಿಂದ ಚಂದ್ರಮೌಳೇಶ್ವರ ದೇವಸ್ಥಾನ ಜಂಕ್ಷನ್‌ವರೆಗಿನ ರಸ್ತೆಯಲ್ಲಿ ಎರಡು ಕಡೆಗಳಲ್ಲಿ, ರಮ್ಯ ಹೋಟೆಲ್ ಜಂಕ್ಷನ್‌ನಿಂದ ಕುಕ್ಕರಹಳ್ಳಿ ಗ್ರಾಮ ಅರಳಿಕಟ್ಟೆ ಜಂಕ್ಷನ್‌ವರೆಗಿನ ಸ್ವಿಮ್ಮಿಂಗ್ ಪೂಲ್ ರಸ್ತೆಯ ಎರಡು ಕಡೆಗಳಲ್ಲಿ, ಸರಸ್ವತಿಪುರಂ 5ನೇ ಕ್ರಾಸ್ ಜಂಕ್ಷನ್‌ನಿಂದ (ಟಿ.ಟಿ.ಎಲ್ ಕಾಲೇಜು ಜಂಕ್ಷನ್) ಬೇಕ್ ಪಾಯಿಂಟ್ ವರೆಗೆ, ವಿಜಯ ಬ್ಯಾಂಕ್ ವೃತ್ತದಿಂದ ವಿ.ಎಂ.ಡಿ ವೃತ್ತದವರೆಗೆ ರಸ್ತೆಯ ಎರಡೂ ಬದಿಗಳಲ್ಲಿ ವಾಹನಗಳ ಸಂಚಾರ ಮತ್ತು ನಿಲುಗಡೆಯನ್ನು ನಿರ್ಬಂಧಿಸಿದೆ.




ಬದಲಿ ಮಾರ್ಗ: ಹಾಸನ, ಮಡಿಕೇರಿ, ಹುಣಸೂರು ಕಡೆಯಿಂದ ಮೈಸೂರು ನಗರಕ್ಕೆ ಆಗಮಿಸುವ ವಾಹನಗಳು ಚದುರಂಗ ವೃತ್ತದ ಬಳಿ ಬಲ ತಿರುವು ಪಡೆದು ಚದುರಂಗ ರಸ್ತೆ ಮೂಲಕ ಮುಂದೆ ಸಾಗುವುದು ಹಾಗೂ ಜೋಸೆಫ್ ಜಂಕ್ಷನ್‌ನಲ್ಲಿ ಎಡತಿರುವು ಪಡೆದು ಟೆಂಪಲ್ ರಸ್ತೆ, ಬಿ.ಸಿ.ಲಿಂಗಯ್ಯ ವೃತ್ತ, ಕೆ.ಆರ್.ಎಸ್ ರಸ್ತೆ ಮೂಲಕ ಮುಂದೆ ಸಾಗುವುದು. ಪಡುವಾರಹಳ್ಳಿ ವೃತ್ತದ ಬಳಿ ಎಡ ತಿರುವು ಪಡೆದು ಮಾತೃಮಂಡಲಿ ವೃತ್ತದ ಮೂಲಕ ಮುಂದೆ ಸಾಗುವುದು. ಚಾಮರಾಜ ಜೋಡಿ ರಸ್ತೆಯಿಂದ ಆಗಮಿಸುವ ವಾಹನಗಳು ಆರ್.ಟಿ.ಓ ವೃತ್ತದ ಮೂಲಕ ಮುಂದೆ ಹಾಗೂ ಜೆ.ಎಲ್.ಬಿ ರಸ್ತೆಯಿಂದ ಹುಣಸೂರು ರಸ್ತೆ ಕಡೆಗೆ ಸಾಗುವ ವಾಹನಗಳು ದಾಸಪ್ಪ ವೃತ್ತ, ಕೆ.ಆರ್.ಎಸ್ ರಸ್ತೆ ಮಾರ್ಗವಾಗಿ ವಿ.ವಿ.ಪುರಂ ವೃತ್ತದ ಮೂಲಕ ಮುಂದೆ ಸಾಗುವಂತೆ ಸೂಚಿಸಲಾಗಿದೆ.

ಪಾರ್ಕಿಂಗ್ ಸ್ಥಳಗಳು...

ಬಸ್ ಪಾರ್ಕಿಂಗ್ ಸ್ಥಳಗಳು: ವಿಲೇಜ್ ಹಾಸ್ಟೆಲ್ ಮತ್ತು ಗೌತಮ್ ಹಾಸ್ಟೆಲ್ ಮೈದಾನ, ಮಹಾಬೋಧಿ ಶಾಲೆ ಮೈದಾನ, ಜೆ.ಕೆ.ಮೈದಾನ, ದಸರಾ ವಸ್ತು ಪ್ರದರ್ಶನ ಮೈದಾನ, ದೊಡ್ಡಕೆರೆ ಮೈದಾನ, ಮೈಸೂರು ವಿ.ವಿ ಆವರಣ ಹಾಗೂ ಸ್ಕೌಟ್ಸ್ ಅಂಡ್ ಗೈಡ್ಸ್ ಮೈದಾನ ಬಸ್‌ಗಳನ್ನು ನಿಲ್ಲಿಸುವುದು.

ಕಾರು–ದ್ವಿಚಕ್ರ ವಾಹನಗಳ ಪಾರ್ಕಿಂಗ್ ಸ್ಥಳಗಳು: ಮಹಾರಾಜ ಕಾಲೇಜು ಆವರಣ(ಶತಮಾನೋತ್ಸವ ಭವನದ ಬಳಿ), ಹಾಕಿ ಮೈದಾನ(ವಿ.ಐ.ಪಿ ಪಾರ್ಕಿಂಗ್), ಫುಟ್‌ಬಾಲ್ ಮತ್ತು ಪೆವಿಲಿಯನ್ ಮೈದಾನ, ಹಳೇ ಡಿ.ಸಿ ಕಚೇರಿ ಹಿಂಭಾಗ, ಲಲಿತಕಲಾ ಕಾಲೇಜು ಆವರಣ(ಟೆಂಪೋಗಳಿಗೆ), ಜೂನಿಯರ್ ಮಹಾರಾಜ ಕಾಲೇಜು ಆವರಣ, ನಂಜರಾಜ ಬಹದ್ದೂರು ಛತ್ರ ಅಂಬೇಡ್ಕರ್ ಭವನ, ಮರಿಮಲ್ಲಪ್ಪ ಮತ್ತು ಮಹಾರಾಣಿ ಕಾಲೇಜು ಆವರಣ, ಓವೆಲ್ ಮೈದಾನ, ಯುವರಾಜ ಕಾಲೇಜು ಮತ್ತು ಫೈರ್ ಬ್ರಿಗೇಡ್ ಮೈದಾನ, ಗೀತಾ ಮತ್ತು ಏರ್‌ಲೈನ್ಸ್ ಹೋಟೆಲ್ ರಸ್ತೆಯಲ್ಲಿ, ನರಸರಾಜ ರಸ್ತೆ, ಟೌನ್‌ಹಾಲ್, ಹಾರ್ಡ್ವಿಕ್ ಶಾಲೆ ಮೈದಾನ, ಕುಕ್ಕರಹಳ್ಳಿ ಕರೆ ಪಕ್ಕ, ಕಲಾಮಂದಿರ ಆವರಣ, ಜಲದರ್ಶಿನಿ, ಕಾಂಗ್ರೆಸ್ ಭವನ ಹಾಗೂ ಕಬ್ಬಳ್ಳಿ ಆಶ್ರಮ ಒಳಭಾಗ ಪಾರ್ಕಿಂಗ್ ಮಾಡಲು ಅವಕಾಶ ನೀಡಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಹೆಸರಿನಲ್ಲಿ ವಿಶೇಷ ಪೂಜೆ



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಎದುರಾಗಿರುವ ಮುಡಾ ಹಾಗೂ ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣಗಳ ಆರೋಪ ನಿವಾರಣೆಗಾಗಿ ಸಿದ್ದರಾಮಯ್ಯ ಅವರ ಅಭಿಮಾನಿಗಳು 101 ಗಣಪತಿ ದೇವಸ್ಥಾನದಲ್ಲಿ ಅವರ ಹೆಸರಿನಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ಶಿವಕುಮಾರ್, ಮುಖಂಡರಾದ ಮಲ್ಲಿಕಾರ್ಜುನ, ಸುಗಂಧ ರಾಜಕುಮಾರ್, ಆಟೋ ಮಹದೇವ್, ಕುಮಾರ್, ಅವಿನಾಶ್, ರವಿಕುಮಾರ್ ಇನ್ನಿತರರಿದ್ದರು.

ಲೋಕಸಭೆಯಲ್ಲಿ ವಕ್ಫ್ ತಿದ್ದುಪಡಿ ವಿಧೇಯಕ ಮಂಡನೆ

ಪ್ರತಿಪಕ್ಷಗಳ ವಿರೋಧ; ಸಂಸದೀಯ ಮಂಡಳಿಗೆ ಶಿಫಾರಸು

ನವದೆಹಲಿ: ನಿರೀಕ್ಷೆಯಂತೆ ಕೇಂದ್ರ ಸರ್ಕಾರ ವಕ್ಫ್ ಮಂಡಳಿ ತಿದ್ದುಪಡಿ ವಿಧೇಯಕವನ್ನು ಲೋಕಸಭೆಯಲ್ಲಿ ಇಂದು (ಗುರುವಾರ) ಮಂಡಿಸಲಾಗಿದೆ. ವಕ್ಫ್ ಮಂಡಳಿಯಲ್ಲಿ ಹಲವಾರು ಸುಧಾರಣೆಗಳನ್ನು ತರುವ ನಿಟ್ಟಿನಲ್ಲಿ ಸರ್ಕಾರ ಮುಂದಾಗಿದ್ದರೆ, ಇದಕ್ಕೆ ಪ್ರತಿಪಕ್ಷಗಳು ಭಾರೀ ವಿರೋಧ ವ್ಯಕ್ತಪಡಿಸಿವೆ. ಇದರಿಂದ ಕಲಾಪದ ವೇಳೆ ಗದ್ದಲ ಉಂಟಾಯಿತು.

ಕೇಂದ್ರ ಸಂಸದೀಯ ಸಚಿವ ಕಿರಣ್ ರಿಜಿಜು ವಕ್ಫ್ ತಿದ್ದುಪಡಿ ವಿಧೇಯಕವನ್ನು ಲೋಕಸಭೆಯಲ್ಲಿ ಮಂಡಿಸಿ, ಚರ್ಚೆಗೆ ಆಹ್ವಾನಿಸಿದರು. ವಿಧೇಯಕಕ್ಕೆ ಎನ್‌ಡಿಎ ಕೂಟದ ಮಿತ್ರ ಪಕ್ಷಗಳಾದ ತೆಲುಗು ದೇಶಂ ಪಕ್ಷ (ಟಿಡಿಪಿ), ಸಂಯುಕ್ತ ಜನತಾದಳ (ಜೆಡಿಯು) ಬೆಂಬಲ ವ್ಯಕ್ತಪಡಿಸಿದರೆ, ಕಾಂಗ್ರೆಸ್, ಶಿವಸೇನೆ (ಉದ್ಧವ್ ಬಣ), ಎನ್‌ಸಿಪಿ (ಶರದ್ ಪವಾರ್ ಬಣ), ಸಮಾಜವಾದಿ, ತೃಣಮೂಲ ಕಾಂಗ್ರೆಸ್ ಸೇರಿದಂತೆ ಹಲವು ಪ್ರತಿಪಕ್ಷಗಳು ವಿರೋಧಿಸಿದವು.

ಹಕ್ಕಿನಿಂದ ವಂಚಿತರಾದವರಿಗಾಗಿ ಮಸೂದೆ: ವಿಧೇಯಕ ಮಂಡಿಸಿ ಮಾತನಾಡಿದ ಕೇಂದ್ರ ಸಚಿವ ಕಿರಣ್ ರಿಜಿಜು, ಯಾವುದೇ ಧಾರ್ಮಿಕ ಸಂಸ್ಥೆಯ ಸ್ವಾತಂತ್ರ್ಯದಲ್ಲಿ ಹಸ್ತಕ್ಷೇಪ ಮಾಡಿಲ್ಲ. ಮಸೂದೆಯಿಂದ ಯಾವುದೇ ಧಾರ್ಮಿಕ ಸಂಸ್ಥೆಯ ಸ್ವಾತಂತ್ರ್ಯಕ್ಕೆ ಧಕ್ಕೆ ಇಲ್ಲ. ಯಾರ ಹಕ್ಕನ್ನೂ ಕಿತ್ತುಕೊಳ್ಳದೆ, ಹಕ್ಕಿನಿಂದ ವಂಚಿತರಾದವರಿಗಾಗಿ ಮಸೂದೆ ತರಲಾಗಿದೆ. ಸಾಚಾರ್ ವರದಿ ಆಧರಿಸಿ ಕಾಯ್ದೆಗೆ ತಿದ್ದುಪಡಿ ತರಲಾಗಿದೆ. ಕಾಯ್ದೆಗೆ ತಿದ್ದುಪಡಿ ತರಬೇಕು ಎಂದು ಸಮಿತಿ ರಚಿಸಿದ್ದೇ ಕಾಂಗ್ರೆಸ್. ಇದೀಗ ಆ ಪಕ್ಷವೇ ರಾಜಕೀಯ ಕಾರಣಕ್ಕಾಗಿ ಸಮಿತಿ ಶಿಫಾರಸುಗಳನ್ನು ವಿರೋಧಿಸುತ್ತಿದೆ ಎಂದು ಟೀಕಿಸಿದರು.

ಒಕ್ಕೂಟ ವ್ಯವಸ್ಥೆಯ ಮೇಲಿನ ದಾಳಿ: ಸರ್ಕಾರ ಮಂಡಿಸಿದ ತಿದ್ದುಪಡಿ ವಿಧೇಯಕವನ್ನು ಕಾಂಗ್ರೆಸ್, ಸಮಾಜವಾದಿ, ಶಿವಸೇನೆ (ಉದ್ಧವ್ ಠಾಕ್ರೆ ಬಣ) ಸೇರಿದಂತೆ ಹಲವು ಪ್ರತಿಪಕ್ಷಗಳು ತೀವ್ರ ವಿರೋಧ ವ್ಯಕ್ತಪಡಿಸಿದವು. ಈ ಬಗ್ಗೆ ಮಾತನಾಡಿದ ಕಾಂಗ್ರೆಸ್ ಸಂಸದ ಕೆ.ಸಿ.ವೇಣುಗೋಪಾಲ್, ವಿಧೇಯಕವು ಒಕ್ಕೂಟ ವ್ಯವಸ್ಥೆಯ ಮೇಲಿನ ದಾಳಿ ಎಂದು ಆರೋಪಿಸಿದರು.

ಸರ್ಕಾರ ಮುಸ್ಲಿಂ ವಿರೋಧಿ: ಎಐಎಂಐಎಂ ಸಂಸದ ಅಸಾದುದ್ದೀನ್ ಓವೈಸಿ ಮಾತನಾಡಿ, ಸಂವಿಧಾನದ 14, 15 ಮತ್ತು 25ನೇ ವಿಧಿಯನ್ನು ವಿಧೇಯಕ ಉಲ್ಲಂಘಿಸುತ್ತದೆ. ಇದನ್ನು ಮಂಡಿಸುವ ಮೂಲಕ ಸರ್ಕಾರ ಮುಸ್ಲಿಂ ವಿರೋಧಿ ಎಂಬುದನ್ನು ಸಾಬೀತು ಮಾಡಿದೆ ಎಂದು ಗಂಭೀರ ಆರೋಪ ಮಾಡಿದರು. ಮಸೂದೆಯನ್ನು ಹಿಂಪಡೆಯಬೇಕು. ಅದನ್ನು ಸ್ಥಾಯಿ ಸಮಿತಿಗೆ ವಹಿಸಬೇಕು ಎಂದು ಎನ್‌ಸಿಪಿ (ಶರದ್ ಪವಾರ್ ಬಣ) ಸಂಸದೆ ಸುಪ್ರಿಯಾ ಸುಳೆ ಸರ್ಕಾರವನ್ನು ಒತ್ತಾಯಿಸಿದರು. ಯಾರ ಜೊತೆಗೂ ಚರ್ಚಿಸದೆ ಅಜೆಂಡಾಗಳನ್ನು ಹೇರಬೇಡಿ. ಇದನ್ನು ನ್ಯಾಯಾಂಗ ಪರಿಶೀಲನೆಗೆ ಕಳುಹಿಸದಲ್ಲಿ ವಿಧೇಯಕವೇ ರದ್ದಾಗಲಿದೆ ಎಂದು ಹೇಳಿದರು.

ಮಸೂದೆಯನ್ನು ವಿರೋಧಿಸಿದ ಸಮಾಜವಾದಿ ಪಕ್ಷದ ಸಂಸದ ಅಖಿಲೇಶ್ ಯಾದವ್, ಈ ವಿಧೇಯಕವು ರಾಜಕೀಯ ಕಾರಣಕ್ಕಾಗಿ ರೂಪಿಸಲಾಗಿದೆ. ಇದು ಕೆಲವರ ಅಧಿಕಾರವನ್ನು ಕಸಿದುಕೊಳ್ಳಲಿದೆ. ಹೀಗಾಗಿ ಇದನ್ನು ವಿರೋಧಿಸಲಾಗುವುದು ಎಂದರು.

ಮಸೂದೆ ಸಂಸದೀಯ ಮಂಡಳಿಗೆ ಶಿಫಾರಸು: ವಿಪಕ್ಷಗಳ ವಿರೋಧದ ಬಳಿಕ ವಿಧೇಯಕವನ್ನು ಜಂಟಿ ಸಂಸದೀಯ ಸಮಿತಿಗೆ (ಜೆಪಿಸಿ) ನೀಡಲು ಸರ್ಕಾರ ಒಪ್ಪಿತು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

9.08.2024 ಶುಕ್ರವಾರ, ಮಳೆ ನಕ್ಷತ್ರ: ಆಶ್ಲೇಷ 03.08.2024ರಿಂದ 12.08.2024 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಶ್ರಾವಣ ಮಾಸ, ಶುಕ್ಲ ಪಕ್ಷ, ತಿಥಿ: ಪಂಚಮಿ, ನಕ್ಷತ್ರ: ಹಸ್ತಾ, ರಾಹುಕಾಲ: ಬೆಳಗ್ಗೆ 10.30ರಿಂದ 12ರವರೆಗೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಬಣ್ಣದ ಬಾನಾಡಿಗಳು–ಬಾನುಲಿ ಸರಣಿ, ರಚನೆ: ಡಾ.ಎಸ್.ವಿ.ನರಸಿಂಹನ್, ಪ್ರಸ್ತುತಿ: ಜಿ.ಶಾಂತಕುಮಾರ್, 6.40 ಮತ್ತು ಸಂಜೆ 5.45 ಕರಾಮುವಿವಿ ಮುಕ್ತವಾಣಿ–ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಅಧ್ಯಯನ ಅವಕಾಶಗಳನ್ನು ಕುರಿತ ಪ್ರಾಯೋಜಿತ ಬಾನುಲಿ ಸರಣಿ. ಭಾಗವಹಿಸುತ್ತಾರೆ: ಆನಂದ್ ಸಿಂಹಾನ್, ಸಹಾಯಕ ಪ್ರಾಧ್ಯಾಪಕರು, ಸಂಸ್ಕೃತ ಅಧ್ಯಯನ ಮತ್ತು ಸಂಶೋಧನಾ ವಿಭಾಗ. ಪ್ರಾಯೋಜಕರು: ಕರ್ನಾಟಕ ರಾಜ್ಯ ಮುಕ್ತ ವಿಶ್ವ ವಿದ್ಯಾನಿಲಯ, ಮೈಸೂರು. ಪ್ರಸ್ತುತಿ: ಎನ್.ಕೇಶವಮೂರ್ತಿ, 6.50 ರೈತರಿಗೆ ಸಲಹೆ, 7.15 "KABHI"-ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಕರ್ನಾಟಕ ಮೆದುಳು ಆರೋಗ್ಯ ಪ್ರಾಧಿಕಾರ, ಬೆಂಗಳೂರು, 9.00 ನಮ್ಮ ಆರೋಗ್ಯ: ವಿಶ್ವ ಸ್ತನ್ಯಪಾನ ಸಪ್ತಾಹದ ಸಂದರ್ಭದಲ್ಲಿ 'ನವಜಾತ ಶಿಶುಗಳ ಆರೈಕೆ ಮತ್ತು ಸ್ತನ್ಯಪಾನದ ಅಗತ್ಯ' ಕುರಿತು ನವಜಾತ ಶಿಶು ತಜ್ಞರಾದ ಡಾ. ಶ್ರುತಿ ಪುರುಷೋತ್ತಮ್ ಅವರೊಂದಿಗೆ ಮಾತುಕತೆ ನಂತರ ಹದಿಹರೆಯದವರ ದಿನಾಚರಣೆಯ ಸಂಬಂಧವಾಗಿ ವಿಶೇಷ ಕಾರ್ಯಕ್ರಮ–'ಹದಿಹರೆಯದ ಹೆಣ್ಣುಮಕ್ಕಳ ಮಾನಸಿಕ ಸಮಸ್ಯೆಗಳು ಮತ್ತು ಆಪ್ತ ಸಲಹೆ' ಕುರಿತು ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಮನೋವಿಜ್ಞಾನ ವಿಭಾಗದ ಪ್ರೊಫೆಸರ್ ಹಾಗೂ ಮುಖ್ಯಸ್ಥರಾದ ಡಾ.ಬಿ.ಎನ್.ರವೀಶ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 9.30 ಗಾಂಧಿ ಸ್ಮೃತಿ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಸಂಪತ್‌ಕುಮಾರ್. ಆರ್.ಎನ್ –ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ 'ಸಂಗೀತ ಸಂಭ್ರಮ ನಾದಲಯ ಸಂಗಮ', ಪ್ರಸ್ತುತಿ: ಹೆಚ್.ಎಲ್.ಶಿವಶಂಕರಸ್ವಾಮಿ

ಮಧ್ಯಾಹ್ನ: 12.30 ದೇವರನಾಮ–ಭೂಮಿಕಾ. ವಿ, 12.45 ಕಾದಂಬರಿ ವಿಹಾರ–ಅ.ನ.ಕೃ ಅವರ 'ಉದಯರಾಗ' ಕಾದಂಬರಿಯ ಬಾನುಲಿ ಓದು, ಪ್ರಸ್ತುತಿ: ಉಮೇಶ್. ಎಸ್.ಎಸ್., 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ದಾರಿದೀಪ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: FEBA India, 2.55 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ: ಜಿ.ಕೆ.ರವೀಂದ್ರಕುಮಾರ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಹೆಚ್.ಟಿ.ಹರೀಶ್–ಸ್ಯಾಕ್ಸೋಫೋನ್, 4.00 ಮಹಿಳಾರಂಗ–ಜೀವನ್ಮುಖಿ, ವಿಷಯ: ಮಹಿಳೆಯ ಒತ್ತಡಗಳು ಹಾಗೂ ಆಪ್ತ ಸಮಾಲೋಚನೆ, ಪ್ರಸ್ತುತಿ: ಸಹನಾ ಹಾಗೂ ಕೀರ್ತನಾ, 4.30 ವೃತ್ತಿ ಮಾರ್ಗದರ್ಶನ 'ಲಲಿತಕಲೆಗಳ ವಿಷಯದಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು' ಕುರಿತು ಮೈಸೂರು ವಿಶ್ವವಿದ್ಯಾಲಯದ ಲಲಿತಕಲಾ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಅನಿತಾ ಬ್ರಾಗ್ಸ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 6.50 ಕೃಷಿರಂಗ: ಪಪ್ಪಾಯ ಬೇಸಾಯ ಕುರಿತು ಸಂವಾದ. ಭಾಗವಹಿಸುತ್ತಾರೆ–ಶ್ರೀರಂಗ ಪಟ್ಟಣ ತಾಲ್ಲೂಕು ಬೊಮ್ಮೂರು ಅಗ್ರಹಾರದ ಡಾ.ಕೆ.ಕೆ.ಸುಬ್ರಮಣಿ ಮತ್ತು ಅವರ ಮಗ ಕೆ.ಎಸ್. ಅವಿನಾಶ್. ಪ್ರಸ್ತುತಿ: ಎನ್.ಕೇಶವಮೂರ್ತಿ, 7.45 ಚಿತ್ರಗೀತೆಗಳು, 8.00 ಕನ್ನಡ ಭಾರತಿ: ಡಾ.ಪ್ರಭು ಶಂಕರ್ ಅವರ ಎರಡು ನಾಟಕಗಳ ಸಮೀಕ್ಷೆ–ಡಾ.ಸಿ.ಜಿ.ಉಷಾದೇವಿ ಅವರಿಂದ. ಪ್ರಾಚೀನ ಕನ್ನಡದಲ್ಲಿ ವೈದ್ಯ ಗ್ರಂಥಗಳು. ಮಾತನಾಡುವವರು–ಡಾ.ವೈ.ಸಿ.ಭಾನುಮತಿ, 8.30 ರಾಷ್ಟ್ರೀಯ ಬಾಹ್ಯಾಕಾಶ ದಿನದ ಸಂದರ್ಭದಲ್ಲಿ ವಿಜ್ಞಾನ ಭಾರತಿ. ಬಾಹ್ಯಾಕಾಶದಲ್ಲಿ ವಾಯೇಜರ್ ನೌಕೆಯ ಅಪ್ರತಿಮ ಯಾನ. ಈ ಬಗ್ಗೆ ಮಾತನಾಡುತ್ತಾರೆ–ಎನ್.ಶಂಕರ್, ಪ್ರಸ್ತುತಿ: ಜಿ.ಶಾಂತಕುಮಾರ್, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ: ಚಿತ್ರಾ ಶ್ರೀಕೃಷ್ಣ–ಹಾಡುಗಾರಿಕೆ, 10.00 ಸಂಸತ್ತಿನ ಪ್ರಶ್ನೋತ್ತರ ಕಲಾಪಗಳ ಧ್ವನಿ ಮುದ್ರಣ, 10.30 ಸವಿನೆನಪು

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಕೂದಲು ಉದುರುವಿಕೆ ಮತ್ತು ಇತರೆ ನೆತ್ತಿ ಸಂಬಂಧಿತ ಸಮಸ್ಯೆಗಳಿಗೆ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಬೆಳಗ್ಗೆ 9ರಿಂದ.

■ **ಜೆಎಸ್‌ಎಸ್ ಮೈಸೂರು ಅರ್ಬನ್ ಹಾತ್ :** ವರಮಹಾಲಕ್ಷ್ಮಿ ಹಬ್ಬದ ಪ್ರಯುಕ್ತ ವಿವಿಧ ರಾಜ್ಯಗಳ ರೇಷ್ಮೆ ಸೀರೆಗಳು ಮತ್ತು ಕೈಮಗ್ಗ ಉತ್ಪನ್ನಗಳು ಹಾಗೂ ಕರಕುಶಲ ವಸ್ತುಗಳ ಪ್ರದರ್ಶನ, ಸ್ಥಳ: ಜೆಎಸ್‌ಎಸ್ ಅರ್ಬನ್ ಹಾತ್, ರಿಂಗ್ ರೋಡ್, ಹೆಬ್ಬಾಳು, ಬೆಳಗ್ಗೆ 10 ರಿಂದ.

■ **ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು:** ದೀಕ್ಷಾರಂಭ, ವಿದ್ಯಾರ್ಥಿಗಳ ಸೇರ್ಪಡೆ ಕಾರ್ಯಕ್ರಮ, ಸಾನ್ನಿಧ್ಯ: ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಉದ್ಘಾಟನೆ: ಮೈಸೂರು ವಿವಿ ಕುಲಪತಿ ಪ್ರೊಎನ್.ಕೆ.ಲೋಕನಾಥ್, ಪ್ರಾಸ್ತಾವಿಕ ನುಡಿ: ಕಾಲೇಜು ಅಭಿವೃದ್ಧಿ ಮಂಡಳಿ ನಿರ್ದೇಶಕ ಪ್ರೊಡಿ.ಆನಂದ್, ಗೌರವ ಅತಿಥಿಗಳು: ಕಾಲೇಜು ಪ್ರಿನ್ಸಿಪಾಲ್ ಡಾ.ಎಂ.ಪ್ರಭು, ಸ್ಥಳ: ಗೋಲ್ಡನ್ ಜ್ಯೂಬಿಲಿ ಸಭಾಂಗಣ, ಬೆಳಗ್ಗೆ 10.30ಕ್ಕೆ.

■ **ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ :** ಭ್ರಷ್ಟ ಬಿಜೆಪಿ–ಜೆಡಿಎಸ್ ಪಾಪ ಪೀಡಿತರ ಯಾತ್ರೆ ವಿರುದ್ಧ ಬೃಹತ್ ಜನಾಂದೋಲನ, ಸ್ಥಳ: ಮಹಾರಾಜ ಕಾಲೇಜು ಮೈದಾನ, ಬೆಳಗ್ಗೆ 11ಕ್ಕೆ.

■ **ಅಖಿಲ ಭಾರತ ವಾಕ್ ಶ್ರವಣ ಸಂಸ್ಥೆ:** ಮಧ್ಯಾಹ್ನ 2.30ಕ್ಕೆ ಕುಟೀರದ ಉದ್ಘಾಟನೆ (ವಸತಿ ಕಟ್ಟಡ), ಸ್ಥಳ: ಪಂಚವಟಿ ಆವರಣ, ಆಯಿಷ್, ಸಂಜೆ 4ಕ್ಕೆ ವಾರ್ಷಿಕೋತ್ಸವ ಕಾರ್ಯಕ್ರಮ, ಮುಖ್ಯ ಅತಿಥಿಗಳು: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಕಾರ್ಯದರ್ಶಿ ಅಪೂರ್ವಚಂದ್ರ, ಹೆಚ್ಚುವರಿ ಕಾರ್ಯದರ್ಶಿ ಶ್ರೀಮತಿ ಎಲ್.ಎಸ್. ಚಾಂಗ್ಸನ್, ಆಯಿಷ್ ನಿರ್ದೇಶಕರಾದ ಡಾ. ಎಂ. ಪುಷ್ಪಾವತಿ, ಸ್ಥಳ: ಸೆಮಿನಾರ್ ಹಾಲ್, ನಾಲೆಡ್ಜ್ ಪಾರ್ಕ್, ಆಯಿಷ್ ಆವರಣ.

■ **ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ :** ಜಿಲ್ಲಾ ಕಾಂಗ್ರೆಸ್ ಹಾಗೂ ಚಾಮುಂಡೇಶ್ವರಿ ಕ್ಷೇತ್ರದ ಸಿದ್ಧತಾ ಸಭೆ, ಅಧ್ಯಕ್ಷತೆ : ಗ್ರಾಮಾಂತರ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್, ಉಪಸ್ಥಿತರು: ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ, ಕೆಪಿಸಿಸಿ ಕಾರ್ಯಾಧ್ಯಕ್ಷ ತನ್ವೀರ್ ಸೇಠ್, ರಾಜ್ಯಸಭಾ ಸದಸ್ಯ ಜಿ.ಸಿ.ಚಂದ್ರಶೇಖರ್, ಶಾಸಕ ಡಾ.ಯತೀಂದ್ರ, ಮುಡಾ ಅಧ್ಯಕ್ಷ ಕೆ.ಮರೀಗೌಡ, ಸ್ಥಳ: ಕಾಂಗ್ರೆಸ್ ಭವನ, ಮಧ್ಯಾಹ್ನ 3ಕ್ಕೆ.

■ **ಬಸವ ಭಾರತ ಪ್ರತಿಷ್ಠಾನ, ಸಮಸ್ತ ಬಸವಪರ ಸಂಘಟನೆಗಳು:** ಬಸವ ಧರ್ಮ ಜಾಗೃತಿ ಅಭಿಯಾನ, ಇಷ್ಟಲಿಂಗಧಾರಣೆ ಶಿವಯೋಗ, ವಚನ ಪಠಣ, ಶ್ರಾವಣ ಮಾಸದ ಪ್ರವಚನ ಕಾರ್ಯಕ್ರಮ, ಪ್ರಾಧ್ಯಾಪಕ ಡಾ.ಜ್ಯೋತಿಶಂಕರ್ ಅವರಿಂದ ಕ್ರಾಂತಿಗಂಗೋತ್ರಿ ಅಕ್ಕನಾಗಮ್ಮನವರು ಬಸವಣ್ಣನವರ ಮೇಲೆ ಬೀರಿದ ಪ್ರಭಾವ ಕುರಿತು ಉಪನ್ಯಾಸ, ಸ್ಥಳ: ಶಿವಶ್ರೀ ವಿದ್ಯಾರ್ಥಿ ನಿಲಯ, 1375/1, ಕೆ.ಪಿ. ಮೊಹಲ್ಲಾ, ಸಂಜೆ 5.30ಕ್ಕೆ.

■ **ಶರಣ ಸಾಹಿತ್ಯ ಪರಿಷತ್ತು (ಮೈಸೂರು ನಗರ ಘಟಕ), ಕದಳಿ ಮಹಿಳಾ ವೇದಿಕೆ (ಮೈಸೂರು) :** ವಚನ ಶ್ರಾವಣ–ಮನೆ ಮನೆಗೆ ಶ್ರಾವಣ ಮಾಸದ ಶರಣ ಸಂದೇಶ, ಜೆಎಸ್‌ಎಸ್ ಪದವಿ ಕಾಲೇಜು ಸಹಾಯಕ ಪ್ರಾಧ್ಯಾಪಕ ಡಾ.ಬಿ.ಎಸ್.ಸುದೀಪ ಅವರಿಂದ ಅವಕಾಯಕ ಮಾಡಿದಡೂ ಸ್ವಕಾಯಕವ ಮಾಡಿ–ಲದ್ದೆಯ ಸೋಮಣ್ಣ ಕುರಿತು ಉಪನ್ಯಾಸ, ಸ್ಥಳ: ಶ್ರೀಮತಿ ಚೇತನ ಶಶಿಧರ, ಅಕ್ಕಮಹಾದೇವಿ ಪ್ರತಿಮೆ ಆವರಣ, ಜೆ.ಪಿ.ನಗರ, ಸಂಜೆ 5.30ಕ್ಕೆ.

■ **ಜಗದ್ಗುರು ಶ್ರೀಮನ್ಮಧ್ವಾಚಾರ್ಯರ ಮೂಲ ಮಹಾಸಂಸ್ಥಾನ, ಶ್ರೀ ರಾಜೇಂದ್ರ ತೀರ್ಥರ ಪೂರ್ವಾಧಿ ಮಠ, ಶ್ರೀ ಮುನಿತ್ರಯ ಪೀಠ, ಶ್ರೀ ವ್ಯಾಸರಾಜ ಮಠ (ಸೋಸಲೆ):** ಶ್ರೀ ವಿದ್ಯಾ ಕರ್ಣಾಟಕ ಸಿಂಹಾಸನಾಧೀಶ್ವರರಾದ ಶ್ರೀ ಶ್ರೀ 1008 ಶ್ರೀ ವಿದ್ಯಾಶ್ರೀಶ ತೀರ್ಥ ಶ್ರೀಪಾದಂಗಳವರ 8ನೇ ಚಾತುರ್ಮಾಸ್ಯ, ಸ್ಥಳ: ಶ್ರೀ ವ್ಯಾಸರಾಜ ಮಠ, ಸೋಸಲೆ ಕ್ಷೇತ್ರ, ಸಂಜೆ.

■ **ಅವಧೂತ ದತ್ತಪೀಠ:** ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಮತ್ತು ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿಯವರ 21ನೇ ಚಾತುರ್ಮಾಸ್ಯ ವ್ರತದೀಕ್ಷಾ ಮಹೋತ್ಸವ, ಗರುಡ ಪಂಚಮಿ, ನಾಗ ಪಂಚಮಿ, ನಾಗೇಂದ್ರ ಸ್ವಾಮಿಗೆ ವಿಶೇಷ ಅರ್ಚನೆ, ವೇದವಟುಗಳಿಗೆ ಭೋಜನ, ಸ್ಥಳ: ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ.

■ **ಗಾನಭಾರತೀ :** ವಿದುಷಿ ವಾಣಿರಾವ್ ಮತ್ತು ತಂಡದವರಿಂದ ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ, ಸ್ಥಳ: ಗಾನಭಾರತೀ ಸಭಾಂಗಣ, ಸಂಜೆ 6ಕ್ಕೆ.

■ **ಜಗದ್ಗುರು ಶ್ರೀ ವೀರಸಿಂಹಾಸನ ಮಹಾ ಸಂಸ್ಥಾನ ಮಠ, ಶ್ರೀ ಸುತ್ತೂರು ಮಠ, ಮೈಸೂರು:** ಶ್ರಾವಣ ಮಾಸ ಪೂಜಾನುಷ್ಠಾನ ಮತ್ತು ಪ್ರವಚನ ಕಾರ್ಯಕ್ರಮ, ಬೆಳಗ್ಗೆ ವಿಶೇಷ ಪೂಜೆ, ಸಂಜೆ 6ರಿಂದ ಸಾಮೂಹಿಕ ಪ್ರಾರ್ಥನೆ, ಡಾ.ಕೆ.ಅನಂತರಾಮು ಅವರಿಂದ ಲಕ್ಕಣ್ಣ ದಂಡೇಶ ವಿರಚಿತ 'ಶಿವತತ್ತ್ವ ಚಿಂತಾಮಣಿ' ಕುರಿತು ಪ್ರವಚನ, ವಿದುಷಿ ಎಂ.ವಿ. ಶುಭಾ ರಾಘವೇಂದ್ರ ಅವರಿಂದ ವಾಚನ, ಸ್ಥಳ: ಮೈಸೂರು ಶ್ರೀ ಸುತ್ತೂರು ಶಾಖಾ ಮಠ.



ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಆಗಸ್ಟ್ 9 ಶುಕ್ರವಾರ 2024

ಸಂಪುಟ: 45 | ಸಂಚಿಕೆ: 115 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com



'ಇದು ನನ್ನೂರು; ಇಲ್ಲಿರೋರೂ ನನ್ನೋರು...!'

ಮೈಸೂರು ಚಲೋಗೆ ಜನಾಂದೋಲನ ಕೌಂಟರ್
ಇಂದು ಮೈಸೂರಲ್ಲಿ ಕಾಂಗ್ರೆಸ್ ಜನಾಂದೋಲನ ಸಮಾವೇಶ

- ಲಕ್ಷ ಲಕ್ಷ ಜನ ಸೇರುವ ಸಾಧ್ಯತೆ
- ಸಂಸದರು, ಶಾಸಕರು, ಮಾಜಿ ಶಾಸಕರು, ಮುಖಂಡರಿಗೆ ಜನ ಸೇರಿಸುವ ಟಾಸ್ಕ್
- ಒಂದು ವಿಧಾನಸಭಾ ಕ್ಷೇತ್ರಕ್ಕೆ 150 ಬಸ್ ವ್ಯವಸ್ಥೆ
- ರಾಜ್ಯ ರಾಜಕೀಯದಲ್ಲಿ ಶಕ್ತಿ ಪ್ರದರ್ಶನಕ್ಕೆ ಕಣವಾದ ಮೈಸೂರು



ಮೈಸೂರು, ಆ.8(ಬಿಎಲ್‌ಯು)– ಸಾಂಸ್ಕೃತಿಕ ನಗರಿ ಮೈಸೂರು ರಾಜ್ಯ ರಾಜಕೀಯದ ಶಕ್ತಿ ಪ್ರದರ್ಶನ ಕಣವಾಗಿ ಮಾರ್ಪಟ್ಟಿದೆ. ಮುಂದಿನ ರಾಜಕೀಯ ಬೆಳವಣಿಗೆಗೆ ದಿಕ್ಸೂಚಿಯಾಗುವ ಸಾಧ್ಯತೆಯನ್ನು ತಳ್ಳಿ ಹಾಕಲಾಗದು. ಮುಡಾ ಹಾಗೂ ವಾಲ್ಮೀಕಿ ನಿಗಮದ ಹಗರಣದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಹಾಗೂ ಜೆಡಿಎಸ್ ಹಮ್ಮಿಕೊಂಡಿರುವ ಪಾದಯಾತ್ರೆಗೆ 'ಇದು ನನ್ನೂರು, ಇಲ್ಲಿರೋರೂ ನನ್ನೋರು...!' ಕೌಂಟರ್ ಕೊಡಲು ಕಾಂಗ್ರೆಸ್ ನಾಳೆ (ಆಗಸ್ಟ್ 9) ಮೈಸೂರಿನಲ್ಲಿ ಜನಾಂದೋಲನ ಸಮಾವೇಶ ಆಯೋಜಿಸಿದ್ದು, ಲಕ್ಷ ಲಕ್ಷ ಜನ ಸೇರುವ ಸಾಧ್ಯತೆ ಇದೆ.

ಮುಡಾ ಹಾಗೂ ವಾಲ್ಮೀಕಿ ನಿಗಮದ ಹಗರಣದ ಹಿನ್ನೆಲೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಬೆಂಗಳೂರಿನಿಂದ ಕೈಗೊಂಡಿರುವ ಮೈಸೂರು ಚಲೋ ಪಾದಯಾತ್ರೆಗೆ ಪ್ರತಿಯಾಗಿ ಕಾಂಗ್ರೆಸ್ ಈಗಾಗಲೇ ಬೆಂಗಳೂರು, ರಾಮನಗರ ಹಾಗೂ ಮಂಡ್ಯದಲ್ಲಿ ಜನಾಂದೋಲನ ಸಮಾವೇಶ ನಡೆಸಿದ್ದು, ನಾಳೆ ಮೈಸೂರಿನಲ್ಲಿ ಅದರ ಸಮಾರೋಪ ಸಮಾರಂಭ ಹಮ್ಮಿಕೊಂಡಿದೆ.

ಬಿಜೆಪಿ ಹಾಗೂ ಜೆಡಿಎಸ್‌ನ ಮೈಸೂರು ಚಲೋ ಪಾದಯಾತ್ರೆ ವೇಳೆ ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರವನ್ನು ದೋಸ್ತಿ ಪಕ್ಷಗಳು ಜನತೆ ಮುಂದೆ ಎಳೆ ಎಳೆಯಾಗಿ ಬಟಾಬಯಲು ಮಾಡುತ್ತಿವೆ. ಇದಕ್ಕೆ ತಿರುಗೇಟು ನೀಡಲು ಕಾಂಗ್ರೆಸ್ ಜನಾಂದೋಲನ ಸಮಾವೇಶ ನಡೆಸುತ್ತಿದ್ದು, ಬಿಜೆಪಿ ಹಾಗೂ ಜೆಡಿಎಸ್ ಸರ್ಕಾರದ ಅವಧಿಯಲ್ಲಿ ನಡೆದಿರುವ ಭ್ರಷ್ಟಾಚಾರ ಬಯಲು ಮಾಡಲು ನಿರ್ಧರಿಸಿದೆ. ■6ನೇ ಪುಟಕ್ಕೆ



ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಕಾಂಗ್ರೆಸ್ ಜನಾಂದೋಲನ ಸಮಾವೇಶದ ವೇದಿಕೆ ಸಿದ್ಧ

ಬೃಹತ್ ಪೆಂಡಾಲ್, ವಿಶಾಲ ವೇದಿಕೆ, ಎಲ್‌ಇಡಿ ಸ್ಕ್ರೀನ್

ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ನಾಳೆ (ಆಗಸ್ಟ್ 9) ನಡೆಯುವ ಜನಾಂದೋಲನ ಸಮಾವೇಶಕ್ಕೆ ಸಿದ್ಧತೆಗಳು ಬಹುತೇಕ ಪೂರ್ಣಗೊಂಡಿವೆ. ಈಗಾಗಲೇ ನಿತ್ಯವೂ ಮಳೆ ಸುರಿಯುತ್ತಿರುವ ಕಾರಣ ಸಹಸ್ರಾರು ಸಂಖ್ಯೆಯಲ್ಲಿ ಸೇರುವ ಜನರಿಗೆ ತೊಂದರೆ ಆಗದಂತೆ ಮಹಾರಾಜ ಕಾಲೇಜು ಮೈದಾನದ ಅರ್ಧ ಭಾಗಕ್ಕೆ ಜರ್ಮನ್ ಪೆಂಡಾಲ್ ಹಾಕಲಾಗಿದೆ. ಒಂದು ಹನಿ ಮಳೆ ನೀರು ಸೋರದಂತೆ ಪೆಂಡಾಲ್ ನಿರ್ಮಿಸಲಾಗಿದೆ. ಪೆಂಡಾಲ್ ಮಧ್ಯೆ ಜಂಬೋ ಫ್ಯಾನ್‌ಗಳನ್ನು ಅಳವಡಿಸಲಾಗಿದೆ. ಹಿಂದೆ ಕೂರುವ ಜನರಿಗೆ ವೇದಿಕೆಯ ದೃಶ್ಯ ಕಾಣಿಸುವಂತೆ ಮೈದಾನದ ಒಳಗೆ ಹಾಗೂ ಹೊರಗೆ 20ಕ್ಕೂ ಹೆಚ್ಚು ■6ನೇ ಪುಟಕ್ಕೆ



ಹೋರಾಟ ಪ್ರತ್ಯೇಕವಾದರೂ ಇವರ 'ರಣ ಕಣ' ಒಂದೇ!
ಒಂದೇ ವೇದಿಕೆಯಲ್ಲಿ ವಿರೋಧಿಗಳ ಸಮಾವೇಶಕ್ಕೆ ಇದೇ ಮೊದಲು ಮೈಸೂರು ಸಾಕ್ಷಿ

ಮೈಸೂರು, ಆ.8–ಮುಡಾ ಮತ್ತು ವಾಲ್ಮೀಕಿ ಹಗರಣವನ್ನು ಮುಂದಿಟ್ಟುಕೊಂಡು ಹಾವು–ಮುಂಗುಸಿಯಂತಾಗಿರುವ ಆಡಳಿತ ಮತ್ತು ವಿರೋಧ ಪಕ್ಷಗಳ ಪರಸ್ಪರ ವಿರುದ್ಧದ ರಣ ಕಣ ಒಂದೇ ಆಗಿರುವುದು ವಿಶೇಷ.


ಮೈಸೂರು ಚಲೋ ಪಾದಯಾತ್ರೆ ನಡೆಸುತ್ತಿರುವ ಬಿಜೆಪಿ ಮತ್ತು ಜೆಡಿಎಸ್ ವಿರುದ್ಧ ನಾಳೆ ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಕಾಂಗ್ರೆಸ್‌ನ ಜನಾಂದೋಲನ ಸಮಾವೇಶ ನಡೆಯಲಿದೆ. ಅದಕ್ಕಾಗಿ ಈ ಮೈದಾನದಲ್ಲಿ ಬೃಹತ್ ವೇದಿಕೆಯನ್ನು ಗುತ್ತಿಗೆದಾರ ಶರೀಫ್ ಅವರು ನಿರ್ಮಿಸಿದ್ದಾರೆ. ಕಳೆದ ಶನಿವಾರದಿಂದ ವೇದಿಕೆ ನಿರ್ಮಾಣ ಕಾರ್ಯ ನಡೆಯುತ್ತಿದ್ದು, ಇಂದು ರಾತ್ರಿ ಕಾಂಗ್ರೆಸ್ ಜನಾಂದೋಲನ ಸಮಾವೇಶದ ವೇದಿಕೆ ಸಿದ್ಧವಾಗಿದೆ. ವಿಶೇಷವೆಂದರೆ ಮರು ದಿನ ಇದೇ ವೇದಿಕೆಯಲ್ಲಿ ಬಿಜೆಪಿ–ಜೆಡಿಎಸ್‌ನ ಮೈಸೂರು ಚಲೋ ಸಮಾರೋಪ ಸಮಾವೇಶವು ನಡೆಯಲಿದೆ. ಕಾಂಗ್ರೆಸ್‌ನ ಜನಾಂದೋಲನ ಸಮಾವೇಶ ನಡೆದ ವೇದಿಕೆಯನ್ನೇ ಅಲ್ಪಸ್ವಲ್ಪ ಮಾರ್ಪಾಡು ಮಾಡಿ ಬಿಜೆಪಿ–ಜೆಡಿಎಸ್ ಸಮಾವೇಶಕ್ಕೂ ಶರೀಫ್ ಸಿದ್ಧಪಡಿಸಿಕೊಡುತ್ತಿದ್ದಾರೆ. ಅವರ ಪ್ರಕಾರ ನಾಳೆ ಸಂಜೆ 5 ಗಂಟೆ ಸುಮಾರಿಗೆ ಕಾಂಗ್ರೆಸ್‌ನವರು ವೇದಿಕೆಯನ್ನು ಬಿಟ್ಟುಕೊಡಲಿದ್ದು, ನಂತರ ಇದೇ ವೇದಿಕೆಯಲ್ಲಿ ಬಿಜೆಪಿ–ಜೆಡಿಎಸ್ ಸಮಾವೇಶಕ್ಕೆ ತಕ್ಕಂತೆ ಬದಲಾವಣೆಗಳನ್ನು ಮಾಡಬೇಕಾಗುತ್ತದೆ. ಈಗಾಗಲೇ ಹಾಕಿರುವ ಕುರ್ಚಿಗಳು ■5ನೇ ಪುಟಕ್ಕೆ

> "ನನ್ನ ವೃತ್ತಿ ಜೀವನದಲ್ಲಿ ಇದೇ ಮೊದಲ ಬಾರಿಗೆ ಇಂತಹ ಸನ್ನಿವೇಶವನ್ನು ಎದುರಿಸುತ್ತಿದ್ದೇನೆ. ಕೆಲ ದಿನಗಳ ಅಂತರದಲ್ಲಿ ಒಂದೇ ಮೈದಾನದಲ್ಲಿ ಬೇರೆ–ಬೇರೆ ಪಕ್ಷಗಳಿಗೆ ವೇದಿಕೆ ನಿರ್ಮಿಸಿದ್ದೇನೆ. ಆದರೆ ಕೇವಲ ಒಂದೇ ದಿನದ ಅಂತರದಲ್ಲಿ ಅನ್ನುವುದಕ್ಕಿಂತ ನಾಳೆ ಸಂಜೆ 5 ಗಂಟೆ ನಂತರ ಕಾಂಗ್ರೆಸ್‌ನವರು ಮೈದಾನ ಹಾಗೂ ವೇದಿಕೆ ಬಿಟ್ಟುಕೊಟ್ಟ ನಂತರ ಬೆಳಗಾಗುವುದರೊಳಗಾಗಿ ಬಿಜೆಪಿ–ಜೆಡಿಎಸ್ ಸಮಾವೇಶಕ್ಕೆ ವೇದಿಕೆ ಸಿದ್ಧಪಡಿಸುವುದು ಸವಾಲಿನ ಕೆಲಸವಾಗಿದೆ. ಅದಕ್ಕಾಗಿ 220 ರಿಂದ 250 ಸಿಬ್ಬಂದಿಯನ್ನು ತಯಾರಾಗಿ ಇಟ್ಟುಕೊಂಡಿದ್ದೇನೆ. ಯಾವುದೇ ರೀತಿಯ ಅಹಿತಕರ ಘಟನೆ ನಡೆಯದೆ ಎರಡೂ ಸಮಾವೇಶಗಳು ಶಾಂತಿಯುತವಾಗಿ ನೆರವೇರಿ, ಕಾಂಗ್ರೆಸ್ ಮತ್ತು ಬಿಜೆಪಿ–ಜೆಡಿಎಸ್ ಇಬ್ಬರೂ ಸಂತಸಗೊಂಡರೆ ನನಗೆ ಅಷ್ಟೇ ಸಾಕು.
> – ಶರೀಫ್, ಗುತ್ತಿಗೆದಾರ



ಕಂಚಿನ ಪದಕ ಗೆದ್ದ ಭಾರತ ಹಾಕಿ ತಂಡ
■ಪುಟ–4

ಕುಸ್ತಿಗೆ ನಿವೃತ್ತಿ ಘೋಷಿಸಿದ ವಿನೇಶ್ ಫೋಗಟ್
■ಪುಟ–12



ಪ್ಯಾರಿಸ್ ಒಲಿಂಪಿಕ್ ಕ್ರೀಡಾಕೂಟ–2024
ಬೆಳ್ಳಿ ಬೇಟೆಯಾಡಿದ ನೀರಜ್ ಚೋಪ್ರಾ



ಪ್ಯಾರೀಸ್, ಆ.8– ಕಳೆದ ಟೋಕಿಯೋ ಒಲಿಂಪಿಕ್ಸ್‌ನಲ್ಲಿ ಜಾವೆಲಿನ್‌ನಲ್ಲಿ ಚಿನ್ನದ ಪದಕ ಗೆಲ್ಲುವ ಮೂಲಕ ಇತಿಹಾಸ ನಿರ್ಮಿಸಿದ್ದ ಭಾರತದ ನೀರಜ್ ಚೋಪ್ರಾ ಈ ಬಾರಿಯ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಬೆಳ್ಳಿ ಪದಕಕ್ಕೆ ಕೊರಳೊಡ್ಡಿದ್ದಾರೆ. ಆ ಮೂಲಕ ಭಾರತ ಟೂರ್ನಿಯಲ್ಲಿ ಚೊಚ್ಚಲ ಬೆಳ್ಳಿ ಗೆದ್ದ ಸಾಧನೆ ಮಾಡಿದೆ.

ಭಾರತೀಯ ಕಾಲಮಾನ ಗುರುವಾರ ರಾತ್ರಿ 11.55ಕ್ಕೆ ಆರಂಭವಾದ ಜಾವೆಲಿನ್ ಥ್ರೋ ಸ್ಪರ್ಧೆಯ ಫೈನಲ್ ಪಂದ್ಯದ ಮೊದಲ ಪ್ರಯತ್ನದಲ್ಲಿ ಫೋಲ್ ಮಾಡಿದ ನೀರಜ್ ಚೋಪ್ರಾ, ಬಳಿಕ ಎರಡನೇ ಪ್ರಯತ್ನದಲ್ಲಿ 89.45 ಮೀಟರ್ ಅಂತರಕ್ಕೆ ಜಾವೆಲಿನ್ ಎಸೆಯುವ ಮೂಲಕ ಬೆಳ್ಳಿ ಪದಕವನ್ನು ತನ್ನದಾಗಿಸಿಕೊಂಡರು. ಉಳಿದಂತೆ ನಂತರದ ಎಲ್ಲಾ ಪ್ರಯತ್ನಗಳಲ್ಲೂ ಫೋಲ್ ಮಾಡುವ ಮೂಲಕ ಚೋಪ್ರಾ ಬೆಳ್ಳಿಗಷ್ಟೇ ತೃಪ್ತಿಪಟ್ಟರು. ಉಳಿದಂತೆ ಪಾಕಿಸ್ತಾನದ ಹರ್ಷದ್ ನದೀಮ್ 92.97 ಮೀಟರ್ ದೂರ ಜಾವೆಲಿನ್ ಎಸೆಯುವ ಮೂಲಕ ಚಿನ್ನದ ಪದಕ ಪಡೆದರೆ, ಗ್ರೆನೆಡಾದ ಆಂಡರ್ಸನ್ ಪೀಟರ್ಸ್ 88.54 ಮೀಟರ್ ಜಾವೆಲಿನ್ ಎಸೆಯುವ ಮೂಲಕ ಕಂಚಿನ ಪದಕ ಪಡೆದರು.



ಸಿದ್ದರಾಮಯ್ಯ ರಾಜೀನಾಮೆಗೆ ಕ್ಷಣಗಣನೆ ಆರಂಭವಾಗಿದೆ...!

■ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಭವ್ಯ ಭವಿಷ್ಯ! ■ಶ್ರೀರಂಗಪಟ್ಟಣ ತಲುಪಿದ ಬಿಜೆಪಿ–ಜೆಡಿಎಸ್ ಮೈಸೂರು ಚಲೋ ಪಾದಯಾತ್ರೆ



ಮೈಸೂರು ಚಲೋ ಪಾದಯಾತ್ರೆಯು ಆರನೇ ದಿನದಂತ್ಯಕ್ಕೆ ಶ್ರೀರಂಗಪಟ್ಟಣ ತಲುಪಿತು.

ಶ್ರೀರಂಗಪಟ್ಟಣ, ಆ.8–ರಾಜ್ಯದ ಭ್ರಷ್ಟ ಮುಖ್ಯಮಂತ್ರಿಗಳು ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಡುವ ಕ್ಷಣಗಣನೆ ಆರಂಭವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ವಿಶ್ವಾಸದಿಂದ ನುಡಿದರು. ಬಿಜೆಪಿ– ಜೆಡಿಎಸ್ ಪಕ್ಷಗಳ ಮೈಸೂರು ಚಲೋ ಪಾದಯಾತ್ರೆಯು ಆರನೇ ದಿನ ಪೂರೈಸಿದ ನಂತರ ಶ್ರೀರಂಗಪಟ್ಟಣದಲ್ಲಿ ಏರ್ಪಡಿಸಿದ್ದ ಸಭೆಯಲ್ಲಿ ಇಂದು ಅವರು ಮಾತನಾಡಲು ಆರಂಭಿಸಿದಾಗ ಕಾರ್ಯಕರ್ತರು ಪಟಾಕಿ ಸಿಡಿಸಿದರು. ಪಟಾಕಿ ಸಿಡಿತದ ಬಗ್ಗೆ ಉಲ್ಲೇಖಿಸಿ ಮಾತನಾಡಿದ ಅವರು, ಮುಡಾ, ವಾಲ್ಮೀಕಿ ನಿಗಮದ ಹಗರಣ ಹಾಗೂ ಭ್ರಷ್ಟಾಚಾರದ ಹಿನ್ನೆಲೆಯಲ್ಲಿ ಸಿದ್ದರಾಮಯ್ಯನವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡುವುದು ಖಚಿತ ಎಂದು ಸಂತೋಷದಿಂದ ಪಟಾಕಿ ಹೊಡೆಯುತ್ತಿದ್ದಾರೆ ಎಂದು ಹರ್ಷ ವ್ಯಕ್ತಪಡಿಸಿದರು.

ಮುಖ್ಯಮಂತ್ರಿಗಳು ಹಾಜರಿರದ ಸಚಿವ ಸಂಪುಟ ಸಭೆ ಮೊನ್ನೆ ನಡೆದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧವೇ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ 187 ಕೋಟಿ ಭ್ರಷ್ಟಾಚಾರದ ಆರೋಪ ಬಂದಿದೆ. ಮುಡಾದಲ್ಲಿ 5 ಸಾವಿರ ಕೋಟಿಗೂ ಹೆಚ್ಚು ಮೌಲ್ಯದ ನಿವೇಶನಗಳ ಲೂಟಿ ಮಾಡಿದ ಆರೋಪ ಅವರ ಮೇಲಿದೆ. ಎರಡೂ ಆರೋಪಗಳಲ್ಲಿ ಸ್ವತಃ ಈ ನಾಡಿನ ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ಎ1 ಆರೋಪಿ ಎಂದು ವಿಶ್ಲೇಷಿಸಿದರು. ಅಂದು ಸಚಿವ ಸಂಪುಟ ಸಭೆಯ ನೇತೃತ್ವವನ್ನು ಭ್ರಷ್ಟಾಚಾರದ ಪಿತಾಮಹರಾದ ಡಿ.ಕೆ.ಶಿವಕುಮಾರ್ ಅವರು ವಹಿಸಿದ್ದರು ಎಂದು ಟೀಕಿಸಿದರು. ಮುಖ್ಯಮಂತ್ರಿಯವರು ತಮ್ಮ ಮೇಲಿನ ಭ್ರಷ್ಟಾಚಾರದ ಆರೋಪಗಳಿಗೆ ಉತ್ತರ ಕೊಡಲಾಗದೆ ■6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಕಾರು ಮಾಲೀಕ : ತಗೋ ಕಾಸು. ಇಷ್ಟು ಚಿಕ್ಕ ವಯಸ್ಸಿನಲ್ಲಿ ಪಂಕ್ಚರ್ ಹಾಕ್ತಿಯಲ್ಲ. ಅಪ್ಪ ಇಲ್ವಾ?

ಬಾಲಕ : ಇದ್ದಾರೆ ಸಾರ್, ಅವರು ಅಲ್ಲಿ ಮೊಳೆ ಹಾಕಿದರೇ ಕಾರು ಪಂಕ್ಚರ್ ಆಗೋದು...!

ಮೈಸೂರು ಮಿತ್ರ

ಶುಕ್ರವಾರ, 9 ಆಗಸ್ಟ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.


ಅಮೃತವಾಹಿನಿ..........

ಮನುಷ್ಯನ ಸ್ವಭಾವವೇ ಹಾಗೆ ತಪ್ಪು ತಮ್ಮದಾದರೆ ವಕೀಲರಾಗುತ್ತಾರೆ, ತಪ್ಪು ಬೇರೆಯವರದಾದರೆ ನ್ಯಾಯಾಧೀಶರಾಗುತ್ತಾರೆ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ದುಡ್ಡಿಗಿಂತ ದೊಡ್ಡ ಹೆಸರೇ ಉತ್ತಮ.

ನಿಮ್ಮ ಪತ್ರಗಳು

■ ಪೋಗಟ್ ಅನರ್ಹ : ಕುಸ್ತಿ ಅಭಿಮಾನಿಗಳಿಗೆ ನಿರಾಸೆ



ಮಾನ್ಯರೇ

ಪ್ಯಾರಿಸ್ ಒಲಿಂಪಿಕ್ಸ್ ಕ್ರೀಡಾಕೂಟದ ಕುಸ್ತಿಯಲ್ಲಿ ಕುಸ್ತಿಪಟು ವಿನೇಶ್ ಪೋಗಟ್ ಫೈನಲ್ ಪ್ರವೇಶಿಸುವ ಮೂಲಕ ಚಿನ್ನದ ಪದಕ ಕನಸು ಕಂಡಿದ್ದ ಭಾರತದ ಕುಸ್ತಿ ಅಭಿಮಾನಿಗಳಿಗೆ ನಿರಾಶೆ ಉಂಟಾಗಿದೆ. ಪ್ರೀ ಕ್ವಾರ್ಟರ್ ಫೈನಲ್, ಕ್ವಾರ್ಟರ್ ಫೈನಲ್ ಮತ್ತು ಸೆಮಿಫೈನಲ್‌ಗೇರಿದರೂ ದೇಹದ ತೂಕ ಪರೀಕ್ಷೆಯಲ್ಲಿ ಅವರು ಅನರ್ಹಗೊಂಡಿದ್ದಾರೆ. ಅವರು ಮೂರು ಬಾರಿ ಒಲಿಂಪಿಕ್ಸ್‌ನಲ್ಲಿ ಮೂರು ವಿಭಿನ್ನ ತೂಕದ ವರ್ಗಗಳಲ್ಲಿ ಸ್ಪರ್ಧಿಸಿದ್ದು ಗಮನಾರ್ಹ. ಐವತ್ತು ಕೆಜಿ ವಿಭಾಗದಲ್ಲಿ ಸ್ಪರ್ಧಿಸಲು ಅದಕ್ಕಿಂತ ಕಡಿಮೆ ತೂಕ ಹೊಂದಿರಬೇಕು. ಆದರೆ ಅವರು ನೂರು ಗ್ರಾಂ ಹೆಚ್ಚು ಭಾರವಿದ್ದ ಕಾರಣ ನಿಯಮಾವಳಿ ಪ್ರಕಾರ ಸ್ಪರ್ಧೆಯಿಂದ ಅನರ್ಹಗೊಂಡಿರುವುದು ಲಕ್ಷಾಂತರ ಅಭಿಮಾನಿಗಳಿಗೆ ನಿರಾಸೆ ಉಂಟು ಮಾಡಿದೆ.

–ಪಿ.ಸಿ.ಕಂಗಾಣಿಸೋಮು, ಕ್ಯಾತಮಾರನಹಳ್ಳಿ ಮೈಸೂರು

■ ಎಸ್‌ವಿಇಐ ಶಾಲೆಯ ರಸ್ತೆ ಸರಿಪಡಿಸಿ

ಮಾನ್ಯರೆ,

ಮೈಸೂರಿನ ಎಸ್‌ವಿಎಐ ಶಾಲೆಯ ಮುಂದಿರುವ ನಾಲ್ಕು ರಸ್ತೆಗಳಿಗೆ ಸಂಪರ್ಕ ಕಲ್ಪಿಸುವ ಜಂಕ್ಷನ್ ಸಂಪೂರ್ಣವಾಗಿ ಹೊಂಡಮಯವಾಗಿದೆ. ಮಳೆ ಬಂದರೆ ನೀರು ನಿಂತು ಓಡಾಡಲು ಕಷ್ಟವಾಗಿದೆ. ನಾಲ್ಕು ಕಡೆಯ ರಸ್ತೆಗಳು ಗುಂಡಿ ಬಿದ್ದಿವೆ. ಪ್ರತಿದಿನ ಸಾವಿರಾರು ಮಕ್ಕಳು, ವಾಹನಗಳು ಓಡಾಡುತ್ತವೆ. ನೂರಾರು ಮಕ್ಕಳು ಸೈಕಲಿನಲ್ಲಿ ಓಡಾಡುತ್ತಾರೆ. ಎಲ್ಲರೂ ಹೊಂಡಗಳನ್ನು ತಪ್ಪಿಸುವ ಭರದಲ್ಲಿ ಹೇಗೆಂದರೆ ಹಾಗೆ ಓಡಾಡುತ್ತಾರೆ. ಇದರಿಂದ ಅಲ್ಲಿ ಓಡಾಡಲು ಭಯವಾಗುತ್ತದೆ. ಸಂಬಂಧಪಟ್ಟವರು ಈ ಕಡೆ ಗಮನ ಹರಿಸುತ್ತಿಲ್ಲ. ಏನಾದರೂ ಅನಾಹುತ ಸಂಭವಿಸುವ ಮೊದಲು ರಸ್ತೆ ದುರಸ್ತಿಪಡಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕೆಂದು ಮನವಿ.

– ನೊಂದ ಪ್ರಯಾಣಿಕರು, ಮೈಸೂರು.

■ ಸಮಸ್ಯೆಗೆ ಸ್ಪಂದಿಸದ ಪಾಲಿಕೆ?



ಮಾನ್ಯರೆ,

ಮೈಸೂರಿನ ಸ್ವಚ್ಛತೆಯನ್ನು ಕಾಪಾಡಬೇಕಾದ ಪಾಲಿಕೆ ರಸ್ತೆಯ ಬದಿಯಲ್ಲಿ ಕಸ ಹಾಕುವವರ ಬಗ್ಗೆ ತಿಳಿಸಿ ಕ್ರಮ ಕೈಗೊಳ್ಳಲು ಹೇಳಿದರೂ ಯಾವುದೇ ಕ್ರಮ ಕೈಗೊಳ್ಳದ ಬಗ್ಗೆ ನನಗೆ ಕೋಪವಿದೆ. ಪಾಲಿಕೆಗೆ ಕಸ ಹಾಕುವವರಿಗೆ ದಂಡ ಹಾಕುವ ಅಧಿಕಾರವಿದೆ. ಅದನ್ನು ಜಾರಿಮಾಡುವಲ್ಲಿ ಪಾಲಿಕೆ ಸೋತಿದೆ. ಆದ ಕಾರಣ ದೊಡ್ಡವರೆನಿಸಿಕೊಂಡವರು ರಸ್ತೆ ಬದಿ ಕಸ ಹಾಕುವುದು ಅವ್ಯಾಹತವಾಗಿ ನಡೆದೇ ಇದೆ. ವಿಷ್ಣುವರ್ಧನ ರಸ್ತೆಯ ಹಿಂಭಾಗದಲ್ಲಿ ಕಸ ಹಾಕಿರುವ ಬಿಲ್ಡರ್ ಒಬ್ಬರ ಬಗ್ಗೆ ಪಾಲಿಕೆಯ ಮೇಲ್ವಿಚಾರಕರಿಗೆ ವಾಟ್ಸ್‌ಆಪ್ ಮೂಲಕ ವಿಚಾರ ತಿಳಿಸಿದರೂ ಏನೂ ಕ್ರಮ ಕೈಗೊಳ್ಳದ ಪಾಲಿಕೆಯ ಸಿಬ್ಬಂದಿ ಮೇಲೆ ಆಯುಕ್ತರು ಕ್ರಮ ಕೈಗೊಳ್ಳಬೇಕು.

–ಕೊ.ಸು.ನರಸಿಂಹ ಮೂರ್ತಿ, ಹಿರಿಯ ನಾಗರಿಕ, ಮೈಸೂರು.

■ ಮೈಸೂರು ಹೃದಯ ಭಾಗದಲ್ಲಿ ಫ್ಲೆಕ್ಸ್ ಹಾವಳಿ

ಮಾನ್ಯರೆ,

ಮೈಸೂರು ಮಹಾನಗರ ಪಾಲಿಕೆ ಆಯುಕ್ತರಿಗೆ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳಿಗೆ ನನ್ನದೊಂದು ಪ್ರಶ್ನೆ, ಸಾರ್ವಜನಿಕರಿಗೆ ಒಂದು ನ್ಯಾಯ, ಚುನಾಯಿತ ಜನಪ್ರತಿನಿಧಿಗಳಿಗೆ ಒಂದು ನ್ಯಾಯವಾದರೆ ಹೇಗೆ? ರಾಜ್ಯದಲ್ಲಿ ಪ್ಲಾಸ್ಟಿಕ್ ಬ್ಯಾನರ್, ಬ್ಯಾಗ್ ಹಾಗೂ ಕೆಲ ವಸ್ತು ನಿಷೇಧಿಸಲಾಗಿದೆ ಎಂದು ಹೇಳುತ್ತಿರುವ ಮಹಾನಗರ ಪಾಲಿಕೆ ಅಧಿಕಾರಿಗಳು ಪ್ಲಾಸ್ಟಿಕ್ ಬ್ಯಾಗ್ ಮತ್ತು ಇತರೆ ಕೆಲ ವಸ್ತುಗಳನ್ನು ಅಂಗಡಿಗಳಿಗೆ ನುಗ್ಗಿ ಸೀಜ್ ಮಾಡುತ್ತಾರೆ. ಅದೇ ರೀತಿ ಫ್ಲೆಕ್ಸ್ ಬ್ಯಾನ್ ಇದ್ದರೂ ಕೂಡ ಇದರ ಬಗ್ಗೆ ಏಕೆ ಕ್ರಮ ತೆಗೆದುಕೊಳ್ಳುತ್ತಿಲ್ಲ ಎಂಬುದು ಗೊತ್ತಾಗುತ್ತಿಲ್ಲ. ಇದು ನಾಚಿಕೆಗೇಡಿನ ಸಂಗತಿ. ಸರ್ಕಾರಿ ಕೆಲಸ ದೇವರ ಕೆಲಸವೆಂದು ಭಾವಿಸಬೇಕಾಗಿರುವ ಇವರು ಕಳೆದ ಐದು ದಿನಗಳಿಂದ ನಗರದ ಹೃದಯ ಭಾಗದಲ್ಲಿ ಎಲ್ಲೆಡೆ ಫ್ಲೆಕ್ಸ್ ಹಾವಳಿ ಹೆಚ್ಚಾಗಿದ್ದು, ಮಹಾನಗರ ಪಾಲಿಕೆ ಅಧಿಕಾರಿಗಳು ಜನಪ್ರತಿನಿಧಿಗಳ ಅಡಿ ಆಳಿನ ರೀತಿ ನಡೆದುಕೊಳ್ಳುತ್ತಿರುವುದು ಬೇಸರದ ಸಂಗತಿ. ಕೂಡಲೇ ಇದರ ಬಗ್ಗೆ ಸಂಬಂಧಪಟ್ಟ ಮೇಲಧಿಕಾರಿ ಗಳು ಕ್ರಮ ಏಕೆ ಜರುಗಿಸುತ್ತಿಲ್ಲ.

–ರಕ್ಷಿತಾ, ಬೋಗಾದಿ ನಿವಾಸಿ, ಮೈಸೂರು.

■ ಸರ್ಕಾರಿ ಆಸ್ಪತ್ರೆಯ ಆವರಣದಲ್ಲಿ ಸೌಲಭ್ಯ ಕಲ್ಪಿಸಿ

ಮಾನ್ಯರೆ,

ರಾಜ್ಯದ ಬಹುತೇಕ ಕಡೆ ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿ ರೋಗಿಗಳಿಗೆ ಅನುಕೂಲವಾಗುವಂತೆ ಹಣ್ಣು–ಹಂಪಲುಗಳ ಮಾರಾಟ ಮಳಿಗೆ ಹಾಗೂ ಸೂಕ್ತ ಕ್ಯಾಂಟೀನ್ ವ್ಯವಸ್ಥೆ ಇಲ್ಲದಿರುವುದರಿಂದ ರೋಗಿಗಳಿಗೆ ದಿನನಿತ್ಯ ತುಂಬಾ ತೊಂದರೆಯಾಗುತ್ತಿದೆ. ಸರ್ಕಾರಿ ಆಸ್ಪತ್ರೆಯಲ್ಲಿ ದಾಖಲಾಗಿರುವ ರೋಗಿಗಳು ಹಾಗೂ ಅವರ ಸಂಬಂಧಿಕರು ಆಸ್ಪತ್ರೆಯ ಆವರಣದಲ್ಲಿನ ಹಣ್ಣು ಹಂಪಲುಗಳ ಲಭ್ಯತೆಯ ಕೊರತೆಯಿಂದ ದೂರದ ಸ್ಥಳಗಳಿಗೆ ಹೋಗಿ ದುಬಾರಿ ಬೆಲೆ ತೆತ್ತು ಹಣ್ಣು ಹಂಪಲುಗಳನ್ನು ಕೊಂಡುಕೊಳ್ಳಬೇಕಾದ ಪರಿಸ್ಥಿತಿ ರಾಜ್ಯದ ಹಲವೆಡೆ ಇದೆ. ಇದು ತಪ್ಪಬೇಕು. ಸರ್ಕಾರ ಹಾಪ್‌ಕಾಮ್ಸ್‌ಗಳ ಮೂಲಕ ರೋಗಿಗಳಿಗೆ ರಿಯಾಯಿತಿ ದರದಲ್ಲಿ ಹಣ್ಣು ಹಂಪಲುಗಳ ಮಾರಾಟ ವ್ಯವಸ್ಥೆ ಮಾಡಬೇಕಿದೆ. ಇದರ ಜೊತೆಗೆ ಕಡಿಮೆ ಬೆಲೆಯಲ್ಲಿ ಉತ್ತಮ ಗುಣಮಟ್ಟದ ಆಹಾರ ವ್ಯವಸ್ಥೆಯನ್ನು ಕೂಡ ಆಸ್ಪತ್ರೆಯ ಆವರಣದಲ್ಲಿ ರೋಗಿಗಳಿಗೆ ಒದಗಿಸಿದರೆ ದಿನನಿತ್ಯ ಸಾವಿರಾರು ಮಂದಿಗೆ ಇದರಿಂದ ಪ್ರಯೋಜನವಾದೀತು. ಸರ್ಕಾರ ಈ ಬಗ್ಗೆ ದೃಢ ನಿರ್ಧಾರವನ್ನು ಕೈಗೊಳ್ಳುವುದು ಉತ್ತಮ.

– ಹರಳಹಳ್ಳಿ ಪುಟ್ಟರಾಜು, ಪಾಂಡವಪುರ.



ಕಾರ್ಕಳ ಆನಂದ ಭಟ್
ಮೊ: 7676554198
ಫ್ಲಾಟ್ ನಂ. 204, ಮೂರನೇ ಮಹಡಿ, ಏಕದಂತ ಅಪಾರ್ಟ್‌ಮೆಂಟ್ಸ್, OPP
H.P. ಗ್ಯಾಸ್ ಪೆರ್ವಾಜೆ ರಸ್ತೆ, ಕಾರ್ಕಳ– 574 104, ಉಡುಪಿ ಜಿಲೆ

ದಿಕ್ಕುದೆಸೆ

ಭಾರತೀಯ ಮೂಲದ ಕಮಲಾ ಹ್ಯಾರಿಸ್ ಅಮೆರಿಕ ಅಧ್ಯಕ್ಷೆ 'ಭಾಗ್ಯ'ವಿದೆಯೇ



> ಗರ್ಭಪಾತ ಹಾಗೂ ಗ್ರೀನ್ ಎನರ್ಜಿ ಪರ ಕಮಲಾರ ನಿಲುವಿನಿಂದ ಡೆಮಾಕ್ರಾಟ್ ಪಕ್ಷದ ಪ್ರಗತಿಪರ ಉತ್ಸಾಹಿ ಮುಂಚೂಣಿ ಯುವ ಕಾರ್ಯಕರ್ತರು ಸಂತಸಗೊಂಡಿದ್ದಾರೆ. ಕಮಲಾ ಅಭ್ಯರ್ಥಿತನವು ಅಮೆರಿಕದಲ್ಲಿರುವ ಕರಿಯರು, ಏಷಿಯನ್‌ರು, ಹಿಸ್ಪಾನಿಕ್ ಮಹಿಳೆಯರು ವಿಶೇಷವಾಗಿ ಭಾರತೀಯ ಮೂಲದವರಿಗೆ ದೊರೆತ ಸಮ್ಮಾನ ವಿಜಯವಾಗಿದೆ.

ವೈಶ್ವಿಕ ಭೂ ರಾಜಕೀಯದ ಮೇಲೆ ಪರಿಣಾಮ ಬೀರುವ ಅಮೆರಿಕದ ಅಧ್ಯಕ್ಷ ಪದವಿಗೆ ನವೆಂಬರ್ 5ರಂದು ಚುನಾವಣೆ ನಡೆಯಲಿದೆ. ಡೆಮಾಕ್ರಟಿಕ್ ಪಕ್ಷದ ಕಮಲಾ ಹ್ಯಾರಿಸ್ ಮತ್ತು ರಿಪಬ್ಲಿಕನ್ ಪಕ್ಷದ ಡೊನಾಲ್ಡ್ ಟ್ರಂಪ್ ನಡುವೆ ಜಿದ್ದಾಜಿದ್ದಿನ ಹಣಾಹಣಿಗೆ ವೇದಿಕೆ ಸಿದ್ಧವಾಗಿದೆ. ಭಾರತದಂತೆ ಅಮೆರಿಕದಲ್ಲೂ ಚುನಾವಣೆ ಹಬ್ಬವಾಗಿದೆ. ಅಮೆರಿಕದಲ್ಲಿ ಚುನಾವಣಾ ಪ್ರಚಾರವು ಎಲ್ಲ ರೀತಿಯ ಅಬ್ಬರದ, ಅತಿರೇಕದ ಮನೋರಂಜನೆ ನೀಡುತ್ತದೆ. ತೀಕ್ಷ್ಣ ರೀತಿಯ ಆರೋಪ–ಪ್ರತ್ಯಾರೋಪಗಳಿರುತ್ತವೆ. ಭಾಷಣಗಳಲ್ಲಿ ಆಕ್ರೋಶ, ಕಿರಿಚಾಟ, ಅಶ್ಲೀಲತೆ, ರಸಿಕತೆ, ಮಾದಕತೆ, ಅಪಶಬ್ದಗಳ ಬಳಕೆ, ರೋದನ, ಭಾವುಕತೆ ಎಲ್ಲವೂ ಕಾಣಸಿಗುತ್ತದೆ. ಎದುರಾಳಿಗಳ ಚಾರಿತ್ರ್ಯ ಹನನದಂತಹ ಸಂಗತಿಗಳು ಸಹಜವೆನ್ನುವಂತೆ ನಡೆಯುತ್ತವೆ. ಅಮೆರಿಕದಲ್ಲಿ ಸಾಮಾನ್ಯವಾಗಿ ಎರಡು ಪ್ರಮುಖ ಪಕ್ಷಗಳಾದ ಡೆಮಾಕ್ರಾಟ್ಸ್ ಅಥವಾ ರಿಪಬ್ಲಿಕನ್ ಪಕ್ಷದ ಅಭ್ಯರ್ಥಿಗಳು ಅಧ್ಯಕ್ಷರಾಗಿ ಆಯ್ಕೆಯಾಗುತ್ತಾರೆ. ಅಮೆರಿಕದಲ್ಲಿ ಓರ್ವ ವ್ಯಕ್ತಿ ನಾಲ್ಕು ವರ್ಷಗಳ ಎರಡು ಅವಧಿಗೆ ಮಾತ್ರ ಅಧ್ಯಕ್ಷರಾಗಬಹುದು ಅಷ್ಟೆ. ಈ ಬಾರಿ ಹಾಲಿ ಅಧ್ಯಕ್ಷ ಜೋ ಬೈಡೆನ್ ಎರಡನೇ ಅವಧಿಗೆ ಸ್ಪರ್ಧಿಸುವುದಾಗಿ ಹೇಳಿದರೂ ಕೊನೆ ಗಳಿಗೆಯಲ್ಲಿ ಸ್ಪರ್ಧೆಯಿಂದ ಹಿಂದೆ ಸರಿದರು.

ಸ್ಪರ್ಧೆಯಿಂದ ಹಿಂದೆ ಸರಿದ ಬೈಡೆನ್

ಎರಡನೇ ಅವಧಿಗೆ ಅಧ್ಯಕ್ಷರಾಗುವ ಆಕಾಂಕ್ಷೆ ಹೊಂದಿದ್ದ ಬೈಡೆನ್‌ರ ಮಾನಸಿಕ ಹಾಗೂ ದೈಹಿಕ ಕ್ಷಮತೆಯ ಬಗ್ಗೆ ಎದ್ದಿದ್ದ ಹಲವು ಪ್ರಶ್ನೆಗಳ ಹಿನ್ನೆಲೆಯಲ್ಲಿ ಚುನಾವಣಾ ಕಣದಿಂದ ಹಿಂದೆ ಸರಿದಿದ್ದರು. ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮೇಲೆ ನಡೆದ ಹತ್ಯಾ ಯತ್ನದಿಂದ ಸೃಷ್ಟಿಯಾದ ಅನುಕಂಪದ ಅಲೆಯಲ್ಲಿ ಟ್ರಂಪ್ ಗೆಲುವು ಸಾಧಿಸುವರೆಂಬ ಮಾಹಿತಿಯು ಬೈಡೆನ್‌ರ ಅವಕಾಶವನ್ನು ಆರಂಭದಲ್ಲೇ ಮೊಟಕುಗೊಳಿಸಿತು. ಎಂಭತ್ತು ವರ್ಷ ದಾಟಿದ ಬೈಡೆನ್‌ರು ವಯೋಸಹಜ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿದ್ದರು. ಅವರಿಗೆ ಮರೆವಿನ ಸಮಸ್ಯೆ ಆರಂಭವಾಗಿತ್ತು. ವಿಮಾನ, ವೇದಿಕೆಗಳಿಂದ ಹತ್ತಿ–ಇಳಿಯುವಾಗ ಮುಗ್ಗರಿಸುತ್ತಿದ್ದರು. ಕೆಲವೊಮ್ಮೆ ಬಿದ್ದಿದ್ದರು. ಮಾತುಗಳು ಅಸ್ಪಷ್ಟವಾಗುತ್ತಿದ್ದವು.

ಕೊನೆಯಲ್ಲಿ ಟ್ರಂಪ್‌ರೊಂದಿಗಿನ ನೇರ ಮುಖಾಮುಖೀ ಸಂವಾದದಲ್ಲಿ ಕಳಪೆ, ನೀರಸ ನಿರ್ವಹಣೆಯಿಂದ ಡೆಮಾಕ್ರಾಟ್ ಪಕ್ಷೀಯರು ತೀವ್ರ ಮುಜುಗರ ಅನುಭವಿಸಿದರು. ಆ ನಂತರ ಪಕ್ಷೀಯರು ಬೈಡೆನ್‌ರನ್ನು ಸ್ಪರ್ಧೆಯಿಂದ ಹಿಂದೆಗೆಯಲು ಒತ್ತಡ ಹೇರಿದರು. ಡೆಮಾಕ್ರಾಟ್ ಪಕ್ಷದ ಮಾಜಿ ಅಧ್ಯಕ್ಷ ಬರಾಕ್ ಒಬಾಮಾ ಮತ್ತವರ ಪತ್ನಿ ಮಿಚೆಲ್ ಒಬಾಮಾ, ಮಾಜಿ ಸ್ಪೀಕರ್ 84 ವರ್ಷದ ನ್ಯಾನ್ಸಿ ಪೆಲೋಸಿ ಮೊದಲಾದ ಪ್ರಭಾವಿಗಳು ಬೈಡೆನ್‌ರ ಮೇಲೆ ಒತ್ತಡ ಹೇರಿದರು.

ಇದೇ ರೀತಿ ಪ್ರಖ್ಯಾತ ಹಾಲಿವುಡ್ ನಟ ಮತ್ತು ಡೆಮಾಕ್ರಾಟ್ ಪಕ್ಷಕ್ಕೆ ಭಾರಿ ಮೊತ್ತದ ದೇಣಿಗೆ ನೀಡುವ ಮತ್ತು ಸಂಗ್ರಹಿಸುವ ಜಾರ್ಜ್ ಕ್ಲೂನಿಯವರು ಬೈಡೆನ್ ಸ್ಪರ್ಧೆ ವಿರೋಧಿಸುತ್ತಾ 'ಬೈಡೆನ್‌ರು ಕಾಲದ ವಿರುದ್ಧದ ಹೋರಾಟದಲ್ಲಿ ಜಯ ಗಳಿಸುವುದಿಲ್ಲ. ಎಂದು ತಿಳಿಸಿದರು. ಇನ್ನೋರ್ವ ಮಾಜಿ ಡೆಮಾಕ್ರಾಟ್ ಹಾಗೂ ಎಬಿಸಿ ವಾರ್ತಾ ನಿರೂಪಕರಾದ ಜಾರ್ಜ್ ಸ್ಟೀ ಫಾನೋ ಪೌಲಸ್‌ರು ಬೈಡೆನ್‌ರ ಸ್ಪರ್ಧೆ ಬಗ್ಗೆ 'ಬೈಡೆನ್ ಮುಂದಿನ ನಾಲ್ಕು ವರ್ಷಗಳ ಅವಧಿಯನ್ನು ಪೂರ್ಣ ಗೊಳಿಸಲಾರರು' ಎಂದು ಅಭಿಪ್ರಾಯಪಟ್ಟಿದ್ದಾರೆ. ಕಮಲಾ ಹ್ಯಾರಿಸ್‌ರು ಮಾತ್ರ ಬೈಡೆನ್‌ರ ಅಭ್ಯರ್ಥಿತನವನ್ನು ಬಲವಾಗಿ ಸಮರ್ಥಿಸುತ್ತಾ, ತನ್ನ ಅಭ್ಯರ್ಥಿತನಕ್ಕೆ ಸಮರ್ಥನೆ ಪಡೆಯುವ ತಂತ್ರಗಾರಿಕೆ ನಡೆಸಿ, ಯಶಸ್ವಿಯಾದರು.

ಸ್ಪರ್ಧೆಗೆ ಅನುಮೋದನೆ ಪಡೆದ ಕಮಲಾ ಹ್ಯಾರಿಸ್

ಅಮೆರಿಕದ ಅಧ್ಯಕ್ಷ ಪದವಿಗೆ ಪ್ರಥಮ ಬಾರಿಗೆ ಭಾರತೀಯ ಮೂಲದ ಕಮಲಾ ಹ್ಯಾರಿಸ್ ಡೆಮಾಕ್ರಾಟ್ ಪಕ್ಷದಿಂದ ಸ್ಪರ್ಧಿಸುವ ಅವಕಾಶ ಗಳಿಸಿದ್ದಾರೆ. ಜಮೈಕನ್ ಮೂಲದ ಡೊನಾಲ್ಡ್ ಹ್ಯಾರಿಸ್ ಮತ್ತು ಭಾರತದ ತಮಿಳುನಾಡಿನ ಚೆನ್ನೈ ಮೂಲದ ಶ್ಯಾಮಲಾ ಗೋಪಾಲನ್‌ರ ಪುತ್ರಿಯಾಗಿರುವ ಕಮಲಾ ಹ್ಯಾರಿಸ್‌ರು 59 ವರ್ಷದವರಾಗಿದ್ದಾರೆ. ಅಮೆರಿಕದ ಅಧ್ಯಕ್ಷ ಪದವಿಗೆ ಸ್ಪರ್ಧಿಸುತ್ತಿರುವ ಪ್ರಥಮ ಅಶ್ವೇತ ದಕ್ಷಿಣ ಏಷ್ಯಾದವರೆಂಬ ಗೌರವಕ್ಕೆ ಪಾತ್ರರಾಗಿದ್ದಾರೆ. ಬೈಡೆನ್‌ರಿಗಿಂತ 21 ವರ್ಷ ಕಿರಿಯರಾಗಿರುವ ಕಮಲಾರವರು ರಿಪಬ್ಲಿಕನ್ ಅಭ್ಯರ್ಥಿ ಟ್ರಂಪ್‌ರವರ ಎಲ್ಲ ಮಾದರಿಯ ತೀಕ್ಷ್ಣ ಟೀಕೆಗಳಿಗೆ ಉತ್ತರಿಸುವ ಸಾಮರ್ಥ್ಯ ಹೊಂದಿದ್ದಾರೆ ಎಂಬ ವಿಶ್ವಾಸ ಡೆಮಾಕ್ರಾಟ್ ಪಕ್ಷೀಯರಲ್ಲಿದೆ. ಆದರೆ ಪಕ್ಷದಲ್ಲಿ ಇವರ ಉಮೇದುವಾರಿಕೆ ಅಪಸ್ವರವು ಕೇಳಿಬಂದಿತ್ತು.

ಡೆಮಾಕ್ರಾಟ್ ಪಕ್ಷದಲ್ಲಿ ಈಗಲೂ ಪ್ರಭಾವ ಹೊಂದಿರುವ ಮಾಜಿ ಅಧ್ಯಕ್ಷ ಬರಾಕ್ ಒಬಾಮಾರು ಕಮಲಾ ಸ್ಪರ್ಧೆಯನ್ನು ತೀವ್ರವಾಗಿ ವಿರೋಧಿಸಿದ ಕಾರಣ ಕಮಲಾಗೆ ಹಾದಿ ಸುಲಭವಾಗಿರಲಿಲ್ಲ. ಡೊನಾಲ್ಡ್ ಟ್ರಂಪ್‌ರನ್ನು ಸೋಲಿಸುವ ಸಾಮರ್ಥ್ಯ ಕಮಲಾ ಹ್ಯಾರಿಸ್‌ಗಿಲ್ಲ ಎಂದು ಒಬಾಮಾ ಹೇಳಿದ್ದಾರೆಂದು ಮಾಧ್ಯಮಗಳು ವರದಿ ಮಾಡಿದ್ದವು. ಕಮಲಾ ಜತೆ ಪಕ್ಷದ ಇನ್ನೂ ಕೆಲವು ಪ್ರಮುಖ ಅಭ್ಯರ್ಥಿಗಳ ಹೆಸರು ಬಂದಿದ್ದವು. ಕ್ಯಾಲಿಫೋರ್ನಿಯಾದ ಗವರ್ನರ್‌ರಾದ ಗೇವಿನ್ ನ್ಯೂಸಂ, ಪಕ್ಷಕ್ಕೆ ಸಾಕಷ್ಟು ನಿಧಿ ನೀಡಿರುವ ಇಲಿನಾಯ್ಸ್‌ನ ಗವರ್ನರ್ ಜೆ.ಬಿ.ಪ್ರಿಟ್ಜ್‌ಕರ್, ಹಿರಿಯ ರಾಜಕಾರಣಿ, ಪಕ್ಷದ ಸಂಘಟನೆಗಾಗಿ ಶ್ರಮಿಸುತ್ತಿರುವ ಒಡಿಯೊ ಸೆನೆಟರ್ ಕೂಡ ಆಗಿರುವ ಶೆರಾಡ್ ಕ್ಯಾಂಬೆಲ್ ಬ್ರೌನ್ ಮೊದಲಾದವರು ಸ್ಪರ್ಧಿಸಲು ಸಿದ್ಧವಾಗಿದ್ದರು. ಆದರೆ ನಿರ್ಗಮನ ಅಧ್ಯಕ್ಷ ಬೈಡೆನ್‌ರು ತನ್ನ ಉತ್ತರಾ ಧಿಕಾರಿಯಾಗಿ ಕಮಲಾರನ್ನು ಹೆಸರಿಸಿದ್ದು, ಮೊದಲ ಅಡ್ಡಿಯನ್ನು ನಿವಾರಿಸಿತ್ತು. ಆರಂಭದಲ್ಲಿ ವಿರೋಧಿಸಿದ್ದ ಒಬಾಮಾ ಕೊನೆಗೂ ತಮ್ಮ ಒಪ್ಪಿಗೆ ನೀಡುವುದರೊಂದಿಗೆ ಕಮಲಾರವರು ಅಧ್ಯಕ್ಷೀಯ ಪದಕ್ಕೆ ಸ್ಪರ್ಧಿಸುವ ತನ್ನ ಉಮೇದುವಾರಿಕೆ ಘೋಷಿಸುವ ದಾಖಲೆಗಳಿಗೆ ಅಧಿಕೃತವಾಗಿ ಸಹಿ ಹಾಕಿದ್ದಾರೆ. ಇವರ ಸಮ್ಮತಿ ಮಾತ್ರ ಸಾಲದು. ಡೆಮಾಕ್ರಾಟಿಕ್ ಪಕ್ಷದಲ್ಲಿ ಸಾಮಾನ್ಯ ಮತದಾನದ ಮೂಲಕ ಅಭ್ಯರ್ಥಿಯನ್ನು ಆಯ್ಕೆ ಮಾಡುವ ಪದ್ಧತಿ ಇದೆ. ಈ ತಿಂಗಳು ಶಿಕಾಗೊದಲ್ಲಿ ನಡೆಯಲಿರುವ ಡೆಮಾಕ್ರಾಟ್‌ಗಳ ಸಮಾವೇಶದಲ್ಲಿ 3949 ಸಾಮಾನ್ಯ ಪ್ರತಿನಿಧಿಗಳು ಮತ ಚಲಾಯಿಸಿ ಗರಿಷ್ಠ ಮತ ಪಡೆದವರನ್ನು ಅಭ್ಯರ್ಥಿಯನ್ನಾಗಿ ಆರಿಸುತ್ತಾರೆ. ಈಗಾಗಲೇ ಉನ್ನತ ನಾಯಕರು ಕಮಲಾ ಹ್ಯಾರಿಸ್‌ರ ಸ್ಪರ್ಧೆಗೆ ಸಮ್ಮತಿಸಿರುವುದರಿಂದ ಕೇವಲ ಔಪಚಾರಿಕವಾಗಿ ಚುನಾವಣೆ ನಡೆಯಲಿದೆ. ಕಮಲಾ ಹ್ಯಾರಿಸ್‌ರು ತಮ್ಮ ಉಮೇದುವಾರಿಕೆಯ ದಾಖಲೆಗಳಿಗೆ ಸಹಿ ಹಾಕಿದ ನಂತರ 'ನಾನು ಪ್ರತಿ ಮತವನ್ನು ಗಳಿಸಲು ಶ್ರಮಿಸುತ್ತೇನೆ. ನವೆಂಬರ್‌ನಲ್ಲಿ ನಮ್ಮ ಜನಶಕ್ತಿಯ ಅಭಿಯಾನವು ಗೆಲ್ಲುತ್ತದೆ' ಎಂದು ಹ್ಯಾರಿಸ್ ಎಕ್ಸ್‌ನಲ್ಲಿ ಬರೆದುಕೊಂಡಿದ್ದಾರೆ.

ಕಮಲಾ ಪರ ಇರುವ ಧನಾತ್ಮಕ ಅಂಶಗಳು

ಜಗತ್ತಿನ ದೊಡ್ಡಣ್ಣ ಎನಿಸಿರುವ ತಮ್ಮ ದೇಶಕ್ಕೆ ಶಕ್ತಿಶಾಲಿ ಅಧ್ಯಕ್ಷನಿರಬೇಕೆಂದು ಅಮೆರಿಕನ್‌ರು ಅಪೇಕ್ಷಿಸುತ್ತಾರೆ. ಹಾಲಿ ಅಧ್ಯಕ್ಷ ಬೈಡೆನ್, ರಿಪಬ್ಲಿಕನ್ ಎದುರಾಳಿ ಟ್ರಂಪ್‌ಗಿಂತ ತುಂಬಾ ಕಿರಿಯ ವಯಸ್ಸಿನವರಾಗಿರುವ ಕಮಲಾ ಹ್ಯಾರಿಸ್ ಮಾನಸಿಕ ದೃಢತೆ, ಶಾರೀರಿಕ ಕ್ಷಮತೆಯುಳ್ಳ ಉತ್ಸಾಹಿ ಕಾನೂನು ಪದವೀಧರೆ ಮಹಿಳೆಯಾಗಿದ್ದಾರೆ. ಡೆಮಾಕ್ರಾಟ್ ಅಭ್ಯರ್ಥಿಯಾಗುತ್ತಿದ್ದಂತೆ ಪಕ್ಷದ ಕಾರ್ಯಕರ್ತರಲ್ಲಿ, ದೇಣಿಗೆ ನೀಡುವವರಲ್ಲಿ ಮತದಾರರಲ್ಲಿ ಉತ್ಸಾಹ ತುಂಬಿದರು. ಬೈಡೆನ್ ಸ್ಪರ್ಧೆಯಿಂದ ಹಿಂದೆ ಸರಿದ ಕೇವಲ ಎರಡು ಗಂಟೆಯೊಳಗೆ ಪಕ್ಷದ ತಳಮಟ್ಟದ ಬೆಂಬಲಿಗರಿಂದ 46 ಮಿಲಿಯನ್ ಡಾಲರ್ ಚುನಾವಣಾ ನಿಧಿ ಸಂಗ್ರಹಿಸಿದರು. ಮುಂದಿನ ಕೆಲವೇ ದಿನಗಳಲ್ಲಿ ಬಿಲಿಯಾಧೀಶರು, ಕಾರ್ಪೊರೇಟ್ ವಲಯದಿಂದಲೂ ಭಾರಿ ಪ್ರಮಾಣದ ದೇಣಿಗೆ ಬರಲಿದೆ. ಭಾರತದಲ್ಲಿ ರಾಜಕಾರಣಿಗಳು ಹಣ ಚೆಲ್ಲಿ ಚುನಾವಣೆಗಳಲ್ಲಿ ಗೆದ್ದರೆ ಅಮೆರಿಕದಲ್ಲಿ ಬಹಿರಂಗವಾಗಿ ನಿಧಿ ಸಂಗ್ರಹಿಸಿ ಚುನಾವಣೆಯಲ್ಲಿ ಗೆಲ್ಲುತ್ತಾರೆ. ಬೈಡೆನ್ ಸರ್ಕಾರದ ಉದ್ಯಮಸ್ನೇಹಿ ನೀತಿಗಳು, ಮೂಲಸೌಕರ್ಯಗಳ ಮೇಲೆ ಹೂಡಿಕೆ, ಚೀನಾ ವಿರುದ್ಧ ಉದ್ಯಮ ರಕ್ಷಣಾ ಕ್ರಮಗಳು ಈ ನೀತಿಗಳಲ್ಲಿ ಕಮಲಾ ಕೊಡುಗೆ ಚುನಾವಣೆಯಲ್ಲಿ ಧನಾತ್ಮಕ ಅಂಶವಾಗಿದೆ.

ಕಮಲಾರ ಗರ್ಭಪಾತ ಪರ ಹಾಗೂ ಗ್ರೀನ್ ಎನರ್ಜಿ ಪರ ನಿಲುವಿನಿಂದ ಡೆಮಾಕ್ರಾಟ್ ಪಕ್ಷದ ಪ್ರಗತಿಪರ ಉತ್ಸಾಹಿ ಮುಂಚೂಣಿ ಯುವ ಕಾರ್ಯಕರ್ತರು ಸಂತಸಗೊಂಡಿದ್ದಾರೆ. ಕಮಲಾ ಅಭ್ಯರ್ಥಿತನವು ಅಮೆರಿಕದಲ್ಲಿರುವ ಕರಿಯರು, ಏಷಿಯನ್‌ರು, ಹಿಸ್ಪಾನಿಕ್ ಮಹಿಳೆಯರು ವಿಶೇಷವಾಗಿ ಭಾರತೀಯ ಮೂಲದವರಿಗೆ ದೊರೆತ ಸಮ್ಮಾನ ವಿಜಯವಾಗಿದೆ.

ಅಮೆರಿಕದಲ್ಲಿರುವ ಇಂಡೋ–ಅಮೆರಿಕನ್‌ರು ಶ್ರೀಮಂತ, ವಿದ್ಯಾವಂತ, ಅತೀ ಹೆಚ್ಚು ಸಂಪಾದನೆ ಮಾಡುವ ಮಾದರಿ ಅಲ್ಪಸಂಖ್ಯಾತ ಸಮುದಾಯವಾಗಿದೆ. ಏಷಿಯನ್‌ರಲ್ಲಿ ಅತೀ ಹೆಚ್ಚು ಅಂದರೆ ಮಾಸಿಕ ಒಂದು ಲಕ್ಷ ಡಾಲರ್ ಸಂಪಾದಿಸುವ ಜನಾಂಗವಾಗಿದೆ. ಶೇ.70ರಷ್ಟು ಭಾರತೀಯರು ಪದವೀಧರರಾಗಿದ್ದು, ಇದು ಅಮೆರಿಕನ್ ಮೂಲ ನಿವಾಸಿಗಳಿಗಿಂತ ಹೆಚ್ಚು ಪ್ರಮಾಣದಲ್ಲಿದೆ. ಅಮೆರಿಕದಲ್ಲಿ ಶೇ.38ರಷ್ಟು ವೈದ್ಯರು, ಶೇ.36 ನಾಸಾ ವಿಜ್ಞಾನಿಗಳು, ಶೇ.34 ಮೈಕ್ರೋಸಾಫ್ಟ್ ಉದ್ಯೋಗಿಗಳು, ಶೇ.28ರಷ್ಟು ಐಬಿಎಂ ಉದ್ಯೋಗಿಗಳು ಒಟ್ಟು ವಿಜ್ಞಾನಿಗಳಲ್ಲಿ ಶೇ.37ರಷ್ಟು ಭಾರತೀಯ ಮೂಲದವರಾಗಿದ್ದು, ಪ್ರಭಾವಿ ಜನಾಂಗವೆನಿಸಿದೆ. ಅಮೆರಿಕದ ಒಟ್ಟು ಜನಸಂಖ್ಯೆಯಲ್ಲಿ ಭಾರತೀಯ ಮೂಲದವರು 49 ಲಕ್ಷದಷ್ಟಿದ್ದಾರೆ. ಒಟ್ಟು ಜನಸಂಖ್ಯೆಯಲ್ಲಿ ಕೇವಲ ಶೇ.1.3ರಷ್ಟಿದ್ದರೂ ಪ್ರಭಾವಿ ಸಮುದಾಯವೆನಿಸಿದೆ. ಈ ಕಾರಣದಿಂದ ಡೆಮಾಕ್ರಾಟ್ ಪಕ್ಷವು ಕಮಲಾ ಹ್ಯಾರಿಸ್‌ರನ್ನು ಆಯ್ಕೆ ಮಾಡಿದರೆ ರಿಪಬ್ಲಿಕ್ ಪಕ್ಷದ ಡೊನಾಲ್ಡ್ ಟ್ರಂಪ್‌ರು ತಮ್ಮ ಉಪಾಧ್ಯಕ್ಷ ಪದವಿಗೆ ಜೆ.ಡಿ.ವಾನ್ಸ್‌ರನ್ನು ಆಯ್ಕೆ ಮಾಡಿದ್ದಾರೆ. ವಾನ್ಸ್‌ರ ಪತ್ನಿ ಭಾರತದ ಆಂಧ್ರಪ್ರದೇಶದ ಉಷಾ ಚಿಲ್ಕುರಿ ಆಗಿರುವುದು ವಿಶೇಷವಾಗಿದೆ.

ಅಮೆರಿಕದ ಚುನಾವಣಾ ಪ್ರಚಾರಗಳಲ್ಲಿ ಅಶ್ಲೀಲತೆ

ವಿಶ್ವಕ್ಕೆ ಸಭ್ಯತೆ, ಮಹಿಳಾ ಹಕ್ಕು ಸಮ್ಮಾನಗಳ ಬಗ್ಗೆ ಬೋಧಿಸುವ ಅಮೆರಿಕದಲ್ಲಿ ಚುನಾವಣಾ ಪ್ರಚಾರ ಅತ್ಯಂತ ಕೀಳ್ಮಟ್ಟದಲ್ಲಿರುತ್ತದೆ. ಪರಸ್ಪರ ಚಾರಿತ್ರ್ಯಹನನ ಪ್ರಚಾರದ ಭಾಗವಾಗಿರುತ್ತದೆ. ಮಹಿಳಾ ಅಧಿಕಾರಗಳ ಬಗ್ಗೆ ಬೋಧಿಸುವ ಅಮೆರಿಕದಲ್ಲಿ ಮಹಿಳೆಯೊಬ್ಬರು ಅಧ್ಯಕ್ಷರಾಗಿಲ್ಲ. ಹಿಂದಿನ ಚುನಾವಣಾ ಸಂದರ್ಭದಲ್ಲಿ ಟ್ರಂಪ್‌ರವರು ವಿಚಿತ್ರ ಹಾವಭಾವ ಗಳ ಮೂಲಕ ಎದುರಾಳಿಗಳ ಮೇಲೆ ನಿಂದನಾತ್ಮಕ, ವ್ಯಂಗ್ಯ–ವಿನೋದಭರಿತ, ಅಶ್ಲೀಲ ಟೀಕೆಗಳನ್ನು ಮಾಡಿದ್ದರು. ಟ್ರಂಪ್‌ರ ಟೀಕೆ ಎದುರಿಸುವ ತಾಕತ್ತು ಕಮಲಾರಿಗಿದೆ ಎಂಬ ವಿಶ್ವಾಸ ಡೆಮಾಕ್ರಾಟ್‌ರಲ್ಲಿದೆ. ಕಮಲಾ ಅಭ್ಯರ್ಥಿಯಾಗುತ್ತಿದ್ದಂತೆ ಅವರಿಗೆ ಮಕ್ಕಳಿಲ್ಲ, ಸಂಸಾರವಿಲ್ಲ. ಸಂಸಾರ ನಡೆಸಲು ಬರದವರು ದೇಶ ನಡೆಸುವರೇ ಎಂದು ಪ್ರಶ್ನಿಸಿದರು. ಕಮಲಾರು, ತಾನು ಪತಿ ಹಾಗೂ ಅವರ ಮಕ್ಕಳೊಂದಿಗೆ ಸಂಸಾರದ ಜತೆ ದೇಶವನ್ನು ಮುನ್ನಡೆಸುವೆ ಎಂದು ತಿರುಗೇಟು ನೀಡಿದ್ದರು. ಇತ್ತೀಚೆಗೆ ಟ್ರಂಪ್ ಮತ್ತೆ ಕಮಲಾರನ್ನು ಭಾರತೀಯ ಮೂಲದವರಾದ ಇವಳು ಚುನಾವಣೆಗಾಗಿ ಇತ್ತೀಚೆಗೆ ಕರಿಯ ವರ್ಣೀಯರಾಗಿದ್ದಾರೆ ಎಂದು ಜನಾಂಗೀಯ ದ್ವೇಷದ ಟೀಕೆ ಮಾಡಿದರು. ಇದಕ್ಕೆ ಪ್ರತಿಯಾಗಿ ಟ್ರಂಪ್‌ರವರು ತಮ್ಮ ಹಳೆ ಮಾದರಿಯ 'ವಿಭಜನಕಾರಿ ಅಗೌರವ ತೋರುವ ಪ್ರವೃತ್ತಿಯನ್ನು ಪುನರಾವರ್ತಿಸಿದ್ದಾರೆ' ಎಂದು ಕಮಲಾರವರು ಪ್ರತ್ಯುತ್ತರ ನೀಡಿದ್ದರು.

ಕಮಲಾ ವಿರುದ್ಧವಿರುವ ಅಂಶಗಳು

ಅಮೆರಿಕಾದ ಹೆಚ್ಚಿನ ಶ್ವೇತವರ್ಣೀಯ ಮಹಿಳಾ ಮತದಾರರು ಡೆಮಾಕ್ರೆಟಿಕ್ ಪಕ್ಷ ಹಾಗೂ ಕಮಲಾ ಪರ ಒಲವು ಹೊಂದಿಲ್ಲ. ಹಿಂದಿನ ಚುನಾವಣೆಯಲ್ಲಿ ಶೇ.52ರಷ್ಟು ಶ್ವೇತ ಮಹಿಳೆಯರು ಟ್ರಂಪ್‌ಗೆ ಮತ ನೀಡಿದ್ದರು. ಕರಿಯ ವರ್ಣೀಯ ಜಮೈಕನ್ ಮೂಲದ ತಂದೆಯ ಪುತ್ರಿಯಾಗಿರುವ ಕಮಲಾ ಹ್ಯಾರೀಸ್‌ರನ್ನು ಅಶ್ವೇತವರ್ಣೀಯ ಪುರುಷರು ತಮ್ಮ ಪ್ರತಿನಿಧಿ ಎಂದು ಭಾವಿಸಿಲ್ಲ. ಕ್ರಿಶ್ಚಿಯನ್ ಬಹುಸಂಖ್ಯಾತ ಅಮೆರಿಕದಲ್ಲಿ ಕ್ರೈಸ್ತ ಧರ್ಮಗುರುಗಳು ಗರ್ಭಪಾತ ತಪ್ಪು ಎನ್ನುತ್ತಾರೆ. ಈ ವಿಚಾರದಲ್ಲಿ ಕಮಲಾರಿಗೆ ಸ್ವ ಪಕ್ಷೀಯರೇ ವಿರೋಧಿಗಳಾಗಬಹುದು. ಕಮಲಾರು ಕ್ಯಾಲಿಪೋರ್ನಿಯಾದ ಅಟಾರ್ನಿ ಜನರಲ್ ಆಗಿದ್ದಾಗ ಶಾಲೆಗೆ ಗೈರುಹಾಜರಾದ ಮಕ್ಕಳ ಪೋಷಕರಿಗೆ ಕಠಿಣ ಶಿಕ್ಷೆ ವಿಧಿಸುವ ನೀತಿ ರೂಪಿಸಿದ್ದರು.

ಈ ನಿಯಮಕ್ಕೆ ಭಾರಿ ವಿರೋಧ ವ್ಯಕ್ತವಾಗಿತ್ತು ಅಮೆರಿಕದ ಜನಸಂಖ್ಯೆಯಲ್ಲಿ ಸುಮಾರು ಶೇ.7ರಷ್ಟಿರುವ ತೃತೀಯಲಿಂಗಿಗಳು (LGBT) ಕಮಲಾರನ್ನು ವಿರೋಧಿಸುತ್ತಿದ್ದಾರೆ. ಬೈಡೆನ್ ಆಡಳಿತದಲ್ಲಿ ಹಣದುಬ್ಬರ ಅನಿಯಂತ್ರಿತವಾಗಿತ್ತು. ಉಕ್ರೇನ್‌ಗೆ 107 ಬಿಲಿಯನ್ ಡಾಲರ್ ನೆರವು ನೀಡಿದ್ದರಿಂದ ಅಮೆರಿಕನ್‌ರು ಆಕ್ರೋಶಗೊಂಡಿದ್ದರು. ಬೈಡೆನ್‌ರ ಇಸ್ರೇಲ್ ಪರ ಧೋರಣೆ ಯುವ ಡೆಮಾಕ್ರೆಟಿಕ್‌ಗಳ ಅಸಮಾಧಾನಕ್ಕೆ ಕಾರಣವಾಗಿದೆ. ಈ ಎಲ್ಲ ವಿಚಾರಗಳಿಗೆ ಕಮಲಾ ಹ್ಯಾರೀಸ್‌ಗೆ ಉತ್ತರಿಸುವ ಅನಿವಾರ್ಯತೆ ಇದೆ. ಟ್ರಂಪ್ ಅವಧಿಯಲ್ಲಿ ಹಣದುಬ್ಬರ ನಿಯಂತ್ರಣದಲ್ಲಿತ್ತು. ಷೇರು ಮಾರುಕಟ್ಟೆ ಏರುಗತಿಯಲ್ಲಿತ್ತು. ಮಹತ್ವದ ವಿಚಾರವೆಂದರೆ ಟ್ರಂಪ್ ಅವಧಿಯಲ್ಲಿ ಅಮೆರಿಕ ಯಾವುದೇ ಯುದ್ಧದಲ್ಲಿ ಭಾಗವಹಿಸಿಲ್ಲ. ಮಾತ್ರವಲ್ಲ ಈ ಬಾರಿ ಅಧ್ಯಕ್ಷರಾದಲ್ಲಿ ಉಕ್ರೇನ್ ಯುದ್ಧ ತಕ್ಷಣ ನಿಲ್ಲಿಸುವುದಾಗಿ ಟ್ರಂಪ್ ತಿಳಿಸಿರುವುದನ್ನು ಅಮೆರಿಕನ್‌ರು ಸ್ವಾಗತಿಸಿದ್ದಾರೆ. ಈ ವಿಷಯಗಳು ಕಮಲಾ ವಿಜಯಕ್ಕೆ ಪ್ರತಿಕೂಲವಾಗುವ ಸಾಧ್ಯತೆ ಇದೆ.

ಅಮೆರಿಕನ್‌ರು ಅಭ್ಯರ್ಥಿಗಳ ವೈಯಕ್ತಿಕ ಸಾಮರ್ಥ್ಯಕ್ಕಿಂತ ಮತದಾನದ ಸಮಯದಲ್ಲಿ ದೇಶದ ಸ್ಥಿತಿ ಗಮನಿಸಿ ಮತ ನೀಡುತ್ತಾರೆ. ಭಾರತೀಯರು ಬಿಟ್ಟಿ ಭಾಗ್ಯಗಳಿಗೆ ಮತ ನೀಡಿದರೆ ಅಮೆರಿಕನ್‌ರು ದೇಶದ ಶ್ರೇಷ್ಠತೆಯನ್ನು ಪ್ರತಿಪಾದಿಸುವವರಿಗೆ ಮತ ನೀಡುತ್ತಾರೆ.

ಪ್ಯಾರಿಸ್ ಒಲಿಂಪಿಕ್ ಕ್ರೀಡಾಕೂಟ–2024

ಕಂಚಿನ ಪದಕ ಗೆದ್ದ ಭಾರತ ಹಾಕಿ ತಂಡ



ಪ್ಯಾರಿಸ್, ಆ.8– ಪ್ಯಾರಿಸ್ ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿ ಭಾರತಕ್ಕೆ ಮತ್ತೊಂದು ಪದಕ ಒಲಿದಿದ್ದು, ಪುರುಷರ ಹಾಕಿಯಲ್ಲಿ ಸ್ಪೈನ್ ತಂಡವನ್ನು 2–1 ಅಂತರದಲ್ಲಿ ಮಣಿಸಿದ ಭಾರತ ಕಂಚಿನ ಪದಕಕ್ಕೆ ಮುತ್ತಿಟ್ಟಿದೆ.

ಆ ಮೂಲಕ ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿ ಭಾರತ ಹಾಕಿ ತಂಡ ಬ್ಯಾಕ್ ಟು ಬ್ಯಾಕ್ ಕಂಚಿನ ಪದಕ ಗೆದ್ದ ಸಾಧನೆ ಮೆರೆದಿದೆ. ಟೋಕಿಯೋ ಒಲಿಂಪಿಕ್ಸ್‌ನಲ್ಲೂ ಕಂಚಿನ ಪದಕ ಗೆದ್ದಿದ್ದ ಭಾರತ ತಂಡ ಇದೀಗ ಪ್ಯಾರಿಸ್ ಅಂಗಣದಲ್ಲಿ ಪದಕದ ಬಣ್ಣ ಬದಲಾಯಿಸಲು ವಿಫಲಗೊಂಡರೂ, ಅದೇ ಕಂಚಿನ ಪದಕ ಗೆದ್ದುಕೊಡುವ ಮೂಲಕ ದೇಶಕ್ಕೆ ಕೀರ್ತಿ ತಂದಿದೆ. ಅಲ್ಲದೇ ಭಾರತೀಯ ಹಾಕಿ ತಂಡ 52 ವರ್ಷಗಳ ಬಳಿಕ ಒಲಿಂಪಿಕ್ಸ್‌ನಲ್ಲಿ ಸತತ ಎರಡು ಪದಕಗಳನ್ನು ಗೆದ್ದುಕೊಂಡಿದೆ.

ಸೆಮಿಫೈನಲ್‌ನಲ್ಲಿ ಜರ್ಮನಿ ಎದುರು 2–3 ಅಂತರದಲ್ಲಿ ಸೋತು ಫೈನಲ್ ತಲುಪಲು ವಿಫಲಗೊಂಡಿದ್ದ ಭಾರತ, ಗುರುವಾರ ನಡೆದ ಕಂಚಿನ ಪದಕದ ಪಂದ್ಯದಲ್ಲಿ ಅಪಾಯಕಾರಿ ಸ್ಪೇನ್ ತಂಡವನ್ನು 2–1 ಗೋಲ್‌ಗಳಿಂದ ಮಣಿಸಿ ಕಂಚಿನ ಪದಕಕ್ಕೆ ಕೊರಳೊಡ್ಡಿತು. ಇದು ಒಲಿಂಪಿಕ್ಸ್ ಇತಿಹಾಸದಲ್ಲಿ ಭಾರತದ ಪುರುಷರ ಹಾಕಿ ತಂಡ ಗೆದ್ದ 4ನೇ ಕಂಚಿನ ಪದಕ ಆಗಿದೆ.

ಭಾರತ ಹಾಕಿ ತಂಡದ ಈ ಯಶಸ್ಸಿನೊಂದಿಗೆ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಭಾರತ ಗೆದ್ದ ಒಟ್ಟು ಪದಕಗಳ ಸಂಖ್ಯೆಯನ್ನು 4ಕ್ಕೆ ಏರಿಸಿಕೊಂಡಿದೆ. ಶೂಟಿಂಗ್‌ನಲ್ಲಿ ಮನು ಭಾಕರ್ 2 ಕಂಚು ಗೆದ್ದರೆ, ಮತ್ತೊಬ್ಬ ಶೂಟರ್ ಸ್ವಪ್ನಿಲ್ ಕುಸಾಲೆ 3ನೇ ಕಂಚು ತಂದುಕೊಟ್ಟಿದ್ದರು. ಮನು ಭಾಕರ್ 10 ಮೀ. ಪಿಸ್ತೂಲ್‌ನ ವೈಯಕ್ತಿಕ ಕಂಚು ಮತ್ತು ಮಿಶ್ರ ಪಿಸ್ತೂಲ್ ಶೂಟಿಂಗ್‌ನಲ್ಲಿ ಸರಬ್ಜೋತ್ ಸಿಂಗ್ ಜೊತೆಗೂಡಿ ಕಂಚು ಗೆದ್ದುಕೊಟ್ಟಿದ್ದರು. ಈಗ ಹಾಕಿ ತಂಡ 4ನೇ ಕಂಚನ್ನು ಜೋಡಿಸಿದೆ.

ಇಂದಿನ ಪಂದ್ಯದ ಮೊದಲ ಕ್ವಾರ್ಟರ್‌ನಲ್ಲಿ ಭಾರತ ಎದುರಾಳಿ ವಿರುದ್ಧ ಪ್ರಾಬಲ್ಯ ಸಾಧಿಸಿದರೂ ಎರಡು ಬಾರಿ ಗುರಿ ತಪ್ಪಿಸಿಕೊಂಡಿತು. ಈ ನಡುವೆ ಸಂಜಯ್ ಅವರ ತಲೆಗೆ ಚೆಂಡು ಬಡಿದು ಅವರು ಆಟದಿಂದ ಹೊರಗುಳಿದರು. ಈ ಹಂತದಲ್ಲಿ ಆಕ್ರಮಣಕಾರಿ ಆಟ ಪ್ರದರ್ಶಿಸಿತಾದರೂ ಮೊದಲ ಕ್ವಾರ್ಟರ್ ಮುಕ್ತಾಯದ ವೇಳೆ 0–0 ಅಂತರದಿಂದ ಪಂದ್ಯ ಕೊನೆಗೊಂಡಿತು.

ಎರಡನೇ ಕ್ವಾರ್ಟರ್‌ನ ಪೆನಾಲ್ಟಿ ಕಾರ್ನರ್ ಅವಕಾಶ ಪಡೆದ ಸ್ಪೇನ್ 18ನೇ ನಿಮಿಷದಲ್ಲಿ ಮೊದಲ ಗೋಲು ಗಳಿಸಿತು. ಇದಾದ ಬಳಿಕ ದ್ವಿತೀಯಾರ್ಧ ಪೂರ್ಣಗೊಳ್ಳುವ 20 ಸೆಕೆಂಡು ಮೊದಲು ಭಾರತಕ್ಕೆ ಪೆನಾಲ್ಟಿ ಕಾರ್ನರ್ ಸಿಕ್ಕಿತು. ಕೊನೆಯ 10 ಸೆಕೆಂಡುಗಳಲ್ಲಿ, ನಾಯಕ ಹರ್ಮನ್ ಪ್ರೀತ್ ಸಿಂಗ್ ಅದ್ಭುತ ಗೋಲು ಗಳಿಸುವ ಮೂಲಕ ಪುನರಾಗಮನ ಮಾಡಿದರು. ದ್ವಿತೀಯಾರ್ಧದ ಅಂತ್ಯಕ್ಕೆ ಉಭಯ ತಂಡಗಳ ಸ್ಕೋರ್ 1–1ಕ್ಕೆ ಸಮವಾಗಿತ್ತು.

ಮೂರನೇ ಕ್ವಾರ್ಟರ್‌ನಲ್ಲಿ ಭಾರತ ಆಕ್ರಮಣಕಾರಿ ಆರಂಭ ಮಾಡಿತು. ಪಂದ್ಯದ 33ನೇ ನಿಮಿಷದಲ್ಲಿ ಹರ್ಮನ್ ಪ್ರೀತ್ ಮತ್ತೊಂದು ಗೋಲು ಬಾರಿಸಿ ಮುನ್ನಡೆ ತಂದುಕೊಟ್ಟರು. ಇದರೊಂದಿಗೆ ಭಾರತ 2–1 ಮುನ್ನಡೆ ಸಾಧಿಸಿತು. ಮೂರನೇ ಕ್ವಾರ್ಟರ್‌ವರೆಗೂ ಸ್ಪೇನ್ ವಿರುದ್ಧ ಮುನ್ನಡೆ ಕಾಯ್ದುಕೊಂಡಿತು. ನಾಲ್ಕನೇ ಕ್ವಾರ್ಟರ್‌ನಲ್ಲೂ ಇದೇ ಆಟ ಮುಂದುವರೆಸಿದ ಭಾರತ ಎದುರಾಳಿಗೆ ಗೋಲು ದಾಖಲಿಸಲು ಅವಕಾಶ ಮಾಡಿಕೊಡದೇ ಅಂತಿಮವಾಗಿ ಪಂದ್ಯ ಗೆದ್ದುಕೊಂಡಿತು.

ಗೋಲ್ ಕೀಪರ್ ಶ್ರೀಜೇಶ್‌ಗೆ ವಿದಾಯ: ಒಲಿಂಪಿಕ್ಸ್ ಉದ್ದಕ್ಕೂ ಭಾರತಕ್ಕೆ ಗೆಲುವಿನಲ್ಲಿ ನೆರವಾಗಿದ್ದು ಗೋಲ್ ಕೀಪರ್ ಶ್ರೀಜೇಶ್. ಹೀಗಾಗಿ ಈ ಪದಕದೊಂದಿಗೆ ಅವರಿಗೆ ಉತ್ತಮ ವಿದಾಯ ದೊರಕಿದೆ. ಒಲಿಂಪಿಕ್ಸ್ ಆರಂಭಕ್ಕೆ ಮುನ್ನವೇ ಅವರು ಇದು ನನಗೆ ಕೊನೆ ಅಂತಾರಾಷ್ಟ್ರೀಯ ಟೂರ್ನಿ ಎಂದು ಹೇಳಿದ್ದರು. ಹೀಗಾಗಿ ಅವರು ಇಲ್ಲಿಗೆ ತಮ್ಮ ವೃತ್ತಿ ಕ್ರೀಡೆಯನ್ನು ಮುಗಿಸಲಿದ್ದಾರೆ. ಹೀಗಾಗಿ ತಂಡದ ಆಟಗಾರರು ಉತ್ತಮ ವಿದಾಯ ಎಂದು ಹೇಳಲಾಗಿದೆ.

ಪ್ರಧಾನಿ ಮೋದಿ ಅಭಿನಂದನೆ: ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ ಮೋದಿ, 'ಭಾರತ ಹಾಕಿ ತಂಡ ಒಲಿಂಪಿಕ್ಸ್‌ನಲ್ಲಿ ಕಂಚಿನ ಪದಕ ಗೆದ್ದಿದೆ. ಇದು ಒಲಿಂಪಿಕ್ಸ್‌ನಲ್ಲಿ ತಂಡ ಜಯಿಸಿದ ಸತತ ಎರಡನೇ ಪದಕವಾಗಿರುವುದು ಇನ್ನಷ್ಟು ವಿಶೇಷ' ಎಂದು ಆಟಗಾರರನ್ನು ಅಭಿನಂದಿಸಿದ್ದಾರೆ.

ಒಲಿಂಪಿಕ್ಸ್‌ನಲ್ಲಿ ಭಾರತದ ಹಾಕಿ ತಂಡದ ಸಾಧನೆ

ಚಿನ್ನದ ಪದಕ – ಮೊದಲ ಸ್ಥಾನ, 1928 (ಆಂಸ್ಟರ್‌ಡ್ಯಾಮ್)
ಚಿನ್ನದ ಪದಕ – ಮೊದಲ ಸ್ಥಾನ, 1932 (ಲಾಸ್ ಏಂಜಲೀಸ್)
ಚಿನ್ನದ ಪದಕ – ಮೊದಲ ಸ್ಥಾನ, 1936, (ಬರ್ಲಿನ್)
ಚಿನ್ನದ ಪದಕ – ಮೊದಲ ಸ್ಥಾನ, 1948 (ಲಂಡನ್)
ಚಿನ್ನದ ಪದಕ – ಮೊದಲ ಸ್ಥಾನ, 1952 (ಹೆಲ್ಸಿಂಕಿ)
ಚಿನ್ನದ ಪದಕ – ಮೊದಲ ಸ್ಥಾನ, 1956 (ಮೆಲ್ಬೋರ್ನ್)
ಚಿನ್ನದ ಪದಕ – ಮೊದಲ ಸ್ಥಾನ, 1964 (ಟೋಕಿಯೋ)
ಚಿನ್ನದ ಪದಕ – ಮೊದಲ ಸ್ಥಾನ, 1980 (ಮಾಸ್ಕೋ)
ಬೆಳ್ಳಿ ಪದಕ – ಎರಡನೇ ಸ್ಥಾನ, 1960 (ರೋಮ್)
ಕಂಚಿನ ಪದಕ – ಮೂರನೇ ಸ್ಥಾನ, 1968 (ಮೆಕ್ಸಿಕೋ ಸಿಟಿ)
ಕಂಚಿನ ಪದಕ – ಮೂರನೇ ಸ್ಥಾನ, 1972 (ಮ್ಯೂನಿಚ್)
ಕಂಚಿನ ಪದಕ – ಮೂರನೇ ಸ್ಥಾನ, 2020 (ಟೋಕಿಯೊ)
ಕಂಚಿನ ಪದಕ – ಮೂರನೇ ಸ್ಥಾನ, 2024 (ಪ್ಯಾರಿಸ್)

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಮೈಸೂರು ಮಿತ್ರ

ವಾಲ್ಮೀಕಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣ

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಇಡಿಯಿಂದ ರಾಜ್ಯಪಾಲರ ಅನುಮತಿ ಕೋರಿಕೆ ಸಾಧ್ಯತೆ

ಮುಡಾ ಹಗರಣ: ಸಿಎಂ ಸಿದ್ದರಾಮಯ್ಯ ವಿರುದ್ಧ ಕೋರ್ಟ್‌ನಲ್ಲಿ ಖಾಸಗಿ ದೂರು ದಾಖಲು

ಬೆಂಗಳೂರು, ಆ.8(ಕೆಎಂಶಿ)– ಮಹರ್ಷಿ ವಾಲ್ಮೀಕಿ ನಿಗಮದಲ್ಲಿ ನಡೆದಿರುವ ಬಹುಕೋಟಿ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರ ಅನುಮತಿಯನ್ನು ಜಾರಿ ನಿರ್ದೇಶನಾಲಯದ ಅಧಿಕಾರಿಗಳು (ಇಡಿ) ಕೋರುವ ಸಾಧ್ಯತೆ ಇದೆ.

ಇದರ ನಡುವೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದಲ್ಲಿ ತಮ್ಮ ಕುಟುಂಬದವರಿಗೆ ನಿವೇಶನ ಹಂಚಿಕೆ ಹಾಗೂ ಡಿನೋಟಿಫಿಕೇಷನ್ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ಇಂದು ಖಾಸಗಿ ದೂರು ದಾಖಲಾಗಿದೆ.

ಮೈಸೂರಿನ ಆರ್‌ಟಿಐ ಕಾರ್ಯಕರ್ತೆ ಸ್ನೇಹಮಯಿ ಕೃಷ್ಣ ಎಂಬುವರು ಶಾಸಕರು, ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆಯ ವಿಶೇಷ ನ್ಯಾಯಾಲಯದಲ್ಲಿ ದೂರು ದಾಖಲಿಸಿದ್ದಾರೆ.

ಖಾಸಗಿ ದೂರನ್ನು ಪಡೆದಿರುವ ನ್ಯಾಯಾಧೀಶರಾದ ಸಂತೋಷ್ ಗಜಾನನ ಭಟ್ ಅವರು, ದಾಖಲೆಗಳ ಪರಿಶೀಲನೆಗೆ ನೀಡಿದ್ದಾರೆ. ದೂರಿನ ಬಗ್ಗೆ ನಾಳೆ ನ್ಯಾಯಾಲಯ ವಿಚಾರಣೆ ಕೈಗೆತ್ತಿಕೊಳ್ಳುವ ಸಾಧ್ಯತೆ ಇದೆ. ಅರ್ಜಿದಾರರ ಪರವಾಗಿ ಹಿರಿಯ ವಕೀಲೆ ಲಕ್ಷ್ಮೀ ಅಯ್ಯಂಗಾರ್ ದೂರು ದಾಖಲಿಸಿದ್ದು, ಇದರ ಪರವಾಗಿ ಮತ್ತೊಬ್ಬ ಹಿರಿಯ ನ್ಯಾಯವಾದಿ ವಸಂತಕುಮಾರ್ ಅವರು ವಕಾಲತ್ತು ವಹಿಸಿದ್ದಾರೆ.

ಮುಡಾ ನಿವೇಶನಗಳ ಹಂಚಿಕೆ ಹಗರಣಕ್ಕೆ ಸಂಬಂಧಿಸಿದಂತೆ ರೈತ ಸಂಘಟನೆಗಳು ಹಾಗೂ ಅಬ್ರಹಾಂ ಎಂಬುವರು ತಮಗೆ ನೀಡಿದ ದೂರಿನ ಆಧಾರದ ಮೇಲೆ ನಿಮ್ಮ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಬಾರದೇಕೇ ಎಂದು ರಾಜ್ಯಪಾಲರು ಮುಖ್ಯಮಂತ್ರಿ ಅವರಿಗೆ ಈಗಾಗಲೇ ನೋಟಿಸ್ ನೀಡಿ ಅದಕ್ಕೆ ಉತ್ತರವನ್ನು ಪಡೆದಿದ್ದಾರೆ.

ಸರ್ಕಾರದಿಂದ ಉತ್ತರ ಬಂದ ನಂತರ ರಾಜ್ಯಪಾಲರು ನಿರಂತರವಾಗಿ ಸಮಾಲೋಚನೆ ನಡೆಸಿ, ಪ್ರಾಸಿಕ್ಯೂಷನ್‌ಗೆ ನೀಡುವುದು ಸೇರಿದಂತೆ ವಿವಿಧ ಮಾರ್ಗಗಳಲ್ಲಿ ತನಿಖೆ ನಡೆಸುವ ಸಾಧ್ಯಾಸಾಧ್ಯತೆಗಳ ಬಗ್ಗೆ ಮಾಹಿತಿ ಪಡೆದುಕೊಳ್ಳುತ್ತಿದ್ದಾರೆ.

ಇದರ ನಡುವೆಯೇ ಇಡಿಯು ವಾಲ್ಮೀಕಿ ನಿಗಮದ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ವಿರುದ್ಧ ಪ್ರಾಸಿಕ್ಯೂಷನ್ ಕೇಳಲು ಸಿದ್ಧತೆ ಮಾಡಿಕೊಂಡಿದೆ ಎಂಬ ವಿಚಾರ ಸರ್ಕಾರದ ಮಟ್ಟದಲ್ಲಿಯೇ ಕೇಳಿಬಂದಿದೆ.

ಹಣಕಾಸು ಇಲಾಖೆಯನ್ನು ಮುಖ್ಯಮಂತ್ರಿ ಅವರೇ ಹೊಂದಿದ್ದಾರೆ. ಅವರ ಗಮನಕ್ಕೆ ಬಾರದೇ ಸರ್ಕಾರಿ ಸ್ವಾಮ್ಯದ ನಿಗಮದಲ್ಲಿ ಇಷ್ಟು ದೊಡ್ಡ ಪ್ರಮಾಣದ ಅವ್ಯವಹಾರ ಸಾಧ್ಯವೇ?

ಪ್ರಕರಣಕ್ಕೆ ಸಂಬಂಧಿಸಿದಂತೆ ಇಲಾಖೆ ಹೊಣೆ ಹೊತ್ತಿದ್ದ ಮಾಜಿ ಸಚಿವ ಹಾಗೂ ಶಾಸಕ ಬಿ. ನಾಗೇಂದ್ರ ಸೇರಿದಂತೆ ಕೆಲವು ಮಧ್ಯವರ್ತಿಗಳನ್ನು ಈಗಾಗಲೇ ಇಡಿ ತನ್ನ ವಶಕ್ಕೆ ತೆಗೆದುಕೊಂಡಿದೆ. ವಶಕ್ಕೆ ತೆಗೆದುಕೊಳ್ಳುವುದರ ಜತೆಗೆ ನಾಗೇಂದ್ರ ಅವರ ಪತ್ನಿ ಸೇರಿದಂತೆ ಕೆಲವರನ್ನು ಕರೆಸಿ ವಿಚಾರಣೆಯನ್ನು ಮಾಡಿದೆ. ಬಂಧಿತರು ನೀಡಿರುವ ಅಂಕಿ–ಅಂಶಗಳು ಹಾಗೂ ಕೆಲವು ದಾಖಲೆಗಳನ್ನು ಆಧರಿಸಿ ಪರಿಶೀಲನೆ ನಡೆಸಿ ಇಂತಹ ನಿರ್ಧಾರಕ್ಕೆ ಬಂದಿದೆ ಎನ್ನಲಾಗಿದೆ. ಈ ಬೆಳವಣಿಗೆ ನಡೆಯುತ್ತಿದ್ದಂತೆ ಎಸ್‌ಐಟಿಯು ಕಾಂಗ್ರೆಸ್ ಶಾಸಕರಾದ ನಾಗೇಂದ್ರ ಮತ್ತು ಬಸನಗೌಡ ದದ್ದಲ್ ಅವರನ್ನು ಹೊರಗಿಟ್ಟು 12 ಮಂದಿಯ ವಿರುದ್ಧ ಪ್ರಾಥಮಿಕ ಚಾರ್ಜ್‌ಶೀಟನ್ನು ನ್ಯಾಯಾಲಯಕ್ಕೆ ಸಲ್ಲಿಸಿದೆ.

ಪಶ್ಚಿಮ ಬಂಗಾಳದ ಮಾಜಿ ಸಿಎಂ ಬುದ್ಧದೇವ್ ಭಟ್ಟಾಚಾರ್ಯ ನಿಧನ



ಕೋಲ್ಕತ್ತಾ: ಪಶ್ಚಿಮ ಬಂಗಾಳದ ಮಾಜಿ ಮುಖ್ಯಮಂತ್ರಿ ಬುದ್ಧದೇವ್ ಭಟ್ಟಾಚಾರ್ಯ ಅವರು ಗುರುವಾರ ವಿಧಿವಶರಾಗಿದ್ದಾರೆ. ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದ ಬುದ್ಧದೇವ್ ಭಟ್ಟಾಚಾರ್ಯ ಅವರು ಇಂದು ಬೆಳಿಗ್ಗೆ ದಕ್ಷಿಣ ಕೋಲ್ಕತ್ತಾದ ನಿವಾಸದಲ್ಲಿ ಬೆಳಿಗ್ಗೆ ಸುಮಾರು 8.30ಕ್ಕೆ ನಿಧನರಾಗಿದ್ದಾರೆ. ಬುದ್ಧದೇವ್ ಭಟ್ಟಾಚಾರ್ಯ ಅವರಿಗೆ 80 ವರ್ಷ ವಯಸ್ಸಾಗಿತ್ತು. ಭಟ್ಟಾಚಾರ್ಯ ಅವರು ಪತ್ನಿ ಮೀರಾ ಮತ್ತು ಪುತ್ರಿ ಸುಚೇತನಾ ಅವರನ್ನು ಅಗಲಿದ್ದಾರೆ. ಉಸಿರಾಟದ ತೊಂದರೆಯಿಂದ ಇವರು ಬಳಲುತ್ತಿದ್ದರು. ಇದರಿಂದಾಗಿ ಅವರನ್ನು ಆಗಾಗ್ಗೆ ಆಸ್ಪತ್ರೆಗೆ ದಾಖಲಿಸಲಾಗುತ್ತಿತ್ತು. ಬುದ್ಧದೇವ್, ಭಾರತೀಯ ಕಮ್ಯೂನಿಸ್ಟ್ ಪಕ್ಷ ಮಾರ್ಕ್ಸ್‌ವಾದ (ಸಿಪಿಐಎಂ) ಉನ್ನತ ನಿರ್ಧಾರ ತೆಗೆದುಕೊಳ್ಳುವ ಸಮಿತಿಯಾದ ಪಾಲಿಟ್ ಬ್ಯೂರೊದ ಮಾಜಿ ಸದಸ್ಯರಾಗಿದ್ದರು.

ಪಶ್ಚಿಮ ಬಂಗಾಳದಲ್ಲಿ ಎಡಪಕ್ಷದ 34 ವರ್ಷಗಳ ಆಡಳಿತದಲ್ಲಿ, ಭಟ್ಟಾಚಾರ್ಯ ಅವರು 2000 ರಿಂದ 2011 ರವರೆಗೆ ಸತತ 11 ವರ್ಷಗಳ ಕಾಲ ಅಧಿಕಾರದಲ್ಲಿದ್ದ ಎರಡನೇ ಮತ್ತು ಕೊನೆಯ ಸಿಪಿಎಂ ಮುಖ್ಯಮಂತ್ರಿಯಾಗಿದ್ದರು.

ಮೂಗೂರು ಕರ್ನಾಟಕ ಬ್ರಾಹ್ಮಣ ಸಂಘದಲ್ಲಿ ಲಕ್ಷಾಂತರ ದುರ್ಬಳಕೆ ಆರೋಪ

ಕೆಆರ್ ಪೊಲೀಸ್ ಠಾಣೆಯಲ್ಲಿ 59 ಮಂದಿ ವಿರುದ್ಧ ಪ್ರಕರಣ ದಾಖಲು

ಮೈಸೂರು, ಆ.8– ಮೈಸೂರಿನ ಮೂಗೂರು ಕರ್ನಾಟಕ ಬ್ರಾಹ್ಮಣ ಸಂಘದ ಲಕ್ಷಾಂತರ ರೂ. ದುರ್ಬಳಕೆ ಮಾಡಿರುವ ಆರೋಪದಡಿ 59 ಜನರ ವಿರುದ್ಧ ಕೃಷ್ಣರಾಜ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ವಿದ್ಯಾರಣ್ಯಪುರಂ ನಿವಾಸಿ ಈಶ್ವರ್ ಅವರು ಪೊಲೀಸರಿಗೆ ದೂರು ನೀಡಿದ್ದು, ಮೂಗೂರು ಕರ್ನಾಟಕ ಬ್ರಾಹ್ಮಣ ಸಂಘದಲ್ಲಿ 2007ರಿಂದ 2019ನೇ ಸಾಲಿನವರೆಗೆ ಹಣ ದುರ್ಬಳಕೆ ಆಗಿದೆ. ಆ ಅವಧಿಯ ಆಡಳಿತ ಮಂಡಳಿ ಸದಸ್ಯರು, ಕಾನೂನು ಉಲ್ಲಂಘನೆ ಮಾಡಿ ಕೋಟ್ಯಾಂತರ ರೂ. ಬೆಲೆಬಾಳುವ ಸಂಘದ ಆಸ್ತಿಯನ್ನು ದುರುಪಯೋಗಪಡಿಸಿಕೊಂಡು 98,40,770 ರೂ. ಆರ್ಥಿಕ ನಷ್ಟ ಉಂಟು ಮಾಡಿದ್ದಾರೆ. ಆದ್ದರಿಂದ ಅಂದಿನ ಆಡಳಿತ ಮಂಡಳಿಯಲ್ಲಿದ್ದ 59 ಸದಸ್ಯರುಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದಾರೆ.

ಶಾಲಾ ಬೀಗ ಒಡೆದು ಹಣ, ಡಿವಿಆರ್ ಕಳವು

ಮೈಸೂರು, ಆ.8(ಎಸ್‌ಬಿಡಿ)– ಮೈಸೂರಿನ ಶಿಕ್ಷಣ ಸಂಸ್ಥೆಯೊಂದರ ಬೀಗ ಒಡೆದು ಹಣ ಹಾಗೂ ಡಿವಿಆರ್ ಕಳ್ಳತನ ಮಾಡಲಾಗಿದೆ. ಮೈಸೂರಿನ ಹೆಬ್ಬಾಳು 2ನೇ ಹಂತದಲ್ಲಿರುವ ಸುಮುಖ ಶಿಕ್ಷಣ ಸಂಸ್ಥೆಯಲ್ಲಿ 95 ಸಾವಿರ ರೂ. ಹಾಗೂ 2 ಡಿವಿಆರ್‌ಗಳು ಕಳ್ಳತನವಾಗಿದ್ದು, ಈ ಸಂಬಂಧ ಅಲ್ಲಿನ ಪ್ರಾಂಶುಪಾಲ ವೈ.ಎಂ.ಕಾರ್ತಿಕ್ ಹೆಬ್ಬಾಳು ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಆ.6ರಂದು ಸಂಜೆ ಎಲ್ಲಾ ರೂಮ್‌ಗಳಿಗೆ ಹಾಗೂ ಎರಡು ಕಬ್ಬಿಣದ ಗೇಟ್‌ಗಳಿಗೂ ಬೀಗ ಹಾಕಿಸಿದ ನಂತರ ಮನೆಗೆ ತೆರಳಿದ್ದೆ. ಆ.7ರಂದು ಬೆಳಗ್ಗೆ 6.45ಕ್ಕೆ ಭದ್ರತಾ ಸಿಬ್ಬಂದಿ ನನಗೆ ಕರೆ ಮಾಡಿ, ಯಾರೋ ಶಾಲೆಯ ಗೇಟ್ ಬೀಗ ಒಡೆದಿದ್ದಾರೆ ಎಂದು ತಿಳಿಸಿದರು. ಕೂಡಲೇ ಹೋಗಿ ನೋಡಿದಾಗ ಕಬ್ಬಿಣದ ಗೇಟ್ ಬೀಗ ಒಡೆದಿತ್ತು. ಶಾಲೆಯೊಳಗೆ ಹೋಗಿ ಪರಿಶೀಲಿಸಿದಾಗ ಅಡ್ಮಿನ್ ಕೊಠಡಿಯಲ್ಲಿ ಬೀರು ತೆರೆದಿತ್ತು. ಅದರಲ್ಲಿದ್ದ ಕಬ್ಬಿಣದ ಹಣದ ಪೆಟ್ಟಿಗೆ ಇರಲಿಲ್ಲ. ಸ್ಟಾಫ್ ರೂಂನಲ್ಲಿದ್ದ ಡಿವಿಆರ್, ಮತ್ತೊಂದು ಆಫೀಸ್ ಬೀರುವಿನಲ್ಲಿದ್ದ ಹಣ, ಒಂದನೇ ಅಂತಸ್ತಿನಲ್ಲಿರುವ ನನ್ನ ಕೊಠಡಿಯ ಬೀರುವಿನಲ್ಲಿದ್ದ ಹಣ ಹಾಗೂ ಅಲ್ಲಿದ್ದ ಮತ್ತೊಂದು ಡಿವಿಆರ್ ಕಳ್ಳತನವಾಗಿರುವುದು ತಿಳಿಯಿತು ಎಂದು ಪ್ರಾಂಶುಪಾಲರು ಪೊಲೀಸರಿಗೆ ನೀಡಿರುವ ದೂರಿನಲ್ಲಿ ತಿಳಿಸಿದ್ದಾರೆ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿರುವ ಹೆಬ್ಬಾಳ ಠಾಣೆ ಪೊಲೀಸರು, ಮುಂದಿನ ಕ್ರಮ ಕೈಗೊಂಡಿದ್ದಾರೆ.

ಮೂರನೇ ಪುಟದಿಂದ

ಇವರ ರಣ ಕಣ ಒಂದೇ!


ಕಾಂಗ್ರೆಸ್ ಸಮಾವೇಶದ ನಂತರ ಅಸ್ತವ್ಯಸ್ತವಾಗಲಿದ್ದು, ಅದನ್ನೆಲ್ಲಾ ವ್ಯವಸ್ಥಿತವಾಗಿ ಜೋಡಿಸಬೇಕಾಗಿದೆ. ಸಾಮಾನ್ಯವಾಗಿ ಇಂತಹ ಬೃಹತ್ ವೇದಿಕೆ ನಿರ್ಮಿಸಲು 5 ರಿಂದ 6 ದಿನ ಹಿಡಿಯುತ್ತದೆ. ಆದರೆ ಒಂದೇ ದಿನದ ಅಂತರದಲ್ಲಿ ಎರಡು ಬೃಹತ್ ಸಮಾವೇಶಕ್ಕೆ ಒಂದೇ ವೇದಿಕೆ ಸಿದ್ಧಪಡಿಸಿಕೊಡಬೇಕಾದ ಸವಾಲನ್ನು ಇದೇ ಮೊದಲ ಬಾರಿಗೆ ಎದುರಿಸುತ್ತಿರುವ ಶರೀಫ್, ನಾಳೆ ಸಂಜೆ ನಂತರ ವೇದಿಕೆ ಹಾಗೂ ಮೈದಾನವನ್ನು ಸಿದ್ಧಪಡಿಸಲು 220 ರಿಂದ 250 ಸಿಬ್ಬಂದಿಯನ್ನು ತಯಾರಾಗಿ ಇಟ್ಟುಕೊಂಡಿರುವುದಾಗಿ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಮತ್ತೊಂದು ವಿಶೇಷವೆಂದರೆ ಕಳೆದ 6 ದಿನಗಳಿಂದ ಮಹಾರಾಜ ಕಾಲೇಜು ಮೈದಾನ ಮತ್ತು ವೇದಿಕೆಯ ಸಿದ್ಧತೆಗಳ ಮೇಲುಸ್ತುವಾರಿ ವಹಿಸಿದ್ದು ಕಾಂಗ್ರೆಸ್ ನಾಯಕರು. ನಿನ್ನೆಯಷ್ಟೇ ಮುಖ್ಯಮಂತ್ರಿ ಸಿದ್ದರಾಮಯ್ಯನವರು ವೇದಿಕೆಯ ಅಂತಿಮ ಸಿದ್ಧತೆಗಳನ್ನು ಪರಿಶೀಲನೆ ಮಾಡಿದರು. ಆದರೆ ಕಾಂಗ್ರೆಸ್ ಪಕ್ಷ ಈ ಮೈದಾನ ಹಾಗೂ ವೇದಿಕೆಯನ್ನು ನಾಳೆ ಸಂಜೆ 5 ಗಂಟೆ ನಂತರ ಬಿಟ್ಟುಕೊಡುತ್ತಿರುವುದರಿಂದಾಗಿ ಬಿಜೆಪಿ ಮತ್ತು ಜೆಡಿಎಸ್ ಸಮಾವೇಶವು ಕಾಂಗ್ರೆಸ್ ಮುಖಂಡರ ಮೇಲುಸ್ತುವಾರಿಯಲ್ಲಿ ಸಿದ್ಧಗೊಂಡ ವೇದಿಕೆಯಲ್ಲೇ ನಡೆಯಲಿದೆ.

ಮೈಸೂರು ವೈದ್ಯಕೀಯ ಕಾಲೇಜಲ್ಲಿ 'ಜಗನ್ನಾಥ ವಿದ್ಯಾರ್ಥಿ ವಿಶ್ರಾಂತಿ ವಿಹಾರ' ಕಟ್ಟಡ ಉದ್ಘಾಟನೆ

ಗಳಿಸಿದ್ದರಲ್ಲಿ ಕನಿಷ್ಠ ಶೇ.10ರಷ್ಟನ್ನಾದರೂ ಸಮಾಜದ ಒಳಿತಿಗಾಗಿ ವಿನಿಯೋಗಿಸಬೇಕು ; ಕಟ್ಟಡದ ದಾನಿಯೂ ಆದ ಉದ್ಯಮಿ ಡಾ.ಎಂ.ಜಗನ್ನಾಥ ಶೆಣೈ ಅಭಿಮತ





ಮೈಸೂರಿನ ಎಂಎಂಸಿ ಮತ್ತು ಆರ್‌ಐ ಆವರಣದಲ್ಲಿ ನಿರ್ಮಿಸಿರುವ 'ಜಗನ್ನಾಥ ವಿದ್ಯಾರ್ಥಿ ವಿಶ್ರಾಂತಿ ವಿಹಾರ' ಕಟ್ಟಡದ ಉದ್ಘಾಟನೆಯನ್ನು ಉದ್ಯಮಿ ಡಾ.ಎಂ.ಜಗನ್ನಾಥಶೆಣೈ ಗುರುವಾರ ನೆರವೇರಿಸಿದರು. ಎಂ.ಜಗನ್ನಾಥಶೆಣೈ ಅವರ ಪತ್ನಿ ಕುಸುಮ ಶೆಣೈ, ಕಾಮಾಕ್ಷಿ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ.ಉಮೇಶ್ ಕಾಮತ್, 'ಮೈಸೂರು ಮಿತ್ರ' ಮತ್ತು 'ಸ್ಟಾರ್ ಆಫ್ ಮೈಸೂರ್' ಸಂಸ್ಥಾಪಕ ಸಂಪಾದಕರಾದ ಡಾ.ಕೆ.ಬಿ.ಗಣಪತಿ, ಎಂಎಂಸಿ ಮತ್ತು ಆರ್‌ಐ ನಿರ್ದೇಶಕರು ಹಾಗೂ ಡೀನ್ ಡಾ.ಕೆ.ಆರ್.ದಾಕ್ಷಾಯಣಿ ಸೇರಿದಂತೆ ಮತ್ತಿತರರನ್ನು ಚಿತ್ರದಲ್ಲಿ ಕಾಣಬಹುದು. ಮತ್ತೊಂದು ಚಿತ್ರದಲ್ಲಿ ಸದರಿ ಕಟ್ಟಡವನ್ನು ಕಾಣಬಹುದು.

ಮೈಸೂರು,ಆ.8(ಪಿಎಂ)– ಇರ್ವಿನ್ ರಸ್ತೆಯಲ್ಲಿರುವ ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ (ಎಂಎಂಸಿ ಮತ್ತು ಆರ್‌ಐ) ಆವರಣದಲ್ಲಿ ಸಂಸ್ಥೆಯ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಮಂಗಳೂರು ಗಣೇಶ ಬೀಡಿ ವರ್ಕ್ಸ್ ಕಂಪನಿಯ ಆಡಳಿತ ಪಾಲುದಾರ ಡಾ.ಎಂ.ಜಗನ್ನಾಥಶೆಣೈ ಅವರು ತಮ್ಮ ಕೊಡುಗೆಯಾಗಿ ನಿರ್ಮಿಸಿಕೊಟ್ಟಿರುವ 'ಜಗನ್ನಾಥ ವಿದ್ಯಾರ್ಥಿ ವಿಶ್ರಾಂತಿ ವಿಹಾರ' ಕಟ್ಟಡವನ್ನು ಗುರುವಾರ ಉದ್ಘಾಟಿಸಲಾಯಿತು.

ಎಂಎಂಸಿ ಮತ್ತು ಆರ್‌ಐನ ಶತಮಾನೋತ್ಸವ ಸಂಭ್ರಮದ (1924–2024) ಪ್ರಯುಕ್ತ 55 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಿರುವ 66 ಅಡಿ x 30 ಅಡಿ ವಿಸ್ತೀರ್ಣದ ನೆಲ ಅಂತಸ್ತಿನ ಈ ಕಟ್ಟಡವನ್ನು ಇದರ ದಾನಿಗಳೂ ಆದ ಡಾ.ಎಂ.ಜಗನ್ನಾಥಶೆಣೈ ಉದ್ಘಾಟಿಸಿದರು. ಬಳಿಕ ಇದೇ ಕಟ್ಟಡದಲ್ಲಿ ನಡೆದ ಸಭಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಯಾರು ಎಷ್ಟೇ ಸಂಪಾದಿಸಿದರೂ ಅದರಲ್ಲಿ ಕನಿಷ್ಠ ಶೇ.10ರಷ್ಟನ್ನು ಸಮಾಜದ ಒಳಿತಿಗಾಗಿ ವಿನಿಯೋಗಿಸಬೇಕು. ಈ ನಿಟ್ಟಿನಲ್ಲಿ ಯುವ ಜನರು ತಮ್ಮ ಕೈಲಾದ ಸಹಾಯಹಸ್ತವನ್ನು ಸಮಾಜಕ್ಕೆ ನೀಡಬೇಕು. ಸಮಾಜಕ್ಕೆ ಸ್ಪಂದಿಸುವ ಮತ್ತು ತಮ್ಮಿಂದ ಸಾಧ್ಯವಾಗುವ ನೆರವು ನೀಡುವ ಮನೋಭಾವ ಬೆಳೆಸಿಕೊಳ್ಳುವುದು ಮುಖ್ಯ ಎಂದು ಅಭಿಪ್ರಾಯಪಟ್ಟರು.

ಈ ವರ್ಷ ಮೈಸೂರು ವೈದ್ಯಕೀಯ ಕಾಲೇಜಿಗೆ ನೂರು ವರ್ಷ ತುಂಬುತ್ತಿದ್ದು, ಇದು ಸಂತಸದ ಸಂಗತಿ. ಇಡೀ ಕರ್ನಾಟಕದಲ್ಲಿ ಇದೇ ಮೊಟ್ಟ ಮೊದಲ ಮೆಡಿಕಲ್ ಕಾಲೇಜು. ಅಂದು ಮೈಸೂರು ಮಹಾರಾಜರು ಶಿಕ್ಷಣ ಕ್ಷೇತ್ರಕ್ಕೂ ಹೆಚ್ಚು ಪ್ರೋತ್ಸಾಹ ಕೊಡುತ್ತಿದ್ದರು. ಹಾಗಾಗಿಯೇ 1924ರಲ್ಲಿ ಈ ಕಾಲೇಜು ಸ್ಥಾಪನೆಗೊಂಡಿತು. ಶತಮಾನೋತ್ಸವದ ಸುಸಂದರ್ಭದಲ್ಲಿ ನಿರ್ಮಿಸಿರುವ ಈ ನೂತನ ಕಟ್ಟಡ ಕನಿಷ್ಠ ಇನ್ನು 100 ವರ್ಷಗಳ ಕಾಲ ಇರಬೇಕು. ಜೊತೆಗೆ ಮುಂದೆ ಇನ್ನು ಎರಡು ಅಂತಸ್ತು ನಿರ್ಮಿಸಲು ಅನುಕೂಲವಾಗುವಂತೆ ಹೆಚ್ಚುವರಿಯಾಗಿ 2 ಅಡಿ ಅಡಿಪಾಯ ಜಾಸ್ತಿ ಮಾಡಿಸಲಾಗಿದೆ ಎಂದು ತಿಳಿಸಿದರು.

ಆಯ ಮತ್ತು ಆಕರ್ಷಣೆಗೆ ಒತ್ತು ನೀಡಿ ಈ ಕಟ್ಟಡ ನಿರ್ಮಿಸಲಾಗಿದೆ. ಗುಣಮಟ್ಟದ ಸಾಮಗ್ರಿಗಳನ್ನು ಬಳಸಲಾಗಿದೆ. ಎಷ್ಟೇ ಹಣವಿದ್ದರೂ ಅದನ್ನು ದಾನವಾಗಿ ನೀಡುವ ಮನಸ್ಸು ಇರಬೇಕು. ಸಮಾಜದ ಒಳ್ಳೆಯ ಕೆಲಸ ಕಾರ್ಯಗಳಿಗಾಗಿ ಆರ್ಥಿಕವಾಗಿ ನೆರವಾಗುವುದು ಮುಖ್ಯ. ನನ್ನ ಯಾವುದೇ ಸಮಾಜ ಸೇವಾ ಕಾರ್ಯಗಳನ್ನು ಹೆಸರು ಬರಲೆಂದು ನಾನು ಮಾಡಿಲ್ಲ. ಈ ಸಂಸ್ಥೆ ಇನ್ನು ಉನ್ನತ ಮಟ್ಟದಲ್ಲಿ ಬೆಳೆಯಲಿ ಎಂದು ಆಶಿಸಿದರು.

ವಿದ್ಯಾರ್ಥಿಗಳು ಚೆನ್ನಾಗಿ ಕಲಿತು ಭವಿಷ್ಯದಲ್ಲಿ ಈ ಕಾಲೇಜಿಗೆ ಏನಾದರೂ ಕೊಡುಗೆ ನೀಡಬೇಕು. ಈ ಸಂಸ್ಥೆ ನೀವು ವೈದ್ಯರಾಗಲು ಕಾರಣವಾಗಿದೆ ಎಂಬುದನ್ನು ಮರೆಯಬಾರದು. ಇದು ನಮ್ಮ ಸಂಸ್ಥೆ ಎಂಬುದು ಮನಸ್ಸಿನಲ್ಲಿ ಬರಬೇಕು. ವೈದ್ಯರಾದ ಮೇಲೆ ಬಡ ಜನತೆಗೆ ಉಚಿತ ವೈದ್ಯಕೀಯ ಸೇವೆ ನೀಡಬೇಕು. ಈ ಕಟ್ಟಡವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಇದಕ್ಕೂ ಮುನ್ನ ಮಾತನಾಡಿದ ಎಂಎಂಸಿ ಮತ್ತು ಆರ್‌ಐ ಹಳೇ ವಿದ್ಯಾರ್ಥಿಯೂ ಆದ ಕಾಮಾಕ್ಷಿ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ.ಉಮೇಶ್ ಕಾಮತ್, ಮೈಸೂರಿನವರೇ ಆದ ಎಂ.ಜಗನ್ನಾಥಶೆಣೈ ಅವರು ಸಮಾಜ ಸೇವೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಆರ್ಥಿಕವಾಗಿ ನೆರವು ನೀಡುತ್ತಾ ಬಂದಿದ್ದಾರೆ. ತಮ್ಮ 37ನೇ ವಯಸ್ಸಿನಲ್ಲೇ ಬೃಹತ್ ಸಂಸ್ಥೆಯೊಂದರ ಸಿಇಓ ಆಗಿ ಅದನ್ನು ಕಟ್ಟಿ ಬೆಳೆಸಿದರು. ಅದರ ಜೊತೆಗೆ ಇನ್ನು ಹಲವು ಸಂಸ್ಥೆಗಳನ್ನು ಸ್ಥಾಪಿಸಿ, ಬೆಳೆಸಿದ್ದಾರೆ. ಆ ಮೂಲಕ ಸಹಸ್ರಾರು ಮಂದಿಗೆ ಉದ್ಯೋಗ ಕಲ್ಪಿಸಿದ್ದಾರೆ. ರಾಜ್ಯ ಮಾತ್ರವಲ್ಲದೆ, ಬೇರೆ ರಾಜ್ಯಗಳಲ್ಲಿ ದೇವಸ್ಥಾನಗಳ ಜೀರ್ಣೋದ್ಧಾರಕ್ಕೂ ನೆರವಾಗಿದ್ದಾರೆ. ತಾವು ಶ್ರಮವಹಿಸಿ ಸಂಪಾದಿಸಿದ್ದರಲ್ಲಿ ಒಂದು ಭಾಗವನ್ನು ಸಮಾಜ ಸೇವೆಗೆ ವಿನಿಯೋಗಿಸುತ್ತಿದ್ದಾರೆ. ವೈದ್ಯ ಸಮುದಾಯದ ಬಗ್ಗೆ ಅಪಾರವಾದ ಪ್ರೀತಿ ವಿಶ್ವಾಸ ಹೊಂದಿರುವ ಅವರಿಗೆ ಅನೇಕ ಪ್ರಶಸ್ತಿ–ಪುರಸ್ಕಾರಗಳು ಸಂದಿವೆ ಎಂದು ತಿಳಿಸಿದರು.

ಕಾಮಾಕ್ಷಿ ಆಸ್ಪತ್ರೆ ಶಸ್ತ್ರಚಿಕಿತ್ಸಾ ತಜ್ಞ ಡಾ.ಸಿ.ಜಿ.ನರಸಿಂಹನ್ ಮಾತನಾಡಿ, ಆಡು ಮುಟ್ಟದ ಸೊಪ್ಪಿಲ್ಲವೆಂಬಂತೆ ಎಂ.ಜಗನ್ನಾಥಶೆಣೈ ಅವರು ಮೈಸೂರಿನಲ್ಲಿ ನೆರವು ನೀಡದ ಕ್ಷೇತ್ರಗಳಿಲ್ಲ. ಸರಳ–ಸಜ್ಜನಿಕೆಗೆ ಹೆಸರಾದ ಅವರು ಗುರು–ಹಿರಿಯರಲ್ಲಿ ಅಪಾರ ಗೌರವ ಹೊಂದಿದ್ದಾರೆ. ದಾನ ಮತ್ತು ಸಮಾಜಕ್ಕೆ ಸ್ಪಂದಿಸುವಲ್ಲಿ ಅವರಿಗೆ ಅವರೇ ಸಾಟಿ ಎಂದು ಹೇಳಿದರು.

ಸಮಾರಂಭ ಅಧ್ಯಕ್ಷತೆ ವಹಿಸಿದ್ದ ಎಂಎಂಸಿ ಮತ್ತು ಆರ್‌ಐ ನಿರ್ದೇಶಕರೂ ಆದ ಡೀನ್ ಡಾ.ಕೆ.ಆರ್.ದಾಕ್ಷಾಯಣಿ ಮಾತನಾಡಿ, ಕೇವಲ 20 ವಿದ್ಯಾರ್ಥಿಗಳಿಂದ ಪ್ರಾರಂಭಗೊಂಡ ಎಂಎಂಸಿ ಮತ್ತು ಆರ್‌ಐ ಈಗ ಸಾವಿರಾರು ವಿದ್ಯಾರ್ಥಿಗಳನ್ನು ಹೊಂದಿದೆ. ಕೆಆರ್ ಆಸ್ಪತ್ರೆ ಕೇವಲ 20 ಹಾಸಿಗೆಗಳೊಂದಿಗೆ ಪ್ರಾರಂಭಗೊಂಡು ಈಗ 2,395 ಹಾಸಿಗೆಗಳ ದೊಡ್ಡಾಸ್ಪತ್ರೆಯಾಗಿ ಪರಿವರ್ತನೆಯಾಗಿದೆ ಎಂದರು.

ಕೆಆರ್ ಆಸ್ಪತ್ರೆ, ಚೆಲುವಾಂಬ ಆಸ್ಪತ್ರೆ, ಪಿಕೆಟಿಬಿ ಸ್ಯಾನಿಟೋರಿಯಂ ಸೇರಿದಂತೆ ಎಂಎಂಸಿ ಮತ್ತು ಆರ್‌ಐ ವ್ಯಾಪ್ತಿಗೆ ಐದು ಆಸ್ಪತ್ರೆಗಳು ಬರುತ್ತವೆ. ಮುಂಬರುವ ಸೆಪ್ಟೆಂಬರ್‌ಗೆ ಶತಮಾನೋತ್ಸವದ ಅಂತಿಮ ಸಮಾರಂಭ ಆಯೋಜಿಸಲಾಗುತ್ತಿದೆ. ವಿದ್ಯಾರ್ಥಿಗಳ ಅನುಕೂಲಕ್ಕಾಗಿ ವಿಶ್ರಾಂತಿ ವಿಹಾರ' ಕಟ್ಟಡ ನಿರ್ಮಿಸಿಕೊಟ್ಟ ಎಂ.ಜಗನ್ನಾಥಶೆಣೈ ಅವರಿಗೆ ಸಂಸ್ಥೆಯ ವಿದ್ಯಾರ್ಥಿಗಳು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಸೇರಿದಂತೆ ಎಲ್ಲರ ಪರವಾಗಿ ಕೃತಜ್ಞತೆ ಸಲ್ಲಿಸುತ್ತೇನೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಎಂ.ಜಗನ್ನಾಥಶೆಣೈ ಮತ್ತು ಕುಸುಮ ಶೆಣೈ ದಂಪತಿಯನ್ನು ಸನ್ಮಾನಿಸಲಾಯಿತು. 'ಮೈಸೂರು ಮಿತ್ರ' ಮತ್ತು 'ಸ್ಟಾರ್ ಆಫ್ ಮೈಸೂರ್' ಸಂಸ್ಥಾಪಕ ಸಂಪಾದಕರಾದ ಡಾ.ಕೆ.ಬಿ.ಗಣಪತಿ (ಕೆಬಿಜಿ), ಆದಿಚುಂಚನಗಿರಿ ವಿವಿ ಕುಲಪತಿಗಳೂ ಆದ ಮಾ ಟ್ರಸ್ಟ್ ಕಾರ್ಯದರ್ಶಿ ಡಾ.ಎಂ.ಎ.ಶೇಖರ್ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಉದ್ಯಮಿ ಸ್ಯಾಮ್ ಚೆರಿಯನ್, ಕಟ್ಟಡದ ಮುಖ್ಯ ವಾಸ್ತುಶಿಲ್ಪಿ ಜಯರಾಮ್ ಪಾಟೀಲ್, ಮಾ ಟ್ರಸ್ಟ್ ಗೌರವಾಧ್ಯಕ್ಷ ಡಾ.ಸಿ.ಡಿ.ಶ್ರೀನಿವಾಸಮೂರ್ತಿ, ಅಧ್ಯಕ್ಷ ಡಾ.ಹೆಚ್.ಎನ್.ದಿನೇಶ್, ಕಾರ್ಯದರ್ಶಿ ಡಾ.ಹೆಚ್.ಬಿ.ಶಶಿಧರ್ ಮತ್ತಿತರರು ಹಾಜರಿದ್ದರು.

ಸಮಾಜಕ್ಕೆ ನೆರವಾಗುವುದು ಶ್ರೇಷ್ಠ ಗುಣ ; ಕೆಬಿಜಿ

ಮೈಸೂರು,ಆ.8(ಪಿಎಂ)– ಸಮಾಜಕ್ಕೆ ನೆರವಾಗುವುದು ನಿಜಕ್ಕೂ ಶ್ರೇಷ್ಠ ಗುಣ. ಅಂತಹ ಶ್ರೇಷ್ಠ ಗುಣದವರಾದ ಡಾ.ಎಂ.ಜಗನ್ನಾಥಶೆಣೈ ತಮ್ಮ ಜೀವನದುದ್ದಕ್ಕೂ ಸಮಾಜಕ್ಕೆ ಸ್ಪಂದಿಸುತ್ತಿದ್ದಾರೆ ಎಂದು 'ಮೈಸೂರು ಮಿತ್ರ ಮತ್ತು 'ಸ್ಟಾರ್ ಆಫ್ ಮೈಸೂರ್' ಸಂಸ್ಥಾಪಕ ಸಂಪಾದಕರಾದ ಡಾ.ಕೆ.ಬಿ.ಗಣಪತಿ (ಕೆಬಿಜಿ) ಅವರು ಪ್ರಶಂಸಿಸಿದರು.

ಕಾರ್ಯಕ್ರಮದಲ್ಲಿ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಅವರು, ಸ್ವೀಕರಿಸುವುದಕ್ಕಿಂತ ಕೊಡುವುದರಲ್ಲಿ ಹೆಚ್ಚಿನ ಆನಂದ ಹೊಂದಬೇಕು ಎಂದು ಮದರ್ ತೆರೇಸಾ ಹೇಳಿದ್ದು, ಅಂತೆಯೇ ಜಗನ್ನಾಥಶೆಣೈ ಸಮಾಜಕ್ಕೆ ಅಪಾರವಾಗಿ ನೆರವಾಗುತ್ತಿದ್ದಾರೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಜಗತ್ತಿನ ಯಾವುದೇ ಸರ್ಕಾರವಾದರೂ ಜನರ ತೆರಿಗೆ ಹಣದಿಂದಲೇ ತಮ್ಮ ಪ್ರಜೆಗಳಿಗೆ ಮೂಲಸೌಕರ್ಯ, ಶೈಕ್ಷಣಿಕ ವ್ಯವಸ್ಥೆ ಅಥವಾ ವೈದ್ಯಕೀಯ ವ್ಯವಸ್ಥೆಯನ್ನು ಸಂಪೂರ್ಣವಾಗಿ ಕಲ್ಪಿಸಲು ಸಾಧ್ಯವಿಲ್ಲ. ಹಾಗಾಗಿ ಸಮಾಜದಲ್ಲಿನ ಸ್ಥಿತಿವಂತರು ಸಮಾಜದ ಒಳ್ಳೆಯ ಕೆಲಸಗಳಿಗೆ ನೆರವಾಗುವುದು ಅಗತ್ಯ. ಬೃಹತ್ ಮಟ್ಟದಲ್ಲಿ ಬೆಳೆದಿರುವ ಹಲವು ಕಂಪನಿಗಳು ಕೇವಲ ತಮ್ಮ ಪ್ರಗತಿಗೆ ಸೀಮಿತವಾಗಿಲ್ಲ. ಜೊತೆಗೆ ನೆರೆಹೊರೆಯ ಸಮುದಾಯಕ್ಕೆ ನೆರವಾಗುತ್ತಿವೆ. ಅಂತೆಯೇ ಮೈಸೂರಿನಲ್ಲಿ ಡಾ.ಎಂ.ಜಗನ್ನಾಥಶೆಣೈ ಸಮಾಜಕ್ಕೆ ಕೊಡುಗೆ ನೀಡುವಲ್ಲಿ ಮುಂಚೂಣಿಯಲ್ಲಿದ್ದಾರೆ ಎಂದು ಹೇಳಿದರು.

ಮೈಸೂರು ಚಲೋ ಪಾದಯಾತ್ರೆಗೆ ಜನಪದ ಕಲಾ ತಂಡಗಳು ಮೆರಗು



ಮಂಡ್ಯ, ಆ.8–ಮುಡಾ ಹಾಗೂ ವಾಲ್ಮೀಕಿ ಹಗರಣದ ಹಿನ್ನೆಲೆಯಲ್ಲಿ ಸಿದ್ದರಾಮಯ್ಯನವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿ ಬಿಜೆಪಿ–ಜೆಡಿಎಸ್ ಮೈಸೂರು ಚಲೋ ಪಾದಯಾತ್ರೆಯ 6ನೇ ದಿನವಾದ ಇಂದು ಜನಪದ ಕಲಾ ತಂಡಗಳು ಪಾದಯಾತ್ರೆಗೆ ಮೆರುಗು ನೀಡಿದವು.

ನಿನ್ನೆ ಮಂಡ್ಯದಲ್ಲಿ ಬಿಜೆಪಿ ಮಾಜಿ ಶಾಸಕ ಪ್ರೀತಂಗೌಡರ ಎಂಟ್ರಿಯಿಂದ ಉಭಯ ಪಕ್ಷಗಳ ಕಾರ್ಯಕರ್ತರ ನಡುವೆ ಮಾರಾಮಾರಿ ನಡೆದಿತ್ತು ಆದರೆ ಇಂದು ತೂಬಿನಕೆರೆಯಿಂದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಪಕ್ಷ ನಾಯಕ ಆರ್.ಅಶೋಕ್, ಶಾಸಕರಾದ ಸಿ.ಟಿ.ರವಿ, ರವೀಂದ್ರ ಬೆಲ್ಲದ್, ಜೆಡಿಎಸ್ ಯುವ ಮುಖಂಡ ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ಬೆಳಗ್ಗೆ ಆರಂಭವಾದ ಪಾದಯಾತ್ರೆಗೆ ಡೊಳ್ಳು ಕುಣಿತ, ಪೂಜಾ ಕುಣಿತ, ತಮಟೆ, ಗಾರುಡಿ ಗೊಂಬೆ ಸೇರಿದಂತೆ ವಿವಿಧ ಕಲಾ ತಂಡಗಳು ಮೆರಗು ನೀಡಿದವು.

ನಿನ್ನೆಯಷ್ಟೆ ಮಾರಾಮಾರಿ ನಡೆಸಿಕೊಂಡಿದ್ದ ಕಾರ್ಯಕರ್ತರು ಇಂದು ಹೊಸ ಹುರುಪಿನೊಂದಿಗೆ ಜಾನಪದ ಕಲಾ ತಂಡಗಳ ಶಬ್ದಕ್ಕೆ ನೃತ್ಯ ಮಾಡುತ್ತಾ ಪಾದಯಾತ್ರೆಯಲ್ಲಿ ಸಾಗಿದರು. ಉಭಯ ಪಕ್ಷಗಳ ಮುಖಂಡರೂ ಡೊಳ್ಳು ಕುಣಿತಕ್ಕೆ ಹೆಜ್ಜೆ ಹಾಕಿ ಕಾರ್ಯಕರ್ತರನ್ನು ಹುರಿದುಂಬಿಸಿದರು. ಬೆಳಗ್ಗೆ 10 ಗಂಟೆಗೆ ಆರಂಭವಾದ ಇಂದಿನ ಪಾದಯಾತ್ರೆ ಶ್ರೀರಂಗಪಟ್ಟಣದ ಅಂಬ್ಲಿ ರೆಸಾರ್ಟ್ ಬಳಿ ಅಂತ್ಯಗೊಂಡ ನಂತರ ಬಹಿರಂಗ ಸಭೆ ಏರ್ಪಡಿಸಲಾಗಿತ್ತು.

ನಾಳೆ (ಶುಕ್ರವಾರ) ಶ್ರೀರಂಗಪಟ್ಟಣದಿಂದ ಆರಂಭವಾಗುವ ಮೈಸೂರು ಚಲೋ ಪಾದಯಾತ್ರೆಯು ಸಂಜೆ ವೇಳೆಗೆ ಮೈಸೂರು ಜೆಕೆಗ್ರೌಂಡ್ಸ್‌ನಲ್ಲಿ ಅಂತ್ಯಗೊಳ್ಳಲಿದೆ. ಮರುದಿನ (ಶನಿವಾರ) ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಮೈಸೂರು ಚಲೋ ಪಾದಯಾತ್ರೆಯ ಸಮಾರೋಪ ಸಮಾವೇಶ ನಡೆಯಲಿದೆ. ಈ ಸಮಾವೇಶಕ್ಕೆ ಉಭಯ ಪಕ್ಷಗಳ ಲಕ್ಷಾಂತರ ಕಾರ್ಯಕರ್ತರು ಆಗಮಿಸುವ ಸಾಧ್ಯತೆ ಇದೆ.

ಕುತಂತ್ರದಿಂದ ಸುಭದ್ರ ಸರ್ಕಾರ ಅಸ್ಥಿರಗೊಳಿಸಲು ಸಾಧ್ಯವಿಲ್ಲ ಎಂಬ ಸಂದೇಶ

- ಕೆಪಿಸಿಸಿ ಕಾರ್ಯಾಧ್ಯಕ್ಷರೂ ಆದ ರಾಜ್ಯಸಭಾ ಸದಸ್ಯ ಜಿ.ಸಿ.ಚಂದ್ರಶೇಖರ್ ಜನಾಂದೋಲನ ಸಮಾವೇಶದ ಮಾಹಿತಿ
- ನಿರ್ದಿಷ್ಟ ವಿಷಯವೇ ಇಲ್ಲದ ಪಾದಯಾತ್ರೆ ಮಾಡುತ್ತಿರುವುದು ಹಾಸ್ಯಾಸ್ಪದ: ಡಾ.ಮಹದೇವಪ್ಪ



ಮೈಸೂರು ಮಹಾರಾಜ ಕಾಲೇಜು ಮೈದಾನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಕೆಪಿಸಿಸಿ ಕಾರ್ಯಾಧ್ಯಕ್ಷ ಜಿ.ಸಿ.ಚಂದ್ರಶೇಖರ್ ಮಾತನಾಡಿದರು. ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಸಚಿವರಾದ ಕೆ.ವೆಂಕಟೇಶ್, ಜಮೀರ್ ಅಹಮದ್ ಖಾನ್, ಶಾಸಕ ತನ್ವೀರ್ ಸೇಠ್, ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ, ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್ ಮತ್ತಿತರರಿದ್ದರು.

ಮೈಸೂರು, ಆ.8(ಎಂಕೆ)– ಬಿಜೆಪಿ–ಜೆಡಿಎಸ್ ತನ್ನ ಕುತಂತ್ರದಿಂದ ಸುಭದ್ರ ಕರ್ನಾಟಕ ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸಲು ಸಾಧ್ಯವಿಲ್ಲವೆಂಬ ಸಂದೇಶವನ್ನು ನಾಳೆ(ಆ.9)ಯ ಜನಾಂದೋಲನ ಸಮಾವೇಶದ ಮೂಲಕ ದೇಶಕ್ಕೆ ರವಾನಿಸಲಾಗುವುದು ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಜಿ.ಸಿ.ಚಂದ್ರಶೇಖರ್ ಹೇಳಿದರು.

ಮೈಸೂರು ಮಹಾರಾಜ ಕಾಲೇಜು ಮೈದಾನದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿದ ಅವರು, ಇದೊಂದು ಐತಿಹಾಸಿಕ ಸಮಾವೇಶ. ಬಿಜೆಪಿ ತನ್ನ ಕುತಂತ್ರದಿಂದ ಬೇರೆ ಬೇರೆ ರಾಜ್ಯಗಳಲ್ಲಿನ ಸರ್ಕಾರವನ್ನು ಅಸ್ಥಿರಗೊಳಿಸಿದಂತೆ ಕರ್ನಾಟಕದಲ್ಲಿ ಮಾಡಲು ಸಾಧ್ಯವಿಲ್ಲವೆಂಬ ಸಂದೇಶವನ್ನು ಸಾರಲಾಗುವುದು. ರಾಜ್ಯಪಾಲರನ್ನು ಉಪಯೋಗಿಸಿಕೊಂಡು ರಾಜ್ಯದ ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸುವ ಬಿಜೆಪಿ ಹುನ್ನಾರ ಕರ್ನಾಟಕದಲ್ಲಿ ನಡೆಯಲ್ಲ ಎಂಬುದನ್ನು ಸ್ಪಷ್ಟವಾಗಿ ತಿಳಿಸಲಾಗುವುದು ಎಂದರು.

ಎರಡನೇ ಬಾರಿ ರಾಜ್ಯದ ಜನತೆಯ ಸಂಪೂರ್ಣ ಬೆಂಬಲದೊಂದಿಗೆ ಮುಖ್ಯಮಂತ್ರಿಯಾಗಿರುವ ಸಿದ್ದರಾಮಯ್ಯ ಅವರಿಗೆ ನೋಟಿಸ್ ನೀಡಿರುವ ರಾಜ್ಯಪಾಲರು, ಬಿಜೆಪಿಯ ಕೈಗೊಂಬೆಯಾಗಿದ್ದಾರೆ. ಕೂಡಲೇ ತಾವು ನೀಡಿರುವ ನೋಟಿಸ್ ಅನ್ನು ವಾಪಸ್ ಪಡೆಯದಿದ್ದಲ್ಲಿ 'ಗೋ ಬ್ಯಾಕ್ ಗವರ್ನರ್' ಘೋಷಣೆಯೊಂದಿಗೆ ರಾಜ್ಯಾದ್ಯಂತ ಪ್ರತಿಭಟನೆಗಳನ್ನು ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಮೂರು ಗುಂಪಿನ ಪಾದಯಾತ್ರೆ: ಮೋದಿ ಮತ್ತು ಅಮಿತ್ ಷಾರನ್ನ ಮೆಚ್ಚಿಸಲು ಮಾಡುತ್ತಿರುವ ಪಾದಯಾತ್ರೆ ಸಂಪೂರ್ಣ ವಿಫಲವಾಗಿದ್ದು, ಮೂರು ಗುಂಪುಗಳಾಗಿದೆ. ಅವರವರೇ ಬಡಿದಾಡುತ್ತಿದ್ದಾರೆ. ಬೇರೆ ಬೇರೆ ಕಡೆಯಿಂದ ಜನರನ್ನು ಕರೆತಂದು ಪಾದಯಾತ್ರೆ ನಡೆಸುತ್ತಿರುವ ಭ್ರಷ್ಟಾಚಾರಿಗಳ ವಿರುದ್ಧ ನಾಳೆ ಮೈಸೂರಿನಲ್ಲಿ ಕಾಂಗ್ರೆಸ್ ರಣಕಹಳೆ ಮೊಳಗಿಸಲಿದೆ. ಇಡೀ ರಾಜ್ಯ ಕಾಂಗ್ರೆಸ್ ಮೈಸೂರಿನಲ್ಲಿರಲಿದ್ದು, ರಾಜ್ಯದ ವಿವಿಧೆಡೆಯಿಂದ ಸುಮಾರು 4 ಲಕ್ಷಕ್ಕೂ ಹೆಚ್ಚು ಮಂದಿ ಸಮಾವೇಶದಲ್ಲಿ ಭಾಗಿಯಾಗಲಿದ್ದಾರೆ ಎಂದು ಹೇಳಿದರು.

ದುಃಖದ ಸಂಗತಿ: ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಮಾತನಾಡಿ, ನನ್ನ 40 ವರ್ಷದ ರಾಜಕೀಯ ಜೀವನದಲ್ಲಿ ವಿಷಯವೇ ಅಲ್ಲದ ವಿಷಯಕ್ಕೆ ಪಾದಯಾತ್ರೆ ಮಾಡುತ್ತಿರುವ ವಿರೋಧ ಪಕ್ಷಗಳ ನಡೆ ಹಾಸ್ಯಾಸ್ಪದವಾಗಿದೆ. ವಿರೋಧ ಪಕ್ಷಗಳು ಅನುಸರಿಸುತ್ತಿರುವ ನಗೆಪಾಟಲಿನ ನಡುವಳಿಕೆಯಿಂದ ಪ್ರಜಾಸತ್ತಾತ್ಮಕ ವ್ಯವಸ್ಥೆಗೆ ಹಿನ್ನಡೆ ಉಂಟಾಗುತ್ತಿರುವುದು ದುಃಖದ ಸಂಗತಿ ಎಂದರು.

ರಾಜಭವನ ದುರುಪಯೋಗ: ಕಳೆದ 25 ದಿನಗಳಿಂದ ರಾಜ್ಯದಲ್ಲಿ ವಾಲ್ಮೀಕಿ ಹಗರಣ, ಮುಡಾ 14 ನಿವೇಶನ, ಗ್ಯಾರಂಟಿ ಯೋಜನೆಗೆ ಪರಿಶಿಷ್ಟರ ಹಣ ಬಳಕೆ ಮಾಡಿಕೊಂಡರೆಂಬ ಈ ಮೂರು ವಿಷಯಗಳನ್ನು ಪ್ರಸ್ತಾಪಿಸುತ್ತಿರುವ ರಾಜ್ಯ ಬಿಜೆಪಿ ಮತ್ತು ಜೆಡಿಎಸ್, 15 ದಿನ ಅಧಿವೇಶನ ನಡೆಯಲು ಸಹಕಾರ ನೀಡಲಿಲ್ಲ. ರಾಜ್ಯದ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರುವುದು ಬಿಟ್ಟು, ರಾಜಕೀಯ ಉದ್ದೇಶ ಮತ್ತು ಹಿತಾಸಕ್ತಿ ಇಟ್ಟುಕೊಂಡು ಕೇಂದ್ರ ಸರ್ಕಾರ ಹಾಗೂ ರಾಜ್ಯದ ಬಿಜೆಪಿ ಹಾಗೂ ಜೆಎಡಿಸ್ ಪಕ್ಷವು ರಾಜ್ಯಪಾಲರ ಮುಖಾಂತರ ರಾಜಭವನವನ್ನು ದುರುಪಯೋಗ ಮಾಡಿಕೊಂಡು ಜನರು ಬಹುಮತ ನೀಡಿ ಅಧಿಕಾರಕ್ಕೆ ತಂದಿರುವ ಸರ್ಕಾರವನ್ನು ಅಸ್ಥಿರಗೊಳಿಸಲು ಪ್ರಯತ್ನಿಸುತ್ತಿರುವುದು ಅತ್ಯಂತ ಖಂಡನೀಯ ಎಂದು ಕಿಡಿಕಾರಿದರು.

ಎಲ್ಲಾ ಮೊಸಳೆ ಕಣ್ಣೀರು: ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರಿಗೆ ಕ್ರಾಂತಿಕಾರಿ ಬದಲಾವಣೆ ತಂದಿರುವಂತೆ ಮಾತನಾಡುವ ವಿರೋಧ ಪಕ್ಷಗಳಿಗೆ ಸಾಮಾಜಿಕ ನ್ಯಾಯದ ಬಗ್ಗೆ ನಂಬಿಕೆ ಇದೆಯೇ. ಐಐಟಿ, ಐಎಎಂನಲ್ಲಿ ಪರಿಶಿಷ್ಟ ಜಾತಿ, ಪಂಗಡ ಹಾಗೂ ಹಿಂದುಳಿದ ವರ್ಗದವರು ಎಷ್ಟು ಜನರಿದ್ದಾರೆ. ಎಸ್‌ಸಿಎಸ್‌ಪಿ/ಟಿಎಸ್‌ಪಿ ಕಾಯ್ದೆಯಲ್ಲಿ 7ಡಿ ಬಳಸಿಕೊಂಡು ಹಣ ದುರ್ಬಳಕೆ ಮಾಡಿದ್ದು ಯಾರು. ಪಿಟಿಸಿಎಲ್ ಕಾಯ್ದೆಯನ್ನು ರದ್ದು ಮಾಡಿದಾಗ ತಮ್ಮ ಅಧಿಕಾರದ ಅವಧಿಯಲ್ಲಿ ಕಾಯ್ದೆಯನ್ನು ಮರುಜಾರಿ ಮಾಡಿ ಎಸ್‌ಸಿ, ಎಸ್‌ಟಿ ಜನರ ಆಸ್ತಿಯನ್ನು ಯಾಕೆ ರಕ್ಷಣೆ ಮಾಡಲಿಲ್ಲ. ಎಸ್‌ಸಿಎಸ್‌ಪಿ/ಟಿಎಸ್‌ಪಿ ಕಾಯ್ದೆಯನ್ನು ಜಾರಿ ಮಾಡಿ ಜನಸಂಖ್ಯೆಗೆ ಅನುಗುಣವಾಗಿ ಹಣ ಮೀಸಲಿಟ್ಟಿದ್ದು ನಮ್ಮ ಸರ್ಕಾರ. ಗುತ್ತಿಗೆ ಪದ್ಧತಿಯಲ್ಲಿ ನೀವು ಮೀಸಲಾತಿ ನೀಡಿದ್ದೀರಾ. ಎಲ್ಲಾ ಮೊಸಳೆ ಕಣ್ಣೀರು ಸುರಿಸುತ್ತಾ ಸಂವಿಧಾನಕ್ಕೆ ವಿರುದ್ಧವಾಗಿದ್ದೀರಿ ಎಂದು ಕುಟುಕಿದರು.

ಸಚಿವರಾದ ಕೆ.ವೆಂಕಟೇಶ್, ಜಮೀರ್ ಅಹಮದ್ ಖಾನ್, ಶಾಸಕ ತನ್ವೀರ್ ಸೇಠ್, ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ, ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯ್ ಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

ಬಿಜೆಪಿ–ಜೆಡಿಎಸ್ ಕುಟಿಲ ನೀತಿಯನ್ನು ಬಿಚ್ಚಿಡಲಿದ್ದೇವೆ...!

ಬಿಜೆಪಿ ಮತ್ತು ಜೆಡಿಎಸ್‌ನ ರಾಜಕೀಯ ಕುಟಿಲ ನೀತಿಯನ್ನು ಜನಾಂದೋಲನ ಸಮಾವೇಶದಲ್ಲಿ ಬಿಚ್ಚಿಡಲಿದ್ದೇವೆ. ಕುತಂತ್ರದ ರಾಜಕಾರಣವನ್ನು ಜನರಿಗೆ ಮನವರಿಕೆ ಮಾಡುತ್ತೇವೆ. ವ್ಯಕ್ತಿಗತ, ಸ್ವಾರ್ಥ ಹಾಗೂ ಸಂವಿಧಾನದ ವಿರುದ್ಧವಾದ ನಿಮ್ಮ ರಾಜಕೀಯ ಬಣ್ಣವನ್ನು ಬಯಲು ಮಾಡಲಿದ್ದೇವೆ. ನಿಮ್ಮ ಕುಟಿಲ ರಾಜಕೀಯವನ್ನು ನಿಲ್ಲಿಸಿ, ರಾಜ್ಯದ ಅಭಿವೃದ್ಧಿ ಮಾಡಲಿದ್ದೇವೆ.

- ಡಾ.ಹೆಚ್.ಸಿ.ಮಹದೇವಪ್ಪ, ಜಿಲ್ಲಾ ಉಸ್ತುವಾರಿ ಸಚಿವ

ಕೇಂದ್ರ ಸರ್ಕಾರದ ವಿರುದ್ಧ ಪಾದಯಾತ್ರೆ ಮಾಡಬೇಕಿತ್ತು...

ಬಿಜೆಪಿ–ಜೆಡಿಎಸ್‌ಗೆ ಪಾದಯಾತ್ರೆಯ ಅರ್ಥವೇ ತಿಳಿದಿಲ್ಲ. ಬಜೆಟ್‌ನಲ್ಲಿ ರಾಜ್ಯಕ್ಕೆ ಬಿಡಿಗಾಸು ನೀಡದ ಕೇಂದ್ರ ಸರ್ಕಾರದ ವಿರುದ್ಧ ಪಾದಯಾತ್ರೆ ಮಾಡಬೇಕಿತ್ತು. ರಾಜ್ಯದಿಂದ ಆಯ್ಕೆಯಾಗಿರುವ ಮಂತ್ರಿಗಳೂ ಅನುದಾನ ತರುವಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ. ಮೇಕೆದಾಟು ಯೋಜನೆ, ವಿಶ್ವೇಶ್ವರ ಸ್ಟೀಲ್ ಫ್ಯಾಕ್ಟರಿ ಸೇರಿದಂತೆ ರಾಜ್ಯಕ್ಕೆ ಬರಬೇಕಾದ ಅನುದಾನ ಕುರಿತು ಬಜೆಟ್‌ನಲ್ಲಿ ಪ್ರಸ್ತಾಪಿಸದಿರುವ ಕೇಂದ್ರ ಸಚಿವರು, ರಾಜ್ಯದ ಜನತೆಗೆ ನೀಡಿದ ಭರವಸೆ ಈಡೇರಿಸುವಲ್ಲಿ ವಿಫಲರಾಗಿದ್ದಾರೆ. ಆದರೆ ಬಡವರ ಪರ ಕೆಲಸ ಮಾಡುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸಲು ನಿಂತಿದ್ದಾರೆ.

- ಜಿ.ಸಿ.ಚಂದ್ರಶೇಖರ್, ಕೆಪಿಸಿಸಿ ಕಾರ್ಯಾಧ್ಯಕ್ಷ

ವಾಕ್ ದ ಟಾಕ್: 'ಮೈಸೂರು ಮಿತ್ರ' ಜೊತೆ ನಾಯಕರ ಮಾತು

ಇಂದು ಮೈಸೂರಿಗೆ 'ಮೈಸೂರು ಚಲೋ' ಪಾದಯಾತ್ರೆ

ನಾಳೆ ಮೈಸೂರಿನಲ್ಲಿ ಕಾಂಗ್ರೆಸ್ ವಿರುದ್ಧ ದೋಸ್ತಿಗಳ ಘರ್ಜನೆ



ಮೈಸೂರು ಚಲೋ ಪಾದಯಾತ್ರೆಯಲ್ಲಿ ಪಾಲ್ಗೊಂಡಿರುವ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಗುರುವಾರ 'ಮೈಸೂರು ಮಿತ್ರ' ಮುಖ್ಯ ವರದಿಗಾರ ಎಸ್.ಟಿ.ರವಿಕುಮಾರ್ ಜೊತೆ ಮಾತನಾಡುತ್ತಾ ಹೆಜ್ಜೆ ಹಾಕಿದರು.

ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಬೇಕು: ಅಶೋಕ್

ಪಾದಯಾತ್ರೆಯಲ್ಲಿ ಭಾಗವಹಿಸಿದ್ದ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ 'ಮೈಸೂರು ಮಿತ್ರ' ಮುಖ್ಯ ವರದಿಗಾರ ಎಸ್.ಟಿ.ರವಿಕುಮಾರ್ ಜೊತೆ ಮಾತನಾಡುತ್ತಾ ಹೆಜ್ಜೆ ಹಾಕಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರ ಪತ್ನಿ ಪಾರ್ವತಿ ಅವರಿಗೆ ಮೈಸೂರಿನ ವಿಜಯನಗರದಲ್ಲಿ 14 ಬದಲಿ ನಿವೇಶನ ಕೊಡಿಸಲು ಅಧಿಕಾರ ದುರುಪಯೋಗ ಮಾಡಿಕೊಂಡಿದ್ದಾರೆ. ಈ ಹಿನ್ನೆಲೆ ಸಿದ್ದರಾಮಯ್ಯ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

ಸಂವಿಧಾನದತ್ತವಾಗಿ ಬಂದಿರುವ ಅಧಿಕಾರವನ್ನು ಸ್ವಾರ್ಥಕ್ಕಾಗಿ ಬಳಸಿಕೊಂಡ ಯಾವ ಮುಖ್ಯಮಂತ್ರಿಯೂ ಕರ್ನಾಟಕದ ಇತಿಹಾಸದಲ್ಲಿ ಇಲ್ಲ. ಈ ಹಿನ್ನೆಲೆ ರಾಜ್ಯಪಾಲರು ಸಿದ್ದರಾಮಯ್ಯಗೆ ಶೋಕಾಸ್ ನೋಟಿಸ್ ನೀಡಿದ್ದಾರೆ ಆದರೆ ಸಿದ್ದರಾಮಯ್ಯ ಇದಕ್ಕೆ ಸ್ಪಷ್ಟ ಉತ್ತರ ನೀಡದೆ ತಮ್ಮ ವಾದವೇ ಸರಿ ಎಂಬಂತೆ ಹೇಳಿಕೆ ನೀಡುತ್ತಾ ತಪ್ಪನ್ನು ಸಮರ್ಥಿಸಿಕೊಳ್ಳುತ್ತಿದ್ದಾರೆ. ಆದರೆ ಈ ವಿಚಾರವಾಗಿ ಸಿದ್ದರಾಮಯ್ಯ ಅನವಶ್ಯಕವಾಗಿ ಬಿಜೆಪಿ ವಿರುದ್ಧ ಆಪಾದನೆ ಮಾಡುತ್ತಿದ್ದಾರೆ ಎಂದು ಅಶೋಕ್ ಕಿಡಿಕಾರಿದರು.

ಮಂಡ್ಯ, ಆ.8(ಬಿಎಲ್‌ಯು)–ಮುಡಾ ಹಾಗೂ ವಾಲ್ಮೀಕಿ ನಿಗಮ ಹಗರಣದ ವಿರುದ್ಧ ಬಿಜೆಪಿ ಹಾಗೂ ಜೆಡಿಎಸ್ ನಡೆಸುತ್ತಿರುವ ಮೈಸೂರು ಚಲೋ ಪಾದಯಾತ್ರೆ ನಾಳೆ (ಆ.9) ಮೈಸೂರು ನಗರವನ್ನು ತಲುಪಲಿದೆ.

ಬೆಂಗಳೂರಿನ ಕೆಂಗೇರಿಯಿಂದ ಆಗಸ್ಟ್ 3 ರಂದು ಆರಂಭವಾದ ಪಾದಯಾತ್ರೆ ಆರನೇ ದಿನವಾದ ಇಂದು ಮಂಡ್ಯದ ತೂಬಿನಕೆರೆಯಿಂದ ಮೈಸೂರಿನತ್ತ ಹೊರಟಿತು. ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ, ಮಾಜಿ ಸಚಿವ ಶ್ರೀರಾಮುಲು ಸೇರಿದಂತೆ ಹಲವರು ಪಾದಯಾತ್ರೆಯಲ್ಲಿ ಹೆಜ್ಜೆ ಹಾಕಿ ದರು. ಪಾದಯಾತ್ರೆ ಗುರುವಾರ ಶ್ರೀರಂಗಪಟ್ಟಣ ತಲುಪಿದ್ದು ಅಲ್ಲಿ ವಾಸ್ತವ್ಯ ಹೂಡಿದೆ. ಶುಕ್ರವಾರ ಮುಂದುವರೆಯುವ ಪಾದಯಾತ್ರೆ ರಾತ್ರಿ ವೇಳೆಗೆ ಮೈಸೂರಿನ ಜಿ.ಕೆ.ಮೈದಾನ ತಲುಪಲಿದ್ದು ಮುಖಂಡರು ಮತ್ತು ಕಾರ್ಯಕರ್ತರು ಸ್ಥಳೀಯ ಹೋಟೆಲ್‌ಗಳು ಮತ್ತು ಸಮುದಾಯ ಭವನ ಸೇರಿದಂತೆ ಇತರೆಡೆ ವಾಸ್ತವ್ಯ ಹೂಡುವರು. ಶನಿವಾರ ಬೆಳಿಗ್ಗೆ ಮತ್ತೆ ಪಾದಯಾತ್ರೆ ಆರಂಭಿಸಿ ಸಮಾವೇಶ ನಡೆಯುವ ಮಹಾರಾಜ ಕಾಲೇಜು ಮೈದಾನ ತಲುಪಲಿದೆ.

ಒಕ್ಕಲಿಗರ ಪ್ರಾಬಲ್ಯವಿರುವ ಮಂಡ್ಯದಲ್ಲಿ ಸಾಗಿದ ಪಾದಯಾತ್ರೆಯಲ್ಲಿ ದೋಸ್ತಿ ಪಕ್ಷದ ಕೇಸರಿ ಹಾಗೂ ಹಸಿರು ಬಾವುಟಗಳು, ಬಂಟಿಂಗ್ಸ್, ಬ್ಯಾನರ್‌ಗಳು ರಾರಾಜಿಸಿತು.

ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ಹೈವೆಯಲ್ಲಿ ಪಾದಯಾತ್ರೆ ಸಾಗಿದರೆ ವಾಹನ ಸಂಚಾರಕ್ಕೆ ತೊಂದರೆ ಆಗುತ್ತದೆ ಎಂಬ ಹಿನ್ನೆಲೆಯಲ್ಲಿ ಸರ್ವೀಸ್ ರಸ್ತೆಯಲ್ಲಿ ಪಾದಯಾತ್ರೆ ನಡೆಯುತ್ತಿದ್ದು, ಸಾವಿರಾರು ಸಂಖ್ಯೆಯಲ್ಲಿ ದೋಸ್ತಿ ಪಕ್ಷದ ಕಾರ್ಯಕರ್ತರು ಪಾಲ್ಗೊಂಡಿದ್ದರು. ಈ ಮೂಲಕ ಎರಡು ಪಕ್ಷಗಳು ಒಗ್ಗಟ್ಟು ಪ್ರದರ್ಶಿಸಿ ಆಡಳಿತರೂಢ ಕಾಂಗ್ರೆಸ್‌ಗೆ ತಿರುಗೇಟು ನೀಡಿವೆ.

ಮೋಡ ಆವರಿಸಿದರೂ ಮಳೆ ಬರಲಿಲ್ಲ, ಬಿಸಿಲಿನ ಬೇಗೆ ಕೂಡ ಇರಲಿಲ್ಲ. ಇದರಿಂದ ತಂಪಾದ ವಾತಾವರಣದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರು ಹೆಜ್ಜೆ ಹಾಕಿದರು. ಭ್ರಷ್ಟಾಚಾರಿ ಕಾಂಗ್ರೆಸ್ ಪಕ್ಷ ಮುಡಾದಲ್ಲಿ ಬ್ರಹ್ಮಾಂಡ ಭ್ರಷ್ಟಾಚಾರ, ಸಿದ್ದರಾಮಯ್ಯ ರಾಜಿನಾಮೆ ನೀಡಬೇಕು, ಮುಡಾ ಹಗರಣವನ್ನು ಸಿಬಿಐ ತನಿಖೆಗೆ ವಹಿಸಿ ಎಂಬ ಘೋಷಣೆಗಳನ್ನು ಕೂಗುತ್ತಾ ಪಾದಯಾತ್ರೆಯಲ್ಲಿ ಸಾಗಿದರು.

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಸಂಯೋಜಿಸಿದ್ದ ಹಾಡುಗಳು ಗಮನ ಸೆಳೆದವು. ಡೊಳ್ಳು ಕುಣಿತ ಸೇರಿದಂತೆ ಇತರೆ ಜಾನಪದ ಕಲಾ ತಂಡಗಳು ಪಾದಯಾತ್ರೆಗೆ ಮೆರಗು ನೀಡಿತು.

ನಾಳೆ ಬೆಳಿಗ್ಗೆ ಶ್ರೀರಂಗಪಟ್ಟಣದಿಂದ ಹೊರಟು 7 ಕಿಲೋ ಮೀಟರ್ ಕ್ರಮಿಸಿ ರಾತ್ರಿ ಮೈಸೂರಿನಲ್ಲಿ ವಾಸ್ತವ್ಯ ಹೂಡುವರು. ಶನಿವಾರ ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ನಡೆಯುವ ಮೈಸೂರು ಚಲೋ ಸಮಾರೋಪ ಸಮಾರಂಭದಲ್ಲಿ ಎಲ್ಲಾ ನಾಯಕರು ಭಾಗಿಯಾಗಲಿದ್ದು ಲಕ್ಷಾಂತರ ಜನ ಸೇರುವ ಸಾಧ್ಯತೆಗಳಿವೆ.

100 ಕಿ.ಮೀ ದೂರ ಕ್ರಮಿಸಿದ ಮೈಸೂರು ಚಲೋ

ಕಾರ್ಯಕರ್ತರ ಸಮ್ಮುಖದಲ್ಲಿ ಕೇಕ್ ಕತ್ತರಿಸಿ ಸಂಭ್ರಮಿಸಿದ ನಿಖಿಲ್



ಮಂಡ್ಯದ ತೂಬಿನಕೆರೆಯಿಂದ ಮೈಸೂರು ಚಲೋ ಪಾದಯಾತ್ರೆ ಆರಂಭವಾದ ಸಂದರ್ಭದಲ್ಲಿ ಜೆಡಿಎಸ್ ಕಾರ್ಯಕರ್ತರು, ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರನ್ನು ಹೆಗಲ ಮೇಲೆ ಹೊತ್ತು ಜೈಕಾರ ಕೂಗಿದರು.

ಶ್ರೀರಂಗಪಟ್ಟಣ, ಆ.8– ಮುಡಾದಿಂದ ಅಕ್ರಮವಾಗಿ ನಿವೇಶನ ಪಡೆದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜೀನಾಮೆ ನೀಡುವಂತೆ ಆಗ್ರಹಿಸಿ ಬಿಜೆಪಿ ಹಾಗೂ ಜೆಡಿಎಸ್ ನಡೆಸುತ್ತಿರುವ ಮೈಸೂರು ಚಲೋ ಪಾದಯಾತ್ರೆ ಗುರುವಾರ ಶ್ರೀರಂಗಪಟ್ಟಣ ತಲುಪುವ ಮೂಲಕ 100 ಕಿ.ಮೀ ಕ್ರಮಿಸಿತು.

ಈ ಹಿನ್ನೆಲೆಯಲ್ಲಿ ರಾಜ್ಯ ಯುವ ಜೆಡಿಎಸ್ ಅಧ್ಯಕ್ಷ ನಿಖಿಲ್‌ಕುಮಾರಸ್ವಾಮಿ ಅವರು ಕಾರ್ಯಕರ್ತರ ಸಮ್ಮುಖದಲ್ಲಿ ಕೇಕ್ ಕತ್ತರಿಸುವ ಮೂಲಕ ಸಂಭ್ರಮಿಸಿದರು.

ಗುರುವಾರ ಮಧ್ಯಾಹ್ನದ ವೇಳೆ ಶ್ರೀರಂಗಪಟ್ಟಣ ಗಡಿ ಗ್ರಾಮ ಕೋಡಿಶೆಟ್ಟಿಪುರ ಗ್ರಾಮಕ್ಕೆ ಆಗಮಿಸಿದ ಪಾದಯಾತ್ರೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ, ವಿರೋಧಪಕ್ಷದ ನಾಯಕ ಆರ್.ಅಶೋಕ್, ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ, ಮಾಜಿ ಉಪಮುಖ್ಯಮಂತ್ರಿ ಅಶ್ವತ್ ನಾರಾಯಣ, ಮಾಜಿ ಸಚಿವರಾದ ನಾರಾಯಣಗೌಡ, ರಾಮಚಂದ್ರಪ್ಪ, ಎನ್.ಮಹೇಶ್, ಮುಖಂಡ ಸಚ್ಚಿದಾನಂದ, ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಸೇರಿದಂತೆ ಎರಡು ಪಕ್ಷಗಳ ಕಾರ್ಯಕರ್ತರು, ಅಭಿಮಾನಿಗಳು ಭಾರಿ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಮೋಸುಂಬಿ ಹಾರದಿಂದ ಸ್ವಾಗತ: ತಾಲೂಕಿನ ಕೆ.ಶೆಟ್ಟಹಳ್ಳಿ ಗ್ರಾಮಕ್ಕೆ ಬಿಜೆಪಿ ಹಾಗೂ ಜೆಡಿಎಸ್ ಪಕ್ಷದ ಮೈಸೂರು ಚಲೋ ಪಾದಯಾತ್ರೆ ಆಗಮಿಸುತ್ತಿದ್ದಂತೆ ಗ್ರಾಮಸ್ಥರು ಬೃಹತ್ ಗಾತ್ರದ ಮೋಸುಂಬಿ ಹಾರ ಹಾಕುವ ಮೂಲಕ ಅದ್ದೂರಿಯಾಗಿ ಸ್ವಾಗತ ಕೋರಿದರು.

ಮಹಿಳಾ ಕಾರ್ಯಕರ್ತೆಯರ ನೃತ್ಯ: ಶ್ರೀರಂಗಪಟ್ಟಣಕ್ಕೆ ಆಗಮಿಸಿದ ಪಾದಯಾತ್ರೆಯಲ್ಲಿ ಎರಡು ಪಕ್ಷಗಳ ಮಹಿಳಾ ಮುಖಂಡರು ಹಾಗೂ ಕಾರ್ಯಕರ್ತೆಯರು ಹೆದ್ದಾರಿಯಲ್ಲಿ ಕುಣಿದು, ಕುಪ್ಪಳಿಸಿ ನೃತ್ಯಮಾಡುವ ಮೂಲಕ ಬಹಳ ಹುಮ್ಮಸ್ಸಿನಿಂದ ಹೆಜ್ಜೆ ಹಾಕಿದರು.

ಮಂತ್ರ ಪಠಣ: ವೇದಬ್ರಹ್ಮ ಡಾ.ಭಾನುಪ್ರಕಾಶ್ ಶರ್ಮಾ ನೇತೃತ್ವದ ವೈದಿಕರ ತಂಡ ತಾಲೂಕಿನ ಕಿರಂಗೂರು ಗ್ರಾಮದ ಬನ್ನಿಮಂಟಪದ ಬಳಿ ಮಂತ್ರ ಪಠಿಸುವ ಮೂಲಕ ಬಿಜೆಪಿ ಹಾಗೂ ಜೆಡಿಎಸ್ ಪಕ್ಷದ ಮುಖಂಡರನ್ನೂ ಸ್ವಾಗತಿಸಿ, ಮಹಾಲಕ್ಷ್ಮಿ ದೇವಿಯ ಫೋಟೋಗಳನ್ನು ಉಡುಗೊರೆಯಾಗಿ ನೀಡಿ ಸ್ವಾಗತಿಸಲಾಯಿತು.

ಬ್ಯಾಂಡ್‌ಸೆಟ್ ಬಾರಿಸಿದ ಆರ್.ಅಶೋಕ್: ತಾಲೂಕಿನ ಕೆಶೆಟ್ಟಹಳ್ಳಿ ಗ್ರಾಮದ ಬಳಿ ಬ್ಯಾಂಡ್ ಸೆಟ್ ಬಾರಿಸುವ ಮೂಲಕ ಮುಖಂಡರನ್ನು ಸ್ವಾಗತಿಸಲಾಯಿತು. ಈ ವೇಳೆ ಆರ್.ಅಶೋಕ್ ಸಹ ಬ್ಯಾಂಡ್ ಬಾರಿಸುವ ಮೂಲಕ ಗಮನ ಸೆಳೆದರು. ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರನ್ನು ದಾರಿಯುದ್ದಕ್ಕೂ ಮಹಿಳೆಯರು, ವೃದ್ಧೆಯರು ಸೇರಿದಂತೆ ಯುವಕ, ಯುವತಿಯರು ಆತ್ಮೀಯವಾಗಿ ಮಾತನಾಡಿಸಿದರು.

ಪಾದಯಾತ್ರೆಯುದ್ದಕ್ಕೂ ರಾರಾಜಿಸಿದ ಬಿಜೆಪಿ, ಜೆಡಿಎಸ್ ಬಂಟಿಂಗ್ಸ್, ಬ್ಯಾನರ್/ಹರಿದು ಬಂದ ಜನಸಾಗರ...





ಮುಡಾ ಹಾಗೂ ವಾಲ್ಮೀಕಿ ನಿಗಮ ಹಗರಣದ ವಿರುದ್ಧ ಬಿಜೆಪಿ ಹಾಗೂ ಜೆಡಿಎಸ್ ನಡೆಸುತ್ತಿರುವ ಮೈಸೂರು ಚಲೋ ಪಾದಯಾತ್ರೆಯಲ್ಲಿ ರಾರಾಜಿಸಿದ ಬಿಜೆಪಿ, ಜೆಡಿಎಸ್ ಬಂಟಿಂಗ್ಸ್, ಬ್ಯಾನರ್ (ಎಡಚಿತ್ರ), ಪಾದಯಾತ್ರೆಯಲ್ಲಿ ಪಾಲ್ಗೊಂಡಿರುವ ಸಹಸ್ರಾರು ಜನರನ್ನು (ಬಲಚಿತ್ರ) ಕಾಣಬಹುದು.

ಭ್ರಷ್ಟಾಚಾರದ ವಿರುದ್ಧ ಧರ್ಮಯುದ್ಧ

ಮುಡಾ, ವಾಲ್ಮೀಕಿ ನಿಗಮ ಸೇರಿದಂತೆ ಇತರೆ ಹಗರಣದಲ್ಲಿ ಭಾಗಿಯಾಗಿರುವ ರಾಜ್ಯ ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರದ ವಿರುದ್ಧ ಈಗ ಧರ್ಮ ಯುದ್ಧ ಆರಂಭವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ.

ರಾಜ್ಯ ಸರ್ಕಾರದ ಭ್ರಷ್ಟಾಚಾರವನ್ನು ರಾಜ್ಯದ ಜನರ ಮುಂದಿಡುತ್ತಿದ್ದೇವೆ. ಪಾದಯಾತ್ರೆ ಮೂಲಕ ಸರ್ಕಾರದ ಅವ್ಯವಹಾರವನ್ನು ಎಳೆ ಎಳೆಯಾಗಿ ಬಿಡಿಸಿ ಹೇಳುತ್ತಿದ್ದೇವೆ ಎಂದು ತಿಳಿಸಿದರು.

ಮುಡಾ ಹಾಗೂ ವಾಲ್ಮೀಕಿ ಹಗರಣದ ಹಿನ್ನೆಲೆ ಸಿದ್ದರಾಮಯ್ಯ ಕೂಡಲೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ವಿಜಯೇಂದ್ರ ಈ ವೇಳೆ ಆಗ್ರಹಿಸಿದರು.

ಮರಿಲಿಂಗಪ್ಪ ನಿಧನ



ಪಾಂಡವಪುರ: ತಾಲೂಕಿನ ಕಾಳೇಗೌಡನ ಕೊಪ್ಪಲು ಗ್ರಾಮದ ನಿವಾಸಿ ಮರಿಲಿಂಗಪ್ಪ(92) ಅವರು ಗುರುವಾರ ಮಧ್ಯಾಹ್ನ ನಿಧನ ಹೊಂದಿದರು.

ತಾಲೂಕು ವೀರಶೈವ ಮಹಾಸಭಾದ ಅಧ್ಯಕ್ಷ ಶಿವಕುಮಾರ್ ಸೇರಿದಂತೆ ನಾಲ್ವರು ಪುತ್ರರು, ಇಬ್ಬರು ಪುತ್ರಿಯರಿದ್ದಾರೆ.

ಮೃತರ ಅಂತ್ಯಕ್ರಿಯೆ ಶುಕ್ರವಾರ ಕಾಳೇಗೌಡನ ಕೊಪ್ಪಲಿನಲ್ಲಿರುವ ಮೃತರ ಜಮೀನಿನಲ್ಲಿ ನಡೆಯಲಿದೆ ಎಂದು ಕುಟುಂಬದವರು ತಿಳಿಸಿದ್ದಾರೆ. ಮಾಜಿ ಸಚಿವ ಸಿ.ಎಸ್.ಪುಟ್ಟರಾಜು, ಜಿಪಂ ಮಾಜಿ ಸದಸ್ಯ ಸಿ.ಅಶೋಕ್, ಟಿಎಪಿಸಿಎಂಎಸ್ ಮಾಜಿ ಅಧ್ಯಕ್ಷ ರಾಮಕೃಷ್ಣ, ಜಿಲ್ಲಾ ವೀರಶೈವ ಮಹಾಸಭಾ ಅಧ್ಯಕ್ಷ ತಾಳಶಾಸನ ಆನಂದ್ ಅವರು ಅಂತಿಮ ನಮನ ಸಲ್ಲಿಸಿ ಸಂತಾಪ ಸೂಚಿಸಿದರು.

ಮೂರನೇ ಪುಟದಿಂದ

ಕ್ಷಣಗಣನೆ ಆರಂಭವಾಗಿದೆ...!

ಅಧಿವೇಶನವನ್ನು ಮೊಟಕುಗೊಳಿಸಿದ್ದಾರೆ. ವಿರೋಧ ಪಕ್ಷದವರ ನಿಲುವಳಿಗೆ ಉತ್ತರ ಕೊಡಲಾಗದೆ ಓಡಿ ಹೋದ ಅಪಕೀರ್ತಿಗೆ ಪಾತ್ರರಾದವರು ಈ ನಾಡಿನ ದೊರೆ ಸಿದ್ದರಾಮಯ್ಯನವರು ಎಂದು ಕಿಡಿಕಾರಿದರು.

ಬಡವರಿಗೆ ನ್ಯಾಯ ಕೊಡಿಸುವ ಉದ್ದೇಶ: ಅಹಿಂದ ಸಮುದಾಯಗಳ ಹೆಸರು ಹೇಳಿಕೊಂಡು ಅಧಿಕಾರಕ್ಕೆ ಬಂದ ಸಿದ್ದರಾಮಯ್ಯನವರು ಅವರಿಗೇ ಮೋಸ ಮಾಡಿ, ಭ್ರಷ್ಟಾಚಾರದ ಹಣೆಪಟ್ಟಿ ಹೊತ್ತುಕೊಂಡಿದ್ದಾರೆ. ನಮ್ಮ ಪಾದಯಾತ್ರೆ ಸ್ವಾರ್ಥಕ್ಕಲ್ಲ; ನಮ್ಮ ಪಾದಯಾತ್ರೆ ಈ ನಾಡಿನ ದೀನದಲಿತರು, ಪರಿಶಿಷ್ಟ ಜಾತಿ, ಪಂಗಡಗಳಿಗೆ, ಬಡವರಿಗೆ ನ್ಯಾಯ ಕೊಡಿಸುವ ಉದ್ದೇಶ ಹೊಂದಿದೆ ಎಂದು ವಿಜಯೇಂದ್ರ ಅವರು ತಿಳಿಸಿದರು.

ನಮ್ಮದು ಪ್ರಾಮಾಣಿಕ ಹೋರಾಟ, ಬಡವರ ಪರ ಹೋರಾಟ, ಭ್ರಷ್ಟ ಕಾಂಗ್ರೆಸ್ ಸರಕಾರ, ಭ್ರಷ್ಟ ಸಿಎಂ ವಿರುದ್ಧ ಹೋರಾಟ ನಮ್ಮದು. ಕಾಂಗ್ರೆಸ್ ಸರಕಾರವು ಭ್ರಷ್ಟಾಚಾರದಿಂದ, ಭ್ರಷ್ಟಾಚಾರಕ್ಕಾಗಿ ಮತ್ತು ಭ್ರಷ್ಟಾಚಾರಕ್ಕೋಸ್ಕರ ಆಡಳಿತ ನಡೆಸುತ್ತಿದೆ ಎಂದು ಅವರು ಟೀಕಿಸಿದರು. ಇಂಥ ಭ್ರಷ್ಟ ಸರಕಾರವನ್ನು ಕಿತ್ತೊಗೆಯುವ ತನಕ ನಮ್ಮ ಹೋರಾಟ ನಿರಂತರವಾಗಿ ಇರಲಿದೆ ಎಂದು ತಿಳಿಸಿದರು.

"ರಾಜ್ಯದ ಖಜಾನೆ ಲೂಟಿ ಮಾಡಿದವರು ಮೈಸೂರಿಗೆ ಸೇರಿಕೊಂಡಿದ್ದಾರೆ. ರಾಜ್ಯದ ಎಲ್ಲ ಕಡೆ ಸಿದ್ದರಾಮಯ್ಯನವರ ಲೂಟಿ ಗ್ಯಾಂಗ್ ನಿಂತಿದೆ. ಕಾಂಗ್ರೆಸ್ಸಿನ ಕಳ್ಳ–ಮಳ್ಳರನ್ನು ಹಿಡಿಯಲು ನಾವೆಲ್ಲ ಹೋಗುತ್ತಿದ್ದೇವೆ. ಮೈಸೂರು ನೋಡಲೆಂದು ಈ ಪಾದಯಾತ್ರೆ ಅಲ್ಲ.–ಆರ್.ಅಶೋಕ್, ವಿಧಾನಸಭೆಯ ವಿಪಕ್ಷ ನಾಯಕ

"ಡಾ. ಅಂಬೇಡ್ಕರ್ ಅವರ ಬಗ್ಗೆ ಮಾತನಾಡುತ್ತೀರಿ. ಕಾಂಗ್ರೆಸ್ಸಿಗರೇ, ಸಂವಿಧಾನ, ಬಾಬಾ ಸಾಹೇಬ ಡಾ. ಅಂಬೇಡ್ಕರರ ಬಗ್ಗೆ ನಿಮಗೆ ಗೌರವ ಇದೆಯೇ? ರಾಜ್ಯದ ಜನರಿಗೆ ವಿಶ್ವಾಸಘಾತುಕತನ ಮಾಡಿದ ಸಿದ್ದರಾಮಯ್ಯನವರಿಗೆ ಪ್ರಜಾಪ್ರಭುತ್ವದ ಬಗ್ಗೆ ಗೌರವ ಇದ್ದರೆ ಇವತ್ತೇ ಕತ್ತಲಾಗುವ ಮೊದಲೇ ರಾಜೀನಾಮೆ ಕೊಡಲಿ. –ಛಲವಾದಿ ನಾರಾಯಣಸ್ವಾಮಿ, ವಿಧಾನಪರಿಷತ್ತಿನ ವಿಪಕ್ಷ ನಾಯಕ

"ಕಾಂಗ್ರೆಸ್ಸಿನವರದು ರೈತವಿರೋಧಿ, ಹೈನುಗಾರರ ವಿರೋಧಿ ಸರಕಾರ. ಇದು ಎಲ್ಲ ವಸ್ತುಗಳಿಗೆ ಬೆಲೆ ಹೆಚ್ಚಿಸುವ ಜನವಿರೋಧಿ ಸರಕಾರ. ಇದು ಭ್ರಷ್ಟರ, ಲಂಚಕೋರರ ಸರಕಾರ. ವಾಲ್ಮೀಕಿ ನಿಗಮ ಒಂದು ಉದಾಹರಣೆ ಅಷ್ಟೇ. ಇವರ ಕಾಟಕ್ಕೆ ಅಧಿಕಾರಿಗಳೂ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ.

–ಡಾ.ಸಿ.ಎನ್.ಅಶ್ವತ್ಥನಾರಾಯಣ್, ಮಾಜಿ ಡಿಸಿಎಂ

"ಬಿಜೆಪಿ ಮತ್ತು ಜೆಡಿಎಸ್ ಪ್ರಾಯಶ್ಚಿತ್ತಕ್ಕಾಗಿ ಪಾದಯಾತ್ರೆ ಮಾಡುತ್ತಿದೆ ಎಂದು ಹೇಳುತ್ತಿರುವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪುಣ್ಯ ಮಾಡಿದ್ದವರು ಎಂದು ಅರ್ಥ. ಹಾಗಾದರೆ ಅವರು ಸ್ವರ್ಗಕ್ಕೆ ಹೋಗಬೇಕಿತ್ತು ಆದರೆ, ಅವರು ಯಾಕೆ ತಿಹಾರ್ ಜೈಲಿಗೆ ಹೋಗಿದ್ದರು. ಪುಣ್ಯ ಜಾಸ್ತಿಯಾಗಿ ತಿಹಾರ್ ಜೈಲಿಗೆ ಹೋಗಿದ್ದರಾ? ಕಾಂಗ್ರೆಸ್ಸಿನವರಿಗೆ ಯಾವ ಪ್ರಮಾಣದ ಪಾಪದ ಕೊಡ ತುಂಬಿದೆ ಎಂದರೆ, ಅಲ್ಪಸಂಖ್ಯಾತರಿಗೂ ಮೋಸ ಮಾಡಿದ್ದೀರಿ; ಹಿಂದುಳಿದ ವರ್ಗಕ್ಕೆ, ದಲಿತರಿಗೂ ಮೋಸ ಮಾಡಿದ್ದೀರಿ. ಅಷ್ಟು ಮಾತ್ರವಲ್ಲ ರೈತರಿಗೂ ಮೋಸ ಮಾಡಿದ್ದೀರಿ. 15 ತಿಂಗಳ ಆಡಳಿತದಲ್ಲಿ 1,400ಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. –ಸಿ.ಟಿ.ರವಿ, ವಿಧಾನಪರಿಷತ್ ಸದಸ್ಯ

ಮಾಜಿ ಶಾಸಕ ಪ್ರೀತಂಗೌಡ ಭಾವಚಿತ್ರವಿದ್ದ ಫ್ಲೆಕ್ಸ್‌ಗೆ ಬೆಂಕಿ!



ಮಂಡ್ಯ, ಆ.8–ಬಿಜೆಪಿ–ಜೆಡಿಎಸ್ ಮೈಸೂರು ಚಲೋ ವೇಳೆ ಹಾಸನ ಶಾಸಕ ಪ್ರೀತಂಗೌಡ ಬೆಂಬಲಿಗರು ಹಾಗೂ ಜೆಡಿಎಸ್ ಕಾರ್ಯಕರ್ತರ ನಡುವೆ ಬುಧವಾರ ನಡೆದ ಮಾರಾಮಾರಿ ವಿಕೋಪಕ್ಕೆ ತಿರುಗಿದೆ.

ಬುಧವಾರ ತಡ ರಾತ್ರಿ ಉಮ್ಮಡಹಳ್ಳಿ ಬಳಿ ಬೆಂಗಳೂರು–ಮೈಸೂರು ಹೆದ್ದಾರಿಯ ಅಂಡರ್ ಪಾಸ್‌ನಲ್ಲಿ ಅಳವಡಿಸಲಾಗಿದ್ದ ಪ್ರೀತಂಗೌಡ ಭಾವಚಿತ್ರವಿದ್ದ ಫ್ಲೆಕ್ಸ್‌ಗೆ ಪೆಟ್ರೋಲ್ ಎರಚಿ ಬೆಂಕಿ ಹಚ್ಚಲಾಗಿದ್ದು, ಅದರ ವೀಡಿಯೋ ವೈರಲ್ ಆಗಿದೆ.

ನಿನ್ನೆ ಪಾದಯಾತ್ರೆ ವೇಳೆ ಪ್ರೀತಂಗೌಡ ಬೆಂಬಲಿಗರು ಮತ್ತು ಜೆಡಿಎಸ್ ಕಾರ್ಯಕರ್ತರ ನಡುವೆ ಬಿ.ವೈ.ವಿಜಯೇಂದ್ರ ಮತ್ತು ಕುಮಾರಸ್ವಾಮಿ ಸಮ್ಮುಖದಲ್ಲೇ ಮಾರಾಮಾರಿ ನಡೆದಿತ್ತು. ನಂತರ ನಿನ್ನೆ ರಾತ್ರಿ ಬಿಜೆಪಿ ಮತ್ತು ಜೆಡಿಎಸ್ ಸಮನ್ವಯ ಸಮಿತಿ ಸಭೆಯನ್ನು ಮಂಡ್ಯದ ಖಾಸಗಿ ಹೋಟೆಲ್‌ನಲ್ಲಿ ನಡೆಸಿ, ಪ್ರೀತಂಗೌಡರನ್ನು ಪಾದಯಾತ್ರೆಯಿಂದ ದೂರ ಉಳಿಸುವ ಬಗ್ಗೆ ತೀರ್ಮಾನಿಸಲಾಗಿತ್ತು ಎಂದು ಹೇಳಲಾಗಿದೆ. ಪ್ರೀತಂಗೌಡ ಫ್ಲೆಕ್ಸ್‌ಗೆ ಬೆಂಕಿ ಹಚ್ಚಿದ ವಿಚಾರವಾಗಿ ಪ್ರತಿಕ್ರಿಯಿಸಲು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನಿರಾಕರಿಸಿದರು. ಕಳೆದ ತಡ ರಾತ್ರಿ ಪ್ರೀತಂಗೌಡ ಭಾವಚಿತ್ರದ ಫ್ಲೆಕ್ಸ್‌ಗೆ ಬೆಂಕಿ ಹಚ್ಚಿರುವ ವಿಚಾರ ತಿಳಿಯುತ್ತಿದ್ದಂತೆಯೇ ಇಂದು ಪಾದಯಾತ್ರೆ ವೇಳೆ ಮಾಧ್ಯಮಗಳೊಂದಿಗೆ ಮಾತನಾಡಿದ ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ, ಮಂಡ್ಯದಲ್ಲಿ ನಿನ್ನೆ ನಡೆದ ಘಟನೆ ಬೇಸರ ತಂದಿದೆ. ಮುಂದೆ ಇಂತಹ ಘಟನೆಗಳು ನಡೆಯಬಾರದು. ಹೀಗಾಗಿ ಕಿಡಿಗೇಡಿಗಳು ಬಂದು ಏನೇ ಚೇಷ್ಟೆ ಮಾಡಿದರೂ ಜೆಡಿಎಸ್ ಕಾರ್ಯಕರ್ತರು ತಾಳ್ಮೆ ಕಳೆದುಕೊಳ್ಳಬಾರದು ಎಂದು ಮನವಿ ಮಾಡಿದರು. ಪ್ರಧಾನಿ ನರೇಂದ್ರ ಮೋದಿ ಮತ್ತು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಸಂಬಂಧ ಅತ್ಯುತ್ತಮವಾಗಿದೆ. ಇದನ್ನು ಗಮನದಲ್ಲಿಟ್ಟುಕೊಂಡು ಯಾವುದೇ ಕಾರಣಕ್ಕೂ ಅಹಿತಕರ ಘಟನೆಗಳಿಗೆ ಅವಕಾಶ ಕೊಡಬಾರದು. ಕಿಡಿಗೇಡಿಗಳು ನಮಗೆ ನೋವುಂಟು ಮಾಡಿದರೂ ಅದಕ್ಕೆ ಪ್ರತಿಕ್ರಿಯಿಸುವುದು ಬೇಡ. ಮಂಡ್ಯ ಜಿಲ್ಲೆಯ ಕಾರ್ಯಕರ್ತರು ಸ್ವಾಭಿಮಾನಿಗಳು. ಸ್ವಾಭಿಮಾನಕ್ಕೆ ಧಕ್ಕೆ ಉಂಟಾಗುವಂತೆ ಯಾರೂ ನಡೆದುಕೊಳ್ಳಬಾರದು. ನಿನ್ನೆಯ ಘಟನೆ ಬಗ್ಗೆ ಸಮನ್ವಯ ಸಮಿತಿ ಮುಖಂಡರು ಕೇಂದ್ರಕ್ಕೆ ಮಾಹಿತಿ ಕೊಟ್ಟಿದ್ದಾರೆ. ಮುಂದೆ ಯಾವ ಕ್ರಮ ಕೈಗೊಳ್ಳುತ್ತಾರೋ ನೋಡೋಣ ಎಂದರು.

ಜನಾಂದೋಲನ ಸಮಾವೇಶ

ಮೈಸೂರು ಮಹಾರಾಜ ಕಾಲೇಜು ಮೈದಾನದಲ್ಲಿ ನಾಳೆ ಬೆಳಿಗ್ಗೆ 11 ಗಂಟೆಗೆ ಸಮಾವೇಶ ನಡೆಯಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಸಂಪುಟದ ಬಹುತೇಕ ಸಚಿವರು ಭಾಗಿಯಾಗಲಿದ್ದಾರೆ. ಸಮಾವೇಶದಲ್ಲಿ, ಮೈಸೂರು ಸೇರಿದಂತೆ ರಾಜ್ಯಾದ್ಯಂತ 2 ಲಕ್ಷಕ್ಕೂ ಹೆಚ್ಚು ಕಾರ್ಯಕರ್ತರು ಭಾಗಿಯಾಗಲಿದ್ದಾರೆ. ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 150 ಬಸ್‌ಗಳ ವ್ಯವಸ್ಥೆ ಮಾಡಿದ್ದು, ಜನರ ಕರೆ ತರಲು ಸಂಸದರು, ಶಾಸಕರು ಹಾಗೂ ಮಾಜಿ ಶಾಸಕರಿಗೆ ಟಾಸ್ಕ್ ನೀಡಲಾಗಿದೆ. ಸಮಾವೇಶಕ್ಕೆ ಬರುವವರಿಗೆ ಊಟ–ತಿಂಡಿ ವ್ಯವಸ್ಥೆ ಮಾಡಿ, ಅವರನ್ನು ಕರೆ ತಂದು ಮತ್ತೆ ಅವರ ಸ್ವ–ಸ್ಥಳಗಳಿಗೆ ತಲುಪಿಸುವ ಜವಾಬ್ದಾರಿ ನೀಡಲಾಗಿದೆ.

ವಿಧಾನಸಭಾ ಹಾಗೂ ಲೋಕಸಭಾ ಚುನಾವಣೆ ನಂತರ ಹಳೇ ಮೈಸೂರು ಭಾಗದ ಸಂಸದರು, ಶಾಸಕರು, ಮಾಜಿ ಶಾಸಕರು ಹಾಗೂ ಮುಖಂಡರಿಗೆ ಸಮಾವೇಶಕ್ಕೆ ಜನರನ್ನು ಸಂಘಟಿಸುವುದು ದೊಡ್ಡ ಸವಾಲಾಗಿದೆ. ಪ್ರತಿ ವಿಧಾನಸಭಾ ಕ್ಷೇತ್ರದಿಂದ ಎಷ್ಟು ಜನರನ್ನು ಕರೆ ತರುತ್ತಾರೆ ಎಂಬ ಬಗ್ಗೆ ಮಾಹಿತಿ ಕಲೆ ಹಾಕಲು ಉಸ್ತುವಾರಿ ಕೂಡ ನೇಮಕ ಮಾಡಲಾಗಿದೆ. ಯಾರು ಕಡಿಮೆ ಜನರ ಕರೆತರುತ್ತಾರೋ ಆ ಕ್ಷೇತ್ರದ ಶಾಸಕ, ಮಾಜಿ ಶಾಸಕ ಹಾಗೂ ಮುಖಂಡ ನಾಯಕರ ಕೆಂಗಣ್ಣಿಗೆ ಗುರಿಯಾಗುತ್ತಾರೆ. ಈ ಹಿನ್ನೆಲೆಯಲ್ಲಿ ಶತಾಯ–ಗತಾಯ ಹೆಚ್ಚಿನ ಜನರ ಕರೆತರಲು ಶಾಸಕರು, ಮಾಜಿ ಶಾಸಕರು ಹಾಗೂ ಮುಖಂಡರು ತಯಾರಿ ಮಾಡಿಕೊಂಡಿದ್ದಾರೆ.

ಭ್ರಷ್ಟಾಚಾರ ಬಯಲು: ಮುಡಾ ಹಾಗೂ ವಾಲ್ಮೀಕಿ ನಿಗಮದ ವಿರುದ್ಧ ಪಾದಯಾತ್ರೆ ನಡೆಸುತ್ತಿರುವ ಬಿಜೆಪಿ ಹಾಗೂ ಜೆಡಿಎಸ್ ಪಕ್ಷದ ಭ್ರಷ್ಟಾಚಾರವನ್ನು ನಾಳೆ ಎಳೆ ಎಳೆಯಾಗಿ ಬಿಡಿಸಿಡುವುದಾಗಿ ಸಿದ್ದರಾಮಯ್ಯ ಈಗಾಗಲೇ ಹೇಳಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ತಮ್ಮ ವಿರುದ್ಧದ ಮುಡಾ ಹಗರಣ ಆರೋಪಕ್ಕೆ ಮೈಸೂರಿನಲ್ಲೇ ಬಿಜೆಪಿ ಹಾಗೂ ಜೆಡಿಎಸ್‌ಗೆ ತಕ್ಕ ಉತ್ತರ ನೀಡಲು ಸನ್ನದ್ಧರಾಗಿದ್ದಾರೆ. ಜನಾಂದೋಲನ ಸಮಾವೇಶದಲ್ಲಿ ಪಾಲ್ಗೊಳ್ಳುವ ಸಲುವಾಗಿ ಸಿದ್ದರಾಮಯ್ಯ ಇಂದೇ ಮೈಸೂರಿಗೆ ಆಗಮಿಸಿದ್ದಾರೆ.

ಎಲ್‌ಇಡಿ ಸ್ಕ್ರೀನ್ ಅಳವಡಿಕೆ

ಎಲ್‌ಇಡಿ ಸ್ಕ್ರೀನ್ ಅಳವಡಿಸಲಾಗಿದೆ. ಸಮಾವೇಶದಲ್ಲಿ 136X120 ಅಡಿ ಅಗಲ ವಿಶಾಲ ವೇದಿಕೆ ನಿರ್ಮಾಣ ಮಾಡಲಾಗಿದ್ದು, ಇಲ್ಲಿ ಹಾಲಿ ಸಚಿವರು, ಸಂಸದರು ಹಾಗೂ ಶಾಸಕರಿಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ. ವೇದಿಕೆಯ ಬ್ಯಾಕ್‌ಡ್ರಾಪ್‌ನಲ್ಲಿ 15X140 ಅಡಿ ಅಗಲದ ಎಲ್‌ಇಡಿ ಸ್ಕ್ರೀನ್ ಅಳವಡಿಸಲಾಗಿದ್ದು, ಕಾಂಗ್ರೆಸ್ ಸರ್ಕಾರದ ಸಾಧನೆಗಳನ್ನು ಪ್ರದರ್ಶಿಸಲಾಗುತ್ತದೆ. ವೇದಿಕೆಯ ಬಳಿ 24X80 ಅಡಿ ಅಗಲದ ಮತ್ತೆರಡು ವೇದಿಕೆ ನಿರ್ಮಾಣ ಮಾಡಲಾಗಿದ್ದು, ಅಲ್ಲಿ ಮಾಜಿ ಶಾಸಕರು ಹಾಗೂ ಕಾಂಗ್ರೆಸ್ ಪ್ರಮುಖ ಮುಖಂಡರಿಗೆ ಆಸನದ ವ್ಯವಸ್ಥೆ ಮಾಡಲಾಗಿದೆ. ಮೈಸೂರು ಪ್ರಮುಖ ಪಾರಂಪರಿಕ ಶೈಲಿಯಲ್ಲಿ ವೇದಿಕೆ ನಿರ್ಮಾಣ ಮಾಡಿದ್ದು, ವೇದಿಕೆಯ ಕೆಳಗೆ ರಾಷ್ಟ್ರಪಿತ ಮಹಾತ್ಮಗಾಂಧಿ, ಸ್ವಾತಂತ್ರ್ಯ ಯೋಧರೊಂದಿಗೆ ಸಾಗುತ್ತಿರುವ ದೃಶ್ಯವನ್ನು ಬಿಂಬಿಸಲಾಗಿದೆ. ಮೈಸೂರಿನ ಪ್ರಮುಖ ವೃತ್ತ ಹಾಗೂ ರಸ್ತೆಗಳಲ್ಲಿ ಕಾಂಗ್ರೆಸ್ ಪಕ್ಷದ ಫ್ಲೆಕ್ಸ್, ಬ್ಯಾನರ್ ಹಾಗೂ ಬಂಟಿಂಗ್ಸ್‌ಗಳು ರಾರಾಜಿಸುತ್ತಿವೆ. ವಿಧಾನಸಭಾ ಹಾಗೂ ಲೋಕಸಭಾ ಚುನಾವಣೆ ನಂತರ ಕಾಂಗ್ರೆಸ್ ಮತ್ತೊಮ್ಮೆ ದೊಡ್ಡ ಶಕ್ತಿ ಪ್ರದರ್ಶನಕ್ಕೆ ಸಜ್ಜಾಗಿದೆ. ಬಿಜೆಪಿ ಹಾಗೂ ಜೆಡಿಎಸ್ ಮೈಸೂರು ಚಲೋ, ಇನ್ನಿತರೆ ಹೋರಾಟಕ್ಕೆ ನಾವು ಜಗ್ಗುವುದಿಲ್ಲ ಎಂದು ಜನಾಂದೋಲನ ಶಕ್ತಿ ಪ್ರದರ್ಶನದ ಮೂಲಕ ಸಂದೇಶ ನೀಡಲು ಕಾಂಗ್ರೆಸ್ ತಯಾರಿ ಮಾಡಿಕೊಂಡಿದೆ.

ಭದ್ರತೆಗೆ 4,500 ಪೊಲೀಸರ ನಿಯೋಜನೆ; ನಾಲ್ವರು ಡಿಐಜಿಗಳಿಗೆ ಭದ್ರತೆ ಮೇಲುಸ್ತುವಾರಿ

ಮೈಸೂರು: ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಕಾಂಗ್ರೆಸ್ ನಾಳೆ ನಡೆಸುತ್ತಿರುವ ಜನಾಂದೋಲನ ಸಮಾವೇಶದಲ್ಲಿ ಮೈಸೂರು ಸೇರಿದಂತೆ ರಾಜ್ಯಾದ್ಯಂತ ಸಹಸ್ರಾರು ಜನರು ಭಾಗವಹಿಸುವುದರಿಂದ ಯಾವುದೇ ರೀತಿಯ ಅಹಿತಕರ ಘಟನೆಗೆ ಅವಕಾಶ ಆಗದಂತೆ 4,500 ಪೊಲೀಸನ್ನು ಭದ್ರತೆಗೆ ನಿಯೋಜಿಸಲಾಗಿದೆ.

ಮೈಸೂರು ನಗರ ಮತ್ತು ಜಿಲ್ಲೆಯ 3,000, ರಾಜ್ಯದ ಹೊರ ಜಿಲ್ಲೆಯ 1,500 ಸೇರಿದಂತೆ 4,500 ಪೊಲೀಸರನ್ನು ನಾಳೆ ನಡೆಯುವ ಜನಾಂದೋಲನ ಸಮಾವೇಶಕ್ಕೆ ಭದ್ರತೆಗೆ ನಿಯೋಜನೆ ಮಾಡಲಾಗಿದೆ.

60 ಕೆಎಸ್‌ಆರ್‌ಪಿ ತುಕಡಿ, 20 ಸಿಎಆರ್ ತುಕಡಿ, 500 ಹೋಮ್‌ಗಾರ್ಡ್, 100 ಕಮಾಂಡೊ, ನಾಲ್ವರು ಡಿಐಜಿ, 36 ಡಿವೈಎಸ್ಪಿ, 77 ಇನ್ಸ್‌ಪೆಕ್ಟರ್, 175 ಸಬ್ ಇನ್ಸ್‌ಪೆಕ್ಟರ್‌ಗಳನ್ನು ಭದ್ರತೆಗೆ ನಿಯುಕ್ತಿಗೊಳಿಸಲಾಗಿದೆ.

ಮುಖ್ಯಮಂತ್ರಿ ಸೇರಿದಂತೆ ರಾಜ್ಯ ನಾಯಕರು ಭಾಗವಹಿಸುವ ಹಿನ್ನೆಲೆಯಲ್ಲಿ ಭದ್ರತಾ ಲೋಪ ಆಗದಂತೆ ಪೊಲೀಸರು ಮುನ್ನೆಚ್ಚರಿಕಾ ಕ್ರಮ ಕೈಗೊಂಡಿದ್ದಾರೆ. ಸಮಾವೇಶದ ಪ್ರವೇಶ ದ್ವಾರದಲ್ಲಿ ಮೆಟಲ್ ಡಿಟೆಕ್ಟರ್‌ಗಳನ್ನು ಅಳವಡಿಸಲಾಗಿದೆ. ಬಾಂಬ್ ನಿಷ್ಕ್ರಿಯ ದಳದವರು ಇಂಚಿಂಚು ಜಾಗವನ್ನು ತಪಾಸಣೆ ಮಾಡಲಿದ್ದಾರೆ. ಮೈಸೂರು ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಸಮಾವೇಶ ನಡೆಯುವ ಸ್ಥಳದಲ್ಲೇ ಅಧಿಕಾರಿಗಳ ಸಭೆ ನಡೆಸಿ ಭದ್ರತೆಗೆ ಸಂಬಂಧಿಸಿದಂತೆ ಹಿರಿಯ ಅಧಿಕಾರಿಗಳಿಗೆ ಮಾರ್ಗದರ್ಶನ ನೀಡಿದರು. ಸೀಮಾ ಲಾಟ್ಕರ್ ಅವರ ಸೂಚನೆಯಂತೆ ವೃತ್ತ ಹಾಗೂ ರಸ್ತೆಯಲ್ಲಿ ಎಷ್ಟು ಪೊಲೀಸರಿರಬೇಕು ಎಂದು ಹಿರಿಯ ಪೊಲೀಸ್ ಅಧಿಕಾರಿಗಳು ಬೀಟ್ ಹಂಚಿಕೆ ಮಾಡಿದರು. ನಾಳೆ ಕಾಂಗ್ರೆಸ್ ಜನಾಂದೋಲನ ಸಮಾವೇಶ ನಡೆದರೆ, ನಾಡಿದ್ದು ಬಿಜೆಪಿ ಹಾಗೂ ಜೆಡಿಎಸ್ ಪಕ್ಷದ ಮೈಸೂರು ಚಲೋ ಸಮಾರೋಪ ಸಮಾರಂಭ ನಡೆಯಲಿದೆ. ಈ ಹಿನ್ನೆಲೆ ಎರಡು ದಿನವೂ ಇಷ್ಟೆ ಪೊಲೀಸರನ್ನು ಭದ್ರತೆಗೆ ನಿಯೋಜಿಸಲಾಗುವುದು. ಮೈಸೂರು ನಗರವನ್ನು ಸಂಪರ್ಕಿಸುವ ಬೆಂಗಳೂರು ರಸ್ತೆ, ತಿ.ನರಸೀಪುರ ರಸ್ತೆ, ನಂಜನಗೂಡು ರಸ್ತೆ, ಹುಣಸೂರು ರಸ್ತೆ ಸೇರಿದಂತೆ ಇತರೆ ಭಾಗಗಳಲ್ಲಿ ಪೊಲೀಸರು ಮಾರ್ಗಗಳ ಸೂಚನಾ ಫಲಕಗಳನ್ನು ಅಳವಡಿಸಿದ್ದಾರೆ. ಜೊತೆಗೆ ಬಸ್ ಸೇರಿದಂತೆ ಇತರೆ ವಾಹನಗಳ ನಿಲುಗಡೆಗೆ ಪ್ರತ್ಯೇಕ ನಿಲ್ದಾಣ ಗುರುತಿಸಲಾಗಿದೆ.

ನಾಳೆ ಮೈಸೂರು ಚಲೋ ಸಮಾರೋಪ; ದೋಸ್ತಿಗಳ ಶಕ್ತಿ ಪ್ರದರ್ಶನ

ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ನಾಳೆ (ಆಗಸ್ಟ್ 9) ಕಾಂಗ್ರೆಸ್ ಜನಾಂದೋಲನ ಸಮಾವೇಶ ನಡೆದರೆ, ನಾಡಿದ್ದು (ಆಗಸ್ಟ್ 10) ಇದೇ ಮೈದಾನದಲ್ಲಿ ಬಿಜೆಪಿ ಹಾಗೂ ಜೆಡಿಎಸ್‌ನ ಮೈಸೂರು ಚಲೋ ಸಮಾರೋಪ ಸಮಾರಂಭ ನಡೆಯಲಿದೆ.

ಈ ಸಮಾರಂಭಕ್ಕೆ ಒಂದೂವರೆ ಲಕ್ಷಕ್ಕಿಂತ ಹೆಚ್ಚು ಜನರನ್ನು ಸೇರಿಸಲು ಬಿಜೆಪಿ ಹಾಗೂ ಜೆಡಿಎಸ್ ತಯಾರಿ ಮಾಡಿಕೊಂಡಿವೆ. ಈ ಸಮಾವೇಶಕ್ಕೆ ಕೂಡ ಮೈಸೂರು, ಮಂಡ್ಯ, ಚಾಮರಾಜನಗರ, ಕೊಡಗು, ಹಾಸನ ಹಾಗೂ ರಾಮನಗರದ ಜಿಲ್ಲೆಯಿಂದ ಜನರನ್ನು ಕರೆ ತರಲು ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗಿದೆ. ಕಾಂಗ್ರೆಸ್ ಜನಾಂದೋಲನ ಸಮಾವೇಶಕ್ಕಿಂತ ಹೆಚ್ಚು ಜನರನ್ನು ಸೇರಿಸುವುದು ಬಿಜೆಪಿ ಹಾಗೂ ಜೆಡಿಎಸ್‌ಗೆ ಸವಾಲಾಗಿದೆ. ಅಷ್ಟೆ ಅಲ್ಲದೆ ಇದು ಪ್ರತಿಷ್ಠೆಯ ವಿಚಾರ ಕೂಡ ಆಗಿದೆ. ಈ ಹಿನ್ನೆಲೆ ಬಿಜೆಪಿ ಹಾಗೂ ಜೆಡಿಎಸ್ ಹೈಕಮಾಂಡ್ ಎರಡು ಪಕ್ಷದ ಸಂಸದರು, ಶಾಸಕರು ಹಾಗೂ ಮುಖಂಡರಿಗೆ ಟಾಸ್ಕ್ ನೀಡಿದೆ.

ಅಮಿತ್ ಶಾ ಅಥವಾ ಜೆ.ಪಿ.ನಡ್ಡಾ ಪಾಲ್ಗೊಳ್ಳುವ ಸಾಧ್ಯತೆ

ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಶನಿವಾರ ನಡೆಯುವ ಮೈಸೂರು ಚಲೋ ಸಮಾರೋಪ ಸಮಾರಂಭದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅಥವಾ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಭಾಗವಹಿಸುವ ಸಾಧ್ಯತೆ ಇದೆ. ಮುಡಾ ಹಾಗೂ ವಾಲ್ಮೀಕಿ ನಿಗಮದ ಹಗರಣದ ವಿರುದ್ಧ ಬೆಂಗಳೂರಿನಿಂದ ಮೈಸೂರಿನ ತನಕ ಹಮ್ಮಿಕೊಂಡಿರುವ ಪಾದಯಾತ್ರೆ ರಾಜ್ಯ ರಾಜಕೀಯ ಬೆಳವಣಿಗೆಯನ್ನು ಮತ್ತಷ್ಟು ಚುರುಕುಗೊಳಿಸಿದೆ. ಅಷ್ಟೆ ಅಲ್ಲದೆ ಮಹತ್ವ ಕೂಡ ಪಡೆದುಕೊಂಡಿದೆ. ಈ ಹಿನ್ನೆಲೆ ಇಬ್ಬರು ನಾಯಕರನ್ನು ಸಮಾವೇಶಕ್ಕೆ ಆಹ್ವಾನಿಸಲಾಗಿದ್ದು, ಅಮಿತ್ ಶಾ ಅಥವಾ ಜೆ.ಪಿ. ನಡ್ಡಾ ಭಾಗವಹಿಸಲಿದ್ದಾರೆ. ದೋಸ್ತಿಗಳ ಶಕ್ತಿ ಪ್ರದರ್ಶನದಲ್ಲಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಸೇರಿದಂತೆ ಹಲವು ನಾಯಕರು ಭಾಗವಹಿಸಲಿದ್ದಾರೆ. ಒಟ್ಟಾರೆ ಮೈಸೂರಿನ ಮಹಾರಾಜ ಕಾಲೇಜು ಮೈದಾನ ಆಡಳಿತರೂಢ ಕಾಂಗ್ರೆಸ್ ಹಾಗೂ ಬಿಜೆಪಿ, ಜೆಡಿಎಸ್ ದೋಸ್ತಿಗಳ ಶಕ್ತಿ ಪ್ರದರ್ಶನಕ್ಕೆ ಸಾಕ್ಷಿಯಾಗಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ಸಂಬಂಧ ರಾಜ್ಯಭವನದಲ್ಲಿ ಕಾನೂನಾತ್ಮಕ ಪ್ರಕ್ರಿಯೆಗಳು ನಡೆಯುತ್ತಿರುವ ಬೆನ್ನಲ್ಲೇ ಮೈಸೂರಿನಲ್ಲಿ ಬ್ಯಾಕ್ ಟು ಬ್ಯಾಕ್ ಸಮಾವೇಶ ನಡೆಯುತ್ತಿರುವುದು ಮಹತ್ವ ಪಡೆದುಕೊಂಡಿದೆ.

ಮೈಸೂರು ಮಿತ್ರ ಶುಕ್ರವಾರ 9 ಆಗಸ್ಟ್ 2024

ಆ.11ರಂದು ಪಂಡಿತ್ ರಾಜೀವ್ ತಾರಾನಾಥ್ ನೆನಪಿನ ಕಾರ್ಯಕ್ರಮ



ಮೈಸೂರು,ಆ.8–ಪಂಡಿತ್ ರಾಜೀವ್ ತಾರಾನಾಥ್ ಮೆಮೋರಿಯಲ್ ಟ್ರಸ್ಟ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ಆ.11ರಂದು ಸಂಜೆ 5 ಗಂಟೆಗೆ ಮೈಸೂರಿನ ಕಲಾಮಂದಿರದಲ್ಲಿ ವಿಶ್ವ ವಿಖ್ಯಾತ ಸರೋದ್ ವಾದಕ ಪಂಡಿತ್ ರಾಜೀವ್ ತಾರಾನಾಥ್ ನೆನಪಿನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಅಂಶನ್‌ಕುಮಾರ್ ನಿರ್ದೇಶನದ ರಾಜೀವ್ ನೆನಪಿನ ಚಿತ್ರಗಳು, ಕಿರು ಸಾಕ್ಷ್ಯಚಿತ್ರದ ಆಯ್ದ ಭಾಗಗಳನ್ನು ಪ್ರದರ್ಶಿಸಲಾಗುತ್ತದೆ. ಕಾರ್ಯಕ್ರಮದಲ್ಲಿ ಡಾ.ವಿಜಯಾ ಬೆಂಗಳೂರು, ಪಂಡಿತ್ ನಯನ್ ಘೋಷ್ ಕಲ್ಕತ್ತಾ, ಡಾ.ಜಯಂತ್ ಕಾಯ್ಕಿಣಿ ಬೆಂಗಳೂರು ಮತ್ತು ವಿದ್ವಾನ್ ಟಿ.ಎಂ.ಕೃಷ್ಣ ಚೆನ್ನೈ ಅವರು ನೆನಪುಗಳನ್ನು ಹಂಚಿಕೊಳ್ಳಲಿದ್ದಾರೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕರಾದ ಡಾ.ಧರಣೀದೇವಿ ಮಾಲಗತ್ತಿ ಅಧ್ಯಕ್ಷತೆ ವಹಿಸಲಿದ್ದಾರೆ. ರಂಗಾಯಣ ಮಾಜಿ ನಿರ್ದೇಶಕ ಜನಾರ್ಧನ್ ಪಂಡಿತ್ ರಾಜೀವ್ ತಾರಾನಾಥ್ ನಿರ್ದೇಶನದ 'ಕುರಿ' ನಾಟಕದ ಹಾಡುಗಳನ್ನು ಪ್ರಸ್ತುತಪಡಿಸಲಿದ್ದಾರೆ. ಪಂಡಿತ್ ನಯನ್ ಘೋಷ್ ಸಿತಾರ್ ವಾದನದ ಮೂಲಕ ನಾದನಮನ ಸಲ್ಲಿಸುತ್ತಾರೆ. ಅವರಿಗೆ ಪಂಡಿತ್ ಇಷಾನ್ ಘೋಷ್ ತಬಲಾ ಸಹಕಾರ ನೀಡಲಿದ್ದಾರೆ.

ಸಿದ್ದರಾಮಯ್ಯ ಪರ ನಿಲ್ಲದಿದ್ದರೆ ಇತಿಹಾಸ ನಮ್ಮನ್ನು ಕ್ಷಮಿಸುವುದಿಲ್ಲ

'ರಾಜ್ಯಪಾಲರ ನಡೆ ಮತ್ತು ದ್ವೇಷ ರಾಜಕಾರಣದ ಒಂದು ಚಿಂತನೆ' ವಿಚಾರ ಸಂಕಿರಣದಲ್ಲಿ ಹಿರಿಯ ಪತ್ರಕರ್ತ ದಿನೇಶ್ ಅಮೀನ್‌ಮಟ್ಟು ಅಭಿಮತ



ಮೈಸೂರಿನ ಮಾನಸಗಂಗೋತ್ರಿಯ ರಾಣಿ ಬಹದ್ದೂರ್ ಸಭಾಂಗಣದಲ್ಲಿ ನಡೆದ 'ರಾಜ್ಯಪಾಲರ ನಡೆ ಮತ್ತು ದ್ವೇಷ ರಾಜಕಾರಣ ಒಂದು ಗಂಭೀರ ಚಿಂತನೆ' ವಿಚಾರ ಸಂಕಿರಣವನ್ನು ಚಿಂತಕ ಜಾಣಗೆರೆ ವೆಂಕಟರಾಮಯ್ಯ ಉದ್ಘಾಟಿಸಿದರು.

ಮೈಸೂರು, ಆ.8(ಎಂಟಿವೈ)– ನಾಲ್ಕು ದಶಕ ಕಾಲ ಸಾಮಾಜಿಕ ನ್ಯಾಯದ ಪರ ರಾಜಕಾರಣ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಪರವಾಗಿ ನಿಲ್ಲದಿದ್ದರೆ ಇತಿಹಾಸ ನಮ್ಮನ್ನು ಕ್ಷಮಿಸುವುದಿಲ್ಲ ಎಂದು ಹಿರಿಯ ಪತ್ರಕರ್ತ ದಿನೇಶ್ ಅಮೀನ್ ಮಟ್ಟು ಅಭಿಪ್ರಾಯಪಟ್ಟರು.

ಮೈಸೂರಿನ ಮಾನಸ ಗಂಗೋತ್ರಿಯ ರಾಣಿ ಬಹದ್ದೂರ್ ಸಭಾಂಗಣದಲ್ಲಿ ಗುರುವಾರ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ, ಅಹಿಂದ ಸಂಘಟನೆಗಳ ಸಹಯೋಗದಲ್ಲಿ ಆಯೋಜಿಸಿದ್ದ 'ರಾಜ್ಯಪಾಲರ ನಡೆ ಮತ್ತು ದ್ವೇಷ ರಾಜಕಾರಣ ಒಂದು ಗಂಭೀರ ಚಿಂತನೆ' ವಿಚಾರ ಸಂಕಿರಣದಲ್ಲಿ ಮಾತನಾಡಿದ ಅವರು, ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಜೈಲಿಗೆ ಕಳುಹಿಸಲು ಬಿಜೆಪಿ ಮತ್ತು ಜೆಡಿಎಸ್ ನಾಯಕರು ಸಂಚು ನಡೆಸುತ್ತಿದ್ದಾರೆ ಎಂದು ಆರೋಪಿಸಿದರು.

ಈ ವಿಚಾರದಲ್ಲಿ ಮುಂದೆ ಏನಾಗುತ್ತದೋ ಎಂಬ ಆತಂಕ ಕೆಲವರಲ್ಲಿದೆ. ಆದರೆ ರಾಜ್ಯಪಾಲರು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದರೂ ಆತಂಕವಿಲ್ಲ ಎಂದರು.

ಈ ಹಿಂದೆ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ವಿರುದ್ಧ ಗಂಭೀರ ಆರೋಪಗಳಿದ್ದವು. 2011ರ ಜನವರಿಯಲ್ಲಿ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಟ್ಟರೂ ಅಕ್ಟೋಬರ್ ತಿಂಗಳಲ್ಲಿ ಯಡಿಯೂರಪ್ಪ ಅವರನ್ನು ಬಂಧಿಸಲಾಯಿತು. ಸಿದ್ದರಾಮಯ್ಯ ಅವರ ಮುಡಾ ಪ್ರಕರಣದಲ್ಲಿ ಟಿ.ಜೆ.ಅಬ್ರಹಾಂ ಮೊದಲು ರಾಜ್ಯಪಾಲರಿಗೆ ದೂರು ಕೊಟ್ಟು, ಅನಂತರ ಲೋಕಾಯುಕ್ತಕ್ಕೆ ದೂರು ನೀಡಿದ್ದಾರೆ. ಕೇಂದ್ರ ಸರ್ಕಾರದ ಕೈಗೊಂಬೆಯಾಗಿ ರಾಜ್ಯಪಾಲರು ಸಿಎಂ ವಿರುದ್ಧ ತೀರ್ಮಾನ ಮಾಡಬಹುದು ಎಂದು ತಿಳಿಸಿದರು.

ಇದಕ್ಕೂ ಮುನ್ನ ಚಿಂತಕ ಜಾಣಗೆರೆ ವೆಂಕಟರಾಮಯ್ಯ ವಿಚಾರಸಂಕಿರಣ ಉದ್ಘಾಟಿಸಿ ಮಾತನಾಡಿ, ಹಿಂದುಳಿದ ವರ್ಗಕ್ಕೆ ಸೇರಿದ ವ್ಯಕ್ತಿ ಮೊದಲನೇ ಬಾರಿ ಯಶಸ್ವಿಯಾಗಿ 5 ವರ್ಷ ಪೂರೈಸಿ, 2ನೇ ಬಾರಿ ಮುಖ್ಯಮಂತ್ರಿಯಾದದ್ದನ್ನು ಸಹಿಸದೇ ಬಿಜೆಪಿ, ಜೆಡಿಎಸ್ ನಾಯಕರು ಪಾದಯಾತ್ರೆ ನಡೆಸುತ್ತಿದ್ದಾರೆ. ಮೋಸ, ಕುತಂತ್ರ, ಭ್ರಷ್ಟಾಚಾರ, ಲೂಟಿ, ಲೈಂಗಿಕ ಹಗರಣಗಳಲ್ಲಿ ಹೆಣ್ಣು ಮಕ್ಕಳನ್ನು ಶೋಷಿಸಿದವರು ಸ್ವಾಭಿಮಾನಿ ಸಿದ್ದರಾಮಯ್ಯ ವಿರುದ್ಧ ಪಾದಯಾತ್ರೆ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು.


2024ರ ಚುನಾವಣೆಯಲ್ಲಿ ಜಾತಿವಾದಿ, ಕೋಮುವಾದಿ ಮತಗಳು ಕ್ರೋಢೀಕರಣವಾದ್ದರಿಂದ ಸ್ವಲ್ಪ ವ್ಯತ್ಯಾಸವಾಗಿ ಕೇಂದ್ರದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಿದೆ. ಇಲ್ಲದಿದ್ದರೆ ಅಯೋಧ್ಯೆ ರಾಮಮಂದಿರದಲ್ಲಿ ಜಪ ಮಾಡಬೇಕಿತ್ತು ಎಂದರು.

ಚಿಂತಕ ಬಂಜಗೆರೆ ಜಯಪ್ರಕಾಶ್ ಮಾತನಾಡಿ, ಕೋಮುವಾದ, ಜಾತಿವಾದದ ವಿರುದ್ಧ ಸದಾ ಧ್ವನಿ ಎತ್ತಿ ಹೋರಾಟ ನಡೆಸುತ್ತಿರುವ ಸಿದ್ದರಾಮಯ್ಯ ಅವರಿಗೆ ಮಸಿ ಬಳಿಯಲು ಕೇಂದ್ರದ ಬಿಜೆಪಿ ಸರ್ಕಾರ ಹೊರಟಿದೆ. ನರೇಂದ್ರ ಮೋದಿ, ಅಮಿತ್ ಶಾ ಅವರುಗಳು ರಾಜ್ಯಪಾಲರನ್ನು ಕೈಗೊಂಬೆ ಮಾಡಿಕೊಂಡು ಸರ್ಕಾರವನ್ನು ಅಸ್ಥಿರಗೊಳಿಸುವ ಪ್ರಯತ್ನ ಮಾಡುತ್ತಿರುವ ಸಂದರ್ಭದಲ್ಲಿ ಜಾತಿವಾದ, ಮೌಢ್ಯ, ಕಂದಾಚಾರ, ವೈಚಾರಿಕತೆ ವಿರೋಧಿಸುವ ನಾವುಗಳು ಜಾಣಮೌನದಿಂದಿರದೆ ಸತ್ಯದ ಪರ ನಿಲ್ಲುವ ಅಗತ್ಯವಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಾಹಿತಿ ಪ್ರೊ.ಎಸ್.ಜಿ.ಸಿದ್ದರಾಮಯ್ಯ ಮಾತನಾಡಿ, ಕೋಮುವಾದದ ವಿರುದ್ಧವಾಗಿ ಸೆಟೆದು ನಿಂತು ಮಾತನಾಡುವ ಜನರಲ್ಲಿ ಸಿದ್ಧರಾಮಯ್ಯ ಕೂಡ ಒಬ್ಬರು. ತತ್ವ, ನಿಷ್ಠೆ ಪ್ರಜಾಪ್ರಭುತ್ವದ ರಕ್ಷಣೆಗೆ ಅವರು ಹೋರಾಟ ಮಾಡುತ್ತಿದ್ದಾರೆ. ಅವರಿಗೆ ನಮ್ಮ ನೈತಿಕ ಬೆಂಬಲವಿದೆ. ಸಿದ್ಧರಾಮಯ್ಯ ವ್ಯಕ್ತಿಯಾಗಲ್ಲ, ತತ್ವವಾಗಿ ನಾವು ಬೆಂಬಲಿಸುತ್ತಿರುವುದು. ತತ್ವ ಶುದ್ಧರಾಜಕಾರಣ ಆದಾಗ ಮಾತ್ರ ಪ್ರಜಾಪ್ರಭುತ್ವ ಉಳಿಯಲು ಸಾಧ್ಯ ಎಂದರು.

ಕಾರ್ಯಕ್ರಮದಲ್ಲಿ ಸಾಹಿತಿ ಕೆಷರೀಫಾ, ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ವಿಶ್ರಾಂತ ಕುಲಪತಿ ಜಾಫೆಟ್ ವಿಷಯ ಮಂಡಿಸಿದರು. ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆಯ ರಾಜ್ಯಾಧ್ಯಕ್ಷ ಕೆ.ಎಸ್.ಶಿವರಾಮ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರದೇಶ ಕುರುಬರ ಸಂಘದ ಮಾಜಿ ಅಧ್ಯಕ್ಷ ಸುಬ್ರಹ್ಮಣ್ಯ, ಚುಂಚನಹಳ್ಳಿ ಮಲ್ಲೇಶ್, ಯೋಗೇಶ್ ಉಪ್ಪಾರ್, ಕಲೀಂ ಇನ್ನಿತರರು ಉಪಸ್ಥಿತರಿದ್ದರು.

ಕಡಕೊಳ ಉಪ ಪೊಲೀಸ್ ಠಾಣೆ ಮೇಲ್ದರ್ಜೆಗೇರಿಸಲು ಕನ್ನಡಪರ ಹೋರಾಟಗಾರರ ಆಗ್ರಹ



ಮೈಸೂರು ತಾಲೂಕಿನ ಕಡಕೊಳ ಗ್ರಾಮದಲ್ಲಿರುವ ಉಪ ಪೊಲೀಸ್ ಠಾಣೆ

ಮೈಸೂರು,ಆ.8–ಮೈಸೂರು ತಾಲೂಕಿನ ಕಡಕೊಳ ಗ್ರಾಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪ ಪೊಲೀಸ್ ಠಾಣೆ (ಓ.ಪಿ) ಯನ್ನು ಮೇಲ್ದರ್ಜೆಗೇರಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳನ್ನು ಕನ್ನಡ ಪರ ಹೋರಾಟಗಾರ ಹಾಗೂ ದಿ ಯೂನಿಯನ್ ರೈತ ಸಹಕಾರ ಬ್ಯಾಂಕ್ ಉಪಾಧ್ಯಕ್ಷ ಕಡಕೊಳ ಕುಮಾರಸ್ವಾಮಿ ಆಗ್ರಹಿಸಿದ್ದಾರೆ.

ಮೈಸೂರು ತಾಲೂಕಿನ ಪ್ರಮುಖ ಗ್ರಾಮಗಳಲ್ಲಿ ಕಡಕೊಳ ಒಂದಾಗಿದ್ದು, ಸುತ್ತಮುತ್ತಲಿನ ಹಲವಾರು ಹಳ್ಳಿಗಳ ಕೇಂದ್ರ ಸ್ಥಾನ. ಜೊತೆಗೆ ಪಟ್ಟಣ ಪಂಚಾಯಿತಿಯ ಕೇಂದ್ರ ಸ್ಥಾನವೂ ಆಗಿದೆ. ಗ್ರಾಮದಲ್ಲಿ ರಾಷ್ಟ್ರೀಯ ಹೆದ್ದಾರಿ 766 ಹಾದು ಹೋಗಿದ್ದು ಅಂತರರಾಜ್ಯಗಳಿಗೆ ಸಂಪರ್ಕ ಕಲ್ಪಿಸುವ ಪ್ರಮುಖ ಕೇಂದ್ರ ಸ್ಥಾನವೂ ಆಗಿದೆ. ಗ್ರಾಮದಲ್ಲಿ ರಾಷ್ಟ್ರೀಕೃತ ಬ್ಯಾಂಕ್‌ಗಳು ಪೋಸ್ಟ್ ಆಫೀಸ್, ಪ್ರೌಢಶಾಲೆಗಳು ಪ್ರಮುಖವಾಗಿ ಪ್ರಾಥಮಿಕ ಆರೋಗ್ಯ ಕೇಂದ್ರದ ಜೊತೆಗೆ ಹಲವಾರು ಸರ್ಕಾರಿ ಕಚೇರಿಗಳೇ. ಏಷ್ಯಾದ ಎರಡನೇ ಅತೀ ದೊಡ್ಡ ಕೈಗಾರಿಕಾ ಪ್ರದೇಶಕ್ಕೆ ಮುಖ್ಯ ದ್ವಾರವಾಗಿದ್ದು, ಕಡಕೊಳ ಕೈಗಾರಿಕಾ ಪ್ರದೇಶದಲ್ಲಿ ಹಲವಾರು ಕೈಗಾರಿಕೆಗಳು ಕಾರ್ಯನಿರ್ವಹಿಸುತ್ತಿವೆ. ಇಲ್ಲಿನ ಕೈಗಾರಿಕೆಗಳಲ್ಲಿ ಸಾವಿರಾರು ಜನ ಉದ್ಯೋಗ ಮಾಡುತ್ತಿದ್ದು, ಅದರಲ್ಲಿ ಮಹಿಳೆಯರೇ ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ.

ಗ್ರಾಮದಲ್ಲಿ ಈಗಾಗಲೇ ಹಲವಾರು ವರ್ಷಗಳಿಂದ ಉಪ ಪೊಲೀಸ್ ಠಾಣೆ ಇದ್ದು, ಆದರೆ ಸದರಿ ಪೊಲೀಸ್ ಠಾಣೆಯಲ್ಲಿ ದೂರನ್ನು ದಾಖಲಿಸಿ ಪರಿಣಾಮಕಾರಿ ಕಾನೂನುಕ್ರಮ ಸಾಧ್ಯವಿಲ್ಲದ ಕಾರಣ ಮೈಸೂರಿನ ಗ್ರಾಮಾಂತರ ಪೊಲೀಸ್ ಠಾಣೆಗೆ ತೆರಳಬೇಕಾಗಿದೆ. ಹಾಗಾಗಿ ಕಡಕೊಳ ಉಪ ಪೊಲೀಸ್ ಠಾಣೆಯನ್ನು ಮೇಲ್ದರ್ಜೆಗೇರಿಸಿದರೆ ಸ್ಥಳೀಕರಿಗೆ ಅನುಕೂಲವಾಗಲಿದೆ. ಕಾನೂನು ಸುವ್ಯವಸ್ಥೆ ದೃಷ್ಟಿಯಿಂದ ಕೂಡಲೇ ಪೊಲೀಸ್ ವರಿಷ್ಠಾಧಿಕಾರಿಗಳು ಈ ಠಾಣೆ ಮೇಲ್ದರ್ಜೆಗೇರಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಅವರು ಮನವಿ ಮಾಡಿದ್ದಾರೆ.

ಭ್ರಷ್ಟಾಚಾರಿಗಳಾದ ನಿಮಗೆ ಪಾದಯಾತ್ರೆ ನಡೆಸುವ ಅರ್ಹತೆ ಇದೆಯೇ

ಬಿಜೆಪಿ-ಜೆಡಿಎಸ್‌ಗೆ ಮಾಜಿ ಮೇಯರ್ ಪುರುಷೋತ್ತಮ್ ಪ್ರಶ್ನೆ



ಮೈಸೂರು, ಆ.8(ಜಿಎ)–ಮುಡಾ ಹಗರಣ, ವಾಲ್ಮೀಕಿ ಹಗರಣ ನೆಪವಾಗಿರಿಸಿಕೊಂಡು ಪಾದಯಾತ್ರೆ ಕೈಗೊಂಡಿರುವ ಬಿಜೆಪಿ–ಜೆಡಿಎಸ್ ಮುಖಂಡರು ಮೊದಲು ಏಕೆ ಪಾದಯಾತ್ರೆ ಕೈಗೊಂಡಿದ್ದಾರೆ. ನಿಜಕ್ಕೂ ಭ್ರಷ್ಟಾಚಾರಿಗಳಾದ ತಮಗೆ ಅದನ್ನು ಕೈಗೊಳ್ಳುವ ಅರ್ಹತೆ ಇದೆಯೇ ಎಂದು ತಮ್ಮನ್ನು ತಾವು ಪ್ರಶ್ನಿಸಿಕೊಳ್ಳಲಿ ಎಂದು ಮಾಜಿ ಮೇಯರ್ ಪುರುಷೋತ್ತಮ್ ಕಿಡಿಕಾರಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗ ಪಾದಯಾತ್ರೆ ಕೈಗೊಂಡಿರುವವರು ಆಡಳಿತದಲ್ಲಿದ್ದ ವೇಳೆ ಇಡೀ ದೇಶ ತಲೆ ತಗ್ಗಿಸುವ ಘಟನೆಗಳು ನಡೆದಿವೆ ಎಂದರು. ಸಿದ್ದರಾಮಯ್ಯ ಅವರು ಅಧಿಕಾರದಲ್ಲಿ ಇರುವಾಗಲೆಲ್ಲ ಶೋಷಿತರೂ ಸೇರಿದಂತೆ ಸುಮಾರು ಶೇ.80ರಷ್ಟು ಜನತೆಯನ್ನು ರಕ್ಷಿಸುವ ಕೆಲಸ ಮಾಡಿದ್ದಾರೆ. ಬಡಜನರಿಗೆ ಯಾವ ಯಾವ ಕಾರ್ಯಕ್ರಮ ಇದ್ದರೆ ಅನುಕೂಲ ಎಂಬುದನ್ನು ಅರಿತು ಜಾರಿಗೊಳಿಸಿದ್ದಾರೆ ಎಂದರು.

ಹೀಗಾಗಿ ಇವರು ನಗರದಲ್ಲಿ ಇದೇ ಆ.9ರಂದು ಹಮ್ಮಿಕೊಂಡಿರುವ ಜನಾಂದೋಲನ ಸಮಾವೇಶದಲ್ಲಿ ಅಶೋಕಪುರಂನಿಂದ ಸಾವಿರಾರು ಜನರು ಪಾಲ್ಗೊಳ್ಳಲಿದ್ದಾರೆ. ಈ ಸಮಾವೇಶಕ್ಕೆ ಬಹುತೇಕ ಎಲ್ಲಾ ದಲಿತರ ಸಂಘಟನೆಗಳ ಬೆಂಬಲವಿದೆ. ರಾಜ್ಯದಲ್ಲಿ ಬಿಜೆಪಿ ಆಡಳಿತದಲ್ಲಿದ್ದ ಅವಧಿಯಲ್ಲಿ ಎಷ್ಟು ಭ್ರಷ್ಟಾಚಾರ ಇತ್ತು, ಎಷ್ಟು ಲೈಂಗಿಕ ಹಗರಣ ನಡೆಸಿದರು. ಲೈಂಗಿಕ ದೌರ್ಜನ್ಯ ಎಷ್ಟಿತ್ತು ಇದೇ ವೇಳೆ ಸಿದ್ದರಾಮಯ್ಯ ಅವರು ಅಧಿಕಾರಕ್ಕೆ ಬಂದ ಮೇಲೆ ಪರಿಸ್ಥಿತಿ ಹೇಗಿದೆ ಎಂಬ ಬಗ್ಗೆ ಜನತೆ ಚಿಂತಿಸಬೇಕಿದೆ ಎಂದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಪ್ರಶ್ನಿಸುವ ನೈತಿಕತೆ ಈಗ ಪಾದಯಾತ್ರೆ ಕೈಗೊಂಡಿರುವವರಿಗೆ ಇಲ್ಲ ಎಂದು ಪುರುಷೋತ್ತಮ್ ಆಕ್ರೋಶ ವ್ಯಕ್ತಪಡಿಸಿದರು. ಸುದ್ದಿಗೋಷ್ಠಿಯಲ್ಲಿ ಭುವನೇಶ್ವರಿ, ಮಹೇಶ್, ಶ್ರೀಧರ್, ನಟರಾಜ್, ಮಂಜು ಉಪಸ್ಥಿತರಿದ್ದರು.

ಬಿಜೆಪಿ ಮಹಿಳಾ ಮೋರ್ಚಾದಿಂದ ಕೈಮಗ್ಗ ದಿನಾಚರಣೆ



ಮೈಸೂರಿನ ಮೇಟಗಳ್ಳಿಯ ಗಣಪತಿ ವೀವಿಂಗ್ ಕೈಮಗ್ಗ ಫ್ಯಾಕ್ಟರಿ ಆವರಣದಲ್ಲಿ ಬಿಜೆಪಿ ಚಾಮುಂಡೇಶ್ವರಿ ಗ್ರಾಮಾಂತರ ಮಹಿಳಾ ಮೋರ್ಚಾ ವತಿಯಿಂದ ಕೈಮಗ್ಗ ದಿನಾಚರಣೆ ಅಂಗವಾಗಿ ಹಿರಿಯ ಕೈಮಗ್ಗ ನೇಕಾರರನ್ನು ಸನ್ಮಾನಿಸಲಾಯಿತು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚಂದ್ರಕಲಾ, ಚಾಮುಂಡೇಶ್ವರಿ ಮಹಿಳಾ ಮೋರ್ಚಾ ಅಧ್ಯಕ್ಷೆ ಸವಿತಾ ಗೌಡ, ಪ್ರಧಾನ ಕಾರ್ಯದರ್ಶಿ ಯಮುನಾ ಕೃಷ್ಣಮೂರ್ತಿ, ಉಪಾಧ್ಯಕ್ಷರಾದ ಕೃಷ್ಣವೇಣಿ, ಗೀತಾ ಪ್ರಮೋದ್, ಪದಾಧಿಕಾರಿಗಳಾದ ರೇಖಾ ಶಂಕರ್, ಶಾಲಿನಿ, ನಂದಿನಿ, ಮಾಯ, ನಾಗಮಣಿ ಇತರರಿದ್ದರು.

'ಲೀಲಾ ಮೋಹನ ಪ್ರೇಮಕಥೆ' ಚಲನಚಿತ್ರ ನಿರ್ಮಾಣ ಆರಂಭ

ಮೈಸೂರು, ಆ.8(ಜಿಎ)–ಸಿದ್ದಲಿಂಗೇಶ್ವರ ಪ್ರೊಡಕ್ಷನ್ ಅಡಿಯಲ್ಲಿ 'ಲೀಲಾ ಮೋಹನ ಪ್ರೇಮಕಥೆ' ಎಂಬ ಚಲನಚಿತ್ರ ನಿರ್ಮಾಣ ಆರಂಭವಾಗಿದ್ದು, ಮೂರು ತಿಂಗಳಲ್ಲಿ ಪೂರ್ಣಗೊಂಡು ತೆರೆ ಕಾಣಲಿದೆ ಎಂದು ನಿರ್ಮಾಪಕ ದಾಸ್ ಮೋಹನ್ ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ಇದೊಂದು ಸತ್ಯಕಥೆ ಆಧಾರಿತ ಚಲನಚಿತ್ರವಾಗಿದ್ದು, ಚಿತ್ರದಲ್ಲಿ ದ್ವಂದ್ವಾರ್ಥದ ಸಂಭಾಷಣೆಗಳಿಲ್ಲ. ಐದು ಹಾಡು, 4 ಸಾಹಸ ದೃಶ್ಯಗಳಿವೆ. ಕಲಾವಿದರಾದ ಪ್ರತೀಕ್, ಜೀವಿತಾ, ಅಮಿತಾ, ಅಭಿಷೇಕ್, ಕಾಮರಾಜ್, ಸಾರಿಕಾ, ಭೂಮಿಕಾ, ರಾಣಿ ಮತ್ತೀತರರ ತಾರಾ ಬಳಗವಿದೆ ಎಂದರು.

ನಾಯಿ ಬಾಯಲ್ಲಿ ಲಿಥಿಯಂ–ಐಯಾನ್ ಬ್ಯಾಟರಿ; ಇಡೀ ಮನೆಗೆ ಬೆಂಕಿ

ಟಲ್ಸಾ (ಓಕ್ಲಾ– ಅಮೆರಿಕ): ಮನೆ ಒಳಗೆ ನಾಯಿ ಲಿಥಿಯಂ–ಐಯಾನ್ ಬ್ಯಾಟರಿಯನ್ನು ಜಗಿದಿದೆ. ಅದು ಸ್ಫೋಟಗೊಂಡು ಮನೆಗೆ ಬೆಂಕಿ ಹತ್ತಿದೆ. ಘಟನೆ ಅಮೆರಿಕದ ಓಕ್ಲಾದಲ್ಲಿ ನಡೆದಿದೆ. ವಿಡಿಯೋವನ್ನು ಟಲ್ಸಾ ಅಗ್ನಿಶಾಮಕ ದಳ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದೆ. ನಾಯಿ ಮತು ಬೆಕ್ಕು ಮನೆಯ ಲಿವಿಂಗ್ ರೂಮ್‌ನಲ್ಲಿ ಚೆಲ್ಲಾಟವಾಡುತ್ತಿದ್ದಾಗ, ಮತ್ತೊಂದು ನಾಯಿ ತನ್ನ ಬಾಯಿಯಲ್ಲಿ ಲಿಥಿಯಂ–ಐಯಾನ್ ಬ್ಯಾಟರಿಯನ್ನು ಚಾರ್ಜರ್ ಸಮೇತ ಕಚ್ಚಿಕೊಂಡು ಬಂದು ನೆಲದ ಮೇಲೆ ಹಾಸಿದ್ದ ಸಣ್ಣ ಬೆಡ್ ಮೇಲೆ ಹಾಕಿ ಕಚ್ಚಲು ಶುರು ಮಾಡಿದೆ. ಹೀಗೆ ಜಗಿಯುವಾಗ ಮೊದಲು ಅದರಲ್ಲಿ ಸಣ್ಣ ಸ್ಪಾರ್ಕ್ ಬಂದಿದೆ. ತಕ್ಷಣ ಆ ಬ್ಯಾಟರಿಯನ್ನು ಬಾಯಿಯಿಂದ ಬಿಟ್ಟ ನಾಯಿ ಹಿಂದಕ್ಕೆ ಸರಿದಿದೆ. ಕ್ಷಣ ಮಾತ್ರದಲ್ಲಿ ಬ್ಯಾಟರಿ ಸ್ಫೋಟಿಸಿದೆ. ಅಲ್ಲಿದ್ದ ನಾಯಿಗಳು, ಬೆಕ್ಕು ಓಡಿ ಹೋಗಿ ಪಾರಾಗಿವೆ. ಆದರೆ ಮನೆಗೆ ಭಾರಿ ಹಾನಿಯಾಗಿದೆ.

ಟ್ರೋಫಿ ವಿತರಣೆ



ಮೈಸೂರು ರೇಸ್ ಕ್ಲಬ್‌ನಲ್ಲಿ ನಡೆಯುತ್ತಿರುವ ಮೈಸೂರು ಸಮ್ಮರ್ ರೇಸ್‌ನಲ್ಲಿ ದಿ ಎಸ್.ವಿ. ಸುಬ್ರಮಣಿಯಮ್ ಮೆಮೋರಿಯಲ್ ಟ್ರೋಫಿಯನ್ನು ಮಾಲೀಕ ದೀಪಕ್‌ಕುಮಾರ್ ಅವರಿಗೆ ಮೈಸೂರು ರೇಸ್ ಕ್ಲಬ್ ಅಧ್ಯಕ್ಷ ಕೆ.ಎಂ.ಚಂದ್ರೇಗೌಡ ಪ್ರದಾನ ಮಾಡಿದರು. ಈ ವೇಳೆ ಜಾಕಿ ಜಿ. ವಿವೇಕ್, ಟ್ರೈನರ್ ಜೆ.ಎಸ್.ಪಿಳ್ಳೆ ಇನ್ನಿತರರಿದ್ದರು.

ಉಚಿತ ಆರೋಗ್ಯ ತಪಾಸಣಾ ಶಿಬಿರ



ಮೈಸೂರು, ಆ. 8–ಎನ್‌ಜೆಎಸ್ ಚಾರಿಟಬಲ್ ಟ್ರಸ್ಟ್ ಮತ್ತು ಮೈಸೂರು ವೀರಶೈವ ಸಜ್ಜನ ಸಂಘದ ಸಂಯುಕ್ತಾಶ್ರಯದಲ್ಲಿ ಆ.13ರಂದು ಬೆಳಗ್ಗೆ 9.30ರಿಂದ ಮಧ್ಯಾಹ್ನ 2 ರವರೆಗೆ ಮಂಡಿ ಪೊಲೀಸ್ ಸ್ಟೇಷನ್ ಹತ್ತಿರವಿರುವ ಕಂಠಿ ಮಲ್ಲಣ್ಣನವರ ಕಲ್ಯಾಣ ಮಂದಿರದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ. 94487 53597, 99161 55453, 04487 38657 ಸಂಪರ್ಕಿಸಬಹುದು.

ಯುವತಿಯರಿಗೆ ಉಚಿತ ಕಂಪ್ಯೂಟರ್ ತರಬೇತಿ



ಮೈಸೂರು,ಆ.8–ಸಮರ್ಥನಂ ಅಂಗವಿಕಲರ ಸಂಸ್ಥೆ ವತಿಯಿಂದ ಬಡ ವಿದ್ಯಾವಂತ ನಿರುದ್ಯೋಗಿ ಯುವತಿಯರಿಗೆ ಉಚಿತ ಕಂಪ್ಯೂಟರ್ ತರಬೇತಿ ಮತ್ತು ಉದ್ಯೋಗ ವಿಕಸನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ತರಬೇತಿಯ ಅವಧಿ 3 ತಿಂಗಳು ಇರುತ್ತದೆ. ತರಬೇತಿಯು ಬೆಳಗ್ಗೆ 10 ಗಂಟೆಯಿಂದ ಸಂಜೆ 4ರವರೆಗೆ ತರಗತಿ ನಡೆಯಲಿದ್ದು, ತರಗತಿಯಲ್ಲಿ ಬಿಪಿಓ, ಕಂಪ್ಯೂಟರ್ ಕೌಶಲ, ಕಮ್ಯುನಿಕೇಶನ್ ಕೌಶಲ ಉಚಿತ ತರಬೇತಿ ನೀಡಲಾಗುವುದು. ಕನಿಷ್ಠ ಎಸ್.ಎಸ್.ಎಲ್.ಸಿ ಉತ್ತೀರ್ಣ ಆಗಿರಬೇಕು, ವಯಸ್ಸು: 18ರಿಂದ 35 ವರ್ಷ ಒಳಗಿರಬೇಕು, ಆರ್ಥಿಕವಾಗಿ ಹಿಂದುಳಿದ ವಿದ್ಯಾವಂತ ಬಡ ಯುವತಿಯರು ತರಬೇತಿಗೆ ಅರ್ಹತೆ ಹೊಂದಿರುತ್ತಾರೆ. ಹೆಚ್ಚಿನ ಮಾಹಿತಿಗೆ 6364867818 ಸಂಪರ್ಕಿಸಬಹುದು ಎಂದು ಸಂಸ್ಥೆಯ ಮೈಸೂರು ವಿಭಾಗೀಯ ಮುಖ್ಯಸ್ಥ ಶಿವರಾಜು ತಿಳಿಸಿದ್ದಾರೆ.

'ಅಂತರಂಗದ ಅಲೆಗಳು' ಕವನ ಸಂಗ್ರಹ ಲೋಕಾರ್ಪಣೆ

ಮನುಷ್ಯನ ನೋವಿನ ನಿವಾರಣೆಗೆ ಸಾಹಿತ್ಯ ಮುಖ್ಯ



ಮೈಸೂರಿನ ವಿಜಯನಗರದಲ್ಲಿರುವ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಗುರುವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಶ್ರೀಮತಿ ಸರೋಜ ರಾವ್ ಅವರ 'ಅಂತರಂಗದ ಅಲೆಗಳು' (ಕವನ ಸಂಗ್ರಹ) ಕೃತಿಯನ್ನು ಲೋಕಾರ್ಪಣೆಗೊಳಿಸಲಾಯಿತು. ಚಿತ್ರದಲ್ಲಿ ಡಾ.ಬಿ.ವಿ.ವಸಂತಕುಮಾರ್, ಮಡ್ಡೀಕೆರೆ ಗೋಪಾಲ್ ಇನ್ನಿತರರಿದ್ದಾರೆ.

ಮೈಸೂರು, ಆ.8(ಜಿಎ)–ಪ್ರತಿಯೊಂದು ಕೃತಿಯು ಮನಸ್ಸಿಗೆ ಔಷಧಿ ನೀಡಲಿದ್ದು, ಚಂಚಲ ಮನಸ್ಸುಗಳ ಪರಿವರ್ತನೆ ಮಾಡುತ್ತದೆ. ನೀವು ಪುಸ್ತಕವನ್ನು ಓದುವುದರಲ್ಲಿ ತಲ್ಲೀನರಾದರೆ ಮಾತ್ರ ಇದು ಸಾಧ್ಯವಾಗುತ್ತದೆ ಎಂದು ಮಹಾರಾಣಿ ಕಾಲೇಜಿನ ಪ್ರಾಂಶುಪಾಲ ಡಾ.ಬಿ.ವಿ. ವಸಂತಕುಮಾರ್ ಅಭಿಪ್ರಾಯಪಟ್ಟರು.

ಮೈಸೂರಿನ ವಿಜಯನಗರದಲ್ಲಿರುವ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಗುರುವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಶ್ರೀಮತಿ ಸರೋಜ ರಾವ್ ಅವರ 'ಅಂತರಂಗದ ಅಲೆಗಳು' (ಕವನ ಸಂಗ್ರಹ) ಕೃತಿಯನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಮನುಷ್ಯನ ನೋವಿನ ನಿವಾರಣೆಗೆ ಸಾಹಿತ್ಯ ಮುಖ್ಯವಾಗಿದ್ದು, ಕ್ರೌರ್ಯವನ್ನು ತಡೆಯುವ ಅಸ್ತ್ರವಾಗಿದೆ. ಇದನ್ನು ಓದಿ ಅನುಭವಿಸುವುದರ ಮೂಲಕ ಭಾವಿಸಬೇಕಿದೆ. ಈ ಸಂಕಟಗಳನ್ನು ಅನುಭವಿಸುವ ತಲ್ಲಣಗಳನ್ನು ದಾಖಲಿಸಲು ಕಾವ್ಯ ಹುಟ್ಟಿಕೊಳ್ಳುತ್ತದೆ. ಸರೋಜ ರಾವ್ ಅವರು ಸಹ ಹೆರಿಗೆ ಸಂದರ್ಭದಿಂದ ಎಲ್ಲಾ ರೀತಿಯ ದುಃಖ, ಖಿನ್ನತೆಯನ್ನು ಸವಿಸ್ತಾರವಾಗಿ ಬರೆದಿದ್ದಾರೆ ಎಂದರು.

ರಾಜಕಾರಣಿಗಳಿಗಿಂತ ಹೆಚ್ಚಿನ ಜವಾಬ್ದಾರಿ ಸಾಹಿತಿಗಳಿಗೆ ಇರುತ್ತದೆ. ಪ್ರಸ್ತುತ ದಿನದಲ್ಲಿ ಪ್ರಕೃತಿಯ ಮಡಿಲನ್ನು ಬಳಸಿಕೊಂಡು ನಿರ್ಲಕ್ಷ್ಯ ಮಾಡಿಕೊಂಡು ಎಲ್ಲಾ ವಿಷಯದಲ್ಲಿಯೂ ಯೂಸ್ ಅಂಡ್ ಥ್ರೋ ರೀತಿ ನಡೆಯುತ್ತಿದೆ.ಇಂತಹ ಸಂದರ್ಭದಲ್ಲಿ ಸಾಹಿತಿಗಳು ತಮ್ಮ ಜವಾಬ್ದಾರಿಯನ್ನು ನಿಭಾಯಿಸಬೇಕಿದೆ ಎಂದು ಅಭಿಪ್ರಾಯಪಟ್ಟರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಮಾತನಾಡಿ, ಸರೋಜರಾವ್ ಅವರು ತಮ್ಮ ಕೃತಿ ಮೂಲಕ ಮುಂದಿನ ಪೀಳಿಗೆಗೆ ಉತ್ತಮವಾದ ಸಂದೇಶ ನೀಡುವಂತಹ ಕೆಲಸ ಆಗಿದೆ. ಎಲ್ಲರೂ ಅಕ್ಷರವನ್ನು ಪೋಣಿಸುವ ಕೆಲಸವನ್ನು ರೂಢಿಸಿಕೊಂಡರೇ ಉತ್ತಮ ಸಾಹಿತಿಗಳಾಗಬಹುದು ಎಂದರು

ಕಾರ್ಯಕ್ರಮದಲ್ಲಿ ಶಾರದಾ ವಿಲಾಸ ಕಾಲೇಜಿನ ವಾಣಿಜ್ಯ ವಿಭಾಗದ ಡೀನ್ ಪ್ರೊ.ಸತ್ಯನಾರಾಯಣ, ಸಹಾಯಕ ಪ್ರಾಧ್ಯಾಪಕ ಡಾ.ಜಿ.ಆನಂದ, ಕವಯಿತ್ರಿ ಶ್ರೀಮತಿ ಸರೋಜರಾವ್, ಕಸಾಪ ಕಾರ್ಯದರ್ಶಿ ಲತಾಮೋಹನ್, ಕೋಶಾಧ್ಯಕ್ಷ ಜಿ.ಪ್ರಕಾಶ್, ಜಂಟಿ ಕಾರ್ಯದರ್ಶಿ ಕೆಂಪಣ್ಣ, ಶಾರದಾ ವಿಲಾಸ್ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಡಾ.ಜಿ.ಆನಂದ್, ಸಂಘಟನಾ ಕಾರ್ಯದರ್ಶಿ ಮೈನಾ ಲೋಕೇಶ್, ಗಾಯಕರಾದ ಡಾ.ಆರ್.ನಿಂಗರಾಜು, ಡಾ.ಐ.ಡಿ. ಲೋಕೇಶ್, ಮಂಜುಳಾ, ಹಾಗೂ ಕನ್ನಡಪರ ಹೋರಾಟಗಾರ ಮೂಗೂರು ನಂಜುಂಡಸ್ವಾಮಿ ಉಪಸ್ಥಿತರಿದ್ದರು.

ಅಧಿಕಾರ ಸಿಕ್ಕಿಲ್ಲವೆಂದು ಬಿಜೆಪಿ ಜೆಡಿಎಸ್‌ನಿಂದ ಸುಳ್ಳು ಆರೋಪ

ಮೈಸೂರು, ಆ.8(ಜಿಎ)–ರಾಜ್ಯದಲ್ಲಿ ತಮಗೆ ಅಧಿಕಾರ ಸಿಕ್ಕಿಲ್ಲ ಎಂಬ ಹತಾಶೆಯಿಂದ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಈಗ ಸಿಎಂ ಸಿದ್ದರಾಮಯ್ಯ ಅವರ ವಿರುದ್ಧ ಮುಡಾಕ್ಕೆ ಸಂಬಂಧಿಸಿದಂತೆ ಸುಳ್ಳು ಆರೋಪ ಮುಂದಿಟ್ಟುಕೊಂಡು ಪಾದಯಾತ್ರೆ ನಡೆಸುತ್ತಿವೆ ಎಂದು ವಕೀಲ ಜೆ.ಎನ್.ಲಕ್ಷ್ಮಣ್ ಕಿಡಿಕಾರಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸೇರಿದಂತೆ ದೇಶದ ಜನತೆ ಸದ್ಯದಲ್ಲಿ ಸಂಕಷ್ಟದ ಪರಿಸ್ಥಿತಿ ಎದುರಿಸುತ್ತಿದ್ದಾರೆ. ಹೀಗಿರುವಾಗ ದ್ವೇಷದ ಕಾರಣದಿಂದ ಈಗ ಸರ್ಕಾರದ ವಿರುದ್ಧ ಮುಗಿಬಿದ್ದಿರುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು. ಸಾಮಾಜಿಕ ಕಾರ್ಯಕರ್ತರಾದ ಅಬ್ರಹಾಂ ನೀಡಿದ ಮಾಹಿತಿಯನ್ನು ರಾಜ್ಯಪಾಲರು ಪರಿಶೀಲಿಸಬೇಕಾಗಿತ್ತು. ರಾಜ್ಯದಲ್ಲಿ ಇತರೆಡೆಯೂ ನಗರಾಭಿವೃದ್ಧಿ ಪ್ರಾಧಿಕಾರಗಳಿವೆ. ಆದರೂ ಮೈಸೂರು ಮುಡಾದ ಮೇಲೆಯೇ ಅಬ್ರಹಾಂ ಕಣ್ಣು ಬೀಳಲು ಕಾರಣವೇನು ಎಂದು ಪ್ರಶ್ನಿಸಿದ ಅವರು, ಕೊರೊನಾ ಅವಧಿಯಲ್ಲಿ ಎಲ್ಲಾ ಇಲಾಖೆಗಳಲ್ಲಿ ನಡೆದಿರುವ ಅವ್ಯವಹಾರ, ಅಕ್ರಮಗಳ ಬಗ್ಗೆ ಯಾರೂ ಏಕೆ ಮಾತನಾಡುತ್ತಿಲ್ಲ. ಇದಕ್ಕೆ ಕಾರಣವೇನು ಎಂದರು.

ದೇಶ - ವಿದೇಶ

ಬಾಂಗ್ಲಾ ಹಿಂಸಾಚಾರ: ನಟ ಶಾಂತೊ ಖಾನ್, ನಿರ್ಮಾಪಕ ಸಲೀಮ್ ಖಾನ್‌ರನ್ನು ನಡು ರಸ್ತೆಯಲ್ಲಿ ಹೊಡೆದು ಕೊಂದ ಜನ



ಶಾಂತೊ ಖಾನ್

ಢಾಕಾ: ಬಾಂಗ್ಲಾದೇಶದಲ್ಲಿ ಮೀಸಲಾತಿ ವಿರೋಧಿ ಹೋರಾಟ ಹಿಂಸಾಚಾರಕ್ಕೆ ತಿರುಗಿದೆ. ಈವರೆಗೆ ಸುಮಾರು 300ಕ್ಕೂ ಹೆಚ್ಚು ಜನರ ಜೀವ ಹೋಗಿದೆ. ನಟ ಶಾಂತೊ ಖಾನ್ ಹಾಗೂ ಅವರ ತಂದೆ, ನಿರ್ಮಾಪಕ ಸಲೀಮ್ ಖಾನ್ ಅವರನ್ನು ನಡು ರಸ್ತೆಯಲ್ಲಿ ಹೊಡೆದು ಕೊಂದು ಹಾಕಿದ್ದಾರೆ. ಪೊಲೀಸರಿಗೆ ವಿಷಯ ತಿಳಿದರೂ ಕಾಪಾಡಲು ಆಗಲಿಲ್ಲ ಎಂದು ಹೇಳಿಕೆ ಬಿಡುಗಡೆ ಮಾಡಿದ್ದಾರೆ. ಬಾಲಿಯಾ ಯೂನಿಯನ್‌ನಲ್ಲಿರುವ ಫರಕ್ಕಾಬಾದ್ ಬಜಾರ್‌ಗೆ ಸಲಿಮ್ ಮತ್ತು ಶಾಂಟೊ ತಪ್ಪಿಸಿಕೊಳ್ಳಲು ಪ್ರಯತ್ನಿಸಿದರು. ಸ್ಥಳೀಯರು ಅವರನ್ನು ತಡೆಯಲು ಪ್ರಯತ್ನಿಸಿದಾಗ, ಅವರು ಗುಂಡು ಹಾರಿಸಿದರು. ಆದರೆ, ಸಮೀಪದ ಬಗರುಬಜಾರ್ ಪ್ರದೇಶವನ್ನು ತಲುಪಿದಾಗ ಆಕ್ರೋಶಗೊಂಡ ಗುಂಪು ಅವರನ್ನು ಕೊಂದುಹಾಕಿತು ಎಂದು ಹೇಳಲಾಗಿದೆ. ಶಾಂತೊ ಖಾನ್ ಜೊತೆ ಕೆಲಸ ಮಾಡಿದ್ದ ಬಂಗಾಳದ ನಟರು ಹತ್ಯೆಯ ಕಾರಣಗಳ ಬಗ್ಗೆ ಪ್ರತಿಕ್ರಿಯಿಸಲು ನಿರಾಕರಿಸಿದ್ದು ಅವು ಬೇರೆ ದೇಶದ ಆಂತರಿಕ ವಿಷಯ ಎಂದು ಹೇಳಿದ್ದಾರೆ.

ಅಕ್ರಮ ಸಂಬಂಧಕ್ಕೆ ಕಣ್ಣು ಹೋಯ್ತು; ಮರ್ಮಾಂಗವೂ ಕಟ್ ಆಯ್ತು



ಜೈಪುರ: ಮಹಿಳೆ ಜೊತೆ ಅಕ್ರಮ ಸಂಬಂಧ ಹೊಂದಿದ್ದ ಎರಡು ಮಕ್ಕಳ ತಂದೆ 44 ವರ್ಷದ ವ್ಯಕ್ತಿಯ ಬೆರಳುಗಳನ್ನು ಕತ್ತರಿಸಲಾಗಿದೆ. ನಂತರ ಮೂಳೆಯನ್ನು ಮುರಿದು, ಕಣ್ಣುಗಳನ್ನು ಕೀಳಲಾಗಿದೆ. ಇಷ್ಟಕ್ಕೆ ಸುಮ್ಮನಾಗದ ದುಷ್ಕರ್ಮಿಗಳು ವ್ಯಕ್ತಿಯ ಮರ್ಮಾಂಗವನ್ನು ಕಟ್ ಮಾಡುವ ಮೂಲಕ ವಿಕೃತಿ ಮೆರೆದಿದ್ದಾರೆ. ರಾಜಸ್ಥಾನದ ಬಾರ್‌ಮೇರ್ ಜಿಲ್ಲೆಯ ಗ್ರಾಮವೊಂದರಲ್ಲಿ ಈ ಘಟನೆ ನಡೆದಿದ್ದು, ಮಹಿಳೆಯ ಸಂಬಂಧಿಕರು ಅಕ್ರಮ ಸಂಬಂಧ ಹೊಂದಿದ್ದ ವ್ಯಕ್ತಿಯ ಕೊಲೆ ಮಾಡಿದ್ದಾರೆ. ಘಟನೆ ಸಂಬಂಧ ಪೊಲೀಸರು ನಾಲ್ವರನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ಗ್ರಾಮದ ವಿಧವೆಯೊಂದಿಗೆ ಆತ ಅಕ್ರಮ ಸಂಬಂಧ ಹೊಂದಿದ್ದು, ನಿನ್ನೆ ರಾತ್ರಿ ಮಹಿಳೆ ಭೇಟಿಯಾಗಲು ಬಂದಿದ್ದ. ಈ ವೇಳೆ ಕುಟುಂಬದ ನಾಲ್ವರು ಮನೆ ಬಾಗಿಲು ಮುರಿದು ಅವರಿಬ್ಬರಿದ್ದ ಕೋಣೆಗೆ ನುಗ್ಗಿದ್ದಾರೆ. ಆತನ ಬಾಯಿಗೆ ಬಟ್ಟೆ ತುರುಕಿ, ಆತನ ಕೈಯಲ್ಲಿನ ಎಲ್ಲಾ ಬೆರಳುಗಳನ್ನು ಕಟ್ ಮಾಡಿದ್ದಾರೆ. ಕಬ್ಬಿಣದ ರಾಡ್‌ನಿಂದ ಹಲ್ಲೆ ಮಾಡಿದ್ದರಿಂದ ಮೂಳೆಗಳು ಸಹ ಮುರಿದಿವೆ. ನಂತರ ಕಣ್ಣುಗಳನ್ನು ಕಿತ್ತು ಹಾಕಿ ಮರ್ಮಾಂಗವನ್ನು ಕತ್ತರಿಸಿದ್ದಾರೆ. ಇದರಿಂದ ಆತ ಸ್ಥಳದಲ್ಲಿಯೇ ಮೃತನಾಗಿದ್ದಾನೆ.

ಜಪಾನ್‌ನ ದಕ್ಷಿಣ ಕರಾವಳಿಯಲ್ಲಿ ಭೂಕಂಪ; ಸುನಾಮಿ ಭೀತಿ



ಟೋಕಿಯೊ: ಜಪಾನ್‌ನ ದಕ್ಷಿಣ ಕರಾವಳಿಯಲ್ಲಿ ಭೂಕಂಪ ಸಂಭವಿಸಿದ್ದು, ರಿಕ್ಟರ್ ಮಾಪಕದಲ್ಲಿ 7.1 ತೀವ್ರತೆ ದಾಖಲಾಗಿದೆ. ಕ್ಯುಶುವಿನ ಸಮುದ್ರದ ಬಳಿ ಸುನಾಮಿ ಸಾಧ್ಯತೆಯಿದ್ದು, ಮುನ್ನೆಚ್ಚರಿಕೆ ನೀಡಲಾಗಿದೆ. ಇಂದು 7.1 ತೀವ್ರತೆಯ ಭೂಕಂಪವು ಜಪಾನ್‌ನ ಮಿಯಾಜಾಕಿ ಬಳಿ ಸ್ಥಳೀಯ ಕಾಲಮಾನ ಸಂಜೆ 4:42ಕ್ಕೆ ಸಂಭವಿಸಿದೆ ಎಂದು ಯುನೈಟೆಡ್ ಸ್ಟೇಟ್ಸ್ ಜಿಯೋಲಾಜಿಕಲ್ ಸರ್ವೆ ವರದಿ ಮಾಡಿದೆ. ಇದಕ್ಕೂ ಮೊದಲು, ಜಪಾನ್ ಹವಾಮಾನ ಸಂಸ್ಥೆಯು ಕಂಪನವು 6.9ರ ತೀವ್ರತೆಯಲ್ಲಿ ದಾಖಲಾಗಿದೆ ಎಂದು ತಿಳಿಸಿತ್ತು.

ಜಪಾನ್‌ನ ದಕ್ಷಿಣ ಮುಖ್ಯ ದ್ವೀಪವಾದ ಕ್ಯುಶುವಿನ ಪೂರ್ವ ಕರಾವಳಿಯಲ್ಲಿ ಸುಮಾರು 30 ಕಿಮೀ (18.6 ಮೈಲುಗಳು) ಆಳದಲ್ಲಿ ಕೇಂದ್ರೀಕೃತವಾಗಿತ್ತು ಎಂದರು. ಇದು ಸುನಾಮಿ ಆತಂಕವನ್ನು ಹೆಚ್ಚಿಸಿದೆ. ಕ್ಯುಶುವಿನ ದಕ್ಷಿಣ ಕರಾವಳಿ ಮತ್ತು ಶಿಕೋಕು ಹತ್ತಿರದ ದ್ವೀಪದ ಉದ್ದಕ್ಕೂ 1 ಮೀಟರ್ (3.3 ಅಡಿ) ವರೆಗಿನ ಅಲೆಗಳನ್ನು ನಿರೀಕ್ಷಿಸಲಾಗಿದೆ. ಮಿಯಾಝಾಕಿ, ಕೊಚ್ಚಿ, ಓಯಿಟಾ, ಕಾಗೋಶಿಮಾ ಮತ್ತು ಎಹಿಮ್ ಪ್ರಾಂತ್ಯಗಳ ಕರಾವಳಿ ಪ್ರದೇಶಗಳಿಗೆ ಸುನಾಮಿ ಬಗ್ಗೆ ಎಚ್ಚರಿಕೆ ನೀಡಲಾಗಿದೆ.

20 ಲಕ್ಷ ಲಂಚ ಪಡೆದ ಇಡಿ ಸಹಾಯಕ ನಿರ್ದೇಶಕರ ಬಂಧಿಸಿದ ಸಿಬಿಐ



ನವದೆಹಲಿ: ಮುಂಬೈ ಮೂಲದ ಆಭರಣ ವ್ಯಾಪಾರಿಯಿಂದ 20 ಲಕ್ಷ ಲಂಚ ಪಡೆದ ಆರೋಪದ ಮೇಲೆ ಜಾರಿ ನಿರ್ದೇಶನಾಲಯ (ಇಡಿ)ದ ಸಹಾಯಕ ನಿರ್ದೇಶಕರನ್ನು ಸಿಬಿಐ ಬಂಧಿಸಿದೆ. ಜಾರಿ ನಿರ್ದೇಶನಾಲಯ(ಇಡಿ) ಆಗಸ್ಟ್ 3 ಮತ್ತು 4ರಂದು ಆಭರಣ ವ್ಯಾಪಾರಿ ಮನೆ ಮತ್ತು ಅಂಗಡಿಯಲ್ಲಿ ಶೋಧ ನಡೆಸಿತ್ತು. ಇದರ ನಂತರ ಸಹಾಯಕ ನಿರ್ದೇಶಕ ಸಂದೀಪ್ ಸಿಂಗ್ ಯಾದವ್ ಅವರು ಆಭರಣ ವ್ಯಾಪಾರಿಯ ಪುತ್ರನಿಗೆ 25 ಲಕ್ಷ ರೂಪಾಯಿ ನೀಡದಿದ್ದರೆ ಬಂಧಿಸುವುದಾಗಿ ಬೆದರಿಕೆ ಹಾಕಿದ್ದಾರೆ ಎಂದು ಕೇಂದ್ರ ತನಿಖಾ ಸಂಸ್ಥೆ ತಿಳಿಸಿದೆ.

ಮಾತುಕತೆ ವೇಳೆ ಲಂಚದ ಬೇಡಿಕೆಯನ್ನು 20 ಲಕ್ಷ ರೂ.ಗೆ ಇಳಿಕೆ ಮಾಡಲಾಗಿದೆ. ನೇರ ತೆರಿಗೆಗಳ ಕೇಂದ್ರೀಯ ಮಂಡಳಿಯ(ಸಿಬಿಡಿಟಿ) ಅಧಿಕಾರಿಯಾಗಿರುವ ಯಾದವ್ ಅವರು ಲಂಚ ಸ್ವೀಕರಿಸುವಾಗ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ ಎಂದು ಹೇಳಿದ್ದಾರೆ.

ಪ್ರತಿ ಬಾರಿ ಲೈಂಗಿಕ ಕ್ರಿಯೆಗೆ ಪತಿ ಕೊಡಬೇಕಿತ್ತು 1,250 ರೂ.!



ತೈಪೇ (ತೈವಾನ್): ತನ್ನ ಪತಿಯೊಂದಿಗೆ ಪ್ರತಿಬಾರಿ ಲೈಂಗಿಕ ಸಂಪರ್ಕ ಹೊಂದುವುದಕ್ಕೆ ಶುಲ್ಕ ಕೇಳುತ್ತಿದ್ದ ಪತ್ನಿಗೆ ನ್ಯಾಯಾಲಯ ಛೀಮಾರಿ ಹಾಕಿರುವ ಘಟನೆ ತೈವಾನ್‌ನಲ್ಲಿ ನಡೆದಿದೆ. ಜೊತೆಗೆ ಆಕೆಯ ವರ್ತನೆಯಿಂದ ತೀವ್ರವಾಗಿ ನೊಂದಿದ್ದ ಪತಿಗೆ ಆಕೆಯಿಂದ ವಿಚ್ಛೇದನ ಪಡೆಯಲು ಒಪ್ಪಿಗೆ ನೀಡಿದೆ.

ಈ ಸಂದರ್ಭದಲ್ಲಿ ಪತಿಯಿಂದ ದೂರಾಗಲು ಇಷ್ಟವಿಲ್ಲ ಎಂದು ಹೇಳಿದ್ದ ಪತ್ನಿಗೆ ಛೀಮಾರಿ ಹಾಕಿದ ನ್ಯಾಯಾಲಯ, ಪತಿಯಿಂದ ಎಲ್ಲಾ ಸೌಕರ್ಯಗಳು ಬೇಕು, ಆದರೆ, ಆತನ ಆಸೆಯನ್ನು ತಣಿಸಲು ಹಣ ಕೇಳುವ ಮನಸ್ಥಿತಿಯನ್ನು ಒಪ್ಪುವ ಹಾಗಿಲ್ಲ ಎಂದು ಛೀಮಾರಿ ಹಾಕಿದೆ. ಈ ಜೋಡಿಯು 2014ರಲ್ಲಿ ಮದುವೆಯಾಗಿತ್ತು. ಗಂಡನ ಹೆಸರು ಹವೋ, ಪತ್ನಿಯ ಹೆಸರು ಕ್ಸುವಾನ್. ಮದುವೆಯಾದ ಹೊಸತರಲ್ಲಿ ಎಲ್ಲವೂ ಚೆನ್ನಾಗಿತ್ತು. ನಂತರ ಆಕೆ ಪ್ರತಿ ಲೈಂಗಿಕ ಚಟುವಟಿಕೆಗೆ ಆತನಿಗೆ 1,250 ರೂ. ಹಣ ನೀಡುವಂತೆ ಕೇಳುತ್ತಿದ್ದಳು. ಆತನೂ ಸಹ ಅದಕ್ಕೆ ಒಪ್ಪಿ ಪ್ರತಿಬಾರಿಯೂ ಆಕೆಯೊಂದಿಗೆ ಸೇರುತ್ತಿದ್ದ. ಆಕೆ ಪ್ರತಿ ಬಾರಿ ಹಣ ಕೇಳುವುದನ್ನು ವಿರೋಧಿಸಿ 2021ರಲ್ಲಿ ನ್ಯಾಯಾಲಯದ ಮೆಟ್ಟಿಲೇರಿದ್ದ.

ಮೈಸೂರು ಮಿತ್ರ ಶುಕ್ರವಾರ 9 ಆಗಸ್ಟ್ 2024

ಕೊಡಗಿನಲ್ಲಿ ಹಾಕಿ ತರಬೇತಿ ಕೇಂದ್ರ ಸ್ಥಾಪಿಸಿ

ರಾಜ್ಯಸಭೆಯಲ್ಲಿ ರಾಜ್ಯಸಭಾ ಸದಸ್ಯ ಅಜಯ್ ಮಾಖನ್ ಪ್ರಸ್ತಾಪ

ಮಡಿಕೇರಿ, ಆ.8–ಗಿನ್ನಿಸ್ ದಾಖಲೆ ಬರೆದಿರುವ ಕೊಡವ ಕುಟುಂಬಗಳ 'ಕೌಟುಂಬಿಕ ಹಾಕಿ ಪಂದ್ಯಾವಳಿ' ಇದೀಗ ದೆಹಲಿಯ ರಾಜ್ಯಸಭೆಯಲ್ಲೂ ಪ್ರಸ್ತಾಪವಾಗಿದ್ದು, ಕೊಡಗಿನಲ್ಲಿ ಉನ್ನತ ಮಟ್ಟದ ಹಾಕಿ ತರಬೇತಿ ಕೇಂದ್ರ ಸ್ಥಾಪಿಸಬೇಕು ಎಂದು ರಾಜ್ಯಸಭಾ ಸದಸ್ಯ ಅಜಯ್ ಮಾಖನ್ ಕೇಂದ್ರ ಕ್ರೀಡಾ ಸಚಿವರಿಗೆ ಮನವಿ ಮಾಡಿದರು.

ಗುರುವಾರ ರಾಜ್ಯಸಭೆಯಲ್ಲಿ ವಿಷಯ ಪ್ರಸ್ತಾಪಿಸಿದ ಅಜಯ್ ಮಾಖನ್ ಅವರು, ಕೊಡಗು ಜಿಲ್ಲೆ ಹಾಕಿ ಕ್ರೀಡೆಯ ತೊಟ್ಟಿಲಾಗಿದೆ. ಈ ಬಾರಿ ನಡೆದ ಕೊಡವ ಕೌಟುಂಬಿಕ ಹಾಕಿ ಪಂದ್ಯಾವಳಿ 'ಗಿನ್ನಿಸ್ ದಾಖಲೆ' ಬರೆದಿದೆ. ಕೇಂದ್ರ ಸರ್ಕಾರದ ಯಾವುದೇ ನೆರವಿಲ್ಲದೆ ಅಲ್ಲಿನ ರಾಜ್ಯ ಸರ್ಕಾರದ ನೆರವನ್ನು ಪಡೆದುಕೊಂಡು ಈ ದೊಡ್ಡ ಮಟ್ಟದ ಸಾಧನೆ ಮಾಡಿದೆ ಎಂದರು.



ರಾಜ್ಯಸಭೆಯಲ್ಲಿ ಅಜಯ್ ಮಾಖನ್ ಕೊಡಗಿನಲ್ಲಿ ಉನ್ನತ ಮಟ್ಟದ ಹಾಕಿ ತರಬೇತಿ ಕೇಂದ್ರ ಸ್ಥಾಪಿಸುವಂತೆ ಕೇಂದ್ರ ಕ್ರೀಡಾ ಸಚಿವರಿಗೆ ಮನವಿ ಮಾಡಿದರು.

ವಿಶ್ವದಲ್ಲೇ ದೊಡ್ಡ ಪಂದ್ಯಾವಳಿ: 1997ರಲ್ಲಿ ಕೇವಲ 60 ತಂಡಗಳಿಂದ ಆರಂಭವಾದ ಕೊಡವ ಹಾಕಿ ಪಂದ್ಯಾವಳಿಯಲ್ಲಿ ಈ ಬಾರಿ 360 ತಂಡಗಳು ಭಾಗವಹಿಸಿ 4834 ಆಟಗಾರರು ಪಾಲ್ಗೊಂಡಿದ್ದರು. ಕೊಡಗು ಸಣ್ಣ ಜಿಲ್ಲೆಯಿಂದ 50ಕ್ಕೂ ಅಧಿಕ ಆಟಗಾರರು ಭಾರತದ ಹಾಕಿ ತಂಡವನ್ನು ಪ್ರತಿನಿಧಿಸಿದ್ದಾರೆ, ಎಂ.ಪಿ.ಗಣೇಶ್, ಗೋವಿಂದ, ಎಂ.ಎಂ.ಸೋಮಯ್ಯ ಸೇರಿದಂತೆ 7ಕ್ಕೂ ಅಧಿಕ ಹಾಕಿ ಕ್ರೀಡಾಪಟುಗಳು ಒಲಿಂಪಿಯನ್‌ಗಳಾಗಿ ರಾಷ್ಟ್ರವನ್ನು ಪ್ರತಿನಿಧಿಸಿದ್ದಾರೆ. ವಿಶ್ವದಲ್ಲೇ ದೊಡ್ಡ ಮಟ್ಟದ ಹಾಕಿ ಕ್ರೀಡೆಯನ್ನು ಕೊಡಗಿನಲ್ಲಿ ಆಯೋಜಿಸಿರುವುದು ದೊಡ್ಡ ಸಾಧನೆ ಎಂದು ಅಜಯ್ ಮಾಖನ್ ಮೆಚ್ಚುಗೆ ವ್ಯಕ್ತಪಡಿಸಿದರು.

ತರಬೇತಿ ಕೇಂದ್ರ ತೆರೆಯಲಿ: ಹಾಕಿ ಕ್ರೀಡೆಗೆ ಮಹತ್ವ ನೀಡುವ ದಿಸೆಯಲ್ಲಿ ಕೊಡವ ಕೌಟುಂಬಿಕ ಹಾಕಿ ಪಂದ್ಯಾವಳಿಗೆ ಕೇಂದ್ರ ಸರ್ಕಾರ ತನ್ನ ಸಹಕಾರ ನೆರವು ನೀಡಬೇಕು ಎಂದು ರಾಜ್ಯಸಭೆ ಗಮನ ಸೆಳೆದರು.

ನಾನು ಕ್ರೀಡಾ ಸಚಿವರಾಗಿದ್ದ ಸಂದರ್ಭ ಸಮುದ್ರ ಮಟ್ಟದಿಂದ ಎತ್ತರ ಪ್ರದೇಶವಾದ ತಮಿಳುನಾಡಿನ ಕೂನೂರ್ ಮತ್ತು ಹಿಮಾಚಲ ಪ್ರದೇಶದಲ್ಲೂ ಹಾಕಿ ತರಬೇತಿ ಕೇಂದ್ರ ತೆರೆಯಲಾಗಿದೆ. ಈ ಎಲ್ಲಾ ವಿಚಾರಗಳನ್ನು ಮುಂದಿಟ್ಟು ಕೊಡಗನ್ನು ಕೂಡ ಸಮುದ್ರ ಮಟ್ಟದಿಂದ ಎತ್ತರ ಪ್ರದೇಶ ಎಂದು ಪರಿಗಣಿಸಿ ಇಲ್ಲಿಯೂ ಹಾಕಿ ತರಬೇತಿ ಕೇಂದ್ರ ತೆರೆಯಬೇಕು. ಹಾಕಿ ಕ್ರೀಡೆಗೆ ಅಗತ್ಯ ಎಲ್ಲಾ ಮೂಲ ಸೌಕರ್ಯ ಒದಗಿಸಬೇಕು. ಇದರಿಂದ ನೂರಾರು ಕ್ರೀಡಾಪಟುಗಳು ಹೊರಬರಲು ಸಾಧ್ಯವಾಗಲಿದೆ ಎಂದು ಅಜಯ್ ಮಾಖನ್ ಕೇಂದ್ರ ಕ್ರೀಡಾ ಸಚಿವರಿಗೆ ಮನವಿ ಮಾಡಿದರು.

ಕೊಡವ ಪ್ರಮುಖರ ಸಭೆಯಲ್ಲಿ ಮಹತ್ವದ ನಿರ್ಣಯ

ಇತರರು ಕೊಡವ ಸಾಂಪ್ರದಾಯಿಕ ಉಡುಗೆ ಬಳಸಿದರೆ ಕ್ರಮ

ಮಡಿಕೇರಿ, ಆ.8– ಕೊಡವ ಸಾಂಪ್ರದಾಯಿಕ ಉಡುಗೆ–ತೊಡುಗೆ, ಆಭರಣಗಳನ್ನು ಇತರರು ಬಳಕೆ ಮಾಡಿದರೆ ಕ್ರಮ ಕೈಗೊಳ್ಳಲು ಅಖಿಲ ಕೊಡವ ಸಮಾಜ ನೇತೃತ್ವದಲ್ಲಿ ವಿವಿಧ ಕೊಡವ ಸಮಾಜ ಹಾಗೂ ಕೊಡವ ಸಂಘಟನೆಗಳ ಪ್ರಮುಖರ ಸಭೆಯಲ್ಲಿ ಮಹತ್ವದ ನಿರ್ಣಯ ತೆಗೆದುಕೊಳ್ಳಲಾಯಿತು.



ಪೊನ್ನಂಪೇಟೆ ಕೊಡವ ಸಮಾಜದ ಸಭಾಂಗಣದಲ್ಲಿ ಅಖಿಲ ಕೊಡವ ಸಮಾಜದ ನೇತೃತ್ವದಲ್ಲಿ ಸಭೆ ನಡೆಯಿತು.

ಪೊನ್ನಂಪೇಟೆ ಕೊಡವ ಸಮಾಜದ ಸಭಾಂಗಣದಲ್ಲಿ ಅಖಿಲ ಕೊಡವ ಸಮಾಜದ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಜಿಲ್ಲೆಯ ವಿವಿಧ ಕೊಡವ ಸಮಾಜ ಹಾಗೂ ಸಂಘಟನೆಗಳ ಪ್ರಮುಖರು ಈ ಮಹತ್ವದ ನಿರ್ಣಯದೊಂದಿಗೆ ಇತರ ವಿಷಯ ಚರ್ಚಿಸಿದರು.

ಇತ್ತೀಚಿನ ದಿನಗಳಲ್ಲಿ ಕೊಡವ ಸಾಂಪ್ರದಾಯಿಕ ಉಡುಗೆ ತೊಡುಗೆ ಹಾಗೂ ಆಭರಣಗಳು ಸೇರಿದಂತೆ ಕೊಡವ ಸಂಸ್ಕೃತಿ ದುರ್ಬಳಕೆಯಾಗುತ್ತಿದೆ ಎಂದು ಸಭೆಯಲ್ಲಿ ಸುದೀರ್ಘ ಚರ್ಚೆ ನಡೆಯಿತು. ಇತ್ತೀಚೆಗೆ ಬೆಂಗಳೂರಿನ ರೆಸಾರ್ಟ್‌ವೊಂದರಲ್ಲಿ ನಡೆದ ಬೇರೊಂದು ಜನಾಂಗದ ಮದುವೆಯಲ್ಲಿ ಕೊಡವ ಸಾಂಪ್ರದಾಯಿಕ ಉಡುಗೆ ತೊಡುಗೆ ಸೇರಿದಂತೆ ಕೊಡವ ಸಂಸ್ಕೃತಿ ದುರ್ಬಳಕೆ ಮಾಡಿರುವುದನ್ನು ಖಂಡಿಸಲಾಯಿತು. ಹಿಂದೆ ವಿದೇಶದಲ್ಲಿ ನಡೆಸಲಾದ ಮದುವೆಯಲ್ಲಿ ಪವಿತ್ರ ಆಭರಣವಾದ ಪತ್ತಾಕ್‌ಗೆ ಅವಮಾನ ಮಾಡಿದ್ದಾರೆ. ಕೊಡವಾಮೆಯ ಹೆಸರಿನಲ್ಲಿ ಅನ್ಯ ಜನಾಂಗಕ್ಕೆ ನಮ್ಮ ಪವಿತ್ರವಾದ ಪತ್ತಾಕ್ ನೀಡಿರುವುದನ್ನು ಸಭೆಯಲ್ಲಿ ಖಂಡಿಸಲಾಯಿತು. ಅನ್ಯ ಜಾತಿಯವರನ್ನು ಮದುವೆಯಾಗುವ ಕೊಡವ ಹೆಣ್ಣು ಮಕ್ಕಳು ನಮ್ಮ ಪವಿತ್ರವಾದ ಪತ್ತಾಕ್ ಅನ್ನು ಕೊಂಡೊಯ್ಯುತ್ತಿದ್ದು, ಈ ಪತ್ತಾಕ್ ಯಾರ ಸೊತ್ತು ಎಂದು ಆಯಾಯ ಕುಟುಂಬ ಚಿಂತಿಸಬೇಕಿದೆ. ಈ ನಿಟ್ಟಿನಲ್ಲಿ ಆಯಾಯ ಕೊಡವ ಕುಟುಂಬಗಳು ಗಮನ ಹರಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಅಂತಹ ಕುಟುಂಬಗಳ ಹೆಸರು ಹಾಳಾಗುತ್ತದೆ. ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳದಿದ್ದರೆ ಕೊಡವ ಸಮಾಜ ಹಾಗೂ ಸಂಘ ಸಂಸ್ಥೆಗಳ ಸಹಕಾರದಲ್ಲಿ ಅಖಿಲ ಕೊಡವ ಸಮಾಜ ಕ್ರಮಕ್ಕೆ ಮುಂದಾಗಬೇಕಿದೆ ಎಂಬ ಮಹತ್ವದ ನಿರ್ಣಯ ಕೈಗೊಳ್ಳಲಾಯಿತು.

ಸಭೆಯಲ್ಲಿ ಅಖಿಲ ಕೊಡವ ಸಮಾಜದ ಅಧ್ಯಕ್ಷ ಪರದಂಡ ಸುಬ್ರಮಣಿ ಕಾವೇರಪ್ಪ, ಉಪಾಧ್ಯಕ್ಷ ಅಜ್ಜಿಕುಟ್ಟೀರ ಸುಬ್ರಮಣಿ ಮಾದಯ್ಯ, ಖಜಾಂಚಿ ಮಂಡೇಪಂಡ ಸುಗುಣ ಮುತ್ತಣ, ಕಾರ್ಯದರ್ಶಿ ಕೀತಿಯಂಡ ವಿಜಯ್, ಸಹ ಕಾರ್ಯದರ್ಶಿ ಮೂವೇರ ರೇಖಾ ಪ್ರಕಾಶ್, ಪೊಮ್ಮಕ್ಕಡ ಪರಿಷತ್ ಅಧ್ಯಕ್ಷೆ ಬಾಚರಣಿಯಂಡ ರಾಣು ಅಪ್ಪಣ್ಣ, ಯೂತ್ ವಿಂಗ್ ಅಧ್ಯಕ್ಷ ಚಮ್ಮಟೀರ ಪ್ರವೀಣ್ ಉತ್ತಪ್ಪ, ಪೊನ್ನಂಪೇಟೆ ಕೊಡವ ಸಮಾಜದ ಅಧ್ಯಕ್ಷ ಕಾಳಿಮಾಡ ಮೋಟಯ್ಯ, ವಿವಿಧ ಕೊಡವ ಸಮಾಜಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳು, ಪ್ರಮುಖರು ಉಪಸ್ಥಿತರಿದ್ದರು.

ಬಿಜೆಪಿ, ಜೆಡಿಎಸ್ ವಿರುದ್ಧ ವಿವಿಧ ಸಂಘಟನೆಗಳ ಪ್ರತಿಭಟನೆ



ಬಿಜೆಪಿ–ಜೆಡಿಎಸ್ ವಿರುದ್ಧ ವಿವಿಧ ಸಂಘಟನೆಗಳ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಕುಶಾಲನಗರ, ಆ.8–ವಾಲ್ಮೀಕಿ ಅಭಿವೃದ್ಧಿ ನಿಗಮ ಮತ್ತು ಮುಡಾ ಅಕ್ರಮದ ಹೆಸರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಬಿಜೆಪಿ ಹಾಗೂ ಜೆಡಿಎಸ್ ಅಪಪ್ರಚಾರ ಮಾಡುವ ಮೂಲಕ ರಾಜಕೀಯ ಪಿತೂರಿ ನಡೆಸುತ್ತಿವೆ ಎಂದು ಆರೋಪಿಸಿ ಕೊಡಗು ಜಿಲ್ಲಾ ಅಹಿಂದ ಒಕ್ಕೂಟ, ಜಿಲ್ಲಾ ಕುರುಬ ಸಂಘ ಸೇರಿದಂತೆ ವಿವಿಧ ಸಂಘಟನೆಗಳ ಕಾರ್ಯಕರ್ತರು ಗುರುವಾರ ನಗರದಲ್ಲಿ ಪ್ರತಿಭಟನೆ ನಡೆಸಿದರು.

ಪ್ರವಾಸಿ ಮಂದಿರದ ಬಳಿಯಿಂದ ಫೀ.ಮಾ.ಕಾರ್ಯಪ್ಪ ವೃತ್ತದವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದ ನೂರಾರು ಕಾರ್ಯಕರ್ತರು, ಬಿಜೆಪಿ ಮತ್ತು ಜೆಡಿಎಸ್ ವಿರುದ್ಧ ಘೋಷಣೆ ಕೂಗಿದರು. ನಂತರ ಕಾರ್ಯಪ್ಪ ವೃತ್ತದಲ್ಲಿ ಮಾನವ ಸರಪಳಿ ರಚಿಸಿ ಅಸಮಾಧಾನ ವ್ಯಕ್ತಪಡಿಸಿದರು.

ಶಾಸಕ ಡಾ.ಮಂತರ್‌ಗೌಡ ಮಾತನಾಡಿ, ರಾಜ್ಯದ ಬಡವರು ಹಾಗೂ ಅವಕಾಶ ವಂಚಿತರಿಗೆ ಗ್ಯಾರಂಟಿ ಯೋಜನೆಗಳ ಮೂಲಕ ನೆರವು ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಜನಪ್ರಿಯತೆಯನ್ನು ಸಹಿಸದೆ ಬಿಜೆಪಿ ಮತ್ತು ಜೆಡಿಎಸ್ ಆಧಾರ ರಹಿತ ಆರೋಪ ಮಾಡುತ್ತಿವೆ. ಜನರಲ್ಲಿ ಗೊಂದಲ ಮೂಡಿಸುವ ಪ್ರಯತ್ನದಲ್ಲಿ ತೊಡಗಿವೆ ಎಂದು ಆರೋಪಿಸಿದರು.

ದಕ್ಷ ಆಡಳಿತಗಾರ ಸಿದ್ದರಾಮಯ್ಯ ಹೆಸರಿಗೆ ಕಳಂಕ ತರುವ ಷಡ್ಯಂತ್ರ ನಡೆಯುತ್ತಿದೆ. ಆದರೆ, ಕಾನೂನಾತ್ಮಕ ಹೋರಾಟ ನಡೆಸುವ ಮೂಲಕ ಸಿದ್ದರಾಮಯ್ಯಗೆ ಮತ್ತಷ್ಟು ಶಕ್ತಿ ತುಂಬುತ್ತೇವೆ ಮತ್ತು ಸತ್ಯವನ್ನು ರಾಜ್ಯದ ಜನರ ಮುಂದಿಡುತ್ತೇವೆ ಎಂದು ಹೇಳಿದರು.

ಅಹಿಂದ ಒಕ್ಕೂಟದ ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ಬಿ.ಶಾಂತಪ್ಪ ಮಾತನಾಡಿ, ರಾಜ್ಯದಲ್ಲಿ ಸಿದ್ದರಾಮಯ್ಯ ಒಂದು ಶಕ್ತಿಯಾಗಿ ಬೆಳೆದಿದ್ದಾರೆ. ಈ ಶಕ್ತಿಯನ್ನು ದಮನ ಮಾಡಲು ಯಾರಿಂದಲೂ ಸಾಧ್ಯವಿಲ್ಲ. ಶೋಷಿತ ವರ್ಗಗಳ ಧ್ವನಿಯಾಗಿರುವ ಸಿದ್ದರಾಮಯ್ಯ ವರ್ಚಸ್ಸಿಗೆ ಧಕ್ಕೆ ತರಲು ಮತ್ತು ಧ್ವನಿ ಅಡಗಿಸಲು ವಿರೋಧ ಪಕ್ಷಗಳು ಪಿತೂರಿ ನಡೆಸುತ್ತಿವೆ ಎಂದು ಆರೋಪಿಸಿದರು. ಅಹಿಂದ ಒಕ್ಕೂಟದ ಜಿಲ್ಲಾ ಸ್ಥಾಪಕಾಧ್ಯಕ್ಷ ಟಿ.ಪಿ.ರಮೇಶ್ ಮಾತನಾಡಿ, ಸಮಾಜದ ಕಟ್ಟ ಕಡೆಯ ಜನರಿಗೂ ಸಾಮಾಜಿಕ ನ್ಯಾಯ ದಕ್ಕಬೇಕು ಎಂಬುವುದು ಸಿದ್ದರಾಮಯ್ಯ ನಿಲುವು. ಆದರೆ, ವಿರೋಧ ಪಕ್ಷಗಳು ಸುಳ್ಳು ಆರೋಪಗಳನ್ನು ಮಾಡುವ ಮೂಲಕ ಪಾದಯಾತ್ರೆ ಹೆಸರಿನಲ್ಲಿ ರಾಜಕೀಯ ನಾಟಕವಾಡುತ್ತಿದ್ದಾರೆ. ಈ ಕುರಿತು ಜನರಿಗೆ ಸತ್ಯ ತಿಳಿಸಲು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ವಿಧಾನ ಪರಿಷತ್ ಸದಸ್ಯ ಮಾಜಿ ಸದಸ್ಯ ಅರುಣ್ ಮಾಚಯ್ಯ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಧರ್ಮಜ ಉತ್ತಪ್ಪ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಪಿ.ಚಂದ್ರಕಲಾ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವಿ.ಪಿ.ಶಶಿಧರ್, ಒಕ್ಕಲಿಗರ ಸಂಘದ ಜಿಲ್ಲಾಧ್ಯಕ್ಷ ಎಸ್.ಎಂ. ಚಂಗಪ್ಪ ಕೆಪಿಸಿಸಿ ಸದಸ್ಯ ಕೆ.ಎ. ಯಾಕುಬ್, ಜಿಲ್ಲಾ ಕ್ರೈಸ್ತ ಸಂಘದ ಅಧ್ಯಕ್ಷ ಕೆ.ಟಿ.ಬೇಬಿ ಮ್ಯಾಥ್ಯು, ಕೆಪಿಸಿಸಿ ಕಾರ್ಯದರ್ಶಿ ಎಚ್.ಕೆ.ನಟೇಶ್‌ಗೌಡ, ಯೋಜನಾ ಪ್ರಾಧಿಕಾರದ ಅಧ್ಯಕ್ಷ ಪ್ರಮೋದ್ ಮುತ್ತಪ್ಪ ಪ್ರಮುಖರಾದ ಟಿ.ಪಿ.ಹಮೀದ್, ಸುನಿತ, ಪೃಥ್ವಿ, ಶೈಲಾ ಕುಟ್ಟಪ್ಪ, ಎಸ್.ಎಸ್.ಚಂದ್ರಶೇಖರ್, ಟಿ.ಬಿ.ಜಗದೀಶ್, ಶಿರಂಗಾಲ ರಮೇಶ್ ಮತ್ತಿತರರು ಭಾಗವಹಿಸಿದ್ದರು.

ವಿರಾಜಪೇಟೆ: ಹಿಂದೂಪರ ಸಂಘಟನೆಯಿಂದ ಪಂಜಿನ ಮೆರವಣಿಗೆ



ವಿರಾಜಪೇಟೆಯಲ್ಲಿ ಹಿಂದೂಪರ ಕಾರ್ಯಕರ್ತರು ಪಂಜಿನ ಮೆರವಣಿಗೆ ನಡೆಸಿದರು.

ವಿರಾಜಪೇಟೆ, ಆ.8–ಅಖಂಡ ಭಾರತ ಸಂಕಲ್ಪ ದಿನದ ಅಂಗವಾಗಿ ಹಿಂದೂ ಜಾಗರಣ ವೇದಿಕೆ ವತಿಯಿಂದ ನಗರದಲ್ಲಿ ಪಂಜಿನ ಮೆರವಣಿಗೆ ಮತ್ತು ವಾಹನ ಜಾಥಾ ನಡೆಸಲಾಯಿತು.

ಸಾವಿರಾರು ಹಿಂದೂಪರ ಕಾರ್ಯಕರ್ತರು ಕೇಸರಿ ಧ್ವಜ ಮತ್ತು ಪಂಜು ಹಿಡಿದು ದೇಶಭಕ್ತಿ ಘೋಷಣೆಗಳೊಂದಿಗೆ ಪಟ್ಟಣದ ಪ್ರಮುಖ ಬೀದಿಯಲ್ಲಿ ಜಾಥಾ ನಡೆಸಿದರು. ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ವೀರ ಯೋಧರ ಸ್ಮರಣೆ ಹಾಗೂ ಕಳೆದುಹೋದ ಭಾರತದ ಭೂಭಾಗಗಳನ್ನು ಮತ್ತೆ ಪಡೆಯುವ ಸಂಕಲ್ಪ ಮಾಡಲಾಗಿದೆ ಎಂದು ಘೋಷಣೆ ಕೂಗಿದರು. ತೆಲುಗರ ಬೀದಿಯ ಶ್ರೀ ಮಾರಿಯಮ್ಮ ದೇವಸ್ಥಾನದಿಂದ ಜೈನರ ಬೀದಿ, ದೊಡ್ಡಟ್ಟಿ ಚೌಕಿ, ಗಡಿಯಾರ ಕಂಬ, ಖಾಸಗಿ ಬಸ್ ನಿಲ್ದಾಣದ ಮಾರ್ಗವಾಗಿ ಗೋಣಿಕೊಪ್ಪ ರಸ್ತೆಯ ಮಹಿಳಾ ಸಮಾಜದವರೆಗೆ ಜಾಥಾ ನಡೆಸಲಾಯಿತು.

ನಿವೃತ್ತ ಕರ್ನಲ್ ಕೆ.ಸಿ.ಸುಬ್ಬಯ್ಯ ಮಾತನಾಡಿ, ಭಾರತದ ಅಖಂಡತೆಗೆ ಧಕ್ಕೆ ಬಂದ ನೈಜ ಇತಿಹಾಸವನ್ನು ಭಾರತೀಯರು ತಿಳಿದುಕೊಳ್ಳಬೇಕು ಎಂದರು.

ಸಾಮಾಜಿಕ ಕಾರ್ಯಕರ್ತ ಚಿ.ನಾ. ಸೋಮೇಶ್ ಮಾತನಾಡಿ, ಅಖಂಡ ಭಾರತ ಸಂಕಲ್ಪ ದಿನದ ಮಹತ್ವ ಹಾಗೂ ಸಮಾಜದಲ್ಲಿ ಇಂದಿನ ಯುವ ಪೀಳಿಗೆ ವಹಿಸಬೇಕಾದ ಪಾತ್ರದ ಬಗ್ಗೆ ತಿಳಿಸಿದರು.

ವೇದಿಕೆಯ ಜಿಲ್ಲಾ ಸಂಯೋಜಕ ಕುಕ್ಕೇರ ಅಜಿತ್ ಮಾತನಾಡಿ, ದೇಶದಲ್ಲಿ ಸ್ವಾತಂತ್ರ್ಯ ಹೋರಾಟಗಳು ಅಖಂಡ ಭಾರತಕ್ಕಾಗಿ ನಡೆದಿತ್ತು. ಆದರೆ, ಸ್ವಾತಂತ್ರ್ಯ ಹೋರಾಟಗಾರರ ಕನಸಾಗಿದ್ದ ಅಖಂಡ ಭಾರತವನ್ನು ತ್ರಿಖಂಡವಾಗಿ ತುಂಡರಿಸಲು ಕಾರಣವಾದ ಅಂದಿನ ನೈಜ ಘಟನೆಗಳನ್ನು ಯುವ ಸಮೂಹಕ್ಕೆ ನೆನಪಿಸುವುದು ನಮ್ಮ ಕರ್ತವ್ಯವಾಗಿದೆ. ಆದ್ದರಿಂದ ಪ್ರತಿವರ್ಷದಂತೆ ಕೊಡಗು ಜಿಲ್ಲೆಯ 6 ಕಡೆ ಪಂಜಿನ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ. ಆ.9ರಂದು ಮಡಿಕೇರಿಯಲ್ಲಿ ಪಂಜಿನ ಮೆರವಣಿಗೆ ಮತ್ತು ವಾಹನ ಜಾಥಾ ನಡೆಯಲಿದೆ ಎಂದು ಹೇಳಿದರು.

ವೇದಿಕೆಯ ಜಿಲ್ಲಾ ಸಹ ಸಂಯೋಜಕ ಆಲುಮಾಡ ಶರತ್, ತಾಲೂಕು ಸಂಯೋಜಕ ರವೀಂದ್ರ ಪೂಜಾರಿ ಹಾಗೂ ಹಿಂದೂ ಜಾಗರಣ ವೇದಿಕೆ, ಆರ್‌ಎಸ್‌ಎಸ್, ವಿಹೆಚ್‌ಪಿ ಸೇರಿದಂತೆ ವಿವಿಧ ಹಿಂದೂಪರ ಸಂಘಟನೆಗಳ ಪ್ರಮುಖರು ಪಾಲ್ಗೊಂಡಿದ್ದರು. ಇದೇ ವೇಳೆ ಡಿವೈಎಸ್‌ಪಿ ಮೋಹನ್ ಕುಮಾರ್ ಹಾಗೂ ಸರ್ಕಲ್ ಇನ್ಸ್‌ಪೆಕ್ಟರ್ ಶಿವರುದ್ರ ನೇತೃತ್ವದಲ್ಲಿ ಪೊಲೀಸ್ ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿತ್ತು.

ಹೊಳೆಗೆ ಹಾರಿ ಯುವಕ ಆತ್ಮಹತ್ಯೆ

ಸುಂಟಿಕೊಪ್ಪ, ಆ.8–ಹಾಸನದ ಖಾಸಗಿ ಸುದ್ದಿವಾಹಿನಿಯೊಂದರಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಯುವಕನೋರ್ವ ಹೊಳೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಮಾದಾಪುರ ಸಮೀಪದ ಹಾರಂಗಿ ಹಿನ್ನೀರಿನ ಹರದೂರಿನಲ್ಲಿ ನಡೆದಿದೆ.



ಹಾಸನದ ಕದಲಿ ಗ್ರಾಮದ ನಿವಾಸಿ ಹೇಮಂತ್ (27) ಆತ್ಮಹತ್ಯೆ ಮಾಡಿಕೊಂಡಿದ್ದು, ಈತ ಬುಧವಾರ ನಾಪತ್ತೆಯಾಗಿರುವ ಬಗ್ಗೆ ತಂದೆ ಪದ್ಮರಾಜ್ ಹಾಸನ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಆದರೆ, ಹರದೂರು ಹೊಳೆ ಬದಿಯಲ್ಲಿ ಹೇಮಂತ್ ದ್ವಿಚಕ್ರ ವಾಹನ ಪತ್ತೆಯಾಗಿದೆ. ಇದರಿಂದ ಸಂಶಯಗೊಂಡ ಸುಂಟಿಕೊಪ್ಪ ಪೊಲೀಸರು ಹೊಳೆಯಲ್ಲಿ ಹುಡುಕಾಡಿದಾಗ ಈತನ ಮೃತದೇಹ ಪತ್ತೆಯಾಗಿದೆ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡ ಸುಂಟಿಕೊಪ್ಪ ಪೊಲೀಸ್ ಠಾಣಾಧಿಕಾರಿ ಎಂ.ಸಿ.ಶ್ರೀಧರ್, ಕುಶಾಲನಗರ ತಾಲೂಕು ಆರೋಗ್ಯ ಕೇಂದ್ರದಲ್ಲಿ ಮರಣೋತ್ತರ ಪರೀಕ್ಷೆಗೆ ಶವವನ್ನು ವಾರಸುದಾರರಿಗೆ ಒಪ್ಪಿಸಿದರು.

ಸಮಾವೇಶದಲ್ಲಿ 15 ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು ಭಾಗಿ

ಚಾಮರಾಜನಗರ, ಆ.8– ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಮತ್ತು ಜೆಡಿಎಸ್ ಜಂಟಿಯಾಗಿ ಮೈಸೂರಿನಲ್ಲಿ ಆ.10ರಂದು ಹಮ್ಮಿಕೊಂಡಿರುವ ಸಮಾವೇಶದಲ್ಲಿ ಜಿಲ್ಲೆಯಿಂದ 15 ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು ಭಾಗವಹಿಸಲಿದ್ದಾರೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್. ನಿರಂಜನಕುಮಾರ್ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಡಾ, ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ ಬಗ್ಗೆ ಚರ್ಚಿಸಲು ವಿಧಾನಸೌಧದಲ್ಲಿ ಬಿಜೆಪಿ, ಜೆಡಿಎಸ್ ಶಾಸಕರಿಗೆ ಅವಕಾಶ ನೀಡದೆ ಅಧಿವೇಶನವನ್ನು ಮುಂದೂಡಿದರು. ಈ ಬಗ್ಗೆ ಜನತೆಯಲ್ಲಿ ಅರಿವು ಮೂಡಿಸಲು ಮೈಸೂರು ಚಲೋ ಪಾದಯಾತ್ರೆ ಮಾಡಲಾಗುತ್ತಿದೆ ಎಂದರು.

ಮುಡಾ ಹಗರಣ, ವಾಲ್ಮೀಕಿ ಹಗರಣ, ದಲಿತ ಅಧಿಕಾರಿ ಸರಣಿ ಆತ್ಮಹತ್ಯೆ ಖಂಡಿಸಿ ಹಾಗೂ ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ. ಪಾದಯಾತ್ರೆಯಲ್ಲಿ ಎರಡೂ ಪಕ್ಷದ ನಾಯಕರು ಹಾಗೂ ಕಾರ್ಯಕರ್ತರು ಉತ್ಸಾಹದಿಂದಲೇ ಹೆಜ್ಜೆ ಹಾಕುತ್ತಿದ್ದಾರೆ. ಬೆಂಗಳೂರಿನಿಂದ ಆರಂಭವಾದ ಪಾದಯಾತ್ರೆಗೆ ಜನರ ವ್ಯಾಪಕ ಬೆಂಬಲದಿಂದ ಯಶಸ್ವಿಯಾಗಿ ಸಾಗಿದೆ. ರಾಜ್ಯದ ಕಡುಭ್ರಷ್ಟ ಹಾಗೂ ದುರಾಡಳಿತದ ಹಣೆಪಟ್ಟಿ ಕಟ್ಟಿಕೊಂಡಿರುವ ಕಾಂಗ್ರೆಸ್ ಸರ್ಕಾರವನ್ನು ತೊಲಗಿಸಲು ಯಾತ್ರೆ ನಡೆಸಲಾಗುತ್ತಿದೆ ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಮಾಜಿ ಶಾಸಕ ಎಸ್.ಬಾಲರಾಜು, ಮುಖಂಡರಾದ ಎಂ.ರಾಮಚಂದ್ರ, ಅರಕಲವಾಡಿ ನಾಗೇಂದ್ರ, ಪಿ.ವೃಷಬೇಂದ್ರಪ್ಪ, ಮೂಡ್ನಾಕೂಡು ಪ್ರಕಾಶ್, ಮಹದೇವಸ್ವಾಮಿ ಹಾಜರಿದ್ದರು.



ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನಕುಮಾರ್ ಮಾತನಾಡಿದರು.

ನಾಳೆ ಆಲೂರಲ್ಲಿ ರಾಚಯ್ಯ ಸ್ಮಾರಕ ಉದ್ಘಾಟನೆ

● ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಭಾಗಿ ● ಸುದ್ದಿಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ಶಿಲ್ಪನಾಗ್ ಮಾಹಿತಿ



ಸುದ್ದಿಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ಶಿಲ್ಪನಾಗ್ ಮಾತನಾಡಿದರು. ಎಸ್ಪಿ ಡಾ.ಬಿ.ಟಿ.ಕವಿತಾ, ಜಿಪಂ ಸಿಇಓ ಮೋನಾ ರೋತ್ ಇದ್ದರು.

> ಕಾರ್ಯಕ್ರಮ ಹಿನ್ನೆಲೆಯಲ್ಲಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿದ್ದು, ಸಾರ್ವಜನಿಕರಿಗೆ ಸ್ಮಾರಕ ಭವನದ ಪಕ್ಕ ಹಾಗೂ ವಿಐಪಿಗಳಿಗೆ ಕೊಳದ ಮುಂಭಾಗದಲ್ಲಿ ವಾಹನಗಳ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ. ದೊಡ್ಡರಾಯಪೇಟೆ ಹಾಗೂ ಕಾಗಲವಾಡಿಯಿಂದ ಆಲೂರಿಗೆ ಹೋಗುವ ಮಾರ್ಗದಲ್ಲಿ ಸಮಾರಂಭಕ್ಕೆ ಬರುವ ವಾಹನಗಳಿಗೆ ಅವಕಾಶ ನೀಡಲಾಗಿದೆ. ಚಾಮರಾಜನಗರಕ್ಕೆ ಆಗಮಿಸುವ ವಾಹನಗಳು ಚಂದಕವಾಡಿ ಮಾರ್ಗವಾಗಿ ಬರಬೇಕು.
>
> -ಡಾ.ಬಿ.ಟಿ.ಕವಿತಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

ಚಾಮರಾಜನಗರ, ಆ.8–ತಾಲೂಕಿನ ಆಲೂರು ಗ್ರಾಮದಲ್ಲಿ ಆ.10ರಂದು ಮಾಜಿ ರಾಜ್ಯಪಾಲ ದಿವಂಗತ ಬಿ.ರಾಚಯ್ಯನವರ ಸ್ಮಾರಕವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ ಎಂದು ಜಿಲ್ಲಾಧಿಕಾರಿ ಶಿಲ್ಪನಾಗ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶನಿವಾರ ಬೆಳಗ್ಗೆ 11 ಗಂಟೆಗೆ ಬಿ.ರಾಚಯ್ಯನವರ ಚಿರ ಶಾಂತಿಧಾಮದಲ್ಲಿ ಕಾರ್ಯಕ್ರಮ ನಡೆಯಲಿದೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಅವರು ರಾಚಯ್ಯ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಿದ್ದು, ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ರಾಚಯ್ಯನವರ ಲೈಫ್ ಅಂಡ್ ಪಾಲಿಟಿಕ್ಸ್ ಪುಸ್ತಕ ಬಿಡುಗಡೆ ಮಾಡಲಿದ್ದಾರೆ ಎಂದರು.

ಕಾನೂನು ಸಚಿವ ಹೆಚ್.ಕೆ.ಪಾಟೀಲ್ ಉಪಸ್ಥಿತಿಯಲ್ಲಿ ನಡೆಯುವ ಸಮಾರಂಭದ ಅಧ್ಯಕ್ಷತೆಯನ್ನು ಶಾಸಕ ಸಿ.ಪುಟ್ಟರಂಗಶೆಟ್ಟಿ ವಹಿಸಲಿದ್ದು, ಸಂಸದ ಸುನೀಲ್ ಬೋಸ್, ಶಾಸಕರಾದ ಎ.ಆರ್.ಕೃಷ್ಣಮೂರ್ತಿ, ಹೆಚ್.ಎಂ. ಗಣೇಶ್ ಪ್ರಸಾದ್, ಎಂ.ಆರ್. ಮಂಜುನಾಥ್, ದರ್ಶನ್ ಧ್ರುವ ನಾರಾಯಣ್, ಅನಿಲ್ ಚಿಕ್ಕಮಾದು, ವಿಧಾನ ಪರಿಷತ್ ಸದಸ್ಯರಾದ ಡಾ.ಯತೀಂದ್ರ ಸಿದ್ದರಾಮಯ್ಯ, ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಮಧು ಜಿ. ಮಾದೇಗೌಡ, ಕೆ.ವಿವೇಕಾನಂದ ಮತ್ತಿತರರು ಭಾಗವಹಿಸಲಿದ್ದಾರೆ.

ಸ್ಮಾರಕ ವಿನ್ಯಾಸಕ ಕಿಶೋರ್ ಚಂದ್ರ, ಲೇಖಕ ಡಾ.ಎಂ.ನಂಜಯ್ಯ ಹೊಂಗನೂರು, ಅನುವಾದಕರಾದ ಡಾ.ನಾಗಣ್ಣ ಮತ್ತು ಬಿ.ವಿ.ಶ್ರೀಧರ ಅವರನ್ನು ಸನ್ಮಾನಿಸಲಾಗುವುದು. ಇದೇ ವೇಳೆ ರಾಚಯ್ಯನವರ ಜೀವನ ಸಾಧನೆ ಕುರಿತು ಅಪರೂಪದ ಛಾಯಾಚಿತ್ರ ಪ್ರದರ್ಶಿಸಲಾಗುವುದು. ರೈತರಲ್ಲಿ ಸಹಜ ಬೇಸಾಯ ಪದ್ಧತಿ ಅಳವಡಿಕೆಗೆ ಉತ್ತೇಜಿಸುವ ನಿಟ್ಟಿನಲ್ಲಿ ಅನುಷ್ಠಾನಗೊಳಿಸಲಿರುವ ಸಹಜ ಬೇಸಾಯ ಪದ್ಧತಿ ಕಾರ್ಯಕ್ರಮದ ಲೋಗೋ ಅನಾವರಣಗೊಳಿಸಲಾಗುವುದು ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಮೋನಾ ರೋತ್ ಉಪಸ್ಥಿತರಿದ್ದರು.

ನಾಳೆ ಭರಚುಕ್ಕಿ ಜಲಪಾತೋತ್ಸವಕ್ಕೆ ಚಾಲನೆ

> ಆಕರ್ಷಕ ದೀಪಾಲಂಕಾರ, ಸಾಂಸ್ಕೃತಿಕ ಕಾರ್ಯಕ್ರಮ

ಚಾಮರಾಜನಗರ, ಆ.8– ಜಿಲ್ಲೆಯಲ್ಲಿ ಪ್ರವಾಸೋದ್ಯಮ ಉತ್ತೇಜಿಸುವ ಉದ್ದೇಶದೊಂದಿಗೆ ಚೆಲುವ ಚಾಮರಾಜನಗರ ಹೆಸರಿನಡಿ ಆ.10ರಂದು ಸಂಜೆ 5 ಗಂಟೆಗೆ ಭರಚುಕ್ಕಿ ತಾಣದಲ್ಲಿ ಜಲಪಾತೋತ್ಸವ ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪನಾಗ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಣ್ಣಬಣ್ಣದ ಕಂಗೊಳಿಸುವ ಜಲಪಾತವನ್ನು ದೀಪದೊಂದಿಗೆ ವೀಕ್ಷಿಸಬಹುದು. ಶನಿವಾರ ಸಂಜೆ 5 ಗಂಟೆಗೆ ಜಲಪಾತೋತ್ಸವ ಉದ್ಘಾಟನೆ ಬಳಿಕ ಮಹದೇಶ್ವರ ಬೆಟ್ಟ, ಸ್ಥಳೀಯ ಸಂಸ್ಕೃತಿ, ಕಲಾ ಅನಾವರಣ ಆಗಲಿದೆ. ಗಾಯಕಿ ಅನನ್ಯಭಟ್ ಮತ್ತು ಅವರ ತಂಡದಿಂದ ಸಂಗೀತ ಸಂಜೆ ಕಾರ್ಯಕ್ರಮ ನಡೆಯಲಿದೆ. ಜನರ ವೀಕ್ಷಣೆಗೆ ಎಲ್‌ಇಡಿ ಪರದೆ ಅಳವಡಿಸಲಾಗಿದೆ ಎಂದು ಮಾಹಿತಿ ನೀಡಿದರು.

ಜಲಪಾತೋತ್ಸವದಲ್ಲಿ ಆಕರ್ಷಕ ಧ್ವನಿ–ಬೆಳಕು ಕಾರ್ಯಕ್ರಮ ಮೂಡಿಬರಲಿದೆ. ಜಿಲ್ಲೆಯ ಪ್ರವಾಸೋದ್ಯಮ ಕುರಿತ ಕಿರು ವಿಡಿಯೋ ಬಿಡುಗಡೆ ಹಾಗೂ ಪ್ರದರ್ಶಿಸಲಾಗುವುದು. ಎನ್‌ಆರ್‌ಎಲ್‌ಎಂ ಮತ್ತು ಮಹಿಳಾ ಸ್ವಸಹಾಯ ಸಂಘದವರು ತಯಾರಿಸಿದ ಉತ್ಪನ್ನಗಳ ಪ್ರದರ್ಶನ ಹಾಗೂ ಮಾರಾಟ ಮಳಿಗೆ ತೆರೆಯಲಾಗುವುದು. ಆ.11 ರಂದು ಸಂಜೆ 6 ರಿಂದ ರಾತ್ರಿ 8 ಗಂಟೆವರೆಗೆ ದೀಪಾಲಂಕಾರ ಇರಲಿದೆ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಜಲಪಾತೋತ್ಸವಕ್ಕೆ ಚಾಲನೆ ನೀಡಲಿದ್ದು, ವಿವಿಧ ಸಚಿವರು, ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು ಭಾಗವಹಿಸಲಿದ್ದಾರೆ ಎಂದರು.

ಡಿಸಿಲ್ವ, ಚಂದ್ರಶೇಖರಾಚಾರ್‌ಗೆ ನಾಟಕ ಅಕಾಡೆಮಿ ಪ್ರಶಸ್ತಿ

ಚಾಮರಾಜನಗರ, ಆ.8–ಜಿಲ್ಲೆಯ ಹಿರಿಯ ರಂಗ ಕಲಾವಿದರಾದ ಅಬ್ರಹಾಂ ಡಿಸಿಲ್ವ ಹಾಗೂ ಚಂದ್ರಶೇಖರಾಚಾರ್ ಹೆಗ್ಗೋತಾರ ನಾಟಕ ಅಕಾಡೆಮಿ ಪ್ರಶಸ್ತಿಗೆ ಭಾಜನರಾಗಿದ್ದಾರೆ.



ಅಬ್ರಾಹಂ ಡಿ.ಸಿಲ್ವ



ಚಂದ್ರಶೇಖರಾಚಾರ್

ಅಬ್ರಹಾಂ ಡಿಸಿಲ್ವ ನಗರದ ಶಾಂತಲಾ ಕಲಾವಿದರ ತಂಡದ ಸಂಸ್ಥಾಪಕ ಸದಸ್ಯರು. ಚಂದ್ರಶೇಖರಾಚಾರ್ ತಾಲೂಕಿನ ಹೆಗ್ಗೋತಾರ ಗ್ರಾಮದವರಾಗಿದ್ದು, ಶಾಂತಲಾ ಕಲಾವಿದರ ತಂಡದಿಂದ ರಂಗಭೂಮಿಗೆ ಪಾದಾರ್ಪಣೆ ಮಾಡಿದರು. ಚಂದ್ರಶೇಖರಾಚಾರ್ ನಟನೆ, ನಿರ್ದೇಶನ, ಹಾರ್ಮೋನಿಯಂ ವಾದನ ಬಲ್ಲವರಾಗಿದ್ದಾರೆ. ಸಂಗೀತ ಸಂಯೋಜನೆಯಲ್ಲೂ ಸೈ ಎನಿಸಿಕೊಂಡವರು. ಬಾಲ್ಯದಿಂದಲೇ ರಂಗ ಚಟುವಟಿಕೆಯಲ್ಲಿ ಆಸಕ್ತಿವುಳ್ಳವರಾಗಿದ್ದು, ಸದ್ಯ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಯಲ್ಲಿ ನಾಟಕ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ಅಬ್ರಹಾಂ ಡಿ.ಸಿಲ್ವ ಬಿಎಸ್ಸಿ ಪದವೀಧರರಾಗಿದ್ದು, 50 ವರ್ಷಗಳ ಹಿಂದೆ ನಗರದಲ್ಲಿ ಸ್ಥಾಪನೆಯಾಗಿ ಈಗಲ್ಲೂ ರಂಗಚಟುವಟಿಕೆಯಲ್ಲಿ ನಿರಂತರವಾಗಿ ತೊಡಗಿಕೊಂಡಿರುವ ಶಾಂತಲಾ ತಂಡದಲ್ಲಿ ಜೋಕುಮಾರಸ್ವಾಮಿ, ಬದುಕ ಮನ್ನಿಸು ಪ್ರಭುವೇ, ಮಾನಿಶಾದ, ತಲೆಬಾಗದ ಜನ, ಹೂ ಹುಡುಗಿ, ಅರಹಂತ, ತೆರೆಯೋ ಬಾಗಿಲನು, ರಂಗೀಲಾ ರಾಜಾ, ಅಶ್ವಘೋಷ ಸೇರಿದಂತೆ ಹಲವಾರು ನಾಟಕಗಳಲ್ಲಿ ಅಭಿನಯಿಸಿದ್ದಾರೆ. ಅಲ್ಲದೆ, ಜಿರ್ಜಿಂಬೆ, ಚಿರತೆ ಬಂತು ಚಿರತೆ, ಅನ್ನ ಸಿನಿಮಾಗಳಲ್ಲೂ ಪೋಷಕ ನಟರಾಗಿ ಅಭಿನಯಿಸಿದ್ದಾರೆ.

ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಶಿಕ್ಷಕರ ಪ್ರತಿಭಟನೆ



ಚಾಮರಾಜನಗರದಲ್ಲಿ ಶಿಕ್ಷಕರು ಪ್ರತಿಭಟನೆ ನಡೆಸಿದರು.

ಚಾಮರಾಜನಗರ, ಆ.8– ಹೊಸ ವೃಂದ ಹಾಗೂ ನೇಮಕಾತಿ ನಿಯಮಗಳ ತಿದ್ದುಪಡಿ ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಘಟಕದ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಯಿತು.

ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ಸಮಾವೇಶಗೊಂಡ ಶಿಕ್ಷಕರು, 2016ಕ್ಕಿಂತ ಮೊದಲು ನೇಮಕಾತಿಯಾದವರಿಗೆ ಪೂರ್ವಾನ್ವಯಗೊಳಿಸಬಾರದು, ಪ್ರಾಥಮಿಕ ಶಾಲಾ ಸೇವಾನಿರತ ಶಿಕ್ಷಕರಿಗೆ ಅನ್ಯಾಯ ಸರಿಪಡಿಸಬೇಕು. ಪದವಿ ಪೂರೈಸಿದ ಶಿಕ್ಷಕರನ್ನು ಸೇವಾ ಜೇಷ್ಠತೆಯೊಂದಿಗೆ ಪದವೀಧರ ಶಿಕ್ಷಕರೆಂದು ಪದನಾಮೀಕರಿಸಬೇಕು. ಮುಖ್ಯ ಶಿಕ್ಷಕರ ಹುದ್ದೆಗೆ ಸೇವಾ ಜೇಷ್ಠತೆಯ ಮೇಲೆ ಬಡ್ತಿ ನೀಡಬೇಕು ಎಂದು ಆಗ್ರಹಿಸಿದರು. ಆ.12ರಂದು ಬೆಂಗಳೂರಿನಲ್ಲಿ ರಾಜ್ಯಮಟ್ಟದ 'ಬೆಂಗಳೂರು ಚಲೋ' ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ 5 ತಾಲೂಕಿನ ಪ್ರಾಥಮಿಕ ಶಾಲಾ ಶಿಕ್ಷಕರು ಬೆಂಗಳೂರು ಚಲೋ ಪ್ರತಿಭಟನೆಯಲ್ಲಿ ಭಾಗವಹಿಸಬೇಕು ಎಂದು ಸಂಘದ ಜಿಲ್ಲಾಧ್ಯಕ್ಷ ಕೆ.ಎಸ್.ಮಾದಪ್ಪ ಮನವಿ ಮಾಡಿದರು.

ನಂತರ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ರಾಮಚಂದ್ರರಾಜೇ ಅರಸ್ ಹಾಗೂ ಜಿಲ್ಲಾಧಿಕಾರಿ ಕಚೇರಿಯ ಶಿರಸ್ತೇದಾರ್ ಅನೂಷ್ ಅವರಿಗೆ ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಮಹದೇವ ಸ್ವಾಮಿ, ಚಾಮರಾಜನಗರ ತಾಲೂಕು ಅಧ್ಯಕ್ಷ ಸಿ.ಕೆ.ರಾಮಸ್ವಾಮಿ, ಕಾರ್ಯದರ್ಶಿ ಎನ್.ಸುಧಾ, ಗುಂಡ್ಲುಪೇಟೆ ತಾಲೂಕು ಅಧ್ಯಕ್ಷ ಶಿವಪ್ರಸಾದ್, ಕಾರ್ಯದರ್ಶಿ ಚಿನ್ನಸ್ವಾಮಿ, ಯಳಂದೂರು ಅಧ್ಯಕ್ಷ ಸೋಮಣ್ಣ, ಹನೂರು ತಾಲೂಕು ಅಧ್ಯಕ್ಷ ಕೃಷ್ಣೇಗೌಡ, ಕಾರ್ಯದರ್ಶಿ ನಾಗಸುಂದರ್, ಕೊಳ್ಳೇಗಾಲ ಅಧ್ಯಕ್ಷ ಶ್ರೀಧರ್, ಕಾರ್ಯದರ್ಶಿ ನಂದೀಶ್, ಪದಾಧಿಕಾರಿಗಳು, ಶಿಕ್ಷಕರು ಭಾಗವಹಿಸಿದ್ದರು.

ಸಿದ್ದರಾಮಯ್ಯ ವಿರುದ್ಧ ಬಿಜೆಪಿ, ಜೆಡಿಎಸ್ ಷಡ್ಯಂತ್ರ

ಚಾಮರಾಜನಗರ, ಆ.8–ಯಾವುದೇ ಕಳಂಕವಿಲ್ಲದೇ ಪ್ರಾಮಾಣಿಕವಾಗಿ ಆಡಳಿತ ನಡೆಸುತ್ತಿರುವ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ಏಳಿಗೆಯನ್ನು ಸಹಿಸಲಾಗದೆ ಬಿಜೆಪಿ ಹಾಗೂ ಜೆಡಿಎಸ್ ಮುಖ್ಯಮಂತ್ರಿ ವಿರುದ್ಧ ಇಲ್ಲಸಲ್ಲದ ಆರೋಪ ಮಾಡುವ ಮೂಲಕ ಷಡ್ಯಂತ್ರ ನಡೆಸುತ್ತಿವೆ ಎಂದು ಶಾಸಕ ಎ.ಆರ್.ಕೃಷ್ಣಮೂರ್ತಿ ತಿಳಿಸಿದರು.



ಚಾಮರಾಜನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಶಾಸಕ ಎ.ಆರ್.ಕೃಷ್ಣಮೂರ್ತಿ ಮಾತನಾಡಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನೈತಿಕವಾಗಿ ಸಿದ್ದರಾಮಯ್ಯ ಅವರಿಗೆ ನಾವೆಲ್ಲರೂ ಬೆಂಬಲ ನೀಡಬೇಕು. ಈ ನಿಟ್ಟಿನಲ್ಲಿ ಆ.9ರಂದು ಮೈಸೂರಿನಲ್ಲಿ ನಡೆಯಲಿರುವ ಜನಾಂದೋಲನ ಕಾರ್ಯಕ್ರಮದಲ್ಲಿ ಜಿಲ್ಲೆಯಿಂದ ಸಾವಿರಾರು ಜನ ಪಾಲ್ಗೊಳ್ಳಬೇಕು ಎಂದರು.

ದಕ್ಷ ಹಾಗೂ ಪ್ರಾಮಾಣಿಕತೆಗೆ ಹೆಸರುವಾಸಿಯಾಗಿರುವ ಸಿದ್ದರಾಮಯ್ಯ ವಿರುದ್ಧವಾಗಿ ಇಲ್ಲಸಲ್ಲದ ಆರೋಪ ಮಾಡಲಾಗುತ್ತಿದೆ ಇದರ ವಿರುದ್ಧ ನಾವೆಲ್ಲರೂ ಧ್ವನಿಗೂಡಿಸಬೇಕು. ಅಬ್ರಾಹಾಂ ಎಂಬ ವ್ಯಕ್ತಿ ರಾಜ್ಯಪಾಲರಿಗೆ ದೂರು ನೀಡಿದಾಗ, ರಾಜ್ಯಪಾಲರು ಈ ಬಗ್ಗೆ ಮಾಹಿತಿ ತರಿಸಿಕೊಂಡು ನಂತರ ಮುಂದಿನ ಕ್ರಮ ಕೈಗೊಳ್ಳಬೇಕಿತ್ತು. ಆದರೆ, ಅವರು ಸರಿಯಾದ ಮಾಹಿತಿ ಪಡೆಯದೆ ತರಾತುರಿಯಲ್ಲಿ ಕ್ರಮ ಕೈಗೊಂಡಿದ್ದಾರೆ. ಇದು ಸರಿಯಲ್ಲ ಎಂದು ಕಿಡಿಕಾರಿದರು.


ಹಗರಣಕ್ಕೆ ಸಂಬಂಧಿಸಿದ ಆಸ್ತಿಯ ಮೂಲ ವಾರಸುದಾರರು ಈ ಬಗ್ಗೆ ಯಾವುದೇ ಆರೋಪ ಮಾಡಿಲ್ಲ. ಈ ಆಸ್ತಿಗಳಿಗೆ ಸಂಬಂಧಪಟ್ಟಂತೆ ನಿವೃತ್ತ ಅಧಿಕಾರಿಯೊಬ್ಬರು ಇದ್ದು, ಅವರು ಬಹಿರಂಗವಾಗಿ ಸ್ಪಷ್ಟನೆ ನೀಡಿದರೆ. ಈ ಎಲ್ಲಾ ಪ್ರಕರಣಗಳಿಗೂ ತೆರೆ ಬೀಳಲಿದೆ ಎಂದು ತಿಳಿಸಿದರು.

ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ ಮಾತನಾಡಿ, 2013 ರಿಂದ 2018ರವರೆಗೆ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಕಪ್ಪುಚುಕ್ಕಿ ಇಲ್ಲದೇ ಆಡಳಿತ ನಡೆಸಿದರು. ಪ್ರಸ್ತುತ 5 ಗ್ಯಾರಂಟಿಗಳನ್ನು ನೀಡುವ ಮೂಲಕ ಉತ್ತಮ ಆಡಳಿತ ನಡೆಸುತ್ತಿದ್ದಾರೆ. ಇದನ್ನು ಸಹಿಸಲಾಗದೆ ಬಿಜೆಪಿ ಹಾಗೂ ಜೆಡಿಎಸ್‌ನವರು ಕಾಂಗ್ರೆಸ್ ಸರ್ಕಾರದ ವಿರುದ್ಧ ಪಾದಯಾತ್ರೆ ಮಾಡುತ್ತಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಹೆಚ್.ವಿ. ಚಂದ್ರು, ಚುಡಾಅಧ್ಯಕ್ಷ ಮಹಮ್ಮದ್ ಅಸ್ಗರ್ ಮುನ್ನಾ, ಕನಿಷ್ಠ ವೇತನಾ ಸಲಹ ಮಂಡಳಿ ಮಾಜಿ ಅಧ್ಯಕ್ಷ ಉಮೇಶ್, ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಆರ್.ಮಹದೇವು, ಜಿಪಂ ಮಾಜಿ ಸದಸ್ಯ ಕೆ.ಪಿ.ಸದಾಶಿವಮೂರ್ತಿ ಹಾಜರಿದ್ದರು.

■ ಸತ್ಯಮೂರ್ತಿ ತೋಳಹುಣಸೆ

ಕಿಚ್ಚ ಸುದೀಪ್‌ರಿಂದ ಗೌರಿ ಟ್ರೇಲರ್ ಬಿಡುಗಡೆ



ಐಶ್ವರ್ಯ, ಮೊನಾಲಿಸಾ ಖ್ಯಾತಿಯ ನಿರ್ದೇಶಕ ಹಾಗೂ ಪತ್ರಕರ್ತರೂ ಆದ ಇಂದ್ರಜಿತ್ ಲಂಕೇಶ್ ಅವರ ನಿರ್ದೇಶನದ ಗೌರಿ ಚಿತ್ರ ಇದೇ ತಿಂಗಳ 15ರ ಸ್ವಾತಂತ್ರ್ಯೋತ್ಸವದಂದು ಬಿಡುಗಡೆಯಾಗಲಿದೆ. ಅವರ ಪುತ್ರ ಸಮರ್ಜಿತ್ ಲಂಕೇಶ್ ಈ ಚಿತ್ರದ ಮೂಲಕ ನಾಯಕನಾಗಿ ಸಿನಿಮಾರಂಗಕ್ಕೆ ಅಡಿಯಿಡುತ್ತಿದ್ದಾನೆ. ಇತ್ತೀಚೆಗೆ "ಗೌರಿ" ಚಿತ್ರದ ಟ್ರೇಲರನ್ನು ಕಿಚ್ಚ ಸುದೀಪ್ ಅವರು ಬಿಡುಗಡೆ ಮಾಡಿದ್ದಾರೆ. ಪ್ರಿಯಾಂಕ ಉಪೇಂದ್ರ, ನಿರ್ಮಾಪಕ ರಮೇಶ್ ರೆಡ್ಡಿ, ಸಂಜಯ್‌ಗೌಡ ಮುಂತಾದವರು ಈ ಸಮಾರಂಭದಲ್ಲಿ ಭಾಗಿಯಾಗಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ನಟ ಸುದೀಪ್, ಇಂದ್ರಜಿತ್ ಮತ್ತು ನಾನು ಹಳೆಯ ಸ್ನೇಹಿತರು. ಇಬ್ಬರೂ ಜೊತೆಗೆ ಬ್ಯಾಡ್ಮಿಂಟನ್ ಆಡುತ್ತಿದ್ದೆವು. ಟ್ರೇಲರ್ ನೋಡಿ ನಮ್ಮ ವಿಮರ್ಶೆ, ಅಭಿಪ್ರಾಯ ಏನೇ ಇರಲಿ. ಇವತ್ತು ಅವರಿಬ್ಬರಿಗೆ ಆಗುವಷ್ಟು ಸಂತೋಷ, ಈ ಪ್ರಪಂಚದಲ್ಲಿ ಬೇರೆ ಯಾರಿಗೂ ಆಗೋದಕ್ಕೆ ಸಾಧ್ಯವೇ ಇಲ್ಲ. ಸಮರ್ಜಿತ್ ಯಶಸ್ಸು ಅವನೊಬ್ಬನದೇ ಆಗಿರುವುದಿಲ್ಲ. ಅದರಲ್ಲಿ ಇಂದ್ರಜಿತ್ ಅವರ ಯಶಸ್ಸೂ ಇದೆ ಎಂದು ಹೇಳಿದರು.

ನಂತರ ನಿರ್ದೇಶಕ ಇಂದ್ರಜಿತ್ ಲಂಕೇಶ್ ಮಾತನಾಡಿ, ಸುದೀಪ್ ಹಾಗೂ ನನ್ನ ಗೆಳೆತನ ಎರಡು ದಶಕಗಳಿಗೂ ಮೀರಿದ್ದು. ಅವರ ಜೊತೆ ಷಟಲ್ ಆಡಿದ ದಿನಗಳು ಈಗಲೂ ಕಣ್ಣಮುಂದಿದೆ. ಹಿಂದೆ ನನ್ನ ನಿರ್ದೇಶನದ ಚಿತ್ರವೊಂದರಲ್ಲಿ ಅವರು ವಿಶೇಷ ಪಾತ್ರ ಮಾಡಿದ್ದರು. ಆದರೆ ಅವರು ನನ್ನಿಂದ ಯಾವ ಸಂಭಾವನೆಯನ್ನು ಪಡೆದಿರಲಿಲ್ಲ. ಆಮೇಲೆ ನಾನು ಅವರಿಗೆ ಏನು ಕೊಡುವುದು, ಅವರ ಬಳಿ ಎಲ್ಲಾ ಇದೆ ಎಂದು, ಅವರ ಮಗಳಿಗೆ ವಿಶೇಷ ಉಡುಗೊರೆ ತೆಗೆದುಕೊಂಡು ಮನೆಗೆ ಹೋದೆ. ಆದರೆ ಸುದೀಪ್ ಅವರು ಅದನ್ನು ನನಗೆ ಕೊಡಲು ಬಿಡಲಿಲ್ಲ. ಈ ರೀತಿ ಅವರು ನನಗೆ ಮೊದಲಿನಿಂದಲೂ ಸಪೋರ್ಟ್ ಮಾಡುತ್ತಾ ಬರುತ್ತಿದ್ದಾರೆ. ಈಗ ನನ್ನ ಮಗನ ಮೊದಲ ಚಿತ್ರದ ಟ್ರೇಲರ್ ರಿಲೀಸ್ ಮಾಡಿಕೊಟ್ಟಿದ್ದಾರೆ. ಅವರಿಗಾಗಿಯೇ ಇಂಗ್ಲೆಂಡ್‌ನಿಂದ ವಿಶೇಷ ಬ್ಯಾಟ್ ತರಿಸಿದ್ದೇನೆ ಎಂದು ಹೇಳಿದರು.



ಗೌರಿ ಚಿತ್ರದ ಮೂಲಕ ಸಮರ್ಜಿತ್ ಲಂಕೇಶ್ ಹಾಗೂ ಸಾನ್ಯಾ ಅಯ್ಯರ್ ನಾಯಕ, ನಾಯಕಿಯಾಗಿ ಚಂದನವನಕ್ಕೆ ಪಾದಾರ್ಪಣೆ ಮಾಡುತ್ತಿದ್ದಾರೆ. ನೈಜಘಟನೆ ಆಧರಿಸಿ ನಿರ್ಮಾಣವಾಗಿರುವ ಗೌರಿ ಚಿತ್ರದಲ್ಲಿ ಪ್ರಿಯಾಂಕ ಉಪೇಂದ್ರ ವಿಶೇಷ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ, ಅಕುಲ್ ಬಾಲಾಜಿ, ಸಿಹಿಕಹಿ ಚಂದ್ರು, ಮುಖ್ಯಮಂತ್ರಿ ಚಂದ್ರು, ಕಾಂತಾರ ಖ್ಯಾತಿಯ ಮಾನಸಿ ಸುಧೀರ್, ಸಂಪತ್ ಮೈತ್ರೇಯ, ಚಂದುಗೌಡ ನಟಿಸಿದ್ದಾರೆ. ಚಿತ್ರಕ್ಕೆ ಎ.ಜೆ. ಶೆಟ್ಟಿ ಹಾಗೂ ಕೃಷ್ಣಕುಮಾರ್ ಛಾಯಾಗ್ರಹಣ ಮಾಡಿದ್ದಾರೆ.

ಕೇದಾರನಾಥ ಕುರಿ ಫಾರಂನಲ್ಲಿ ಥ್ರಿಲ್ಲರ್ ಕಥೆ!



ದುನಿಯಾ ಸೂರಿ ಬಳಗದಲ್ಲಿ ಗುರುತಿಸಿಕೊಂಡಿದ್ದ ಪ್ರತಿಭೆ ಶೀನು ಸಾಗರ್ ನಿರ್ದೇಶನದ, ಗ್ರಾಮೀಣ ಸೊಗಡಿನ ಹಾಸ್ಯಪ್ರಧಾನ ಕಥೆಯನ್ನೊಳಗೊಂಡ ಚಿತ್ರ ಕೇದಾರನಾಥ ಕುರಿ ಫಾರಂ. ಇತ್ತೀಚೆಗೆ ಈ ಚಿತ್ರದ ಟೀಸರ್, ಟ್ರೇಲರ್ ಹಾಗೂ ಹಾಡೊಂದರ ಬಿಡುಗಡೆಯಾಯಿತು. ಕಾಮಿಡಿ ಕಿಲಾಡಿಗಳು ಖ್ಯಾತಿಯ ಮಡೇನೂರು ಮನು ಈ ಚಿತ್ರದ ನಾಯಕನಾಗಿ ನಟಿಸಿದ್ದಾರೆ, ಮತ್ತೊಬ್ಬ ಕಿಲಾಡಿ ಮುತ್ತುರಾಜ್ ಕೂಡ ಈ ಚಿತ್ರದಲ್ಲಿ ನಟಿಸಿದ್ದಾರೆ. ಈ ಹಿಂದೆ ಕಾಲೇಜ್ ಕುಮಾರ, ಜಾನ್ ಜಾನಿ ಜನಾರ್ಧನ್ ಚಿತ್ರಗಳಿಗೆ ಕಾರ್ಯಕಾರಿ ನಿರ್ಮಾಪಕರಾಗಿದ್ದ ಕೆ.ಎಂ.ನಟರಾಜ್ ಈ ಚಿತ್ರವನ್ನು ನಿರ್ಮಿಸಿದ್ದಾರೆ. ಪಕ್ಕಾ ಕಾಮಿಡಿ ಜಾನರ್ ಕಥಾಹಂದರ ಹೊಂದಿರುವ ಈ ಚಿತ್ರದ ಮೂಲಕ ನಿರ್ಮಾಪಕ ನಟರಾಜ್ ಅವರು ಸಮಾಜಕ್ಕೊಂದು ಮೆಸೇಜ್ ಹೇಳ ಹೊರಟಿದ್ದಾರೆ. ಈ ಚಿತ್ರದ ಕಂಟೆಂಟ್ ತುಂಬಾ ಚೆನ್ನಾಗಿದೆ, ಅದಕ್ಕಾಗೇ ನಾನು ಈ ಚಿತ್ರ ನಿರ್ಮಾಣಕ್ಕೆ ಮುಂದಾದೆ. ಜೊತೆಗೆ ಚಿಕ್ಕ ಪಾತ್ರವನ್ನೂ ಸಹ ಮಾಡಿದ್ದೇನೆ. ಆಗಸ್ಟ್ 30ಕ್ಕೆ ಚಿತ್ರವನ್ನು ರಿಲೀಸ್ ಮಾಡುವ ಯೋಜನೆಯಿದೆ ಎಂದರು.


ಚಿತ್ರದ ನಿರ್ದೇಶಕ ಶ್ರೀನಿವಾಸ್(ಸೀನು) ಸಾಗರ ಮಾತನಾಡಿ, ಇದು ಕಾಮಿಡಿ ಜಾನರ್ ಚಿತ್ರ. ಹಳ್ಳಿಯೊಂದರಲ್ಲಿ ನಡೆಯುವ ಕಾಮಿಡಿ ಪ್ರಹಸನ. ಪ್ರೊಡ್ಯೂಸರ್‌ಗೆ ಕಥೆ ಹೇಳಿದ ಕೂಡಲೇ ಇಷ್ಟಪಟ್ಟು ಒಪ್ಪಿದರು. ಕೇದಾರನಾಥ ಕುರಿಫಾರಂನಲ್ಲಿ ಕಾಮಿಡಿ ಜೊತೆಗೆ ಒಂದು ಥ್ರಿಲ್ಲರ್ ಎಲಿಮೆಂಟ್ ಕೂಡ ಇದೆ. ಚಿತ್ರಕ್ಕೆ ಸೆನ್ಸಾರ್‌ನಿಂದ ಯು/ಎ ಪ್ರಮಾಣ ಪತ್ರ ಸಿಕ್ಕಿದ್ದು, ಇದೇ ತಿಂಗಳಲ್ಲಿ ರಿಲೀಸ್ ಮಾಡುತ್ತಿದ್ದೇವೆ ಎಂದರು. ನಾಯಕ ಮಡೆನೂರು ಮನು ಮಾತನಾಡಿ, ಕಾಮಿಡಿ ಕಿಲಾಡಿಗಳು ನಂತರ ನಾನು ಅಭಿನಯಿಸಿದ ಮೊದಲ ಚಿತ್ರವಿದು. ಮಂಜ ಎಂಬ ಪಾತ್ರದಲ್ಲಿ ನಾನು ಕಾಣಿಸಿಕೊಂಡಿದ್ದೇನೆ. ಹಳ್ಳಿಯ ಬ್ಯಾಕ್‌ಡ್ರಾಪ್‌ನಲ್ಲಿ ನಡೆಯುವ ಕಥೆಯಲ್ಲಿ ಕೇದಾರನಾಥ ಕುರಿಫಾರಂ ಪ್ರಮುಖ ಪಾತ್ರ ವಹಿಸಿದೆ, ಅಲ್ಲಿ ಏನೇನು ನಡೆಯುತ್ತೆ ಅನ್ನೋದೇ ಈ ಚಿತ್ರ ಎಂದು ಹೇಳಿದರು. ಚಿತ್ರದ ನಾಯಕಿ ಶಿವಾನಿ ಮಾತನಾಡುತ್ತ, ನಾನು ವಾಸಂತಿ ಎಂಬ ಹಳ್ಳಿಯ ಮುಗ್ಧ ಹುಡುಗಿಯಾಗಿ ಕಾಣಿಸಿಕೊಂಡಿದ್ದೇನೆ, ತಂದೆಯನ್ನು ಬಿಟ್ಟರೆ ಆಕೆಗೆ ಬೇರೆ ಪ್ರಪಂಚವೇ ಇರಲ್ಲ ಎಂದು ಹೇಳಿದರು.



ಸಿನಿಪದಬಂಧ-538



ಉಮ್ಮತ್ತೂರು ಇಂದುಶೇಖರ್
ಮೊ.9880820462



ಹೆಸರು ____________________

ವಿಳಾಸ ____________________

____

ದೂರವಾಣಿ ಸಂಖ್ಯೆ ____________________

ಎಡದಿಂದ ಬಲಕ್ಕೆ

1.ವೈ. ಆರ್. ಸ್ವಾಮಿ ನಿರ್ದೇಶನದಿ ಬುದ್ಧಿವಂತ ಎಡವಿದ್ದಾನೆ	6
4.ಆಂಗ್ಲದ "ಕಥಾನಾಯಕ"	2
6._ _ _ _ _ _ ದಕ್ಷಿಣ ಧ್ರುವಕೂ	6
7.ಮಂಡ್ಯ ನಾಗರಾಜ್ ನಿರ್ದೇಶನದಲ್ಲಿ ಹೆತ್ತವಳ ತ್ಯಾಗ	5
8.ಜೈಲು ಖೈದಿಗಳಿಗೆ ನೀಡಿದ ಷರತ್ತುಬದ್ಧ ಸ್ವಾತಂತ್ರ್ಯ	3
11.ರಾಯರು ಬಂದರು _ _ _ _ _ _	6
12.ಶಿವರಾಜ್ ಕುಮಾರ್ - ನೀನಾ ಅಭಿನಯದ ಚಿತ್ರ	2
14.ಸುನಿಲ್ ಕುಮಾರ್ ದೇಸಾಯಿ ಚಿತ್ರದಲ್ಲಿ ರಹಸ್ಯ ಅಡಗಿದೆ	2
15.ವಿಜಯಕಾಶಿಯ ಬೆಕ್ಕು	3
16.ಒಂದೇ ಹೆರಿಗೆಯಲ್ಲಿ ಜನಿಸಿದ ತ್ರೇತಾಯುಗದ ಮಕ್ಕಳು	4
17.ಚಿತ್ತಕ್ಕೆ ನೆಮ್ಮದಿ ನೀಡಿದ ಚಿತ್ರ	4

ಮೇಲಿನಿಂದ ಕೆಳಕ್ಕೆ

1. ಪ್ರಾಣಿಯೊಂದರ ಹೆಸರು, ಒಂದು ಬಗೆಯ ಕಾರು ಹೌದು!	3
2. ರಾಜಾಶಂಕರ್ ಬುದ್ಧಿವಂತರಿಗೆ ಬುದ್ಧಿವಂತ	5
3. ಲೂಸ್ ಮಾದ ಯೋಗೇಶ್ ಲಂಕಾಧಿಪತಿ	3
5. ಅನಂತ್‌ನಾಗ್ ರಾಮಕೃಷ್ಣನಾಗಿ ಮಾಡಿದ ಚಂದ ವಸೂಲಿ	4
6. ಕಲಾ ಕೇಸರಿ ಎಂದೊಡನೆ ನೆನಪಾಗುವ ನಟ	6
7. "ಅಮ್ಮ ನೀನು ನಕ್ಕರೆ ನಮ್ಮ ಬಾಳು ಸಕ್ಕರೆ....", ಗೀತೆಯ ಚಿತ್ರ	7
8. ಬುದ್ಧಿಮಾಂದ್ಯ ದ್ವಾರಕೀಶ್ ಜಯಿಸಿದ್ದಾನೆ	4
9. ಕಮಲ್, ರಮೇಶ್, ಊರ್ವಶಿ ಅಭಿನಯದ ಚಿತ್ರ	6
10.ಈ ನಟಿ ಗೆಲುವಿನ ದೇವತೆ	5
13. ಭಲೇ ಎನಿಸಿಕೊಂಡ "ದೇವರಾಜು"	3
15.ಮಹಿಮೆ ತೋರಿದ ಕಪಿರಾಯ	3

ಸಿನಿ ಪದಬಂಧ 537ರ ಉತ್ತರ

ಮ	ನಿ	ಹ	ನಿ	ಶ	ನಿ					
ದ್ದ				ನಿ		ಮೇ		ಪಾ	ಪ	
ಲೆ		ಅ	ನು	ಪ್ರ	ಭಾ	ಕ	ರ್		ರ	
		ಕ್ಕ		ಭಾ		ಪ್			ವ	
ಪ	ರ	ಮ	ಶಿ	ವ			ಆ	ವೇ	ಶ	
ಟ್ಟಾ		ಹಾ			ಮ		ರಾ			ಹೊ
ಭಿ		ದೇ	ವ	ರೆ	ಲ್ಲಿ	ದ್ದಾ	ನೆ		ಹಾ	ಸ
ರಾ		ವಿ			ಗೆ		ಧ			ಬೆ
ಮ			ರೆ		ಸಂ	ತ		ಸ	ರ	ಳ
ರೆ	ತೆ	ಳ್ಳಿ	ಬೆ		ಪಿ			ಲ		ಕು
ಡ್ಡಿ			ಲ್		ಗೆ	ದ್ದ	ಮ	ಗ		

ವಿಜೇತರು: ಪಿ.ಪ್ರಶಾಂತ್‌ಕುಮಾರ್, ವಿದ್ಯಾರಣ್ಯಪುರಂ, ಮೈಸೂರು.

ವಿಳಾಸ: 'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು-570 015

'ಟಾಕ್ಸಿಕ್' ಚಿತ್ರಕ್ಕೆ ಸೆಟ್‌ಬಾಯ್ ಕೈಲಿ ಚಾಲನೆ

ರಾಕಿಂಗ್‌ಸ್ಟಾರ್ ಯಶ್ ಕೆಜಿಎಫ್ ಚಿತ್ರದ ಯಶಸ್ಸಿನ ನಂತರ ನ್ಯಾಷನಲ್ ಸ್ಟಾರ್ ಆಗಿದ್ದು ಇತಿಹಾಸ. ಇದೀಗ ಅವರ ಯೋಚನೆ-ಯೋಜನೆ ಎರಡೂ ದೊಡ್ಡಮಟ್ಟದಲ್ಲಿದೆ. ಯಶ್ ಮುಂದಿನ ನಡೆ ಹೇಗಿದೆ. ಅವರು ಯಾವ ಚಿತ್ರ ಮಾಡಬಹುದು ಎಂಬ ಕುತೂಹಲ ಇಡೀ ಚಿತ್ರರಂಗದಲ್ಲಿತ್ತು, ಈ ನಡುವೆ ಆ ಸಿನಿಮಾ, ಈ ಸಿನಿಮಾ, ಬಾಲಿವುಡ್‌ಗೂ ಹೋಗ್ತಾರೆ ಅಂತೆಲ್ಲ ಸುದ್ದಿಗಳು ಹರಿದಾಡಿದ್ದು, ಆದರೆ ಈಗ ಅದಕ್ಕೆಲ್ಲ ಸ್ಪಷ್ಟ ಉತ್ತರ ಸಿಕ್ಕಿದೆ. ಈವರೆಗೆ ಅಂತೆ, ಕಂತೆಯಲ್ಲೇ ಹರಿದಾಡಿದ್ದ ಟಾಕ್ಸಿಕ್ ಚಿತ್ರಕ್ಕೆ ಗುರುವಾರ ಅಧಿಕೃತ ಚಾಲನೆ ದೊರೆತಿದೆ. ಟಾಕ್ಸಿಕ್ ಚಿತ್ರದ ಮುಹೂರ್ತ ಕಾರ್ಯಕ್ರಮ ಬೆಳಗಿನಜಾವದ ಬ್ರಾಹ್ಮೀ ಮುಹೂರ್ತದಲ್ಲಿ ನೆರವೇರಿದೆ. ಮಲಯಾಳಂನ ಹೆಸರಾಂತ ನಿರ್ದೇಶಕಿ ಗೀತು ಮೋಹನ್‌ದಾಸ್ ಅವರು ಟಾಕ್ಸಿಕ್ ಚಿತ್ರಕ್ಕೆ ಆಕ್ಷನ್ ಕಟ್ ಹೇಳುತ್ತಿದ್ದಾರೆ. ನಟ, ನಿರ್ಮಾಪಕರೂ ಆದ ಯಶ್, ತಮ್ಮ ಹಲವು ಚಿತ್ರಗಳಿಗೆ ಕೆಲಸ ಮಾಡಿರೋ ಸೆಟ್‌ಬಾಯ್ ಕೈಯಲ್ಲಿ ತಮ್ಮ ಪ್ಯಾನ್ ವರ್ಲ್ಡ್ ಚಿತ್ರ ಟಾಕ್ಸಿಕ್‌ನ ಮುಹೂರ್ತ ದೃಶ್ಯಕ್ಕೆ ಕ್ಲ್ಯಾಪ್ ಮಾಡಿಸಿ, ತಂತ್ರಜ್ಞನ ಹಾಗೂ ಕಾರ್ಮಿಕರ ಮೇಲೆ ತಮಗಿರೋ ಗೌರವ ಮತ್ತು ಕಾಳಜಿಯನ್ನು ತೋರಿಸಿದ್ದಾರೆ. ಎಚ್.ಎಮ್.ಟಿ. ಆವರಣದಲ್ಲಿ ಸಿದ್ಧವಾಗಿರುವ ಟಾಕ್ಸಿಕ್ ಚಿತ್ರದ ಬೃಹತ್ ಸೆಟ್‌ನಲ್ಲೇ ಈ ಚಿತ್ರದ ಮುಹೂರ್ತ ಸಮಾರಂಭ ನಡೆದಿದೆ. ಗುರುವಾರದಿಂದಲೇ ಟಾಕ್ಸಿಕ್ ಚಿತ್ರದ ಶೂಟಿಂಗ್ ಪ್ರಾರಂಭವಾಗಿದ್ದು, ಚಿತ್ರೀಕರಣದಲ್ಲಿ ನಾಯಕನಟ ಯಶ್ ಅವರೂ ಭಾಗಿಯಾಗಿದ್ದಾರೆ. ಈಗಾಗಲೇ ಕನ್ನಡ ಸೇರಿದಂತೆ ಹಲವು ಭಾಷೆಗಳಲ್ಲಿ ಬಿಗ್ ಬಜೆಟ್ ಸಿನಿಮಾ ನಿರ್ಮಿಸಿರುವ ಕೆವಿಎನ್ ಪ್ರೊಡಕ್ಷನ್ಸ್ ಮೂಲಕ ಕೆವೆಂಕಟ್ ನಾರಾಯಣ ಅವರು ಟಾಕ್ಸಿಕ್ ಚಿತ್ರವನ್ನು ನೂರಾರು ಕೋಟಿ ರೂ.ಗಳ ಬಿಗ್ ಬಜೆಟ್‌ನಲ್ಲಿ ನಿರ್ಮಾಣ ಮಾಡುತ್ತಿದ್ದಾರೆ.

'ವಿಕಾಸಪರ್ವ' ಇನ್ನೇನು ರಿಲೀಸ್

ಸಮಾಜಕ್ಕೆ ಉತ್ತಮ ಸಂದೇಶ ನೀಡುವ ನಿಟ್ಟಿನಲ್ಲಿ ನಿರ್ಮಾಣವಾಗುತ್ತಿರುವ ಸಿನಿಮಾಗಳ ಸಾಲಿಗೆ ರಿಲೀಸ್‌ಗೆ ಸಿದ್ಧವಾಗಿರುವ ವಿಕಾಸಪರ್ವ ಕೂಡ ಸೇರುತ್ತಿದೆ. ಇದೊಂದು ಸಾಮಾಜಿಕ ಕಳಕಳಿಯುಳ್ಳ ಚಿತ್ರವಾಗಿದ್ದು, ಉತ್ತಮ ಸಂದೇಶ ಚಿತ್ರದಲ್ಲಿದೆ. ಈ ಚಿತ್ರದ ಪ್ರಮುಖ ಪಾತ್ರದಲ್ಲಿ ಕಿರುತೆರೆಯಲ್ಲಿ ತಮ್ಮದೇ ಆದ ಛಾಪು ಮೂಡಿಸಿರುವ ರೋಹಿತ್ ನಾಗೇಶ್ ಅವರು ಕಾಣಿಸಿಕೊಂಡಿದ್ದು, ನಟಿ ಸ್ವಾತಿ ಅವರು ಚಿತ್ರದ ನಾಯಕಿಯ ಪಾತ್ರ ನಿರ್ವಹಿಸಿದ್ದಾರೆ. ಈ ಚಿತ್ರದ ಮೂಲಕ ಸಮಾಜಕ್ಕೆ ಅತ್ಯುತ್ತಮ ಸಂದೇಶವನ್ನು ಕಮರ್ಷಿಯಲ್ ಆಗಿ ಹೇಳುವ ಪ್ರಯತ್ನವನ್ನು ಚಿತ್ರತಂಡ ಮಾಡಿದೆ. ವಿಶ್ವತ್ ನಾಯಕ್ ಈ ಚಿತ್ರದ ಕಥೆ, ಚಿತ್ರಕಥೆ, ಸಂಭಾಷಣೆ ಬರೆಯುವ ಜೊತೆಗೆ ಕಾರ್ಯಕಾರಿ ನಿರ್ಮಾಪಕರಾಗಿಯೂ ಕೆಲಸ ಮಾಡಿದ್ದಾರೆ. ಅನ್ಬು ಅರಸ್ ಅವರು ಈ ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದಾರೆ.

ಇತ್ತೀಚೆಗೆ ನಡೆದ ಕಾರ್ಯಕ್ರಮದಲ್ಲಿ ಕನ್ನಡ ಚಿತ್ರರಂಗದ ಹಿರಿಯನಟ ಶ್ರೀನಾಥ್ ಅವರು ಚಿತ್ರದ ಟ್ರೇಲರ್ ಹಾಗೂ ಹಾಡುಗಳನ್ನು ಬಿಡುಗಡೆ ಮಾಡಿದರು. ನಂತರ ಮಾತನಾಡಿದ ಅವರು, ಈ ಚಿತ್ರದಲ್ಲಿ ಮನುಷ್ಯ ನಡವಳಿಕೆಯ ಬಗ್ಗೆ ಮೆಸೇಜ್ ಇದೆ, ಆತ ವಿವೇಚನೆಯಿಂದ ನಡೆದುಕೊಂಡರೆ ವಿಕಾಸಪರ್ವ ಆಗುತ್ತದೆ ಎಂದು ಹೇಳಲಾಗಿದೆ. ಚಿತ್ರದ ಟ್ರೇಲರ್, ಹಾಡು ನೋಡಿದಾಗ ಇದರಲ್ಲಿ ಏನೋ ವಿಶೇಷ ಇದೆ ಅನಿಸುತ್ತದೆ. ಈ ತಂಡದ ಪ್ರಯತ್ನ ತುಂಬಾ ಚೆನ್ನಾಗಿದ್ದು, ಅದು ಅಷ್ಟೇ ಸರಿಯಾಗಿ ಜನರನ್ನು ತಲುಪಲಿ ಎಂದು ಶುಭ ಹಾರೈಸಿದರು.



'ವಿಕಾಸಪರ್ವ'ದ ಟ್ರೇಲರ್ ಬಿಡುಗಡೆ ಮಾಡಿದ ಪ್ರಣಯರಾಜ ಶ್ರೀನಾಥ್.

ಸಾಹಿತಿ ಡಾ.ವಿ.ನಾಗೇಂದ್ರ ಪ್ರಸಾದ್ ಮಾತನಾಡಿ, ಒಂದು ಸಿನಿಮಾಗೆ ಹಾಡಿನಿಂದಲೇ ಪಾಸಿಟಿವ್ ಎನರ್ಜಿ ಶುರುವಾಗುತ್ತದೆ, ಮಧ್ಯಮ, ವಯಸ್ಕರ ಸುತ್ತ ನಡೆಯುವ ಸಂಸಾರಿಕ ಕಥೆ ಈ ಚಿತ್ರದಲ್ಲಿದೆ. ಮುಖ್ಯವಾಗಿ ಇದರಲ್ಲಿ ಒಳ್ಳೆಯ ಮೆಸೇಜ್ ಇದ್ದು, ವಿಶೇಷವಾಗಿ ಗುರುತಿಸುವಂತ ಚಿತ್ರ ಇದಾಗಲಿದೆ ಎಂಬ ಭರವಸೆ ವ್ಯಕ್ತಪಡಿಸಿದರು. ಲಹರಿ ವೇಲು ಮಾತನಾಡಿ, ಈಗ ಬರುತ್ತಿರುವ ಸಿನಿಮಾಗಳಲ್ಲಿ ಕ್ವಾಲಿಟಿ ಕಡಿಮೆಯಾಗಿದ್ದು, ಕ್ವಾಂಟಿಟಿ ಮಾತ್ರ ಹೆಚ್ಚಾಗಿದೆ ಎಂದರು. ನಾಯಕ ರೋಹಿತ ನಾಗೇಶ್ ಮಾತನಾಡಿ, ನಾವು ದುಡ್ಡು ಮಾಡಿ, ಲಾಭ ಗಳಿಸಬೇಕೆಂದು ಈ ಸಿನಿಮಾ ನಿರ್ಮಿಸಿಲ್ಲ. ಪ್ರೇಕ್ಷಕರಿಗೆ ಉತ್ತಮ ಸಂದೇಶ ಹೇಳಬೇಕು ಎಂದು ಮಾಡಿದ ಚಿತ್ರ. ಥಿಯೇಟರಿನಿಂದ ಹೊರಬರುವಾಗ ಜನ ಬೈದುಕೊಂಡು ಮಾತ್ರ ಹೋಗಲ್ಲ ಎಂದು ಭರವಸೆ ಕೊಡಬಲ್ಲೆ ಎಂದರು. ಉಳಿದ ತಾರಾಗಣದಲ್ಲಿ ಅಶ್ವಿನ್‌ಹಾಸನ್, ನಿಶಿತಾಗೌಡ, ಬಲರಾಜವಾಡಿ, ಕುರಿ ರಂಗ ಮುಂತಾದವರಿದ್ದಾರೆ.

ನಾಳೆ ಮೈಸೂರು ಚಲೋ ಪಾದಯಾತ್ರೆ ಸಮಾರೋಪ

ಲಕ್ಷಕ್ಕೂ ಹೆಚ್ಚು ಮಂದಿ ಭಾಗವಹಿಸುವ ನಿರೀಕ್ಷೆ: ಮಾಜಿ ಶಾಸಕ ಬಿ.ಹರ್ಷವರ್ಧನ್

ನಂಜನಗೂಡು, ಆ.8– ಮುಡಾ ಹಗರಣ ಹಾಗೂ ವಾಲ್ಮೀಕಿ ಅಭಿವೃದ್ಧಿ ನಿಗಮದ ಅನುದಾನವನ್ನು ದುರ್ಬಳಕೆ ಮಾಡಿಕೊಂಡಿರುವ ಮುಖ್ಯಮಂತ್ರಿ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ವಿರುದ್ಧ ರಾಜ್ಯದಲ್ಲಿ ಜನಾಕ್ರೋಶ ವ್ಯಕ್ತವಾಗಿದ್ದು, ಆ.10ರಂದು ಮೈಸೂರಿನಲ್ಲಿ ಆಯೋಜಿಸಿರುವ ಮೈಸೂರು ಚಲೋ ಪಾದಯಾತ್ರೆ ಸಮಾರೋಪದಲ್ಲಿ ಲಕ್ಷಕ್ಕೂ ಹೆಚ್ಚು ಮಂದಿ ಭಾಗವಹಿಸಲಿದ್ದಾರೆ ಎಂದು ಮಾಜಿ ಶಾಸಕ ಬಿ.ಹರ್ಷವರ್ಧನ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂವಿಧಾನ ರಕ್ಷಣೆ ಹೆಸರಿನಲ್ಲಿ ಅಧಿಕಾರಕ್ಕೆ ಬಂದ ರಾಜ್ಯ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳ ಜಾರಿ ನೆಪದಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಜನರ ಶ್ರೇಯೋಭಿವೃದ್ಧಿಗೆ ಮೀಸಲಾದ ಎಸ್‌ಸಿಪಿ ಹಾಗೂ ಟಿಎಸ್‌ಪಿ ಯೋಜನೆಯ 28 ಸಾವಿರ ಕೋಟಿ ಅನುದಾನವನ್ನು ದುರ್ಬಳಕೆ ಮಾಡುವ ಮೂಲಕ ಸಂವಿಧಾನ ವಿರೋಧಿ ಕೃತ್ಯ ನಡೆಸಿದೆ. ಇನ್ನು ವಾಲ್ಮೀಕಿ ಅಭಿವೃದ್ಧಿ ನಿಗಮದ ಅನುದಾನವನ್ನು ಅನ್ಯರ ಖಾತೆಗಳಿಗೆ ವರ್ಗಾವಣೆ ಮಾಡಲು ಸರ್ಕಾರದ ಪ್ರಭಾವಿಗಳು ಸಹಕರಿಸಿದ್ದಾರೆ. ಜೊತೆಗೆ ತೆಲಂಗಾಣ ಚುನಾವಣೆಗೆ ಈ ಹಣ ಕೊಂಡೊಯ್ದಿದ್ದಾರೆ. ಇನ್ನು ಈ ಹಿಂದೆ ಮುಖ್ಯಮಂತ್ರಿಯಾಗಿದ್ದ ಸಮಯದಲ್ಲಿ ಲೋಕಾಯುಕ್ತ ಮುಚ್ಚಿ ಎಸಿಬಿ ಅಸ್ತಿತ್ವಕ್ಕೆ ತಂದಿದ್ದ ಸಿಎಂ ಸಿದ್ಧರಾಮಯ್ಯನವರು ಈಗ ರಾಜ್ಯದಲ್ಲಿ ನಡೆದಿರುವ ಬಹುಕೋಟಿ ಹಗರಣದ ಭ್ರಷ್ಟಾಚಾರವನ್ನು ಮುಚ್ಚಿಡಲು ಜನಾಂದೋಲನ ಸಮಾವೇಶ ಆಯೋಜನೆಗೆ ಮುಂದಾಗಿದ್ದಾರೆ. ಕೋಟ್ಯಾಂತರ ರೂ. ಹಣ ವೆಚ್ಚಮಾಡಿ ಆಡಳಿತ ಯಂತ್ರ ಬಳಸಿಕೊಂಡು ಅಧಿಕಾರಿಗಳ ಮೂಲಕ ಸಮಾವೇಶಕ್ಕೆ ಜನರನ್ನು ಕರೆತರಲು ಟಾರ್ಗೆಟ್ ನೀಡಿ ಮೈಸೂರಿನಲ್ಲಿ ಸಮಾವೇಶ ನಡೆಸಲು ಮುಂದಾಗಿರುವ ಸಿದ್ಧರಾಮಯ್ಯನವರ ಕಾರ್ಯವೈಖರಿ ಬಗ್ಗೆ ಜನರು ಆಕ್ರೋಶ ವ್ಯಕ್ತಪಡಿಸಿದ್ದಾರೆ ಎಂದರು.



ಸುದ್ದಿಗೋಷ್ಠಿಯಲ್ಲಿ ಮಾಜಿ ಶಾಸಕ ಹರ್ಷವರ್ಧನ್ ಮಾತನಾಡಿದರು.

ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಮುಡಾ ಹಗರಣ ಮುಚ್ಚಿ ಹಾಕುವ ಸಲುವಾಗಿ ತರಾತುರಿಯಲ್ಲಿ ಹೆಲಿಕಾಪ್ಟರ್‌ನಲ್ಲಿ ಮೈಸೂರಿಗೆ ಆಗಮಿಸಿ ಹಲವು ದಾಖಲೆಗಳನ್ನು ಕದ್ದೊಯ್ದಿದ್ದಾರೆ. ಹೀಗಾಗಿ ಜನರು ಈತ ಮಂತ್ರಿನಾ ಅಥವಾ ಕಳ್ಳನಾ ಎಂದು ಸಾಮಾಜಿಕ ಜಾಲತಾಣಗಳಲ್ಲಿ ಪ್ರಶ್ನಿಸುತ್ತಿದ್ದಾರೆ. ಸರ್ಕಾರದ ಮಂತ್ರಿ ದಾಖಲೆಗಳನ್ನೇ ಹೊತ್ತೊಯ್ದ ಬಳಿಕ ನ್ಯಾಯಾಂಗ ತನಿಖೆಗೆ ಸರ್ಕಾರ ಮುಂದಾಗಿದೆ. ಈಗ ಹಗರಣದ ದಾಖಲೆಗಳನ್ನು ಪಡೆಯೋದಾದರೂ ಹೇಗೆ ಎಂದು ಪ್ರಶ್ನಿಸಿದರು.

ಇನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪನವರು ರಾಜ್ಯ ಸರ್ಕಾರ ಎಸ್‌ಸಿಪಿ ಮತ್ತು ಟಿಎಸ್‌ಪಿ ಅನುದಾನವನ್ನು ದುರ್ಬಳಕೆ ಮಾಡಿಕೊಳ್ಳುತ್ತಿರುವ ಬಗ್ಗೆ ತುಟಿ ಬಿಚ್ಚುತ್ತಿಲ್ಲ ಎಂದು ದೂರಿದರು.

> ಇನ್ನು ನಂಜನಗೂಡಿನ ಶ್ರೀಕಂಠೇಶ್ವರಸ್ವಾಮಿ ದೇವಾಲಯದಲ್ಲಿ ಮೂಲಸೌಕರ್ಯ ಲಭ್ಯವಿಲ್ಲ ಎಂದು ಭಕ್ತರು ದೇವರಿಗೆ ಪತ್ರ ಬರೆದಿದ್ದಾರೆ. ಈಗಲಾದರೂ ಎಚ್ಚೆತ್ತುಕೊಂಡು ಸ್ಥಳೀಯ ಶಾಸಕರು 75 ಕೊಠಡಿಗಳ ವಸತಿಗೃಹ ನಿರ್ಮಾಣ ಕಾಮಗಾರಿಯನ್ನು ಮುಂದುವರೆಸಲಿ. ಜೊತೆಗೆ ನನೆಗುದಿಗೆ ಬಿದ್ದಿರುವ ದೇಗುಲದ ಬೆಳ್ಳಿರಥ ಕಾಮಗಾರಿಯನ್ನು ಪೂರ್ಣಗೊಳಿಸಬೇಕು. ಈಗಾಗಲೇ ನಂಜನಗೂಡಿನಲ್ಲಿ ಅಭಿವೃದ್ಧಿ ಕಾಮಗಾರಿಗಳು ಜಾರಿಯಾಗುತ್ತಿಲ್ಲ. ಪ್ರಗತಿಯಿಂದ ನಂಜನಗೂಡು ಕುಂಠಿತವಾಗುತ್ತಿದೆ.
> – ಬಿ.ಹರ್ಷವರ್ಧನ್, ಮಾಜಿ ಶಾಸಕ

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಗ್ರಾಮಾಂತರ ಮಂಡಲ ಅಧ್ಯಕ್ಷ ಕೆಂಡಗಣ್ಣಪ್ಪ, ನಗರಾಧ್ಯಕ್ಷ ಸಿದ್ಧರಾಜು, ಬಿಜೆಪಿ ಹಿಂದುಳಿದ ವರ್ಗಗಳ ಜಿಲ್ಲಾಧ್ಯಕ್ಷ ಬಾಲಚಂದ್ರು, ಜಿಪಂ ಮಾಜಿ ಸದಸ್ಯ ಸಿ.ಚಿಕ್ಕರಂಗನಾಯಕ, ನಗರಸಭೆ ಮಾಜಿ ಅಧ್ಯಕ್ಷ ಮಹದೇವಸ್ವಾಮಿ, ಸದಸ್ಯ ಮಹದೇವಪ್ರಸಾದ್, ಶ್ರೀನಿವಾಸರೆಡ್ಡಿ, ರಾಘವೇಂದ್ರ, ಮಹದೇವಸ್ವಾಮಿ ಮತ್ತಿತರರಿದ್ದರು.

ಗಣಕಯಂತ್ರ ವಿಜ್ಞಾನ ವಿಭಾಗ ಉದ್ಘಾಟನೆ



ಗಣಕಯಂತ್ರ ವಿಜ್ಞಾನ ವಿಭಾಗವನ್ನು ಪ್ರಾಂಶುಪಾಲ ಡಾ.ಹೆಚ್.ವಿ.ಉದಯಕುಮಾರ್ ಉದ್ಘಾಟಿಸಿದರು.

ತಿ.ನರಸೀಪುರ, ಆ.8– ಪ್ರಸಕ್ತ ಶೈಕ್ಷಣಿಕ ವರ್ಷದಿಂದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕಂಪ್ಯೂಟರ್ ಸೈನ್ಸ್ ಕೋರ್ಸ್ ಆರಂಭಿಸಿರುವುದರಿಂದ ಪದವಿ ವಿದ್ಯಾರ್ಥಿಗಳಿಗೆ ಕಾಲೇಜು ಶಿಕ್ಷಣ ಇಲಾಖೆಯಿಂದ 46 ನೂತನ ಕಂಪ್ಯೂಟರ್‌ಗಳನ್ನು ನೀಡಲಾಗಿದೆ ಎಂದು ಪ್ರಾಂಶುಪಾಲ ಡಾ.ಹೆಚ್.ವಿ.ಉದಯಕುಮಾರ್ ತಿಳಿಸಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಗಣಕಯಂತ್ರ ವಿಜ್ಞಾನ ವಿಭಾಗ ಕೇಂದ್ರ ಉದ್ಘಾಟಿಸಿ ಮಾತನಾಡಿದ ಅವರು, ತಾಲೂಕು ಮಟ್ಟದಲ್ಲಿ ಗ್ರಾಮೀಣ ಮಕ್ಕಳಿಗೆ ಉನ್ನತ ಶಿಕ್ಷಣ ಕಲ್ಪಿಸಲು ಕಾಳಜಿ ವಹಿಸಿರುವ ಸರ್ಕಾರ ಈ ಶೈಕ್ಷಣಿಕ ಸಾಲಿನಿಂದ ಕಾಲೇಜಿನಲ್ಲಿ ಬಿಸಿಎ ನೂತನ ಕೋರ್ಸ್ ಅನ್ನು ಪ್ರಾರಂಭಿಸಿದೆ. ಕಂಪ್ಯೂಟರ್ ಸೈನ್ಸ್‌ನಲ್ಲಿ ಪದವಿ ವ್ಯಾಸಂಗ ಮಾಡಲು ಇಚ್ಛಿಸುವ ವಿದ್ಯಾರ್ಥಿಗಳು ಇಂತಹ ಅವಕಾಶವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಐಕ್ಯೂಎಸಿ ಸಂಚಾಲಕಿ ಡಾ.ಎಂ.ಕೆ.ಮಾಧವಿ, ವಿಭಾಗದ ಮುಖ್ಯಸ್ಥ ಎಂ.ಕಿರಣ್ ಕುಮಾರ್, ಮಹೇಶ್, ವಾಣಿಜ್ಯ ಶಾಸ್ತ್ರ ವಿಭಾಗದ ಮುಖ್ಯಸ್ಥೆ ಸವಿತಾ, ಉಪನ್ಯಾಸಕರಾದ ಮಮತಾ ಹಾಗೂ ಕುಮಾರಿ ಸುಮಯ್ಯ ತಬಸಂ ಹಾಗೂ ಇತರರಿದ್ದರು.


ನೂತನ ಮೈಮುಲ್ ಅಧ್ಯಕ್ಷರಿಗೆ ಸನ್ಮಾನ



ನೂತನ ಮೈಮುಲ್ ಅಧ್ಯಕ್ಷ ಆರ್.ಚಲುವರಾಜ್ ಅವರನ್ನು ಎಸ್‌ಸಿ, ಎಸ್‌ಟಿ ಗುತ್ತಿಗೆದಾರ ಸಂಘದ ಉಪಾಧ್ಯಕ್ಷ ಶ್ರೀರಂಗರಾಜಪುರ ಸಿದ್ದರಾಜು ಅಭಿನಂದಿಸಿದರು. ಈ ವೇಳೆ ಮುಖಂಡರಾದ ಎಂ.ಪಿ.ಮಧು, ಎಲ್.ಕೆ.ಲಯನ್ ಜಯರಾಂ ಇನ್ನಿತರರಿದ್ದರು.

ನ್ಯಾಷನಲ್ ಆಗ್ರೋ ಫೌಂಡೇಶನ್‌ನಿಂದ 7 ಕೆರೆಗಳ ಅಭಿವೃದ್ಧಿ ಶ್ಲಾಘನೀಯ

ಎಲ್‌ಟಿಐ ಮೈತ್ರಿ ಫೌಂಡೇಶನ್ ಮುಖ್ಯ ವ್ಯವಸ್ಥಾಪಕ ಫಣೀಶ್ ರಾವ್



ಕೆರೆ ಅಭಿವೃದ್ಧಿ ನಾಮಫಲಕ ವಿತರಿಸಲಾಯಿತು

ನಂಜನಗೂಡು, ಆ.8– ಗ್ರಾಮೀಣ ಭಾಗದಲ್ಲಿ ಅಂತರ್ಜಲ ಪ್ರಮಾಣ ಹೆಚ್ಚಿಸಿ ರೈತರಿಗೆ ಅನುಕೂಲ ಕಲ್ಪಿಸುವ ಸಲುವಾಗಿ ನ್ಯಾಷನಲ್ ಆಗ್ರೋ ಫೌಂಡೇಶನ್ ಸಂಸ್ಥೆ ನಂಜನಗೂಡು ತಾಲೂಕಿನ 7 ಗ್ರಾಮಗಳಲ್ಲಿ ಕೆರೆಗಳನ್ನು ಅಭಿವೃದ್ಧಿಪಡಿಸಿರುವುದು ಶ್ಲಾಘನೀಯ ಎಂದು ಎಲ್‌ಟಿಐ ಮೈತ್ರಿ ಫೌಂಡೇಶನ್ ಮುಖ್ಯ ವ್ಯವಸ್ಥಾಪಕ ಫಣೀಶ್ ರಾವ್ ತಿಳಿಸಿದರು.

ನಗರದ ಮಹದೇಶ್ವರ ಫಂಕ್ಷನ್ ಹಾಲ್ ಕಲ್ಯಾಣ ಮಂಟಪದಲ್ಲಿ ನ್ಯಾಷನಲ್ ಆಗ್ರೋ ಫೌಂಡೇಶನ್ ಸಂಸ್ಥೆ ವತಿಯಿಂದ ಆಯೋಜಿಸಿದ್ದ ಅಭಿವೃದ್ಧಿಪಡಿಸಿದ ಕೆರೆಗಳ ಗ್ರಾಮಸ್ಥರಿಗೆ ನಾಮಫಲಕ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕೆಲ ದಿನಗಳ ಹಿಂದೆ ಭೀಕರ ಬರಗಾಲದಿಂದ ಕೆರೆಗಳಲ್ಲಿ ನೀರು ನಿಲ್ಲದೆ ಬತ್ತಿ ಹೋಗಿತ್ತು. ಇದರಿಂದ ಅಂತರ್ಜಲ ಪ್ರಮಾಣವು ಕುಸಿತಗೊಂಡು ತೊಂದರೆಯಾಗಿತ್ತು. ಅಲ್ಲದೇ ಕೆರೆಗಳು ಅಭಿವೃದ್ಧಿ ಕಾಣದೆ ಹೂಳು ತುಂಬಿಕೊಂಡು ಮಳೆ ನೀರು ನಿಲ್ಲದೆ ನೀರು ಪೋಲಾಗುತ್ತಿತ್ತು. ನ್ಯಾಷನಲ್ ಆಗ್ರೋ ಫೌಂಡೇಶನ್ ಸಂಸ್ಥೆ ಸಾಮಾಜಿಕ ಕಳಕಳಿ ತೋರಿ ತಾಲೂಕಿನ ತಗಡೂರು ಹಾಗೂ ಕಾರ್ಯ ಗ್ರಾಪಂ ವ್ಯಾಪ್ತಿಯ ಏಳು ಗ್ರಾಮಗಳಲ್ಲಿ ತಲಾ 1 ಲಕ್ಷ ರೂ. ವೆಚ್ಚದಲ್ಲಿ ಕೆರೆಗಳನ್ನು ಅಭಿವೃದ್ಧಿಪಡಿಸಿದೆ. ಅಲ್ಲದೇ ಚೆಕ್ ಡ್ಯಾಮ್‌ಗಳನ್ನು ನಿರ್ಮಿಸಿ ರೈತರಿಗೆ ಅನುಕೂಲ ಕಲ್ಪಿಸಿದೆ. ಜೊತೆಗೆ ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕ, ಶಾಲೆಗಳ ಅಭಿವೃದ್ಧಿ ಕಾರ್ಯ ನಿರ್ವಹಿಸುವ ಮೂಲಕ ಸಾಮಾಜಿಕ ಜವಾಬ್ದಾರಿ ತೋರಿರುವುದು ಶ್ಲಾಘನೀಯ ಎಂದು ಪ್ರಶಂಸೆ ವ್ಯಕ್ತಪಡಿಸಿದರಲ್ಲದೆ ಇದನ್ನು ಪ್ರತಿಯೊಬ್ಬ ರೈತರು ಸದ್ಬಳಕೆ ಮಾಡಿಕೊಳ್ಳಬೇಕು ಮತ್ತು ಕೆರೆಗಳ ಸ್ವಚ್ಛತೆಗೆ ಆದ್ಯತೆ ನೀಡಬೇಕು ಎಂದರು.

ಇದೇ ವೇಳೆ ತಾಲೂಕಿನ ಕಾರ್ಯ ಮತ್ತು ತಗಡೂರು ಗ್ರಾಪಂ ವ್ಯಾಪ್ತಿಯ 7 ಗ್ರಾಮಗಳ ಗ್ರಾಮಸ್ಥರಿಗೆ ಕೆರೆ ಅಭಿವೃದ್ಧಿ ನಾಮಫಲಕಗಳನ್ನು ವಿತರಿಸಲಾಯಿತು.

ಸಮಾರಂಭದಲ್ಲಿ ಸಿಎಸ್‌ಆರ್ ವಿಭಾಗದ ವ್ಯವಸ್ಥಾಪಕಿ ಲಲಿತಾ, ನ್ಯಾಷನಲ್ ಆಗ್ರೋ ಫೌಂಡೇಶನ್ ಸಂಸ್ಥೆ ನಿರ್ದೇಶಕ ಡಾ.ಮುರುಗನ್, ಮಲ್ಕುಂಡಿ ಗಣೇಶ್ ಸೇರಿದಂತೆ ಹಲವರಿದ್ದರು.

ಸದೃಢ ಮನಸ್ಸು, ಏಕಾಗ್ರತೆಗೆ ಕ್ರೀಡೆ ಅವಶ್ಯಕ



ಬನ್ನೂರು, ಆ.8– ಮನುಷ್ಯನ ಸದೃಢ ಮನಸ್ಸು, ಏಕಾಗ್ರತೆಗೆ ಕ್ರೀಡೆ ಅವಶ್ಯಕ. ಕ್ರೀಡೆಯಿಂದ ದೇಹ ಬಲಾಢ್ಯವಾಗುವ ಜೊತೆಗೆ ಉತ್ತಮ ಆರೋಗ್ಯ ವೃದ್ಧಿಸಿಕೊಳ್ಳಲು ಸಹಾಯವಾಗುತ್ತದೆ ಎಂದು ಟ್ಯಾವೋ ವಿದ್ಯಾಸಂಸ್ಥೆ ಸಂಸ್ಥಾಪಕ ಬಿ.ಆರ್.ಮಂಜುನಾಥ್ ತಿಳಿಸಿದರು.

ಬಿ.ಸೀಹಳ್ಳಿಯ ಆದಿಶಕ್ತಿ ಹುಚ್ಚಮ್ಮ ದೇವಾಲಯದ ಆವರಣದಲ್ಲಿ ನಡೆದ ಹೋಬಳಿ ಮಟ್ಟದ ಶಾಲಾ ಕ್ರೀಡಾಕೂಟದಲ್ಲಿ ಮಾತನಾಡಿದ ಅವರು, ಹಿಂದೆಲ್ಲಾ ಮನುಷ್ಯ ಒಂದಿಲ್ಲೊಂದು ಕೆಲಸ ಕಾರ್ಯಗಳ ಮೂಲಕ ವ್ಯಾಯಾಮ ಮಾಡುತ್ತಿದ್ದು, ಆತನ ಆಯಸ್ಸು, ದೇಹದ ಶಕ್ತಿ ವೃದ್ಧಿಯಾಗುತ್ತಿತ್ತು. ಆದರೆ ಇಂದು ಮನುಷ್ಯ ವಿಲಾಸಿ ಜೀವನ ಅನುಸರಿಸುತ್ತಿರುವ ಹಿನ್ನೆಲೆಯಲ್ಲಿ ಕೆಲಸ ಕಾರ್ಯಗಳು ಕಡಿಮೆಯಾಗುತ್ತಿದ್ದು, ಆತನ ಆಯಸ್ಸು ನಿತ್ಯ ಕಡಿಮೆಯಾಗುತ್ತಿದೆ ಎಂದರು.

ವಿದ್ಯಾರ್ಥಿ ದೆಸೆಯಿಂದಲೇ ಕ್ರೀಡಾಕೂಟದಲ್ಲಿ ಪಾಲ್ಗೊಳ್ಳುವ ಮೂಲಕ ಕ್ರೀಡೆಯಲ್ಲಿ ದೇಶದ ಪರ ಉತ್ತಮ ಸಾಧನೆ ಮಾಡುವಂತೆ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದ ಅವರು ದೈಹಿಕ ಶಿಕ್ಷಣದಿಂದ ಜೀವನದಲ್ಲಿ ಶಿಸ್ತು ಮೈಗೂಡಿಸಿಕೊಳ್ಳಬಹುದೆಂದು ತಿಳಿಸಿದರು.

ಕ್ರೀಡಾ ಜ್ಯೋತಿ ಸ್ವೀಕರಿಸಿ ಮಾತನಾಡಿದ ಮಾಜಿ ಶಾಸಕಿ ಜೆ.ಸುನೀತಾ ವೀರಪ್ಪಗೌಡ, ಕ್ರೀಡೆಗಳಲ್ಲಿ ಗೆಲುವು ಸೋಲು ಸಾಮಾನ್ಯ. ಎಲ್ಲಾ ಶಾಲೆಗಳ ವಿದ್ಯಾರ್ಥಿಗಳ ಜೊತೆ ಪಾಲ್ಗೊಳ್ಳುವ ಹುಮ್ಮಸ್ಸು ಮುಖ್ಯ ಎಂದರು.

2 ದಿನಗಳ ಕಾಲ ನಡೆಯುವ ಕ್ರೀಡಾಕೂಟದಲ್ಲಿ ಮೊದಲ ದಿನ 100ಮೀ, 200 ಮೀ, 400 ಮೀ, 600 ಮೀ ಓಟ, ರಿಲೇ, ಎತ್ತರ ಜಿಗಿತ, ಗುಂಡು ಎಸೆತ, ತಟ್ಟೆ ಎಸೆತ, ಉದ್ದ ಜಿಗಿತದಂತಹ ಅಥ್ಲೆಟಿಕ್ ಸ್ಪರ್ಧೆಗಳು ಜರುಗಿದವು. ಹೋಬಳಿ ವಿವಿಧ ಶಾಲೆಗಳಿಂದ ಬಂದಿದ್ದ ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡಿದ್ದರು.

ಈ ವೇಳೆ ಯೋಜನಾ ಸಮನ್ವಯಾಧಿಕಾರಿ ಜಿ.ಶೋಭಾ, ಶಿವಶಂಕರ್‌ಮೂರ್ತಿ, ಸುಬ್ರಹ್ಮಣ್ಯ, ರೋಟರಿ ಶಾಲೆ ಅಧ್ಯಕ್ಷ ವೆಂಕಟೇಶ್, ಸೀಹಳ್ಳಿ ಗ್ರಾಪಂ ಅಧ್ಯಕ್ಷ ಜೈ ಕುಮಾರ್, ಜವರೇಗೌಡ, ಶಿವಮೂರ್ತಿ, ದೇವರಾಜು, ನಾಗೇಶ್, ಸುರೇಶ್, ದೈಹಿಕ ಶಿಕ್ಷಕ ಶಬೀರ್, ಕುಮಾರ್, ಮರಿಸ್ವಾಮಿ, ಪುಟ್ಟರಾಜು, ರಾಜೇಂದ್ರಪ್ರಸಾದ್, ಮಂಜುನಾಥ್ ಸೇರಿದಂತೆ ಪ್ರಮುಖರು ಇದ್ದರು.

ಬಿಎ ಅಂತಿಮ ವರ್ಷದ 6ನೇ ಸೆಮಿಸ್ಟರ್ ಪರೀಕ್ಷೆ

ಆದಿಚುಂಚನಗಿರಿ ಕಾಲೇಜಿಗೆ ಶೇ.100ರಷ್ಟು ಫಲಿತಾಂಶ



ಚಿತ್ರದಲ್ಲಿ ಕಾಲೇಜಿನ ಉಪನ್ಯಾಸಕರನ್ನು ಕಾಣಬಹುದು

ಹೆಚ್.ಡಿ.ಕೋಟೆ, ಆ.8– ಕಳೆದ ಜೂನ್, ಜುಲೈನಲ್ಲಿ ನಡೆದ ಬಿಎ ಅಂತಿಮ ವರ್ಷದ 6ನೇ ಸೆಮಿಸ್ಟರ್ ಪದವಿ ಪರೀಕ್ಷೆಯಲ್ಲಿ ಪಟ್ಟಣದ ಶ್ರೀಆದಿಚುಂಚನಗಿರಿ ಪ್ರಥಮ ದರ್ಜೆ ಕಾಲೇಜಿಗೆ ಶೇ.100 ಫಲಿತಾಂಶ ಬಂದಿದೆ ಎಂದು ಪ್ರಾಂಶುಪಾಲ ಡಾ.ಜೆ.ಎನ್.ವೆಂಕಟೇಶ್ ತಿಳಿಸಿದರು.

ಪರೀಕ್ಷೆ ತೆಗೆದುಕೊಂಡಿದ್ದ 45 ವಿದ್ಯಾರ್ಥಿಗಳ ಪೈಕಿ 39 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾಗಿದ್ದು, 6 ಮಂದಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಕನ್ನಡದಲ್ಲಿ ಬಿ.ರಮ್ಯ, ಸಿ.ಎಂ. ಸೋನಾ 100ಕ್ಕೆ 100, ಎಂ.ಭಾರತಿ 98, ಎಸ್.ಸಂಜಯ್ 95, ಚಾಮರಾಜು 96, ಡಿ.ಕೀರ್ತಿ 96, ಚರಣ್ ಕುಮಾರ್ 95, ಇತಿಹಾಸದಲ್ಲಿ ಚಿಕ್ಕನಾಯಕ 94, ಭೂಗೋಳ ಶಾಸ್ತ್ರದಲ್ಲಿ ಕಿರಣ್ 97, ಅರ್ಥಶಾಸ್ತ್ರದಲ್ಲಿ ಸುಮಂತ್ 97, ಸಮಾಜಶಾಸ್ತ್ರದಲ್ಲಿ ಪುನೀತ್ ರಾಜ್ 91, ಇಂಗ್ಲಿಷ್‌ನಲ್ಲಿ ಲಕ್ಷ್ಮಿ 75, ಸುಶ್ಮಿತಾ 74, ನಂದೀಶ 72, ರಾಜ್ಯಶಾಸ್ತ್ರದಲ್ಲಿ ಚೈತನ್ಯ 92 ಅಂಕಗಳನ್ನು ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾರೆ ಎಂದರು.

ವಿದ್ಯಾರ್ಥಿಗಳ ಸಾಧನೆ ಮೆಚ್ಚಿ ಸಂಸ್ಥೆಯ ಶ್ರೀಸೋಮೇಶ್ವರನಾಥ ಸ್ವಾಮೀಜಿ ಅಭಿನಂದಿಸಿದ್ದಾರೆ ಹಾಗೂ ಸಂಸ್ಥೆ ಆಡಳಿತಾಧಿಕಾರಿ ಪ್ರೊ.ಕೆ.ಪಿಬಸವೇಗೌಡ ಹರ್ಷ ವ್ಯಕ್ತಪಡಿಸಿದ್ದಾರೆ. ಇದೇ ವೇಳೆ ದೈಹಿಕ ಶಿಕ್ಷಣ ನಿರ್ದೇಶಕ ಕಲ್ಲೇಶ್‌ಗೌಡ, ಉಪನ್ಯಾಸಕರಾದ ರಾಮಚಂದ್ರ, ಚೆನ್ನಕೇಶವ, ಮಹೇಂದ್ರ ಅಭಿನಯ, ಚಂದನ, ಸಿದ್ದರಾಜು, ಮಹೇಶ್, ರವೀಶ, ಮಹೇಂದ್ರ, ಪ್ರೀತಿ, ಮಂಜು, ಚಿತ್ರ ಇನ್ನಿತರರಿದ್ದರು.

ಅರ್ಥಪೂರ್ಣ ಡಿ.ದೇವರಾಜ ಅರಸು ಜಯಂತಿಗೆ ತೀರ್ಮಾನ

ತಿ.ನರಸೀಪುರ, ಆ.8– ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯಿಂದ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಪಟ್ಟಣದಲ್ಲಿ ನಡೆದ ಪೂರ್ವ ಭಾವಿ ಸಿದ್ಧತಾ ಸಭೆಯಲ್ಲಿ ನಿರ್ಧರಿಸಲಾಯಿತು.



ಪೂರ್ವಭಾವಿ ಸಭೆಯಲ್ಲಿ ತಹಸೀಲ್ದಾರ್ ಟಿ.ಜಿ.ಸುರೇಶ್ ಆಚಾರ್ ಮಾತನಾಡಿದರು.

ಪಟ್ಟಣದ ತಾಪಂ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಆ.20 ರಂದು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯಿಂದಲೇ ವೇದಿಕೆ ಕಾರ್ಯಕ್ರಮ ಆಯೋಜಿಸಿ, ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ, ಡಿ.ದೇವರಾಜ ಅರಸು ಅವರ 109ನೇ ಜಯಂತಿ ಆಚರಿಸಲು ತೀರ್ಮಾನಿಸಲಾಯಿತು.

ಸಭೆ ಅಧ್ಯಕ್ಷತೆ ವಹಿಸಿದ್ದ ತಹಸೀಲ್ದಾರ್ ಸುರೇಶಾಚಾರ್ ಮಾತನಾಡಿ, ಹಿಂದುಳಿದ ವರ್ಗಗಳ ಇಲಾಖೆ ಸಹಭಾಗಿತ್ವದಲ್ಲಿ ಸಂಘ ಸಂಸ್ಥೆಗಳ ಸಲಹೆ, ಸಹಕಾರ ಪಡೆದು ಆ.20ರಂದು ಮುಖ್ಯಮಂತ್ರಿಯಾಗಿ ಆಡಳಿತದಲ್ಲಿ ಸುಧಾರಣೆ ತಂದು, ಶೋಷಿತರು ಸೇರಿದಂತೆ ಅಹಿಂದ ವರ್ಗದ ಜನನಾಯಕರಾಗಿದ್ದ ಡಿ.ದೇವ ರಾಜ ಅರಸು ಅವರ ಜಯಂತಿಯನ್ನು ತಾಲೂಕು ಆಡಳಿತದಿಂದ ಆಚರಿಸಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ತಾಪಂ ಇಓ ಸಿ.ಕೃಷ್ಣ, ಬಿಇಓ ಶಿವಮೂರ್ತಿ, ಸೆಸ್ಕ್ ಎಇಇ ವೀರೇಶ್, ಬಿಆರ್‌ಸಿ ಎಸ್.ನಾಗೇಶ್, ಹಿಂದುಳಿದ ವರ್ಗಗಳ ಇಲಾಖೆ ವಿಸ್ತರಣಾಧಿಕಾರಿ ರಾಜಣ್ಣ, ಪುರಸಭೆ ಮುಖ್ಯಾಧಿಕಾರಿ ಬಿ.ಕೆ.ವಸಂತ ಕುಮಾರಿ, ಕೃಷಿ ಇಲಾಖೆ ಸಹಾಯಕ ನಿರ್ದೇಶಕಿ ಸುಹಾಸಿನಿ, ಮುಖಂಡರಾದ ಕರೋಹಟ್ಟಿ ಮಹದೇವಯ್ಯ, ಪುಟ್ಟಮಲ್ಲಯ್ಯ, ಬಿ.ಮನ್ಸೂರ್ ಅಲಿ, ಅಕ್ಬರ್ ಪಾಷ ಹಾಗೂ ಮತ್ತಿತರರಿದ್ದರು.

ಕ್ರೀಡಾ ಸಾಮಗ್ರಿ, ನೋಟ್‌ಬುಕ್ ಕೊಡುಗೆ




ಬೆಟ್ಟದಪುರದ ಸರ್ಕಾರಿ ಪ್ರೌಢಶಾಲೆ ವಿದ್ಯಾರ್ಥಿಗಳಿಗೆ ಕ್ರೀಡಾ, ನೋಟ್‌ಬುಕ್ ಮತ್ತು ಲೇಖನ ಸಾಮಗ್ರಿಗಳನ್ನು ಸಮಾಜ ಸೇವಕ ಸುನೀಲ್ ಕುಮಾರ್ ಕೊಡುಗೆ ನೀಡಿದರು. ಈ ವೇಳೆ ತಾಲೂಕು ಬಿಜೆಪಿ ಅಧ್ಯಕ್ಷ ರಾಜೇಂದ್ರ, ಮುಖಂಡರಾದ ಪಿರಿಯಾಪಟ್ಟಣ ನಗರ ಅಧ್ಯಕ್ಷ ರಮೇಶ್, ಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳು ಸೇರಿದಂತೆ ಇತರರಿದ್ದರು.

ಬಗರ್‌ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿ ರಚನೆ



ಶೇಖರ್



ಕುಮಾರ್



ಲತಾ

ಹುಣಸೂರು, ಆ.8– ರಾಜ್ಯಪಾಲರ ಆಜ್ಞಾನುಸಾರ ಹುಣಸೂರು ಬಗರ್‌ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿ (ಅಕ್ರಮ ಸಕ್ರಮ) ಗೆ, ಕಂದಾಯ ಇಲಾಖೆ (ಭೂ ಮಂಜೂರಾತಿ–2) ಗೆ ಈ ಕೂಡಲೇ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೆ ಈ ಕೆಳಕಂಡಂತೆ ಸಮಿತಿ ರಚಿಸಲಾಗಿದೆ.

ಸಮಿತಿಗೆ ಸದಸ್ಯರಾಗಿ ಶೇಖರ್(ಸಾಮಾನ್ಯ), ಕುಮಾರ್ ಹೆಚ್.ಎಸ್. (ಪರಿಶಿಷ್ಟ ಜಾತಿ), ಲತಾ ಕೋಂ ಶ್ರೀಕಂಠಪ್ಪ ಹೆಚ್.ಎಸ್. ಹುಣಸೂರು ಟೌನ್(ಮಹಿಳೆ), ತಹಸೀಲ್ದಾರ್ ಅವರನ್ನು ಸದಸ್ಯ ಕಾರ್ಯದರ್ಶಿಗಳಾಗಿ ನೇಮಕ ಮಾಡಿ ಕಂದಾಯ ಇಲಾಖೆ ಪೀಠಾಧಿಕಾರಿ ಮುತ್ತುರಾಜ್ ಆದೇಶ ಹೊರಡಿಸಿದ್ದಾರೆ.

ಸಿಎಂ ವಿರುದ್ಧ ಜೆಡಿಎಸ್, ಬಿಜೆಪಿ ಆರೋಪ ಖಂಡನೀಯ

ಪಿರಿಯಾಪಟ್ಟಣ, ಆ.8– ರಾಜ್ಯ ಕಂಡ ಧೀಮಂತ ನಾಯಕ, ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಜೆಡಿಎಸ್, ಬಿಜೆಪಿ ಮಾಡುತ್ತಿರುವ ಭ್ರಷ್ಟಾಚಾರದ ಆರೋಪ ನಿಜಕ್ಕೂ ಖಂಡನೀಯ ಎಂದು ತಾಲೂಕು ಕುರುಬ ಸಮಾಜದ ಅಧ್ಯಕ್ಷ ಹೆಚ್.ಡಿ.ಗಣೇಶ್ ಆರೋಪಿಸಿದರು.



ಪಿರಿಯಾಪಟ್ಟಣದ ಕನಕ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಹೆಚ್.ಡಿಗಣೇಶ್ ಮಾತನಾಡಿದರು

ಪಟ್ಟಣದ ಕನಕ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದಿನ ಬಿಜೆಪಿ ಸರ್ಕಾರದಲ್ಲೇ ಸಿಎಂ ಸಿದ್ದರಾಮಯ್ಯನವರ ಪತ್ನಿಗೆ ಮುಡಾದಿಂದ ನಿವೇಶನ ಹಂಚಿಕೆಯಾಗಿದೆ. ಆದರೆ ಇದೀಗ ಭ್ರಷ್ಟಾಚಾರದ ಆರೋಪ ಮಾಡುವ ಮೂಲಕ ಸಿದ್ದರಾಮಯ್ಯನವರನ್ನು ಹತ್ತಿಕ್ಕಲು ವಿಪಕ್ಷಗಳ ಮುಖಂಡರು ಸಂಚು ರೂಪಿಸುತ್ತಿದ್ದಾರೆ. ಹೀಗಾಗಿ ಜೆಡಿಎಸ್ ಹಾಗೂ ಬಿಜೆಪಿ ವಿರುದ್ಧ ನಾಳೆ ಮೈಸೂರಿನಲ್ಲಿ ನಡೆಯುವ ಜನಾಂದೋಲನ ಸಮಾವೇಶದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಅಹಿಂದ ಕಾರ್ಯಕರ್ತರು ಭಾಗವಹಿಸಿ ಸಮಾವೇಶ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಕುರುಬ ಸಮಾಜದ ಪ್ರಧಾನ ಕಾರ್ಯದರ್ಶಿ ಸುನೀಲ್ ಕುಮಾರ್ ಮಾತನಾಡಿದರು. ಮುಖಂಡರಾದ ಸುನೀಲ್, ಜವರಪ್ಪ ರಾಜಶೇಖರ್, ಮಹದೇವ್, ಚಿಕ್ಕೇಗೌಡ, ಜವರೇಗೌಡ ಸೇರಿದಂತೆ ಅನೇಕರಿದ್ದರು.

ಸರಗೂರು ಬಳಿ ಹುಲಿ ದಾಳಿಗೆ ಹಸು ಬಲಿ

ಸರಗೂರು, ಆ.8– ಹಾಡಹಗಲೇ ಹುಲಿ ದಾಳಿಗೆ ಹಸು ಬಲಿಯಾಗಿರುವ ಘಟನೆ ಗುರುವಾರ ತಾಲೂಕಿನ ಸಾಗರೆ ಗ್ರಾಮದಲ್ಲಿ ನಡೆದಿದೆ.



ಗ್ರಾಮದ ನಿವಾಸಿ ಚುಂಚನಾಯಕ ಅವರಿಗೆ ಸೇರಿದ ಹಸು ಬಲಿಯಾಗಿರುವುದು. ಎಂದಿನಂತೆ ಚುಂಚನಾಯಕ ಅವರು ಹಸುವನ್ನು ಮೇಯಲು ಬಿಟ್ಟು ಕೃಷಿ ಕಾರ್ಯದಲ್ಲಿ ತೊಡಗಿದ್ದರು. ಹಸು ರಾಹಿಲ್ ಪಾಷ ಎಂಬುವರ ತೋಟದ ಬಳಿ ಮೇಯುತ್ತಿದ್ದ ವೇಳೆ ಹುಲಿ ದಾಳಿ ನಡೆಸಿ ಬಲಿ ಪಡೆದಿದೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಅರಣ್ಯ ಇಲಾಖೆ ಅಧಿಕಾರಿಗಳು ಪರಿಶೀಲನೆ ನಡೆಸಿ ಸರ್ಕಾರದಿಂದ ಪರಿಹಾರ ಕೊಡಿಸುವ ಭರವಸೆ ನೀಡಿದರು.

ಹುಲಿ ಸೆರೆಗೆ ಒತ್ತಾಯ: ಹಾಡಹಗಲೇ ಹುಲಿ ಕಾಣಿಸಿಕೊಂಡಿರುವುದರಿಂದ ಈ ಭಾಗದ ರೈತರು, ಸಾರ್ವಜನಿಕರಲ್ಲಿ ಆತಂಕ ಹೆಚ್ಚಾಗಿದೆ. ಹೀಗಾಗಿ ಕೂಡಲೇ ಅರಣ್ಯ ಇಲಾಖೆ ಅಧಿಕಾರಿಗಳು ಹುಲಿ ಸೆರೆಗೆ ಕ್ರಮ ಕೈಗೊಳ್ಳಬೇಕು ಎಂದು ಸಾಗರೆ ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಸಂಭ್ರಮದ ಸ್ವಾತಂತ್ರ್ಯ ದಿನಾಚರಣೆಗೆ ತೀರ್ಮಾನ

ಕೆಆರ್.ನಗರ, ಆ.8– ಈ ಬಾರಿಯ ಸ್ವಾತಂತ್ರ್ಯ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲು ಪಟ್ಟಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ತೀರ್ಮಾನಿಸಲಾಯಿತು.

ಪಟ್ಟಣದ ತಾಲೂಕು ಕಚೇರಿ ಸಭಾಂಗಣದಲ್ಲಿ ಶಾಸಕ ಡಿ.ರವಿಶಂಕರ್ ಅಧ್ಯಕ್ಷತೆಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಮತ್ತು ಸಾರ್ವಜನಿಕರ ಸಲಹೆ ಪಡೆದು ಈ ನಿರ್ಧಾರ ಕೈಗೊಳ್ಳಲಾಯಿತು.



ಸ್ವಾತಂತ್ರ್ಯ ದಿನಾಚರಣೆ ಪೂರ್ವಭಾವಿ ಸಭೆಯಲ್ಲಿ ಶಾಸಕ ಡಿ.ರವಿಶಂಕರ್ ಮಾತನಾಡಿದರು.

ಶಾಸಕ ಡಿ.ರವಿಶಂಕರ್ ಮಾತನಾಡಿ, ಆ.15ರಂದು ಬೆಳಗ್ಗೆ 7.30ಕ್ಕೆ ಪಟ್ಟಣದ ಜೂನಿಯರ್ ಕಾಲೇಜು ಬಳಿಯಿಂದ ಪಟ್ಟಣದ ಎಲ್ಲಾ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಮತ್ತು ದೇಶಾಭಿಮಾನಿಗಳ ಸಮ್ಮುಖದಲ್ಲಿ ಪಥಸಂಚಲನ ಆರಂಭಿಸಿ ಡಾ.ಬಿ.ಆರ್. ಅಂಬೇಡ್ಕರ್ ಪುತ್ಥಳಿ, ಹಾಸನ–ಮೈಸೂರು ರಸ್ತೆ ಮೂಲಕ ಪುರಸಭೆ ಬಯಲು ರಂಗಮಂದಿರಕ್ಕೆ ಆಗಮಿಸುವಂತೆ ಸೂಚನೆ ನೀಡಿದರು.

ಬೆಳಗ್ಗೆ 9 ಗಂಟೆಗೆ ಕಾರ್ಯಕ್ರಮ ನಡೆಯುವ ಬಯಲು ರಂಗಮಂದಿರದ ಆವರಣದಲ್ಲಿ ಧ್ವಜಾರೋಹಣ ನೆರವೇರಿಸಲಿದ್ದು, ತಾಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ತಮಗೆ ವಹಿಸಿದ ಜವಾಬ್ದಾರಿಯನ್ನು ನಿರ್ವಹಿಸಿ ರಾಷ್ಟ್ರೀಯ ಹಬ್ಬದ ಯಶಸ್ಸಿಗೆ ಶ್ರಮಿಸಬೇಕು ಎಂದರು.

ಪಥ ಸಂಚಲನದಲ್ಲಿ ಭಾಗವಹಿಸುವ ಎಲ್ಲಾ ವಿದ್ಯಾರ್ಥಿಗಳಿಗೆ ಬಯಲು ರಂಗಮಂದಿರದ ಆವರಣದಲ್ಲಿ ಧ್ವಜಾರೋಹಣಕ್ಕಿಂತ ಮುನ್ನಾ ಉಪಾಹಾರ ನೀಡಬೇಕೆಂದು ತಿಳಿಸಿದ ಶಾಸಕರು, ಪ್ರತಿಯೊಬ್ಬ ಸರ್ಕಾರಿ ನೌಕರರು ಮತ್ತು ಸಿಬ್ಬಂದಿ ಕಡ್ಡಾಯವಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ತಾಕೀತು ಮಾಡಿದರು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ 10 ಮಂದಿ ಸಾಧಕರಿಗೆ ಸನ್ಮಾನದ ಜತೆಗೆ ಪಟ್ಟಣದ ಎಲ್ಲಾ ಸರ್ಕಾರಿ ಕಚೇರಿಗೂ ದೀಪಾಲಂಕಾರ ಮಾಡಬೇಕು, ಮೆರವಣಿಗೆ ತೆರಳುವ ರಸ್ತೆಯ ಅಂಗಡಿ ಮುಂಗಟ್ಟುಗಳ ಮಾಲೀಕರು ಸ್ವಯಂಪ್ರೇರಿತವಾಗಿ ತಮ್ಮ ಕಟ್ಟಡಗಳಿಗೆ ದೀಪಾಲಂಕಾರ ಮಾಡಿ ರಾಷ್ಟ್ರೀಯ ಹಬ್ಬದ ಮೆರಗನ್ನು ಹೆಚ್ಚಿಸಬೇಕೆಂದು ಕೋರಿದರು.

ಸಾಲಿಗ್ರಾಮ ತಹಸೀಲ್ದಾರ್ ಎಸ್.ಎನ್.ನರಗುಂದ ಮಾತನಾಡಿ, ಸಾಲಿಗ್ರಾಮ ತಾಲೂಕಿನಲ್ಲಿಯೂ ವೈಭವದಿಂದ ಸ್ವಾತಂತ್ರ್ಯ ದಿನಾಚರಣೆ ಮಾಡಲು ನಿರ್ಧಾರ ಮಾಡಲಾಗಿದ್ದು ಸರ್ವರ ಸಹಕಾರದಿಂದ ಕಾರ್ಯಕ್ರಮ ನಡೆಸುವುದಾಗಿ ತಿಳಿಸಿದರು.

ಕೆ.ಆರ್.ನಗರ ತಹಸೀಲ್ದಾರ್ ಜಿ.ಸುರೇಂದ್ರ ಮೂರ್ತಿ ಮಾತನಾಡಿ, ಸ್ವಾತಂತ್ರ್ಯ ದಿನವನ್ನು ವಿಶಿಷ್ಟ ಮತ್ತು ವಿಭಿನ್ನವಾಗಿ ಆಚರಿಸಲು ನಿರ್ಧರಿಸಿದ್ದು ಮುಂದಿನ 3 ದಿನದೊಳಗೆ ಮತ್ತೊಮ್ಮೆ ಅಧಿಕಾರಿಗಳ ಸಭೆ ಕರೆದು ರೂಪುರೇಷೆ ಸಿದ್ಧಪಡಿಸುವುದಾಗಿ ತಿಳಿಸಿದರು.


ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಮಹೇಶ್, ನಿರ್ದೇಶಕಿ ಸರಿತಾ, ಪುರಸಭೆ ಸದಸ್ಯ ಪ್ರಕಾಶ್, ಮಾಜಿ ಸದಸ್ಯ ಕೆ.ವಿನಯ್, ಕಾಂಗ್ರೆಸ್ ಮುಖಂಡರಾದ ನಂದೀಶ್, ಕಂಠಿಕುಮಾರ್, ರಾಜಯ್ಯ, ಬಿ.ಎಂ.ಗಿರೀಶ್, ಚಂದ್ರು, ಹೆಚ್.ಎಸ್. ಸ್ವಾಮಿ, ಸುರೇಶ್, ತಿಮ್ಮಶೆಟ್ಟಿ, ರೈತ ಮುಖಂಡರಾದ ಎಂ.ಜೆ.ಕುಮಾರ್, ಎ.ತಿಮ್ಮೇಗೌಡ, ಬಿಇಓ ಆರ್.ಕೃಷ್ಣಪ್ಪ, ಸಹಾಯಕ ಕಾರ್ಯಪಾಲಕ ಅಭಿಯಂತರ ಎಲ್.ವಿನೀತ್, ಅರ್ಕೇಶ್ವರಮೂರ್ತಿ, ಗುರುರಾಜ್, ವಿ.ಸುಮಿತ್ರ ಎಡಿಎಲ್‌ಆರ್ ಶ್ರೀಕಂಠಶರ್ಮಾ, ಸಾಮಾಜಿಕ ಅರಣ್ಯಾಧಿಕಾರಿ ಟಿ.ವಿ.ಹರಿಪ್ರಸಾದ್, ಸಿಡಿಪಿಓ ಸಿ.ಎಂ.ಅಣ್ಣಯ್ಯ ಇದ್ದರು.

ಈಶ್ವರಚಾರ್ ನಿಧನ



ಬೆಟ್ಟದಪುರ, ಆ.8– ಗ್ರಾಮದ ನಿವಾಸಿ, ಬೆಟ್ಟದಪುರ ಗ್ರಾಪಂ ಸದಸ್ಯ ಈಶ್ವರಚಾರ್(65) ಗುರುವಾರ ಬೆಳಗ್ಗೆ ಹೃದಯಾಘಾತದಿಂದ ನಿಧನರಾದರು. ಮೃತರು ಪತ್ನಿ, ಪುತ್ರ ಸೈನಿಕ ಸತೀಶ್, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶುಕ್ರವಾರ ಬೆಳಗ್ಗೆ 10 ಗಂಟೆಗೆ ಗ್ರಾಮದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ಮೃತರ ನಿಧನಕ್ಕೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ.

ಜಯಶಂಕರ



ಹೆಚ್.ಡಿ.ಕೋಟೆ, ಆ.8– ಪಟ್ಟಣದ ವಿಶ್ವನಾಥಯ್ಯ ಕಾಲೋನಿ ನಿವಾಸಿ, ಜೆಎಂಎಫ್‌ಸಿ ನ್ಯಾಯಾಲಯದ ನಿವೃತ್ತ ಡಿ ಗ್ರೂಪ್ ನೌಕರ ಜಯಶಂಕರ (60) ಬುಧವಾರ ರಾತ್ರಿ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರಿ, ಓರ್ವ ಪುತ್ರ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಪಟ್ಟಣದ ರುದ್ರಭೂಮಿಯಲ್ಲಿ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಜನಾಂದೋಲನ ಸಮಾವೇಶದ ಸಿದ್ಧತೆ ಪರಿಶೀಲಿಸಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

ತಮ್ಮ ತಮ್ಮ ಭ್ರಷ್ಟಾಚಾರ ಮುಚ್ಚಿಕೊಳ್ಳಲು ಭ್ರಷ್ಟಾಚಾರಿಗಳಿಂದಲೇ ಪಾದಯಾತ್ರೆ

ಬಿಜೆಪಿ–ಜೆಡಿಎಸ್ ಮೈಸೂರು ಚಲೋ ಸಂಬಂಧ ಡಿಸಿಎಂ ವ್ಯಂಗ್ಯ

ಮೈಸೂರು, ಆ.8(ಎಸ್‌ಬಿಡಿ)– ಕಾಂಗ್ರೆಸ್ ವಿರುದ್ಧ ಸುಳ್ಳು ಆರೋಪಗಳನ್ನು ಮುಂದಿಟ್ಟುಕೊಂಡು ತಮ್ಮ ಭ್ರಷ್ಟಾಚಾರವನ್ನು ಮರೆಮಾಚಿಕೊಳ್ಳಲು ಬಿಜೆಪಿ–ಜೆಡಿಎಸ್ ನಡೆಸುತ್ತಿರುವ ಪಾದಯಾತ್ರೆಗೆ ಜನಾಂದೋಲನ ಸಮಾವೇಶದ ಮೂಲಕ ಉತ್ತರ ನೀಡಲಿದ್ದೇವೆ ಎಂದು ಕೆಪಿಸಿಸಿ ಅಧ್ಯಕ್ಷರೂ ಆದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಗುರುವಾರ ಸಂಜೆ ಜನಾಂದೋಲನ ಸಮಾವೇಶದ ಅಂತಿಮ ಹಂತದ ಸಿದ್ಧತೆ ಪರಿಶೀಲಿಸಿದ ವೇಳೆ ಮಾಧ್ಯಮಗಳೊಂದಿಗೆ ಮಾತನಾಡಿ, ತಮ್ಮ ಭ್ರಷ್ಟಾಚಾರ ಮುಚ್ಚಿಕೊಳ್ಳಲು ಭ್ರಷ್ಟಾಚಾರಿಗಳೇ ನಡೆಸುತ್ತಿರುವ ಪಾದಯಾತ್ರೆಗೆ ಉತ್ತರ ನೀಡುವುದರ ಜೊತೆಗೆ ಒಂದಷ್ಟು ಪ್ರಶ್ನೆಗಳನ್ನು ಕೇಳಲು ಜನಾಂದೋಲನ ಸಮಾವೇಶ ನಡೆಸುತ್ತಿದ್ದೇವೆ ಎಂದರು.

ಬಿಜೆಪಿ ಸರ್ಕಾರದ ಅವಧಿಯಲ್ಲಿ 25ಕ್ಕೂ ಹೆಚ್ಚು ಹಗರಣಗಳಾಗಿವೆ. ಹೆಚ್.ಡಿ.ಕುಮಾರಸ್ವಾಮಿ ಕುಟುಂಬದ ಹಗರಣಗಳು ಸಾಕಷ್ಟಿವೆ. ಈ ಬಗ್ಗೆ ಮುಖ್ಯಮಂತ್ರಿಗಳು ವಿಧಾನಸಭೆಯಲ್ಲಿ ಮಾತನಾಡಿದ್ದಾರೆ. ಕೆಲ ಪ್ರಕರಣಗಳ ಸಂಬಂಧ ತನಿಖೆ ನಡೆಯುತ್ತಿದೆ. ಮುಚ್ಚಿಹಾಕಲು ಪ್ರಯತ್ನಿಸಿದ್ದ ಕೆಲವು ಹಗರಣಗಳನ್ನು ನಾವು ಬೆಳಕಿಗೆ ತಂದಿದ್ದೇವೆ. ಎಲ್ಲದಕ್ಕೂ ಬಿಜೆಪಿ ಹಾಗೂ ಜೆಡಿಎಸ್ ಉತ್ತರಿಸಬೇಕು. ಹಗರಣಗಳು ನಡೆದಾಗ ಯಾರು ಮುಖ್ಯಮಂತ್ರಿಯಾಗಿದ್ದರು, ಯಾರು ಮಂತ್ರಿಯಾಗಿದ್ದರು, ಯಾರೆಲ್ಲ ಅದರಲ್ಲಿ ಪಾಲುದಾರರಾಗಿದ್ದರು ಎಲ್ಲವನ್ನೂ ಅವರೇ ಹೇಳಬೇಕು ಎಂದು ಕಿಡಿಕಾರಿದರು.



ಕಾಂಗ್ರೆಸ್ ಜನಾಂದೋಲನ ಸಮಾವೇಶದ ಅಂತಿಮ ಹಂತದ ಸಿದ್ಧತೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಗುರುವಾರ ರಾತ್ರಿ ಪರಿಶೀಲಿಸಿದರು.

ವಾಲ್ಮೀಕಿ ನಿಗಮದಲ್ಲಿನ ಹಗರಣವನ್ನು ನಾವು [illegible] ಅಧಿಕಾರಿಗಳ ಅಮಾನತು ಮಾಡಿದ್ದು, ಪ್ರಕರಣದ ಚಾರ್ಜ್‌ಶೀಟ್ ಸಲ್ಲಿಕೆಯಾಗಿದೆ. ಅದರಲ್ಲಿ ನಮ್ಮ ಸಚಿವರು ಹಾಗೂ ಶಾಸಕರಿಲ್ಲ ಎನ್ನುವುದನ್ನು ಮಾಧ್ಯಮಗಳಲ್ಲಿ ನೋಡಿದ್ದೇನೆ. ಮುಡಾ ವಿಚಾರವಾಗಿಯೂ ಈಗಾಗಲೇ ಸ್ಪಷ್ಟನೆ ನೀಡಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ಶ್ರೀಮತಿಯವರಿಗೆ ಅವರ ಸಹೋದರ ನೀಡಿರುವ ಭೂಮಿಯನ್ನು ಮುಡಾ ಬಳಸಿಕೊಂಡಿದ್ದಕ್ಕೆ ನಿಯಮಾನುಸಾರ ನಿವೇಶನ ನೀಡಲಾಗಿದೆ. ಇದೇ ಬಡಾವಣೆಯಲ್ಲಿ ನಿವೇಶನ ನೀಡುವಂತೆ ಯಾರೂ ಕೇಳಿಲ್ಲ. ಮುಡಾದಲ್ಲಿ ಹಗರಣಗಳು ನಡೆದಿಲ್ಲ ಎನ್ನುವುದಿಲ್ಲ. ಅದರ ಬಗ್ಗೆ ನಿವೃತ್ತ ನ್ಯಾಯಮೂರ್ತಿಗಳ ಆಯೋಗ ತನಿಖೆ ನಡೆಸುತ್ತಿದೆ. ಮುಖ್ಯಮಂತ್ರಿಗಳ ಕುಟುಂಬಕ್ಕೆ ನಿವೇಶನ ನೀಡುವ ಪ್ರಕ್ರಿಯೆಯಲ್ಲಿ ಏನಾದರೂ ತಪ್ಪಾಗಿದ್ದರೆ ಆ ಬಗ್ಗೆಯೂ ತನಿಖೆಯಾಗಲಿ ಎಂದು ಸಿಎಂ ಅವರೇ ಹೇಳಿದ್ದಾರೆ ಎಂದರು.

ಪಾಪದ ಯಾತ್ರೆ: ಹಿಂದೆ ಮಹತ್ವದ ವಿಚಾರಗಳನ್ನು ಮುಂದಿಟ್ಟುಕೊಂಡು ಸಾಕಷ್ಟು ಪಾದಯಾತ್ರೆಗಳು ನಡೆದಿವೆ. ಎಸ್.ಎಂ.ಕೃಷ್ಣ ಅವರ ನೇತೃತ್ವದಲ್ಲಿ ಕಾವೇರಿ ನೀರು ಹಂಚಿಕೆ ವಿಚಾರವಾಗಿ ಪಾದಯಾತ್ರೆ ನಡೆದಿತ್ತು. ನಾಡಿನ ಗಣಿ ಸಂಪತ್ತು ಉಳಿಸುವ ಉದ್ದೇಶದಿಂದ ಬಳ್ಳಾರಿಗೆ ಪಾದಯಾತ್ರೆ ನಡೆಸಲಾಗಿತ್ತು. ಮೇಕೆದಾಟು ಯೋಜನೆ ಅನುಷ್ಠಾನಕ್ಕಾಗಿ ಪಾದಯಾತ್ರೆ ನಡೆಸಿದ್ದೆವು. ಆ ವೇಳೆ ತೊಂದರೆ ಮಾಡಿದ್ದಲ್ಲದೆ, ಕೋವಿಡ್ ನೆಪದಲ್ಲಿ ಕೇಸ್ ಹಾಕಿದರು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಎಲ್ಲರಿಗೂ ಅವಕಾಶವಿದೆ. ಹಾಗಾಗಿ ಬಿಜೆಪಿ–ಜೆಡಿಎಸ್ ಪಾದಯಾತ್ರೆಗೆ ಯಾವ ಸಮಸ್ಯೆಯೂ ಆಗಿಲ್ಲ. ಆದರೆ ಸುಳ್ಳು ಆರೋಪಗಳನ್ನು ಮುಂದಿಟ್ಟುಕೊಂಡು ನಡೆಸುತ್ತಿರುವುದರಿಂದ ಅದು ಪಾಪದ ಯಾತ್ರೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಸಿಎಂ ಪರ ನಿಂತಿದ್ದೇನೆ: ಮುಡಾ ಹಗರಣವಾಗಿದ್ದರೆ ಕುಮಾರಸ್ವಾಮಿ ಏಕೆ ಮಾತನಾಡಲಿಲ್ಲ?. ಈ ವಿಚಾರವಾಗಿ ಪಾದಯಾತ್ರೆ ಅವಶ್ಯಕತೆ ಇದೆಯೇ ಎಂದು ಅವರೇ ಪ್ರಶ್ನಿಸಿದ್ದಾರೆ. ಅವರು ಒತ್ತಡದಿಂದ ಪಾದಯಾತ್ರೆಯಲ್ಲಿ ಭಾಗಿಯಾಗಿದ್ದಾರೆ. ಸಿದ್ದರಾಮಯ್ಯನವರು ಭಾವನಾತ್ಮಕ ವ್ಯಕ್ತಿ. ವಿಪಕ್ಷಗಳು ಸುಳ್ಳು ಆರೋಪ ಮಾಡುತ್ತಿರುವುದರಿಂದ ಮಾನಸಿಕವಾಗಿ ನೊಂದಿರುತ್ತಾರೆ. 2ನೇ ಬಾರಿ ಸಿಎಂ ಆಗಿರುವ ಓರ್ವ ಹಿಂದುಳಿದ ನಾಯಕನ ತೇಜೋವಧೆಗೆ ಬಿಜೆಪಿ–ಜೆಡಿಎಸ್ ಹೊರಟಿವೆ. ಆದ್ದರಿಂದ ಇಡೀ ಕಾಂಗ್ರೆಸ್ ಪಕ್ಷ ಹಾಗೂ ಸರ್ಕಾರ ಅವರ ಪರವಾಗಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ರಾಹುಲ್ ಗಾಂಧಿ ಅವರ ಸಹಕಾರದೊಂದಿಗೆ ನನ್ನ ಅಧ್ಯಕ್ಷತೆಯಲ್ಲಿ ಜನಾಂದೋಲನ ಸಮಾವೇಶ ನಡೆಸಲಾಗುತ್ತಿದೆ. ನಾವೇ ಸಿದ್ದರಾಮಯ್ಯನವರು ಬರೋದು ಬೇಡ ಎಂದಿದ್ದೆವು. ಆದರೆ ಸ್ವಂತ ಜಿಲ್ಲೆಯಲ್ಲಿ ಜನತೆಗೆ ಸಂದೇಶ ನೀಡಬೇಕೆಂಬ ಕಾರಣದಿಂದ ಭಾಗಿಯಾಗುತ್ತಿದ್ದಾರೆ. ನಾನು ಅವರ ಪರ ನಿಂತಿದ್ದೇನೆ, ಮುಂದೆಯೂ ನಿಲ್ಲುತ್ತೇನೆ ಎಂದು ಡಿಕೆಶಿ ಹೇಳಿದರು.

ಸಿಎಂ–ಡಿಸಿಎಂ ಪರಿಶೀಲನೆ: ಇದೇ ವೇಳೆ ಆಗಮಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ಒಟ್ಟಿಗೆ ಸಿದ್ಧತೆ ಪರಿಶೀಲಿಸಿದರು. ಬೃಹತ್ ವೇದಿಕೆ, ಆಸನ ವ್ಯವಸ್ಥೆ, ಗಣ್ಯರ ವಿಶ್ರಾಂತಿಗೆ ನಿರ್ಮಿಸಿರುವ ತಾತ್ಕಾಲಿಕ ಕೊಠಡಿ ಸೇರಿದಂತೆ ಎಲ್ಲಾ ವ್ಯವಸ್ಥೆ ಬಗ್ಗೆ ವೇದಿಕೆ ಗುತ್ತಿಗೆದಾರ ಷರೀಫ್ ವಿವರಿಸಿದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಪಾರ್ಕ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ರಾಯನ್ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಬ್ಯಾಡ್ ನ್ಯೂಸ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಕಬಂಧ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಫ್ಯಾಮಿಲಿ ಡ್ರಾಮಾ (ಕ)	4 ಪ್ರದರ್ಶನಗಳು
ರಾಜಕಮಲ್	
ಅಂಧಗನ್ (ತ)	4 ಪ್ರದರ್ಶನಗಳು
ಸಂಗಂ	
ಭೀಮಾ (ಕ)	4 ಪ್ರದರ್ಶನಗಳು
ಲಿಡೋ	
ಜೀನಿಯಸ್ ಮುತ್ತ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಕೇಸ್ ನಂ.15 (ತೆ)	4 ಪ್ರದರ್ಶನಗಳು
ಪ್ರಭಾ	
ಕಬಂಧ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಡೆಡ್‌ಪೂಲ್ ಅಂಡ್ ವೊಲ್ವೆರಿನ್ (3ಡಿ)(ಇಂ): ಬೆ.10.55ಕ್ಕೆ, ಮ.1.35ಕ್ಕೆ, ಸಂ.4.20ಕ್ಕೆ, ರಾ.7.10ಕ್ಕೆ, ಕಮಿಟಿ ಕುರ್ರೋಳು (ತೆ): ರಾ.9.55ಕ್ಕೆ.
ಸ್ಕ್ರೀನ್ 2	ಭೀಮಾ (ಕ): ಬೆ.10.05ಕ್ಕೆ, ಮಿನ್‌ಮಿನಿ (ತ): ಮ.1ಕ್ಕೆ, ಕಲ್ಕಿ 2898 ಎಡಿ(3ಡಿ)(ತೆ): ಮ.3.50ಕ್ಕೆ, ರಾಯನ್ (ತ): ರಾ.7.15ಕ್ಕೆ, ಅಡಿಯೋಸ್ ಅಮಿಗೋ (ಮ): ಬೆ.10.05ಕ್ಕೆ.
ಸ್ಕ್ರೀನ್ 3	ಕಬಂಧ (ಕ): ಬೆ.10.35ಕ್ಕೆ, ಜೀನಿಯಸ್ ಮುತ್ತ (ಕ): ಮ.1.20ಕ್ಕೆ, ಅಂಧಗನ್ ದಿ ಪೇನಿಸ್ಟ್ (ತ): ಸಂ.4ಕ್ಕೆ, ಇಟ್ ಎಂಡ್ಸ್ ವಿಥ್ ಅಸ್ (ಇಂ): ರಾ.7ಕ್ಕೆ, ರಾ.9.40ಕ್ಕೆ.
ಸ್ಕ್ರೀನ್ 4	ಭೀಮಾ (ಕ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

MVC

ದೂ : 0821–2973519

ಸ್ಕ್ರೀನ್ 1	ಅಂಧಗನ್ (ತ): ಮ.1.30ಕ್ಕೆ, ಸಂ.6.30ಕ್ಕೆ, ಪೇಚಿ (ತ): ಸಂ.4.15ಕ್ಕೆ, ಸೂಪರ್ ಜಿಂದಗಿ (ಮ): ರಾ.9.15ಕ್ಕೆ.
ಸ್ಕ್ರೀನ್ 2	ಭೀಮಾ (ಕ): ಬೆ.9.30ಕ್ಕೆ, ಮ.12.30ಕ್ಕೆ, ಮ.3.30ಕ್ಕೆ, ಸಂ.6.30ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 3	ಭೀಮಾ (ಕ): ಸಂ.4.45ಕ್ಕೆ, ರಾ.7.45ಕ್ಕೆ.
ಸ್ಕ್ರೀನ್ 4	ರಾಯನ್ (ತ): ಮ.1.15ಕ್ಕೆ, ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್

PVR CINEMAS

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಏಪ್ಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮುಂದಿನ ವಾರ ಮೈಸೂರು ಸೇರಿ ಮೂರು ಪಾಲಿಕೆಗಳಿಗೆ ಚುನಾವಣೆ ಘೋಷಣೆ

ಬೆಂಗಳೂರು: ಮೈಸೂರು, ಶಿವಮೊಗ್ಗ, ತುಮಕೂರು ಮಹಾನಗರಪಾಲಿಕೆಗಳ ಚುನಾವಣೆಯ ದಿನಾಂಕವನ್ನು ಮುಂದಿನ ವಾರವೇ ಘೋಷಣೆ ಮಾಡಲಾಗುವುದು ಎಂದು ರಾಜ್ಯ ಚುನಾವಣಾ ಆಯುಕ್ತ ಜಿ.ಎಸ್.ಸಂಗ್ರೇಶಿ ತಿಳಿಸಿದ್ದಾರೆ.

ಈ ಬಗ್ಗೆ ಮಾಹಿತಿ ನೀಡಿರುವ ಅವರು, ಚುನಾವಣೆಗೆ ಸಕಲ ತಯಾರಿ ನಡೆಸಲಾಗಿದೆ. ಹಿಂದಿನ ಮೀಸಲಾತಿ ಆಧಾರದ ಮೇಲೆಯೇ ಚುನಾವಣೆ ನಡೆಯಲಿದೆ. ಚುನಾವಣೆ ನಡೆಸಲು ಸುಪ್ರೀಂಕೋರ್ಟ್ ನಿರ್ದೇಶನವಿದ್ದು, ಹೀಗಾಗಿ ನವೆಂಬರ್ ಒಳಗೆ ಚುನಾವಣೆ ನಡೆಸಲಾಗುವುದು ಎಂದು ಹೇಳಿದರು.

ಅಲ್ಲದೇ ಈವರೆಗೂ ಬಿಬಿಎಂಪಿಗೆ ಚುನಾವಣೆ ಘೋಷಿಸದೇ ರಾಜ್ಯ ಸರ್ಕಾರವು ಅನುಸರಿಸುತ್ತಿರುವ ವಿಳಂಬಧೋರಣೆ ವಿರುದ್ಧವೂ ಚುನಾವಣಾ ಆಯೋಗವು ಪರೋಕ್ಷವಾಗಿ ಗರಂ ಆಗಿದೆ. ಬಿಬಿಎಂಪಿ ಚುನಾವಣೆ ಇನ್ನೂ ವಿಳಂಬವಾದರೆ ಕೋರ್ಟ್ ಮೊರೆ ಹೋಗುವುದಾಗಿ ಆಯೋಗ ಮುನ್ಸೂಚನೆ ನೀಡಿದೆ.

ಜಿಪಂ, ತಾಪಂ ಅನಿಶ್ಚಿತತೆ: ಆದರೆ ಜಿಲ್ಲಾ, ತಾಲೂಕು ಪಂಚಾಯ್ತಿ ಚುನಾವಣೆ ನಡೆಯುವುದು ಡೋಲಾಯಮಾನವಾಗಿದೆ.

ಈ ಚುನಾವಣೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ರಾಜ್ಯ ಚುನಾವಣಾ ಆಯೋಗದ ಆಯುಕ್ತ ಜಿ.ಎಸ್.ಸಂಗ್ರೇಶಿ ಅವರೇ, ಸದ್ಯಕ್ಕೆ ಚುನಾವಣೆ ನಡೆಯುವ ಸಾಧ್ಯತೆ ಬಗ್ಗೆ ಅನುಮಾನ ವ್ಯಕ್ತಪಡಿಸಿದ್ದಾರೆ.

ಕಳೆದ ಮೂರೂವರೆ ನಾಲ್ಕು ವರ್ಷಗಳಿಂದ ಈ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆದಿಲ್ಲ. ಇದರ ಜತೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೂ ಚುನಾವಣೆ ನಡೆಸಲು ಸಾಧ್ಯವಾಗಿಲ್ಲ. ಚುನಾವಣೆ ನಡೆಸಲು ಸರ್ಕಾರ ನಮಗೆ ಸ್ಪಂದಿಸುತ್ತಿಲ್ಲ ಎಂದು ಅವರ ವಿರುದ್ಧವೂ ನ್ಯಾಯಾಂಗ ಉಲ್ಲಂಘನೆ ಪ್ರಕರಣ ದಾಖಲಿಸಿದ್ದೇವೆ.

ಎರಡೂ ಚುನಾವಣೆಗೆ ಸಂಬಂಧಿಸಿದ ಕೇಸ್ ಸುಪ್ರೀಂಕೋರ್ಟ್‌ನ ಮುಂದೆ ಇದ್ದು, ವಿಚಾರಣೆ ಇನ್ನೂ ಕೈಗೆತ್ತಿಕೊಂಡಿಲ್ಲ. ಸುಪ್ರೀಂಕೋರ್ಟ್ ಕೇಸ್ ಇತ್ಯರ್ಥಪಡಿಸಿದರೆ, ಆಯೋಗವು ರಾಜ್ಯದ 31 ಜಿಲ್ಲಾ ಪಂಚಾಯತ್, 240ಕ್ಕೂ ಹೆಚ್ಚು ತಾಲೂಕು ಪಂಚಾಯಿತಿಗೆ ಚುನಾವಣೆ ನಡೆಸಲು ನಾವು ಸಿದ್ಧರಿದ್ದೇವೆ ಎಂದರು.

ಅವಧಿ ಮುಗಿದ ಆರು ತಿಂಗಳ ಒಳಗಾಗಿ ಚುನಾವಣೆ ನಡೆಸಬೇಕು. ಆದರೆ, ಈ ಸ್ಥಳೀಯ ಸಂಸ್ಥೆಗಳಲ್ಲಿ ಮೀಸಲಾತಿ ನಿಗದಿಪಡಿಸುವ ಸಂಬಂಧ ರಾಜ್ಯ ಸರ್ಕಾರ ಸ್ಪಷ್ಟ ತೀರ್ಮಾನ ತೆಗೆದುಕೊಳ್ಳದಿರುವುದು ಗೊಂದಲಕ್ಕೆ ಕಾರಣವಾಗಿದೆ.

ನ್ಯಾಯಾಲಯ ನೀಡಿರುವ ಆದೇಶವನ್ನು ಮೀಸಲಾತಿ ನಿಗದಿಪಡಿಸಲು ಕಳೆದ ಮೂರು ವರ್ಷಗಳಿಂದ ಸಾಧ್ಯವಾಗಿಲ್ಲ. ಮೀಸಲಾತಿಗೆ ಸಂಬಂಧಿಸಿದಂತೆ ಒಂದು ಸ್ಪಷ್ಟ ತೀರ್ಮಾನ ತೆಗೆದುಕೊಂಡು ನ್ಯಾಯಾಲಯವನ್ನು ಕೋರಿದರೆ ಚುನಾವಣೆ ನಡೆಸಲು ಸಾಧ್ಯವಾಗುವುದು. ಎಲ್ಲಾ ಪ್ರಕರಣಗಳು ಸುಪ್ರೀಂಕೋರ್ಟ್‌ನ ಅಂಗಳದಲ್ಲಿದ್ದು, ನಮ್ಮ ಅರ್ಜಿಗಳನ್ನು ಇತ್ಯರ್ಥಪಡಿಸಿ ತೀರ್ಪು ನೀಡಿದರೆ ಚುನಾವಣೆ ನಡೆಸಬಹುದು ಎಂದರು.

ವಕ್ಫ್ ಬೋರ್ಡ್ ಕಾನೂನು ತಿದ್ದುಪಡಿ ಸಂವಿಧಾನ ಬಾಹಿರ

● ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಕ್ರಿಯೆ ● ಜನಾಂದೋಲನ ಸಮಾವೇಶ ನಾನು ಆಯೋಜಿಸಿಲ್ಲ

ಮೈಸೂರು,ಆ.8(ಎಂಟಿವೈ)– ಕೇಂದ್ರದ ಎನ್‌ಡಿಎ ಸರ್ಕಾರಕ್ಕೆ ಸಂವಿಧಾನದ ಬಗ್ಗೆ ನಂಬಿಕೆ ಇಲ್ಲ. ಹಾಗಾಗಿ ವಕ್ಫ್ ಬೋರ್ಡ್ ಕಾನೂನಿಗೆ ತಿದ್ದುಪಡಿ ತರಲು ಮುಂದಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕಿಡಿಕಾರಿದ್ದಾರೆ.

ವಿಶೇಷ ವಿಮಾನದಲ್ಲಿ ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣಕ್ಕೆ ಗುರುವಾರ ಮಧ್ಯಾಹ್ನ ಆಗಮಿಸಿದ ವೇಳೆ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಕೇಂದ್ರದ ಈ ಕ್ರಮವನ್ನು ವಿರೋಧಿಸುತ್ತೇವೆ. ಸಂವಿಧಾನದ ತತ್ವಗಳಲ್ಲಿ ನಂಬಿಕೆ ಇಟ್ಟುಕೊಂಡಿರುವ ಕಾಂಗ್ರೆಸ್ ಪಕ್ಷ ಕೇಂದ್ರ ವಕ್ಫ್ ಬೋರ್ಡ್ ಕಾನೂನು ತಿದ್ದುಪಡಿ ಮಾಡುವುದನ್ನು ಖಂಡಿಸುತ್ತದೆ ಎಂದು ತಿಳಿಸಿದರು.

ಬಿಜೆಪಿ ಹಾಗೂ ಎನ್‌ಡಿಎ ನಾಯಕರಿಗೆ ಅಲ್ಪಸಂಖ್ಯಾತರ ಮೇಲೆ ಕೋಪವಿದೆ. ಬಿಜೆಪಿ ಎಂದಿಗೂ ಜಾತ್ಯಾತೀತತೆ, ಸಾಮಾಜಿಕ ನ್ಯಾಯದ ಪರವಾಗಿ ನಿಲ್ಲುವುದಿಲ್ಲ. ಮೊದಲಿನಿಂದಲೂ ಬಿಜೆಪಿ ಕೋಮುವಾದಿ ಪಕ್ಷ ಎಂದು ಗುರುತಿಸಿಕೊಂಡಿದೆ. ಆ ಕಾರಣದಿಂದಲೇ ಈ ಹಿಂದೆ ಮತಾಂತರ ನಿಷೇಧ ಕಾಯ್ದೆ, ಗೋಹತ್ಯೆ ನಿಷೇಧ ಕಾಯ್ದೆ ಜಾರಿಗೆ ತಂದಿದೆ. ಈಗ ವಕ್ಫ್ ಬೋರ್ಡ್ ಕಾನೂನಿಗೆ ತಿದ್ದುಪಡಿ ತರುವ ಪ್ರಯತ್ನಕ್ಕೆ ಕೈಹಾಕಿದ್ದಾರೆ. ಇದು ಒಂದು ಸಮುದಾಯದ ವೈಯಕ್ತಿಕ ಕಾನೂನಾಗಿದ್ದು, ಅದರಲ್ಲಿ ಮಧ್ಯಪ್ರವೇಶಿಸುವುದು ಸಂವಿಧಾನ ಬಾಹಿರ. ಕಾಂಗ್ರೆಸ್ ಹಾಗೂ ಇಂಡಿಯಾ ಒಕ್ಕೂಟ, ಇದನ್ನು ವಿರೋಧಿಸುತ್ತೇವೆ ಎಂದು ಸ್ಪಷ್ಟಪಡಿಸಿದರು.



ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರಕರ್ತರೊಂದಿಗೆ ಮಾತನಾಡಿದರು.

ಆಧಾರ ರಹಿತ ಸುಳ್ಳು ಕೇಸ್‌ಗಳು

ಜನಪ್ರತಿನಿಧಿಗಳ ನ್ಯಾಯಾಲಯದಲ್ಲಿ ಆರ್‌ಟಿಐ ಕಾರ್ಯಕರ್ತರೊಬ್ಬರು ತಮ್ಮ ವಿರುದ್ಧ ದೂರು ದಾಖಲಿಸಿರುವ ಬಗ್ಗೆ ಪತ್ರಕರ್ತರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಿಎಂ ಸಿದ್ದರಾಮಯ್ಯ, ಆಧಾರ ರಹಿತ, ಸುಳ್ಳು ಕೇಸುಗಳನ್ನು ದಾಖಲಿಸಿದ್ದು, ಅವು ಕಾನೂನಿನ ದೃಷ್ಟಿಯಲ್ಲಿ ಮಾನ್ಯವಾಗುವುದಿಲ್ಲ ಎಂದರು.

ಪಕ್ಷದ ವತಿಯಿಂದ ಜನಾಂದೋಲನ: ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ನಾಳೆ(ಆ.9) ನಡೆಯಲಿರುವ ಜನಾಂದೋಲನ ಸಭೆ ಆಯೋಜಿಸಿರುವುದು ನಾನಲ್ಲ. ಮೈಸೂರು ನಗರ, ಗ್ರಾಮಾಂತರ ಕಾಂಗ್ರೆಸ್ ಆಯೋಜಿಸಿರುವ ಕಾರ್ಯಕ್ರಮ. ಇದರಲ್ಲಿ ಸುತ್ತಮುತ್ತಲಿನ ಜಿಲ್ಲೆಗಳ ಪಕ್ಷದ ಕಾರ್ಯಕರ್ತರು, ಮುಖಂಡರು ಪಾಲ್ಗೊಳ್ಳಲಿದ್ದಾರೆ ಎಂದು ಸ್ಪಷ್ಟಪಡಿಸಿದರು.

ಈ ಸಂದರ್ಭದಲ್ಲಿ ಸಚಿವರಾದ ಜಮೀರ್ ಅಹ್ಮದ್‌ಖಾನ್, ಡಾ.ಹೆಚ್.ಸಿ.ಮಹದೇವಪ್ಪ ಕೆಪಿಸಿಸಿ ಮಹಿಳಾ ಘಟಕದ ಅಧ್ಯಕ್ಷೆ ಡಾ.ಪುಷ್ಪಾ ಅಮರನಾಥ್, ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಗ್ರಾಮಾಂತರ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್, ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಸಾರ್ವಜನಿಕರಿಂದ ಲೋಕಾಯುಕ್ತ ಅಧಿಕಾರಿಗಳಿಂದ ದೂರು ಸ್ವೀಕಾರ

ಮೈಸೂರು, ಆ.8–ಕರ್ನಾಟಕ ಲೋಕಾಯುಕ್ತ ಮೈಸೂರು ವಿಭಾಗದ ಅಧಿಕಾರಿಗಳಿಂದ ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಅಧಿಕೃತ ಕೆಲಸಗಳ ಅನಗತ್ಯ ವಿಳಂಬ, ಲಂಚದ ಹಣದ ಬೇಡಿಕೆ ಇತ್ಯಾದಿ ತೊಂದರೆಗಳನ್ನು ನೀಡುತ್ತಿರುವ ಸಂಬಂಧಪಟ್ಟ ಸಾರ್ವಜನಿಕ, ಸರ್ಕಾರಿ ಅಧಿಕಾರಿ, ನೌಕರರ ವಿರುದ್ಧ ಕ್ರಮಬದ್ಧವಾಗಿ ಭರ್ತಿಮಾಡಿದ ದೂರುಗಳನ್ನು ಅಗತ್ಯ ದಾಖಲಾತಿಗಳೊಡನೆ ಸ್ವೀಕರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವು ಆಗಸ್ಟ್ 14ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಮೈಸೂರು ಜಿಲ್ಲೆಯ ಕೆ.ಆರ್.ನಗರ ತಾಲೂಕಿನ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕಾಧಿಕಾರಿಗಳ ಕಚೇರಿಯಲ್ಲಿ, ಚಾಮರಾಜನಗರ ಜಿಲ್ಲೆಯ ಯಳಂದೂರು ತಾಲೂಕಿನ ಸರ್ಕಾರಿ ಪ್ರವಾಸಿ ಮಂದಿರದಲ್ಲಿ ಹಾಗೂ ಕೊಡಗು ಜಿಲ್ಲೆಯ ಕುಶಾಲನಗರ ತಾಲೂಕಿನ ತಾಲೂಕು ಕಚೇರಿಯಲ್ಲಿ ನಡೆಯಲಿದೆ.

ಸಾರ್ವಜನಿಕರು, ಕರ್ತವ್ಯ ಲೋಪವೆಸಗುವ ಭ್ರಷ್ಟ ಸರ್ಕಾರಿ ಅಧಿಕಾರಿ, ನೌಕರರ ವಿರುದ್ಧ ದೂರು ನೀಡಿ ಕಾನೂನು ಕ್ರಮ ತೆಗೆದುಕೊಳ್ಳಲು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬಹುದು ಎಂದು ಮೈಸೂರು ವಿಭಾಗದ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಸುರೇಶ್ ಬಾಬು ಎಸ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಂಧ್ರಪ್ರದೇಶಕ್ಕೆ ರಾಜ್ಯದ ಆನೆಗಳ ಬಳುವಳಿ

ಅರಣ್ಯ ಸಚಿವ ಈಶ್ವರ ಖಂಡ್ರೆ ಅವರೊಂದಿಗೆ ಆಂಧ್ರ ಡಿಸಿಎಂ ಪವನ್ ಕಲ್ಯಾಣ್ ಮಾತುಕತೆ ಫಲಶ್ರುತಿ

ಬೆಂಗಳೂರು, ಆ.8(ಕೆಎಂಶಿ)–ಆಂಧ್ರಪ್ರದೇಶಕ್ಕೆ ರಾಜ್ಯದ ಒಂದಷ್ಟು ಆನೆಗಳನ್ನು ಕಳುಹಿಸಲು ಸರ್ಕಾರ ಮುಂದಾಗಿದೆ.

ಪಳಗಿಸಿದ ಆನೆಗಳನ್ನು ನೀಡುವಂತೆ ಆಂಧ್ರ ಸರ್ಕಾರ ಮಾಡಿರುವ ಮನವಿಗೆ ರಾಜ್ಯ ಸರ್ಕಾರ ಸ್ಪಂದಿಸಿದೆ.

ಆಂಧ್ರಪ್ರದೇಶದ ಉಪ ಮುಖ್ಯಮಂತ್ರಿ ಪವನ್ ಕಲ್ಯಾಣ್ ಅವರು, ರಾಜ್ಯದ ಅರಣ್ಯ ಸಚಿವ ಈಶ್ವರ ಬಿ ಖಂಡ್ರೆ ಅವರನ್ನು ಭೇಟಿ ಮಾಡಿದ ಸಂದರ್ಭದಲ್ಲಿ ಇಂತಹ ಸ್ಪಂದನೆ ದೊರೆತಿದೆ.

ಭೇಟಿಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಈಶ್ವರ್ ಖಂಡ್ರೆ, ಪರಿಸರವಾದಿಗಳು ಮತ್ತು ರಾಜ್ಯದ ಜನರ ಭಾವನೆಗೆ ಚ್ಯುತಿಯಾಗದ ರೀತಿಯಲ್ಲಿ ಆನೆಗಳನ್ನು ನೀಡುವ ಬಗ್ಗೆ ಕ್ರಮ ತೆಗೆದುಕೊಳ್ಳಲಾಗುವುದು.

ಈಗಾಗಲೇ ಅನೇಕ ಸಂದರ್ಭದಲ್ಲಿ ಅನ್ಯ ರಾಜ್ಯಗಳಿಗೆ ಕರ್ನಾಟಕದ ಆನೆಗಳನ್ನು ಕಳುಹಿಸಿ ಕೊಟ್ಟಿರುವ ನಿದರ್ಶನಗಳಿವೆ. ಆದರೆ ದಸರಾ ಆನೆಗಳನ್ನು ಯಾವುದೇ ರಾಜ್ಯಕ್ಕೆ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.



ಆಂಧ್ರದಲ್ಲಿಯೂ ಕಾಡಾನೆಗಳ ಸಮಸ್ಯೆ ಹೆಚ್ಚಾಗಿದೆ. ಹೀಗಾಗಿ ಕರ್ನಾಟಕದಲ್ಲಿ ಆನೆಗಳ ಹಾವಳಿ ನಿಯಂತ್ರಣಕ್ಕೆ ಕೈಗೊಂಡಿರುವ ಕ್ರಮಗಳು, ರೈಲ್ವೆ ಬ್ಯಾರಿಕೇಡ್ ಅಳವಡಿಕೆಯ ಯಶಸ್ಸು, ಕಾಡಾನೆಗಳ ಸೆರೆ ಕಾರ್ಯಾಚರಣೆ, ಆನೆ ಪಳಗಿಸುವುದು ಮತ್ತು ಮಾವುತರ ತರಬೇತಿ ಕುರಿತಂತೆ ಚರ್ಚಿಸಲು ಆಂಧ್ರಪ್ರದೇಶದ ಉಪ ಮುಖ್ಯಮಂತ್ರಿ ಪವನ್ ಕಲ್ಯಾಣ್ ಅವರು ತಮ್ಮ ರಾಜ್ಯದ ಉನ್ನತ ಅರಣ್ಯಾಧಿಕಾರಿಗಳೊಂದಿಗೆ ಕರ್ನಾಟಕಕ್ಕೆ ಆಗಮಿಸಿದ್ದರು.

ಸುಮಾರು ಒಂದು ಗಂಟೆಗಳ ಕಾಲ ಎರಡೂ ರಾಜ್ಯಗಳ ಅರಣ್ಯಾಧಿಕಾರಿಗಳೊಂದಿಗೆ ಉತ್ತಮ ಮತ್ತು ಉಪಯುಕ್ತ, ಫಲಪ್ರದವಾದ ಚರ್ಚೆ ನಡೆದಿದೆ.

ಆ.21ಕ್ಕೆ ಗಜ ಪಯಣ

ಮೈಸೂರು ದಸರಾ ಮಹೋತ್ಸವದಲ್ಲಿ ಆನೆಗಳೇ ಪ್ರಧಾನ ಆಕರ್ಷಣೆ. ಮೈಸೂರು ದಸರಾದಲ್ಲಿ ವಿಜಯದಶಮಿಯ ದಿನ ನಡೆಯುವ ಜಂಬೂ ಸವಾರಿ ವಿಶ್ವ ವಿಖ್ಯಾತವಾಗಿದೆ. ಇದಕ್ಕಾಗಿ ಆನೆಗಳನ್ನು ಕಾಡಿನಿಂದ ನಾಡಿಗೆ ತರುವ ಗಜ ಪಯಣ ಶಾಸ್ತ್ರೋಕ್ತವಾಗಿ ನಡೆಯುತ್ತದೆ. ಇದೇ ಆಗಸ್ಟ್ 21ರಂದು ವೀರನಹೊಸಹಳ್ಳಿಯಲ್ಲಿ ಈ ಕಾರ್ಯಕ್ರಮ ನಡೆಯಲಿದೆ ಎಂದು ಮಾಹಿತಿ ನೀಡಿದರು.

ರಾಜ್ಯ ಇದೇ 12ರಂದು ವಿಶ್ವ ಆನೆಯ ದಿನದಂದು ಮಾನವ–ಆನೆ ಸಂಘರ್ಷ ನಿರ್ವಹಣೆ ಕುರಿತಂತೆ ಜಿಕೆವಿಕೆಯಲ್ಲಿ ಅಂತಾರಾಷ್ಟ್ರೀಯ ಸಮ್ಮೇಳನವನ್ನೇ ಆಯೋಜಿಸಿದೆ. ಈ ಸಮ್ಮೇಳನದಲ್ಲಿ ಉತ್ತಮ ರೂಢಿಗಳ ಬಗ್ಗೆ ಚಿಂತನ–ಮಂಥನ ನಡೆಸಲಾಗುವುದು ಎಂದರು.

ಅಶೋಕಪುರಂನಲ್ಲಿ ಮಾಜಿ ಸಂಸದ ಶ್ರೀನಿವಾಸ್ ಪ್ರಸಾದ್ ಹುಟ್ಟುಹಬ್ಬ ಆಚರಣೆ



ಮೈಸೂರು ಅಶೋಕಪುರಂನಲ್ಲಿ ಮಾಜಿ ಸಂಸದ ವಿ.ಶ್ರೀನಿವಾಸ್ ಪ್ರಸಾದ್ ಅವರ 77ನೇ ವರ್ಷದ ಹುಟ್ಟುಹಬ್ಬ ಆಚರಿಸಲಾಯಿತು. ವಿಶ್ವಮೈತ್ರಿ ಬುದ್ಧ ವಿಹಾರದ ಡಾ.ಕಲ್ಯಾಣಸಿರಿ ಬಂತೇಜಿ, ಮಾಜಿ ಶಾಸಕ ಬಾಲರಾಜ್, ಮುಖಂಡ ರಾಮಸ್ವಾಮಿ, ಮೈಸೂರು ವಿವಿ ನಿವೃತ್ತ ಪ್ರಾಧ್ಯಾಪಕ ಪ್ರೊ.ನೀಲಗಿರಿ ಎಂ.ತಳವಾರ್ ಮತ್ತಿತರಿದ್ದರು.

ಮೈಸೂರು, ಆ.8(ಎಂಕೆ)– ಮೈಸೂರು ಅಶೋಕಪುರಂನ ಬಿ.ಬಸವಲಿಂಗಪ್ಪ ವೃತ್ತದಲ್ಲಿ ಆದಿ ಕರ್ನಾಟಕ ಹಿತರಕ್ಷಣಾ ಹೋರಾಟ ಸಮಿತಿ ವತಿಯಿಂದ ವಿವಿಧ ಸೇವಾ ಕಾರ್ಯಗಳ ಮೂಲಕ ಮಾಜಿ ಸಂಸದ ದಿವಂಗತ ವಿ.ಶ್ರೀನಿವಾಸ್ ಪ್ರಸಾದ್ ಅವರ 77ನೇ ವರ್ಷದ ಹುಟ್ಟುಹಬ್ಬ ಆಚರಿಸಲಾಯಿತು.

ಕಾರ್ಯಕ್ರಮ ಉದ್ಘಾಟಿಸಿದ ವಿಶ್ವಮೈತ್ರಿ ಬುದ್ಧ ವಿಹಾರದ ಡಾ.ಕಲ್ಯಾಣಸಿರಿ ಬಂತೇಜಿ ಮಾತನಾಡಿ, ಮಾಜಿ ಸಂಸದರಾದ ವಿ.ಶ್ರೀನಿವಾಸ್ ಪ್ರಸಾದರು ಜನರಲ್ಲಿ ಜಾಗೃತಿ ಪ್ರಜ್ಞೆ ಮೂಡಿಸುವ, ಸಮಾನತೆ, ಸಹೋದರತೆಯನ್ನು ನೆಲೆಗೊಳಿಸಬೇಕೆಂಬ ಆಶಾವಾದಿಯಾಗಿದ್ದರು. ಮಾನವೀಯ ಮೌಲ್ಯಗಳನ್ನು ಎತ್ತಿ ಹಿಡಿದ ಪ್ರಜಾಪ್ರಭುತ್ವವಾದಿಯಾಗಿದ್ದರು ಎಂದು ಸ್ಮರಿಸಿದರು.

ತಮ್ಮ ಕ್ಷೇತ್ರದಲ್ಲಿ ದಲಿತರಿಗೆ ಮಾತ್ರವಲ್ಲ ಯಾರಿಗೆ ಅನ್ಯಾಯವಾದರೂ ಅವರ ಪರವಾಗಿ ಧನಿ ಎತ್ತುವ ಸಮಚಿತ್ತ ಮನೋಭಾವ ಅವರಲ್ಲಿತ್ತು. ಹೃದಯವಂತರೂ ಹಾಗೂ ಸಹೃದಯವಂತರೂ ಆಗಿದ್ದ ಪ್ರಸಾದರು, ನಾನು ರಾಜಕೀಯಕ್ಕೆ ಬಂದಿರುವುದು ಸ್ವಾರ್ಥ ಸಾಧನೆಗಲ್ಲ. ನಾಡಿನ ಜನತೆಗೆ ಸೇವೆ ಸಲ್ಲಿಸಿ, ಆಸ್ತಿಯಾಗುತ್ತೇನೆ ವಿನಃ ಅವರಿಗೆ ಭಾರವಾಗುವುದಿಲ್ಲ ಎಂದೇ ಳುತ್ತಿದ್ದರು. ಅಧ್ಯಯನಶೀಲರಾಗಿ ಇತಿಹಾಸದ ಅರಿವುಳ್ಳವರಾಗಿದ್ದ ಅವರು, ನೈತಿಕ ಬದುಕನ್ನು ಕಟ್ಟಿಕೊಂಡಿದ್ದವರು. ಅಶೋಕಪುರಂ ಭಾಗದಲ್ಲಿ ನೊಂದವರಿಗೆ ನೆರಳಾಗಿ ಅಥವಾ ಬೇಕಾಗಿದ್ದರು ಎಂದರೆ ಅತಿಶಯೋಕ್ತಿಯಲ್ಲ ಎಂದು ಬಣ್ಣಿಸಿದರು.

ಇದೇ ವೇಳೆ ಅಶೋಕಪುರಂನ ಶಾಲಾ ಮಕ್ಕಳಿಗೆ ಪುಸ್ತಕಗಳು ಹಾಗೂ ಮಹಿಳೆಯರಿಗೆ ಸೀರೆ ವಿತರಿಸಲಾಯಿತು. ಮಾಜಿ ಶಾಸಕ ಬಾಲರಾಜ್, ಮುಖಂಡ ರಾಮಸ್ವಾಮಿ, ಮೈಸೂರು ವಿವಿ ನಿವೃತ್ತ ಪ್ರಾಧ್ಯಾಪಕ ಪ್ರೊ.ನೀಲಗಿರಿ ಎಂ.ತಳವಾರ್, ಆದಿ ಕರ್ನಾಟಕ ಹಿತರಕ್ಷಣಾ ಹೋರಾಟ ಸಮಿತಿಯ ಎನ್.ಭಾಸ್ಕರ್, ಸಮಾನತೆ ಪ್ರಕಾಶನದ ಭರತ್ ರಾಮಸ್ವಾಮಿ ಮತ್ತಿತರರು ಉಪಸ್ಥಿತರಿದ್ದರು.

ಸಂವಿಧಾನ ಶಿಲ್ಪಿ ಡಾ. ಅಂಬೇಡ್ಕರ್ ವಿಷಯಾಧಾರಿತ

ಲಾಲ್‌ಬಾಗ್‌ನಲ್ಲಿ ಸ್ವಾತಂತ್ರ್ಯೋತ್ಸವದ 216ನೇ ಫಲ–ಪುಷ್ಪ ಪ್ರದರ್ಶನಕ್ಕೆ ಸಿಎಂ ಚಾಲನೆ

ಬೆಂಗಳೂರು, ಆ.8(ಕೆಎಂಶಿ)– ಅಂಬೇಡ್ಕರ್ ಎಂದೆಂದಿಗೂ ಪ್ರಸ್ತುತ. ಈ ಬಾರಿಯ ಫಲಪುಷ್ಪ ಪ್ರದರ್ಶನವು ಜನರು ಸಂವಿಧಾನಗಳ ಆಶಯಗಳನ್ನರಿಯಲು ಅಪೂರ್ವ ಅವಕಾಶ ಒದಗಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಲಾಲ್‌ಬಾಗ್‌ನಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ವಿಷಯಾಧಾರಿತ ಸ್ವಾತಂತ್ರ್ಯೋತ್ಸವ 216ನೇ ಫಲಪುಷ್ಪ ಪ್ರದರ್ಶನ ಉದ್ಘಾಟಿಸಿ ಅವರು ಮಾತನಾಡಿದರು.

ಯಾವುದೇ ಜಾತಿ, ಧರ್ಮ, ಭಾಷೆ, ಪ್ರದೇಶಗಳಿಗೆ ಸೇರಿದ ಎಲ್ಲ ಜನರಿಗೂ ಸಮಾನ ಅವಕಾಶಗಳು ದೊರೆಯಬೇಕು. ಜನರಿಗೆ ಆರ್ಥಿಕ, ಸಾಮಾಜಿಕ ಸ್ವಾತಂತ್ರ್ಯ ದೊರೆತಾಗ ಮಾತ್ರ ರಾಜಕೀಯ ಸ್ವಾತಂತ್ರ್ಯ ಗಳಿಸಲು ಸಾಧ್ಯ ಎಂಬುದರಲ್ಲಿ ಅಂಬೇಡ್ಕರ್ ನಂಬಿಕೆಯಿರಿಸಿದ್ದರು.



ಅಂಬೇಡ್ಕರ್‌ರವರ ಬಾಲ್ಯದಿಂದ ತಮ್ಮ ಜೀವಿತಾವಧಿಯಲ್ಲಿನ ಪ್ರಮುಖ ಸಾಧನೆಗಳನ್ನು ವಿವಿಧ ರೂಪದಲ್ಲಿ ಪ್ರದರ್ಶನದಲ್ಲಿ ಬಿಂಬಿಸಲಾಗಿದ್ದು, ಜನರು ಅವರ ಆಶಯಗಳ ಬಗ್ಗೆ ಅರಿಯಬಹುದಾಗಿದೆ.

ಜನರು ಸಂವಿಧಾನದ ಬಗ್ಗೆ ಅರಿವು ಪಡೆದಾಗ ಮಾತ್ರ ಸಂವಿಧಾನದ ರೀತ್ಯ ನಡೆದುಕೊಳ್ಳಲು ಸಾಧ್ಯ. ಸಂವಿಧಾನ ರಚನಾ ಸಮಿತಿಯ ಅಧ್ಯಕ್ಷರಾಗಿದ್ದ ಅಂಬೇಡ್ಕರ್ ಅವರನ್ನು ಸಂವಿಧಾನ ಶಿಲ್ಪಿ ಎಂದು ಕರೆಯಲಾಗುತ್ತದೆ. ಅಂಬೇಡ್ಕರ್ ಎಂದೆಂದಿಗೂ ಪ್ರಸ್ತುತ ಎಂದರು.

ಭಾರತ ಸ್ವಾತಂತ್ರ್ಯೋತ್ಸವದ ಅಂಗವಾಗಿ ಲಾಲ್‌ಬಾಗ್ ಫಲಪುಷ್ಪ ಪ್ರದರ್ಶನವನ್ನು ಆಯೋಜಿಸಲಾಗಿದ್ದು, ಈ ಬಾರಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ್ ಅವರ ವಿಷಯಾಧಾರಿತ ಫಲಪುಷ್ಪ ಪ್ರದರ್ಶನವನ್ನು ಆಗಸ್ಟ್ 8 ರಿಂದ 19ರವರೆಗೆ ಏರ್ಪಡಿಸಲಾಗಿದೆ ಬಾಬಾಸಾಹೇಬ್ ಅಂಬೇಡ್ಕರ್ ಜೀವನ ಸಾಧನೆ, ದೇಶಕ್ಕೆ ನೀಡಿದ ಕೊಡುಗೆ, ಸಾಮಾಜಿಕ ನ್ಯಾಯಕ್ಕಾಗಿ ಹೋರಾಟ, ಬೌದ್ಧ ಮತ ಸ್ವೀಕಾರ, ಸಂವಿಧಾನ ರಚನಾ ಸಮಿತಿಯಲ್ಲಿ ಮಹತ್ವದ ಪಾತ್ರ, ಸಂವಿಧಾನದ ಆಶಯಗಳು, ಪ್ರಜಾಪ್ರಭುತ್ವ ವ್ಯವಸ್ಥೆ ಸೇರಿದಂತೆ ಹಲವು ಪ್ರಮುಖ ವಿಷಯಗಳನ್ನು ಆಧರಿಸಿದ ಫಲಪುಷ್ಪ ಪ್ರದರ್ಶನವನ್ನು ಏರ್ಪಡಿಸಲಾಗಿದೆ ಎಂದು ಹೇಳಿದರು.

ತೋಟಗಾರಿಕಾ ಇಲಾಖೆಯ ವತಿಯಿಂದ ಆಯೋಜಿಸಲಾಗಿರುವ ಫಲಪುಷ್ಪ ಪ್ರದರ್ಶನಕ್ಕೆ ಸುಮಾರು 12 ಲಕ್ಷ ಜನರು ಆಗಮಿಸುವ ನಿರೀಕ್ಷೆ ಇದೆ. ಕರ್ನಾಟಕ ಸೇರಿದಂತೆ ವಿವಿಧ ರಾಜ್ಯಗಳಿಂದ ವಿವಿಧ ತಳಿಗಳ ಸುಮಾರು 30 ಲಕ್ಷ ಹೂವುಗಳನ್ನು ಈ ಪುಷ್ಪ ಪ್ರದರ್ಶನದಲ್ಲಿ ಬಳಸಲಾಗಿದೆ ಎಂದರು.

ಇಂದಿನಿಂದ ಮೈಸೂರಲ್ಲಿ ದಕ್ಷಿಣ ವಲಯ ಪ್ರಸೂತಿ, ಸ್ತ್ರೀರೋಗ ಶಾಸ್ತ್ರಜ್ಞರ ಸಮ್ಮೇಳನ

ಮೈಸೂರು, ಆ.8(ಜಿಎ)–ಮೈಸೂರು ಪ್ರಸೂತಿ ಮತ್ತು ಸ್ತ್ರೀರೋಗ ಶಾಸ್ತ್ರಜ್ಞರ ಸೊಸೈಟಿ ವತಿಯಿಂದ ಮೈಸೂರಿನ ಸೈಲೆಂಟ್ ಶೋರ್ಸ್ ಹೋಟೆಲ್‌ನಲ್ಲಿ ಆ.9ರಿಂದ 3 ದಿನಗಳ ಕಾಲ ದಕ್ಷಿಣ ವಲಯ ಪ್ರಸೂತಿ ಮತ್ತು ಸ್ತ್ರೀರೋಗ ಶಾಸ್ತ್ರಜ್ಞರ ಸಮ್ಮೇಳನ ನಡೆಯಲಿದೆ ಎಂದು ಸಮ್ಮೇಳನ ಸಮಿತಿ ಅಧ್ಯಕ್ಷೆ ಡಾ.ಸುಧಾ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಜೆ 5ಗಂಟೆಗೆ ಔಪಚಾರಿಕವಾಗಿ ಉದ್ಘಾಟನೆ ನಡೆಯಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ ಚಾಲನೆ ನೀಡುವರು. ಹಿರಿಯ ಪ್ರಸೂತಿ ಮತ್ತು ಸ್ತ್ರೀರೋಗ ಶಾಸ್ತ್ರಜ್ಞರು ಇದರಲ್ಲಿ ಪಾಲ್ಗೊಂಡು ಕಿರಿಯ ವೈದ್ಯರಿಗೆ ಈ ಕ್ಷೇತ್ರದಲ್ಲಿನ ಇತ್ತೀಚಿನ ಬೆಳವಣಿಗೆ, ತಾವು ಅನುಸರಿಸುವ ವಿಧಾನ ಕುರಿತು ಮಾಹಿತಿ ನೀಡಲಿದ್ದಾರೆ. ಇದಲ್ಲಿ ಕರ್ನಾಟಕ, ತಮಿಳನಾಡು, ತೆಲಂಗಾಣ ಹಾಗೂ ಆಂಧ್ರ ಮೊದಲಾದ ರಾಜ್ಯಗಳಿಂದ ಸುಮಾರು ಸಾವಿರ ಮಂದಿ ವೈದ್ಯರು ಆಗಮಿಸಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಡಾ.ಎನ್.ಸುನಂದಾ, ಡಾ.ಸುಷ್ಮಾ ಉಪಸ್ಥಿತರಿದ್ದರು.

ಕುಸ್ತಿಗೆ ನಿವೃತ್ತಿ ಘೋಷಿಸಿದ ವಿನೇಶ್ ಫೋಗಟ್




ಪ್ಯಾರೀಸ್, ಆ.8– ನನ್ನ ವಿರುದ್ಧ ಕುಸ್ತಿ ಗೆದ್ದಿದೆ. ನಾನು ಸೋತಿದ್ದೇನೆ. ಕ್ಷಮಿಸಿ, ಈಗ ನನ್ನಲ್ಲಿ ಹೆಚ್ಚಿನ ಶಕ್ತಿ ಇಲ್ಲ ಎಂದು ಹೇಳುವ ಮೂಲಕ ಕುಸ್ತಿಪಟು ವಿನೇಶ್ ಫೋಗಟ್ ಭಾವುಕ ಸಂದೇಶದೊಂದಿಗೆ ಕುಸ್ತಿಗೆ ನಿವೃತ್ತಿ ಘೋಷಿಸಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಭಾವುಕ ಸಂದೇಶ ಪ್ರಕಟಿಸಿರುವ ಅವರು, ಅಮ್ಮ, ನನ್ನ ವಿರುದ್ಧ ಕುಸ್ತಿ ಗೆದ್ದಿದೆ. ನಾನು ಸೋತೆ, ಕ್ಷಮಿಸಿ. ನಿನ್ನ ಕನಸು, ನನ್ನ ಧೈರ್ಯ ಎಲ್ಲ ಛಿದ್ರವಾಯಿತು. ನನ್ನ ಧೈರ್ಯ ಸಂಪೂರ್ಣ ಕುಗ್ಗಿದೆ. ಈಗ ಹೆಚ್ಚಿನ ಶಕ್ತಿ ಉಳಿದಿಲ್ಲ ಎಂದು ಬರೆದುಕೊಂಡಿದ್ದಾರೆ. ಇದೇ ವೇಳೆ ಕುಸ್ತಿಗೆ ವಿದಾಯ. ನಿಮ್ಮೆಲ್ಲರಿಗೂ ನಾನು ಸದಾ ಋಣಿಯಾಗಿರುತ್ತೇನೆ. ಕ್ಷಮಿಸಿ ಎಂದು ವಿನೇಶ್ ಫೋಗಟ್ ಎಕ್ಸ್ ಸಂದೇಶದಲ್ಲಿ ಉಲ್ಲೇಖಿಸಿದ್ದಾರೆ.

ಪ್ಯಾರಿಸ್ ಒಲಿಂಪಿಕ್ಸ್‌ನ 50 ಕೆಜಿ ಮಹಿಳೆಯರ ಕುಸ್ತಿ ವಿಭಾಗದಲ್ಲಿ ಫೈನಲ್‌ಗೂ ಮುನ್ನ ವಿನೇಶ್ ಅವರನ್ನು ಅನರ್ಹಗೊಳಿಸಲಾಗಿತ್ತು. ಬುಧವಾರ ಸಂಜೆ ನಡೆಯಲಿದ್ದ ಫೈನಲ್ ಪಂದ್ಯಕ್ಕೂ ಮುನ್ನ ಬೆಳಗ್ಗೆ 100 ಗ್ರಾಂ ಹೆಚ್ಚಿನ ತೂಕ ಹೊಂದಿರುವ ಹಿನ್ನೆಲೆಯಲ್ಲಿ ಪಂದ್ಯಕ್ಕೆ ಕೆಲವೇ ಗಂಟೆಗಳ ಮೊದಲು ಅವರನ್ನು ಒಲಿಂಪಿಕ್ಸ್‌ನಿಂದ ಅನರ್ಹಗೊಳಿಸ ಲಾಯಿತು. ಒಲಿಂಪಿಕ್ ಕ್ರೀಡಾಕೂಟದ ಫೈನಲ್‌ಗೆ ಪ್ರವೇಶಿಸಿದ ಮೊದಲ ಭಾರತೀಯ ಮಹಿಳಾ ಕುಸ್ತಿಪಟು ಎಂಬ ಹೆಗ್ಗಳಿಕೆಗೆ ಪಾತ್ರರಾದ 29 ವರ್ಷದ ವಿನೇಶ್ ಫೋಗಟ್, ಮಹಿಳೆಯರ 50 ಕೆಜಿ ವಿಭಾಗದಲ್ಲಿ ಕನಿಷ್ಠ ಬೆಳ್ಳಿ ಪದಕ ಖಚಿತಪಡಿಸಿಕೊಂಡಿದ್ದರು. ಇದೀಗ ಅನರ್ಹತೆಯಿಂದಾಗಿ ಕಂಚು ಕೂಡ ಅವರಿಗೆ ದೊರೆಯುವುದಿಲ್ಲ.

ನಾಳೆ ಮೈಸೂರಲ್ಲಿ ಅವರೆಕಾಳು ಮುದ್ದೆ ಊಟದ ಕಾರ್ಯಕ್ರಮ

ಮೈಸೂರು, ಆ.8(ಜಿಎ)–ರೋಟರಿ ಕ್ಲಬ್ ಆಫ್ ಹೆರಿಟೇಜ್ ಮೈಸೂರು ವತಿಯಿಂದ ಶ್ರಾವಣ ಮಾಸದ ಪ್ರಯುಕ್ತ ಆ.10ರಂದು ಬೆಳಗ್ಗೆ 11ಕ್ಕೆ ವಿಜಯನಗರ 2ನೇ ಹಂತದಲ್ಲಿರುವ ಯೋಗಾನರಸಿಂಹ ಸ್ವಾಮಿ ದೇವಸ್ಥಾನದ ಪಕ್ಕದಲ್ಲಿ ಸುಮಾರು 10ರಿಂದ 12 ಸಾವಿರ ಭಕ್ತರಿಗೆ ಪುಣ್ಯಕೋಟಿ ಸೇವಾ ಟ್ರಸ್ಟ್ ಆಶ್ರಯದಲ್ಲಿ ಅವರೆಕಾಳು ಮುದ್ದೆ ಊಟದ ಕಾರ್ಯಕ್ರಮ ಆಯೋಜಿಸಲಾಗಿದೆ. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಕ್ಲಬ್ ಅಧ್ಯಕ್ಷ ಆರ್.ರಾಜೇಶ್ ಈ ವಿಷಯ ತಿಳಿಸಿ, ಕಾರ್ಯಕ್ರಮಕ್ಕೆ ಭಾಷ್ಯಂ ಸ್ವಾಮೀಜಿ ಚಾಲನೆ ನೀಡುವರು. ಡಾ.ನಿರ್ಮಲಾ ನಂದನಾಥ ಸ್ವಾಮೀಜಿ, ಶಾಸಕ ಜಿ.ಟಿ.ದೇವೇಗೌಡ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದರು.



ಎರಡನೇ ವರ್ಷದ ಸವಿನೆನಪು




ನೀವು ನಮ್ಮನ್ನು ಅಗಲಿ ಇಂದಿಗೆ 2 ವರ್ಷ ಆಗಿದೆ, ಸದಾ ನಿಮ್ಮ ನೆನಪಿನಲ್ಲಿರುವ ದುಃಖತಪ್ತರು: ಪತ್ನಿ ಶ್ರೀಮತಿ ಕಲಾವತಿ, ಮಕ್ಕಳು ಮತ್ತು ಮೊಮ್ಮಕ್ಕಳು ಹಾಗೂ ಕುಟುಂಬವರ್ಗದವರು.

ನಿಧನ: 09.08.2022

ಎಂ.ಪುಟ್ಟಸ್ವಾಮಿ ರವರು
ಕಬಡ್ಡಿ ಆಟಗಾರರು, ರೈಲ್ವೇ ಇಲಾಖೆ

ಭಾವಪೂರ್ಣ ಶ್ರದ್ಧಾಂಜಲಿ



ಎನ್.ಎಸ್. ವೆಂಕಟಕೃಷ್ಣಯ್ಯ
ಜನನ: 22–10–1935, ಮರಣ: 05–08–2024

ಪೂಜ್ಯ ನಮ್ಮ ತಂದೆಯವರು ಸ್ವರ್ಗಸ್ಥರಾದರೆಂದು ತಿಳಿಸಲು ವಿಷಾಧಿಸುತ್ತೇವೆ. ಮೃತರ ಅಂತ್ಯಕ್ರಿಯೆಯನ್ನು ದಿ: 6–8–2024ರಂದು ಚಾಮುಂಡಿ ಬೆಟ್ಟದ ತಪ್ಪಲಿನ ಹರಿಶ್ಚಂದ್ರ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು.

ದುಃಖತಪ್ತರು:
ಗಂಡುಮಕ್ಕಳು–ಎನ್.ವಿ. ಶ್ರೀಕಂಠಯ್ಯ
ಡಾ. ಎನ್.ವಿ. ಮಂಜುನಾಥ್
ಮಗಳು–ಎನ್.ವಿ. ವಿಜಯಲಕ್ಷ್ಮಿ
ಮೊ:7760032865, 7022177826

ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ



ಡಾ|| ಡಿ. ಮೋಹನ್‌ಕುಮಾರ್

ಇವರು ದಿ. 30–7–2024ನೇ ಮಂಗಳವಾರ ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ತತ್ಸಂಬಂಧವಾಗಿ ಮೃತರ ಉತ್ತರ ಕ್ರಿಯಾದಿ ಕಾರ್ಯವನ್ನು ದಿನಾಂಕ: 10–08–2024ರ ಶನಿವಾರ ಮ. 12.00 ರಿಂದ 2.00 ಗಂಟೆಗೆ ನಮ್ಮ ಸ್ವಗೃಹ ಹೊರಳಹಳ್ಳಿ ಗ್ರಾಮ ಮೈಸೂರು ತಾಲ್ಲೂಕು ಇಲ್ಲಿ ಏರ್ಪಡಿಸಿರುತ್ತೇವೆ. ತಾವುಗಳು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

ದುಃಖತಪ್ತರು: ಮೃತರ ಪತ್ನಿ
ಶ್ರೀಮತಿ ಸ್ಮೃತಿ ಎಂ. ಎಸ್ ಡಾ|| ಡಿ. ಮೋಹನ್‌ಕುಮಾರ್
ಮಗ ದುಶ್ಯಂತ್ ಹಾಗೂ ಕುಟುಂಬವರ್ಗ





ಕರ್ನಾಟಕ ಸರ್ಕಾರ
(ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ)
ಸಮಗ್ರ ಶಿಶು ಅಭಿವೃದ್ಧಿ ಯೋಜನೆ,
ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ, ಹೆಗ್ಗಡದೇವನಕೋಟೆ–571114
Ph:08228-255320 E-Mail ID-cdpohdkote@gmail.com
ಸಂ:ಶಿಅಯೋ:ಹೆದೇಕೋ:ಕಉ:ಸಿಆರ್:ಟೆಂಡರ್/2024–25 ದಿ: 03.08.2024

ಟೆಂಡರ್ ಪ್ರಕಟಣೆ

ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹೆಚ್ ಡಿ ಕೋಟೆ ಈ ಕಛೇರಿಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಅಧಿಕೃತ ಕೆಲಸಗಳಿಗಾಗಿ ಆಗಸ್ಟ್–2024 ರಿಂದ ಜುಲೈ–2025 ರವರೆಗೆ (ಒಂದು ವರ್ಷದ ಅವಧಿಗೆ) ಹವಾ ನಿಯಂತ್ರಿತ (ಎಸಿ) ವಾಹನಗಳಾದ ಟಾಟಾ ಇಂಡಿಗೋ/ಇಟಿಯೋಸ್/ಸ್ವಿಫ್ಟ್ ಡಿಜೈರ್/ಫೋರ್ಡ್‌ಫಿಗೋ ಆಸ್ಪೈರ್ ಇಂತಹ ವಾಹನವನ್ನು ಮಾಸಿಕ ಬಾಡಿಗೆ ಆಧಾರದ ಮೇಲೆ ಒದಗಿಸುವ ಸಲುವಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ನಿಯಮಗಳು 2000ರ ಪ್ರಕಾರ ಆಸಕ್ತ ಅರ್ಹ ಸರಬರಾಜುದಾರರಿಂದ ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್ ನಮೂನೆ ತಾಂತ್ರಿಕ ನಿರ್ದಿಷ್ಟತೆ ಮತ್ತು ಇತರೆ ವಿವರಗಳನ್ನು ಈ ಮೇಲ್ಕಂಡ ಕಛೇರಿ ವಿಳಾಸದಲ್ಲಿ ಪಡೆಯಬಹುದಾಗಿದೆ. ಈ ಮೊದಲು ಟೆಂಡರ್ ಸ್ವೀಕರಿಸಲು ಕೊನೆಯ ದಿ: 02.08.2024 ಸಂಜೆ 05.00 ಗಂಟೆಯನ್ನು ನಿಗದಿಗೊಳಿಸಲಾಗಿತ್ತು. ಆದರೆ ತಾಂತ್ರಿಕ ಕಾರಣಗಳಿಂದಾಗಿ ಟೆಂಡರ್ ಸಲ್ಲಿಸಲು ದಿ: 03.08.2024 ರಿಂದ ಕೊನೆಯ ದಿ: 12.08.2024 ಕ್ಕೆ ನಿಗದಿಗೊಳಿಸಿ ವಿಸ್ತರಿಸಲಾಗಿರುತ್ತದೆ.

ಸಹಿ/– ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಹೆಗ್ಗಡದೇವನಕೋಟೆ

DIPR/DDMYS-384/KSMCA-267/2024-25